23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 316 | ನವದೆಹಲಿ | ಬೆಲೆ ₹10 | ಮೇ 22 2026, ಶುಕ್ರವಾರ

## ಒಳಪುಟಗಳಲ್ಲಿ

ಫೆಬ್ರವರಿ-ಮಾರ್ಚ್‌ನ ಗೃಹಲಕ್ಷ್ಮಿ ಹಿಂಬಾಕಿ ಹಣ ಬಿಡುಗಡೆ ಕೋರಿ ಅರ್ಜಿ: ನೋಟೀಸ್ ಜಾರಿ - ಪು.5

136 ಕುಟುಂಬಗಳಿಗೆ ಹಕ್ಕುಪತ್ರ ನೀಡದಿದ್ದರೆ ನಗರಸಭೆ ಎದುರು ಹೋರಾಟ: ಶ್ರೀನಿವಾಸ್ - ಪು.6

# ಇನ್ನು ನೀವ್‌ನೀಟ್ ಪರೀಕ್ಷೆ ನಡೆಸಬೇಡಿ, ರಾಜ್ಯಗಳಿಗೆ ಬಿಡಿ: ಕೇಂದ್ರ ಸಿಎಂ ತಾಕೀತು

### ಪ್ರಧಾನಿಗಳು ಪರೀಕ್ಷೆ ಬರೆದವರ ಕ್ಷಮೆ ಕೇಳಬೇಕು, ಕೇಂದ್ರ ಶಿಕ್ಷಣ ಸಚಿವ ರಾಜೀನಾಮೆಗೆ ಸಿಎಂ ಸಿದ್ದರಾಮಯ್ಯ ಆಗ್ರಹ: ಪರೀಕ್ಷಾ ಅಕ್ರಮ ವಿರೋಧಿಸಿ ಯುವ ಕಾಂಗ್ರೆಸ್ ಪ್ರತಿಭಟನೆ

**ಬೆಂಗಳೂರು, ಮೇ 21: ವೈದ್ಯಕೀಯ ಕಾಲೇಜುಗಳಿಗೆ ಪರೀಕ್ಷೆ ನಡೆಸುವ ಸಿಇಟಿ ವ್ಯವಸ್ಥೆಯನ್ನು ನಡೆಸಲು ರಾಜ್ಯಗಳಿಗೇ ಅವಕಾಶ ನೀಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಒತ್ತಾಯಿಸಿದರು.**




ಫ್ರೀಡಂ ಪಾರ್ಕ್‌ನಲ್ಲಿ ಯುವ ಕಾಂಗ್ರೆಸ್ ಆಯೋಜಿಸಿದ್ದ ನೀಟ್ ಪರೀಕ್ಷಾ ಅಕ್ರಮಗಳ ವಿರುದ್ಧದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ನೀಟ್ ಪರೀಕ್ಷೆಯ ಪ್ರಶ್ನೆ ಸೋರಿಕೆಯಾಗಿದ್ದು, ಇದಕ್ಕೆ ಜವಾಬ್ದಾರರಾಗಿರುವ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರಾಗಲಿ ಅಥವಾ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಾಗಲಿ ಜವಾಬ್ದಾರಿಯನ್ನು ಹೊತ್ತುಕೊಂಡಿಲ್ಲ. ಧರ್ಮೇಂದ್ರ ಪ್ರಧಾನ್ ಅವರು ನೀಟ್ ಪರೀಕ್ಷೆಗೆ ಮತ್ತೊಂದು ದಿನಾಂಕ ನಿಗದಿ ಮಾಡಿ ಕೈತೊಳೆದುಕೊಂಡಿದ್ದು, ಈ ಜವಾಬ್ದಾರಿಯನ್ನು ಧರ್ಮೇಂದ್ರ ಪ್ರಧಾನ್ ಹಾಗೂ ಪ್ರಧಾನಿ ನರೇಂದ್ರ ಮೋದಿ ಹೊರಬೇಕು ಎಂದರು.

**ಹತ್ತು ವರ್ಷದಲ್ಲಿ ಐದು ಬಾರಿ ಸೋರಿಕೆ:** ಕರ್ನಾಟಕ ಮತ್ತಿತರ ರಾಜ್ಯಗಳಲ್ಲಿ ವೈದ್ಯಕೀಯ ಶಿಕ್ಷಣಕ್ಕೆ ಪ್ರವೇಶ ಬಯಸುವವರಿಗೆ ಸಿಇಟಿ ಪರೀಕ್ಷೆ ಪಾರದರ್ಶಕವಾಗಿ ನಡೆಯುತ್ತಿತ್ತು. ನರೇಂದ್ರ ಮೋದಿಯವರು 2014ರಲ್ಲಿ ಪ್ರಧಾನಿಗಳಾದ ನಂತರ ಹಿಂದೆ ಇದ್ದ ಪದ್ಧತಿಯನ್ನು ಬದಲಾಯಿಸಿ 2016ರಲ್ಲಿ ನೀಟ್ ಪರೀಕ್ಷೆಯನ್ನು ಜಾರಿಗೆ ತಂದರು. ಹತ್ತು ವರ್ಷಗಳಲ್ಲಿ ಐದು ಬಾರಿ ಪ್ರಶ್ನೆಪತ್ರಿಕೆ ಸೋರಿಕೆಯಾಗಿದೆ. ನೀಟ್ ಪರೀಕ್ಷೆ ಬರೆಯಲು ವಿದ್ಯಾರ್ಥಿಗಳು ಒಂದು ವರ್ಷದಿಂದ ತಯಾರಿ ಮಾಡಿಕೊಂಡಿರುತ್ತಾರೆ. ಅನೇಕರು ಕೋಚಿಂಗ್ ಸೆಂಟರ್‌ಗಳಲ್ಲಿ ತರಬೇತಿ ಪಡೆಯಲು ಸಾವಿರಾರು ರೂ ವೆಚ್ಚ ಮಾಡಿರುತ್ತಾರೆ. ಹಣವಿದ್ದವರು ಕೋಚಿಂಗ್ ಪಡೆಯುತ್ತಾರೆ, ಹಣ ಇಲ್ಲದ ಬಡವರು, ಗ್ರಾಮೀಣ ಪ್ರದೇಶದ ಮಕ್ಕಳು ಕೋಚಿಂಗ್ ಪಡೆಯಲಾಗುವುದಿಲ್ಲ ಎಂದು ಸಿದ್ದರಾಮಯ್ಯ ಹೇಳಿದರು. ಮೋದಿ ಸರ್ಕಾರ ಬಂದ ನಂತರ ಬೇಧಭಾವ ಉಂಟು ಮಾಡುತ್ತಿದ್ದಾರೆ. ಬಡವರು, ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರ ಮಕ್ಕಳ ಬಗ್ಗೆ ಅಲಕ್ಷ್ಯ ಮಾಡುತ್ತಿದ್ದಾರೆ ಎನ್ನಲು ಇದು ಸಾಕ್ಷಿ ಎಂದರು. ಶಿಕ್ಷಣ ಸಮವರ್ತಿ ಪಟ್ಟಿಯಲ್ಲಿರುವ ವಿಷಯ. ಒಕ್ಕೂಟದ ವ್ಯವಸ್ಥೆಯಲ್ಲಿ ಆಯಾ ರಾಜ್ಯಗಳಿಗೆ ಸ್ವಾತಂತ್ರ್ಯ ನೀಡಬೇಕು. ಅದು ಬಿಟ್ಟು ಕೇಂದ್ರೀಕರಿಸುವ ಕೆಲಸ ಮಾಡಬಾರದು ಎಂದರು. ಕಳೆದ ಬಿಜೆಪಿ ಸರ್ಕಾರದ ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ಅವಧಿಯಲ್ಲಿ ಇಂಜಿನಿಯರ್, ಸಬ್‌ಇನ್ಸ್‌ಪೆಕ್ಟರ್ ನೇಮಕಾತಿ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆಯಾಗಿತ್ತು. ಈ ಸಂಬಂಧ ಎಡಿಜಿಪಿಯಾಗಿದ್ದ ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಜೈಲಿಗೆ ಹೋಗಿರುವುದು ಕರ್ನಾಟಕದ ಇತಿಹಾಸದಲ್ಲಿ ಎಂದಿಗೂ ನಡೆದಿರಲಿಲ್ಲ. ಕೇಂದ್ರ ಹಾಗೂ ರಾಜ್ಯದಲ್ಲಿ ಬಿಜೆಪಿ ಅಧಿಕಾರದಲ್ಲಿದ್ದಾಗ ಇಂತಹ ಪ್ರಶ್ನೆ ಪತ್ರಿಕೆ ಸೋರಿಕೆಗಳು ಬಹಳಷ್ಟು ನಡೆದಿವೆ ಎಂದರು.

**ಶೇ.69 ಯುವಜನತೆ ನಿರುದ್ಯೋಗಿಗಳು:** ದೇಶದ ಜನರಿಗೆ ಚಿನ್ನ ಖರೀದಿಸಬೇಡಿ, ಪೆಟ್ರೋಲ್ ಡೀಸೆಲ್ ಮಿತವ್ಯಯ ಮಾಡಿ, ವಿದೇಶ ಪ್ರವಾಸ ಮಾಡಬೇಡಿ ಎಂದು ಕರೆ ನೀಡಿ, ತಾವು ಮಾತ್ರ ಐದು ದೇಶಗಳ ವಿದೇಶಿ ಪ್ರವಾಸದಲ್ಲಿದ್ದಾರೆ. ದೇಶದಲ್ಲಿ 20 ರಿಂದ 29 ವಯೋಮಾನದ ಯುವಕ ಯುವತಿಯರಲ್ಲಿ ಶೇ.67 ರಷ್ಟು ಯುವಜನತೆ ನಿರುದ್ಯೋಗಿಗಳಾಗಿದ್ದಾರೆ. ಪ್ರತಿ ವರ್ಷ 2 ಕೋಟಿ ಉದ್ಯೋಗ ಒದಗಿಸುವ ಮೂಲಕ ಕಳೆದ 12 ವರ್ಷಗಳ ಪ್ರಧಾನಿ ಮೋದಿಯವರ ಆಡಳಿತದಲ್ಲಿ 24 ಕೋಟಿ ಉದ್ಯೋಗಗಳು ಸೃಷ್ಟಿಯಾಗಬೇಕಿತ್ತು. ಆದರೆ ಈವರೆಗೆ 2 ಕೋಟಿಯಷ್ಟೂ ಉದ್ಯೋಗವನ್ನು ಕೊಡಲಾಗಲಿಲ್ಲ ಎಂದು ಸಿದ್ದರಾಮಯ್ಯ ಹೇಳಿದರು.

ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಕನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ, ಕಾರ್ಯದರ್ಶಿ ಅಭಿಷೇಕ್ ದತ್ತಾ, ರಾಷ್ಟ್ರೀಯ ಯುವ ಕಾಂಗ್ರೆಸ್ಸಿನ ಅಧ್ಯಕ್ಷ ಉದಯ ಬಾನು, ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ್ ಗೌಡ, ಸಚಿವರು, ಶಾಸಕರು, ಉಪಸ್ಥಿತರಿದ್ದರು.

#### ನೀಟ್ ಪರೀಕ್ಷೆ ರಾಜ್ಯಗಳಿಗೆ ಅಧಿಕಾರ ನೀಡಿ

**ದೇಶದಲ್ಲಿ 2016ರಿಂದ ಇಲ್ಲಿಯವರೆಗೆ 5 ಬಾರಿ ಪ್ರಶ್ನೆಪತ್ರಿಕೆ ಸೋರಿಕೆಯಾಗಿದೆ. ಆದ್ದರಿಂದ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ಕೇವಲ ನೀಟ್‌ಪರೀಕ್ಷೆಯನ್ನು ಮುಂದೂಡುವ ಜೊತೆಗೆ ಪ್ರಕರಣದ ಹೊಣೆಹೊತ್ತು ರಾಜೀನಾಮೆ ನೀಡಬೇಕು. ಆದರೆ ಬಿಜೆಪಿಯವರು ಭಂಡತನ ಪ್ರದರ್ಶಿಸಿ ರಾಜಿನಾಮೆಗೆ ಮನಸ್ಸು ಮಾಡುತ್ತಿಲ್ಲ. ಕೇಂದ್ರ ಶಿಕ್ಷಣ ಸಚಿವರು ರಾಜೀನಾಮೆ ನೀಡುವವರೆಗೂ ಹೋರಾಟವನ್ನು ಮುಂದುವರಿಯಬೇಕು. ವಿದ್ಯಾರ್ಥಿಗಳ ಆತ್ಮಹತ್ಯೆಗೆ ಕಾರಣರಾದ ಪ್ರಕರಣದ ರೂವಾರಿಗಳನ್ನು ಕೊಲೆಗಾರರೆಂದು ಪರಿಗಣಿಸಿ ಶಿಕ್ಷೆ ನೀಡಬೇಕು. ಪ್ರಧಾನಿ ಮೋದಿಯವರು ವಿದೇಶ ಪ್ರವಾಸವನ್ನು ಮೊಟಕುಗೊಳಿಸಿ, ನೀಟ್ ಪರೀಕ್ಷೆ ಬರೆದ ಯುವಜನರ ಬೇಷರತ್ ಕ್ಷಮೆ ಯಾಚಿಸಬೇಕು. ಇನ್ನುಮುಂದೆ ಕೇಂದ್ರಸರ್ಕಾರ ನೀಟ್ ಪರೀಕ್ಷೆಗಳನ್ನು ನಡೆಸದೇ, ಈ ಜವಾಬ್ದಾರಿಯನ್ನು ಆಯಾ ರಾಜ್ಯಗಳಿಗೆ ಪರೀಕ್ಷೆ ನಡೆಸುವ ಅಧಿಕಾರವನ್ನು ಕೊಡಬೇಕೆನ್ನುವ ಒತ್ತಾಯ ಮಾಡುವುದಾಗಿ ಸಿದ್ದರಾಮಯ್ಯ ತಿಳಿಸಿದರು.**

## 6086 ಅತಿಥಿ ಉಪನ್ಯಾಸಕರ ನೇಮಕಕ್ಕೆ ಸರ್ಕಾರ ಒಪ್ಪಿಗೆ

**ಬೆಂಗಳೂರು, ಮೇ 21:** ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಲಿಯುತ್ತಿರುವ ಲಕ್ಷಾಂತರ ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ಯಾವುದೇ ಹಿನ್ನಡೆಯಾಗದಂತೆ 2026–27ನೇ ಶೈಕ್ಷಣಿಕ ಸಾಲಿಗೆ ಅನ್ವಯವಾಗುವಂತೆ ಒಟ್ಟು 6,086 ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಸರ್ಕಾರವು ಅಧಿಕೃತವಾಗಿ ಒಪ್ಪಿಗೆ ನೀಡಿದೆ.ಈ ಕುರಿತು ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳುವ ಪ್ರಕ್ರಿಯೆ ಆರಂಭಿಸಲು ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ)ಯ ನಿರ್ದೇಶಕರಿಗೆ ಅನುಮತಿ ನೀಡಿ ಸರ್ಕಾರವು ಆದೇಶ ಹೊರಡಿಸಿದೆ. ಸರ್ಕಾರಿ ಪಿಯು ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆ ಪರ್ಯಾಯವಾಗಿ ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳುವುದು ವಾಡಿಕೆ. ಈ ಹಿಂದೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ನೇಮಕ ಮಾಡಿಕೊಳ್ಳಲು ಸಹಮತಿ ನೀಡಲಾಗಿದ್ದ 6,086 ಅತಿಥಿ ಉಪನ್ಯಾಸಕರ ಹುದ್ದೆಗಳನ್ನು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಪ್ರಸಕ್ತ ಸಾಲಿನಲ್ಲಿಯೂ ಮುಂದುವರಿಸಲು ಸರ್ಕಾರ ತೀರ್ಮಾನಿಸಿದೆ. ಈ ಬೃಹತ್ ನೇಮಕಾತಿ ಪ್ರಕ್ರಿಯೆಗಾಗಿ ಮತ್ತು ಉಪನ್ಯಾಸಕರಿಗೆ ಗೌರವ ಧನ ಪಾವತಿಸುವ ಉದ್ದೇಶದಿಂದ 2026–27ನೇ ಸಾಲಿನ ರಾಜ್ಯ ಬಜೆಟ್‌ನಲ್ಲಿ ಬರೋಬ್ಬರಿ 8,520 ಲಕ್ಷ ರೂಪಾಯಿಗಳ ಅನುದಾನವನ್ನು ನಿಗದಿಪಡಿಸಲಾಗಿದೆ ಎಂದು ಸರ್ಕಾರದ ಪ್ರಕಟಣೆ ಸ್ಪಷ್ಟಪಡಿಸಿದೆ.

### ಶೃಂಗೇರಿ ಕ್ಷೇತ್ರ ಮತ ಮರುಎಣಿಕೆ

## ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ಸುಪ್ರೀಂ ನಿರ್ದೇಶನ

**ದೆಹಲಿ, ಮೇ 21:** ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತಗಳ ಮರುಎಣಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್‌ನಲ್ಲಿ ಗುರುವಾರ ವಿಚಾರಣೆ ನಡೆದಿದ್ದು, ಯಥಾಸ್ಥಿತಿ ಮುಂದುವರಿಸಲು ತಿಳಿಸಿ ಮುಂದಿನ ವಿಚಾರಣೆಯನ್ನು ಜು.23ಕ್ಕೆ ಕಾಯ್ದಿರಿಸಿದೆ. ಅಲ್ಲಿಯವರೆಗೂ ಶಾಸಕ ರಾಜೇಗೌಡ ಅವರ ಶಾಸಕ ಸ್ಥಾನ ಅಬಾಧಿತವಾಗಿರಲಿದೆ.

ಮೇ 2ರಂದು ನಡೆದ ಮರು ಮತ ಎಣಿಕೆ ವೇಳೆ ಅಂಚೆ ಮತಪತ್ರ ತಿರುಚಲಾಗಿದೆ ಎಂದು ಆರೋಪಿಸಿ, ಜತೆಗೆ ಕರ್ನಾಟಕ ಹೈಕೋರ್ಟ್ ನೀಡಿದ್ದ ಆದೇಶ ಪ್ರಶ್ನಿಸಿ ಕಾಂಗ್ರೆಸ್‌ನ ಟಿ.ಡಿ.ರಾಜೇಗೌಡ ಸುಪ್ರೀಂ ಮೊರೆ ಹೋಗಿದ್ದರು. ಮೇ 11ರಂದು ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್, ಮರು ಮತ ಎಣಿಕೆ ಪ್ರಕ್ರಿಯೆ ಮತ್ತು ಫಲಿತಾಂಶಕ್ಕೆ ಮಧ್ಯಾಂತರ ತಡೆ ನೀಡಿತ್ತು. ಪ್ರಕರಣಕ್ಕೆ ಸಂಬಂಧಿಸಿದಂತೆ ಯಥಾ ಸ್ಥಿತಿ ಕಾಯ್ದುಕೊಳ್ಳುವಂತೆ ಮತ್ತು ಮರು ಎಣಿಕೆಗೆ ಸಂಬಂಧಿಸಿದ ಎಲ್ಲ ದಾಖಲೆಗಳನ್ನು ಸಲ್ಲಿಕೆ ಮಾಡುವಂತೆ ಚುನಾವಣಾ ಆಯೋಗಕ್ಕೆ ನ್ಯಾಯಾಲಯ ಸೂಚಿಸಿತ್ತು. ಇದರಿಂದಾಗಿ ರಾಜೆಗೌಡ ಅವರ ಶಾಸಕತ್ವ ಊರ್ಜಿತ ಗೊಂಡಿತ್ತು. ಮೇ 21ರಂದು, ಗುರುವಾರ ಅರ್ಜಿಯ ವಿಚಾರಣೆ ನಡೆಸುವುದಾಗಿ ನ್ಯಾಯಾ ಲಯ ತಿಳಿಸಿತ್ತು. ಅದರಂತೆ ಇಂದು ನ್ಯಾ.ಸಂಜಯ್ ಕುಮಾರ್ ಮತ್ತು ನ್ಯಾ.ವಿನೋದ ಚಂದ್ರ ನೇತೃತ್ವದ ದ್ವಿಸದಸ್ಯ ಪೀಠದಲ್ಲಿ ವಿಚಾರಣೆ ನಡೆದು ಪ್ರಕರಣದ ವಿಚಾರಣೆಯನ್ನು ಜು.23 ಕ್ಕೆ ಮುಂದೂಡಲಾಗಿದೆ.



ಮಾಜಿ ಪ್ರಧಾನಿ ರಾಜೀವ್‌ಗಾಂಧಿ ಅವರ ಪುಣ್ಯದಿನದ ಅಂಗವಾಗಿ ದೆಹಲಿಯ ವೀರಭೂಮಿಯಲ್ಲಿರುವ ರಾಜೀವ್‌ಗಾಂಧಿ ಅವರ ಸಮಾಧಿಗೆ ಎಐಸಿಸಿ ಅಧ್ಯಕ್ಷ ಎಂ. ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಹಾಗೂ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ಗುರುವಾರ ಶ್ರದ್ಧಾಂಜಲಿ ಅರ್ಪಿಸಿದರು.

## ಪುಲ್ವಾಮಾ ದಾಳಿ ಸೂತ್ರದಾರ ಹಮ್ಜಾ ಬುರ್ಹಾನ್ ಪಿಓಕೆಯಲ್ಲಿ ಹತ್ಯೆ

### ಅಪರಚಿತರಿಂದ ಗುಂಡಿಕ್ಕಿ ಕೊಲೆ



**ನವದೆಹಲಿ, ಮೇ 21:** ಪುಲ್ವಾಮಾ ದಾಳಿಯ ಸೂತ್ರದಾರ ಹಮ್ಜಾ ಬುರ್ಹಾನ್‌ನನ್ನ ಅಪರಿಚಿತ ವ್ಯಕ್ತಿಗಳು ಗುಂಡಿಕ್ಕಿ ಹತ್ಯೆ ಮಾಡಿದ್ದಾರೆ. ಪಾಕ್ ಆಕ್ರಮಿತ ಕಾಶ್ಮೀರದಲ್ಲಿರುವ ಮುಜಫರಾಬಾದ್‌ನಲ್ಲಿ ಗುಂಡಿನ ದಾಳಿ ನಡೆದಿದೆ. ದಾಳಿಕೋರರ ಗುರುತು ಅಥವಾ ಹತ್ಯೆಯ ಹಿಂದಿನ ಉದ್ದೇಶದ ಬಗ್ಗೆ ಯಾವುದೇ ಅಧಿಕೃತ ಮಾಹಿತಿ ಬಂದಿಲ್ಲ.

ಪುಲ್ವಾಮಾ ದಾಳಿಗೆ ಸಂಬಂಧಿಸಿದ ಭಯೋತ್ಪಾದಕ ಕಾರ್ಯಾಚರಣೆಗಳಲ್ಲಿ ಹಮ್ಜಾ ಬುರ್ಹಾನ್ ಪ್ರಮುಖ ಒಳಸಂಚುಗಾರರಲ್ಲಿ ಸೂತ್ರದಾರ ಒಬ್ಬನೆಂದು ಪರಿಗಣಿಸಲಾಗಿದೆ. ಬುರ್ಹಾನ್ ಭಾರತ ವಿರೋಧಿ ಚಟುವಟಿಕೆಗಳ ದೀರ್ಘ ಇತಿಹಾಸವನ್ನು ಹೊಂದಿದ್ದಾನೆ ಮತ್ತು ಜಮ್ಮು ಮತ್ತು ಕಾಶ್ಮೀರದ ಯುವಕರನ್ನು ಭಯೋತ್ಪಾದನೆ ಮತ್ತು ಮೂಲಭೂತವಾದದತ್ತ ಸೆಳೆಯುವ ಕೆಲಸ ಮಾಡುತ್ತಿದ್ದ.

ಈತ ಮೂಲತಃ ಜಮ್ಮು ಮತ್ತು ಕಾಶ್ಮೀರದ ಪುಲ್ವಾಮಾ ಜಿಲ್ಲೆಯ ರತ್ನಿಪುರ ಪ್ರದೇಶದ ನಿವಾಸಿಯಾಗಿದ್ದು, ಏಳು ವರ್ಷಗಳ ಹಿಂದೆ ಮಾನ್ಯ ದಾಖಲೆಗಳನ್ನು ಬಳಸಿ ಪಾಕಿಸ್ತಾನಕ್ಕೆ ಭೇಟಿ ನೀಡಿ ಅಲ್–ಬದರ್ ಭಯೋತ್ಪಾದಕ ಸಂಘಟನೆಗೆ ಸೇರಿದ್ದ ನಂತರ ಅವನು ಭಯೋತ್ಪಾದಕ ಗುಂಪಿನ ಕಾರ್ಯಾಚರಣೆಯ ಕಮಾಂಡರ್ ಆದನು ಮತ್ತು ಅದಕ್ಕೆ ಉಗ್ರಗಾಮಿಗಳನ್ನು ನೇಮಿಸಿಕೊಳ್ಳುವ ಜವಾಬ್ದಾರಿಯನ್ನು ಹೊಂದಿದ್ದನು.

ಹೆಚ್ಚುವರಿಯಾಗಿ, ಅವನು ಜಮ್ಮು ಮತ್ತು ಕಾಶ್ಮೀರದಲ್ಲಿ ಗುಂಪಿನ ಶಸ್ತ್ರಾಸ್ತ್ರಗಳ ಪೂರೈಕೆಯನ್ನು ಮಾಡುತ್ತಿದ್ದ. 2022 ರಲ್ಲಿ, ಭಾರತ ಸರ್ಕಾರ ಅವನನ್ನು ಭಯೋತ್ಪಾದಕ ಎಂದು ಹೆಸರಿಸಿತು. ಪುಲ್ವಾಮಾ ಮತ್ತು ದಕ್ಷಿಣ ಕಾಶ್ಮೀರದ ಇತರ ಭಾಗಗಳಲ್ಲಿ ಭಯೋತ್ಪಾದನೆಯನ್ನು ಹರಡುವಲ್ಲಿ ಬುರ್ಹಾನ್ ಒಬ್ಬ ಮಾಸ್ಟರ್ ಮೈಂಡ್ ಎಂದು ಭಾರತೀಯ ತನಿಖಾ ಏಜೆನ್ಸಿಗಳು ಹೇಳುತ್ತವೆ.

ಹಮ್ಜಾ ಬುರ್ಹಾನ್ ಹತ್ಯೆ ಬಳಿಕ ಪಿಒಕೆಯಲ್ಲಿ ಆಶ್ರಯ ಪಡೆದಿರುವ ಭಯೋತ್ಪಾದಕರಿಗೆ ಆತಂಕ ಹೆಚ್ಚುತ್ತಿದೆ. ಭಯೋತ್ಪಾದನೆಯಲ್ಲಿ ತೊಡಗಿ ಭಾರತದ ವಿರುದ್ಧ ಸಂಚು ರೂಪಿಸುತ್ತಿರುವ ಹಲವು ಭಯೋತ್ಪಾದಕರನ್ನು ಅಪರಿಚಿತ ವ್ಯಕ್ತಿಗಳು ಗುಂಡಿಕ್ಕಿ ಹತ್ಯೆ ಮಾಡುತ್ತಿದ್ದಾರೆ. ಕಳೆದೊಂದು ವರ್ಷದಲ್ಲಿ 16 ಕ್ಕೂ ಹೆಚ್ಚು ಭಯೋತ್ಪಾದಕರು ಅಪರಿಚಿತರ ಗುಂಡಿಗೆ ಬಲಿಯಾಗಿದ್ದಾರೆ.

## ಮೇಕೆದಾಟು ಯೋಜನೆ ಹೊಸ ಡಿಪಿಆರ್ ಸಿದ್ಧ ಶೀಘ್ರವೇ ಕೇಂದ್ರಕ್ಕೆ ಸಲ್ಲಿಕೆ– ಡಿ.ಕೆ.ಶಿವಕುಮಾರ್



■ ಅರಣ್ಯ ಪ್ರದೇಶಕ್ಕೆ ಪರ್ಯಾಯವಾಗಿ ನೀಡಲು ಜಮೀನು ಗುರುತಿಸಲು ಕ್ರಮ

**ಚಾಮರಾಜನಗರ, ಮೇ 21:** ಮೇಕೆದಾಟು ಯೋಜನೆಗೆ ಹೊಸ ಡಿಪಿಆರ್ ಸಿದ್ಧಪಡಿಸಲಾಗಿದ್ದು, ಈ ಯೋಜನೆಯ ಕಚೇರಿ ಆರಂಭಿಸಿದ್ದೇವೆ. ಮುಳುಗಡೆಯಾಗುವ ಅರಣ್ಯ ಪ್ರದೇಶಕ್ಕೆ ಪರ್ಯಾಯ ಜಮೀನು ನೀಡಲು ಜಮೀನು ಗುರುತಿಸುತ್ತಿದ್ದೇವೆ. ಶೀಘ್ರವೇ ಕೇಂದ್ರಕ್ಕೆ ಡಿಪಿಆರ್ ಸಲ್ಲಿಕೆ ಮಾಡಲಿದ್ದು, ಕೇಂದ್ರ ಸರ್ಕಾರದ ಅನುಮತಿ ಬಂದ ಬಳಿಕ ಯೋಜನೆಯ ಭೂಮಿಪೂಜೆ ಮಾಡಲಾಗುವುದು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಕೊಳ್ಳೇಗಾಲ ತಾಲೂಕಿನ ಮಧ್ಯರಂಗ ದೇಗುಲದ ಬಳಿ ಗುರುವಾರ ಮಾಧ್ಯಮದವರ ಜೊತೆ ಮಾತನಾಡಿದ ಅವರು, ಕಾವೇರಿ ವಿಚಾರದಲ್ಲಿ ತಮಿಳುನಾಡಿಗೆ 177 ಟಿಎಂಸಿ ನೀರು ಬಿಡಲೇಬೇಕು ಎಂದು ಸ್ಪಷ್ಟ ಆದೇಶ ನೀಡಲಾಗಿದೆ. ಇದನ್ನು ಹೇಗೆ ಬಗೆಹರಿಸಬೇಕು ಎಂದು ಮುಂದಿನ ದಿನಗಳಲ್ಲಿ ಚರ್ಚೆ ಮಾಡುತ್ತೇನೆ. ಮೇಕೆದಾಟು ಯೋಜನೆಗೆ ಆಕ್ಷೇಪ ಸಲ್ಲಿಸಲು ತಮಿಳುನಾಡಿಗೆ ಯಾವುದೇ ಹಕ್ಕಿಲ್ಲ, ಇದರ ಬಗ್ಗೆ ಕೇಂದ್ರ ಜಲ ಆಯೋಗ ತೀರ್ಮಾನ ಮಾಡಬೇಕು ಎಂದು ಸುಪ್ರೀಂ ಕೋರ್ಟ್ ಆದೇಶ ನೀಡಿದೆ ಎಂದರು.

ಸರ್ಕಾರ ಹಾಗೂ ಖಾಸಗಿಯವರು ಸೇರಿ ಮಧ್ಯರಂಗ ದೇವಾಲಯದ ಜೀರ್ಣೋದ್ಧಾರದ ಕೆಲಸ ಮಾಡುತ್ತಿದ್ದೇವೆ. ಇಂದು ಸಚಿವ ಸಂಪುಟ ಸಭೆ ಇದ್ದರೂ ನಾನು ಸೇರಿದಂತೆ ಅನೇಕ ಸಚಿವರು ಈ ಕಾರ್ಯಕ್ರಮಕ್ಕೆ ಬಂದಿದ್ದೇವೆ. ಭಕ್ತ ಹಾಗೂ ಭಗವಂತನ ನಡುವೆ ವ್ಯವಹಾರ ನಡೆಯುವ ಸ್ಥಳ ದೇವಾಲಯ. ಈ ಪುಣ್ಯಕ್ಷೇತ್ರ ಯಾತ್ರಿಕರಿಗೆ ಪ್ರಸಿದ್ಧವಾಗಿದೆ. ಇದು ಪ್ರಕೃತಿಯ ಕೊಡುಗೆ. ನಮ್ಮ ಸರ್ಕಾರ ಕೂಡ ಎಲ್ಲೆಡೆ ಅನೇಕ ಅಭಿವೃದ್ಧಿ ಕೆಲಸ ಮಾಡಿಕೊಂಡು ಬಂದಿದೆ. ಇಲ್ಲಿ ಸಚಿವ ಸಂಪುಟ ಸಭೆ ಮಾಡಿ ಈ ಭಾಗದ ಅಭಿವೃದ್ಧಿಗೆ ಅನೇಕ ಕ್ರಮ ಕೈಗೊಳ್ಳಲಾಗಿದೆ. ಕೈಗಾರಿಕಾ ಅಭಿವೃದ್ಧಿಗೆ ಕ್ರಮ ಕೈಗೊಂಡಿದ್ದೇವೆ ಎಂದರು.

ನೀವು ಯಾವಾಗ ಸಿಎಂ ಆಗುತ್ತೀರಿ ಎಂದು ಕೇಳಿದಾಗ, ಅದನ್ನು ಕಾಲ ತೀರ್ಮಾನ ಮಾಡುತ್ತದೆ ಎಂದು ತಿಳಿಸಿದರು.

## ಎಸ್‌ಐಆರ್ ಪ್ರಕ್ರಿಯೆಯಲ್ಲಿ ಮತದಾರನ ಹಕ್ಕು ಕಸಿಯುವ ಯತ್ನ ನಡೆದರೆ ಕೋರ್ಟ್ ಮೊರೆ



■ ಸಂಪುಟ ಸಭೆ ನಂತರ ಸಚಿವ ಎಚ್.ಕೆ. ಪಾಟೀಲ್ ಮಾಹಿತಿ

**ಬೆಂಗಳೂರು, ಮೇ 21:** ವಿಶೇಷ ತೀವ್ರ ಪರಿಷ್ಕರಣೆಯಲ್ಲಿ(ಎಸ್‌ಐಆರ್) ನಲ್ಲಿ ಮತದಾರನ ಹಕ್ಕು ಕಸಿಯುವ, ದಮನ ಮಾಡುವ ಪ್ರಕ್ರಿಯೆ ನಡೆದರೆ ಅದನ್ನು ತಡೆಯುವ ಪ್ರಯತ್ನ ಮಾಡಬೇಕೆಂಬ ಚಿಂತನೆ ನಡೆಸಿ ಈ ಸಂಬಂಧ ಸುಪ್ರೀಂ ಕೋರ್ಟ್ ಮೆಟ್ಟಿಲು ಹತ್ತಲು ಸಚಿವ ಸಂಪುಟ ಸಭೆಯಲ್ಲಿ ಗಂಭೀರ ಚರ್ಚೆ ನಡೆದಿದ್ದು, 3–4 ದಿನಗಳಲ್ಲಿ ಅಂತಿಮ ನಿರ್ಣಯ ಕೈಗೊಳ್ಳಲು ಸರಕಾರ ಸಿದ್ದತೆ ನಡೆಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಂಪುಟ ಸಭೆಯ ನಂತರ ಮಾಹಿತಿ ನೀಡಿದ ಕಾನೂನು ಸಚಿವ ಎಚ್.ಕೆ.ಪಾಟೀಲ್ ಮಾಹಿತಿ ನೀಡಿ, ಎಸ್‌ಐಆರ್ ಸಾಧಕ ಭಾಧಕ ಕುರಿತು ಸುಧೀರ್ಘ ಹಾಗೂ ಗಂಭೀರ ಚರ್ಚೆ ನಡೆಸಲಾಗಿದೆ. ಈ ವಿಚಾರಕ್ಕೆ ಸಂಬಂಧ ಇಂದಿನ ಸಭೆಯಲ್ಲಿ ಚರ್ಚೆ ಪೂರ್ಣ ಆಗಿಲ್ಲ. ಮುಂದಿನ ಮೂರು ನಾಲ್ಕು ದಿನಗಳ ನಂತರ ಮುಂದಿನ ನಡೆ ಬಗ್ಗೆ ತೀರ್ಮಾನ ಮಾಡಲಾಗುವುದು. ಆರಂಭಿಕ ಹಂತದಲ್ಲಿ ಆಯೋಗದ ಮುಂದೆ ಹೋಗುವ ಮತ್ತು ಕಾನೂನು ಪರಿಮಿತಿಗಳ ಬಗ್ಗೆ ಚರ್ಚೆಯಾಗಿದ್ದು, ಈ ಸಂಬಂಧ ಸಿಎಂ ಸಿದ್ದರಾಮಯ್ಯ ಮುಂದಿನ ವಿಚಾರ ತೀರ್ಮಾನ ಮಾಡುತ್ತಾ?ರೆ. ಒಟ್ಟಿನಲ್ಲಿ ಮತಾಧಿಕಾರ ರದ್ದು ಆಗುವ ಬಗ್ಗೆ ಸಂಪುಟ ಸಭೆಯಲ್ಲಿ ಆತಂಕ ವ್ಯಕ್ತಪಡಿಸಲಾಗಿದೆ ಎಂದರು.


ಎಸ್‌ಐಆರ್ ಸಂಬಂಧ ರಾಷ್ಟ್ರದಲ್ಲಿ ಹಲವು ಪ್ರಮಾದಗಳು ಜರುಗಿದ್ದು, ಪಶ್ಚಿಮ ಬಂಗಾಳದಲ್ಲಿ 27 ಲಕ್ಷ ಮತದಾರರ ಹಕ್ಕು ಹೋಗಿರುವುದು, ಬೇರೆ ರಾಜ್ಯಗಳಲ್ಲಿ ಆಗಿರುವ ಹಲವು ಗಂಭೀರ ಆಕ್ಷೇಪಗಳು, ತಮಿಳುನಾಡಿನಲ್ಲಿನ ಆಕ್ಷೇಪ ಅವೆಲ್ಲ ಗಮನದಲ್ಲಿಟ್ಟುಕೊಳ್ಳಲಾಗಿದೆ. ನಾಗರಿಕರಿಗೆ ಮತದಾನದ ಹಕ್ಕನ್ನು ಉಳಿಸಕೊಳ್ಳುವುದರಲ್ಲಿ ಸರ್ವ ಪ್ರಯತ್ನ ಮಾಡಬೇಕೆಂದು ಚಿಂತನೆ ಮಾಡಲಾಗಿದೆ. ಈ ಸಂಬಂಧ ಮತದಾರರ ಅಂತಿಮ ಪಟ್ಟಿ ಸಂಬಂಧಿತ ವಿಚಾರಕ್ಕೆ ಸುಪ್ರೀಂ ಮೆಟ್ಟಲೇರಲು ನಿರ್ಧರಿಸಲಾಗಿದೆ ಎಂದರು.

**ಪಿ.ಎನ್.ದೇಸಾಯಿ ಮಾನವ ಹಕ್ಕು ಆಯೋಗಕ್ಕೆ:** ಇದಲ್ಲದೆ, ಪಿ.ಎನ್.ದೇಸಾಯಿ ಅವರನ್ನು ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರಾಗಿ ನೇಮಿಸಲು ತೀರ್ಮಾನ ಮಾಡಲಾಗಿದೆ.

(6ನೇ ಪುಟಕ್ಕೆ)

# ದೇಶದಲ್ಲಿ ಎಬೋಲಾ ಪ್ರಕರಣ ಪತ್ತೆಯಾಗಿಲ್ಲ: ಕೇಂದ್ರ ಸ್ಪಷ್ಟನೆ

### ಯಾವುದೇ ಸವಾಲು ಎದುರಿಸಲು ಸಿದ್ಧವಾಗಿದ್ದೇವೆ: ಕೇಂದ್ರ ಸರ್ಕಾರ



ನವದೆಹಲಿ, ಮೇ 21: ಎಬೋಲಾ ಪ್ರಕರಣಗಳು ಅಧಿಕವಾಗಬಹುದು, ಸಾವುಗಳ ಪ್ರಮಾಣ ಮತ್ತಷ್ಟು ಹೆಚ್ಚಾಗಬಹುದು ಎಂದು ವಿಶ್ವ ಆರೋಗ್ಯ ಸಂಸ್ಥೆ ಎಚ್ಚರಿಕೆ ನೀಡಿದೆ. ಆದರೆ ದೇಶದಲ್ಲಿ ಈವರೆಗೆ ಎಬೋಲಾ ಪ್ರಕರಣಗಳು ಪತ್ತೆಯಾಗಿಲ್ಲ. ನಾವು ಯಾವುದೇ ಸವಾಲಿಗೂ ಸಿದ್ಧವಾಗಿದ್ದೇವೆ ಎಂದು ಕೇಂದ್ರ ಸರ್ಕಾರ ಹೇಳಿದೆ.

ಎಬೋಲಾ ವೈರಸ್ ಕಾಯಿಲೆ ಕುರಿತು ಸಿದ್ಧತೆ ಮತ್ತು ಪ್ರತಿಕ್ರಿಯೆ ಕ್ರಮಗಳನ್ನು ನಿರ್ಣಯಿಸಲು ಉನ್ನತ ಮಟ್ಟದ ಪರಿಶೀಲನಾ ಸಭೆ ಬುಧವಾರ ನಡೆದಿದೆ. ಈ ಸಭೆಯ ಅಧ್ಯಕ್ಷತೆ ವಹಿಸಿದ್ದ ಕೇಂದ್ರ ಆರೋಗ್ಯ ಕಾರ್ಯದರ್ಶಿ ಪುಣ್ಯ ಸಲಿಲಾ ಶ್ರೀವಾಸ್ತವ, ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಯಾವುದೇ ಸವಾಲು ಎದುರಿಸಲು ತಯಾರಾಗಿರುವಂತೆ ಸಲಹೆ ನೀಡಿದರು.

ಹೊಸದಾಗಿ ಕಾಣಿಸಿಕೊಂಡಿರುವ ಎಬೋಲಾ ಸೋಂಕಿನ ಹರಡುವಿಕೆಯ ವ್ಯಾಪ್ತಿ ಮತ್ತು ವೇಗ ವಿಶ್ವ ಆರೋಗ್ಯ ಸಂಸ್ಥೆಯನ್ನು ತೀವ್ರ ಆತಂಕಕ್ಕೀಡುಮಾಡಿದೆ. ರೋಗ ಪ್ರಸರಣದ ಈ ತೀವ್ರ ಸ್ವರೂಪವು ಜಾಗತಿಕ ಮಟ್ಟದಲ್ಲಿ ಎಚ್ಚರಿಕೆಯ ಗಂಟೆ ಬಾರಿಸಿದೆ. ಪ್ರಸ್ತುತ ಎಬೋಲಾ ಸೋಂಕು ಹರಡುತ್ತಿರುವ ವೇಗ ಹಾಗೂ ಅದರ ಭೌಗೋಳಿಕ ವ್ಯಾಪ್ತಿಯು ನಮಗೆ ಅತಿದೊಡ್ಡ ಸವಾಲಾಗಿ ಪರಿಣಮಿಸಿದೆ. ತುರ್ತು ಮತ್ತು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳದಿದ್ದರೆ ಪರಿಸ್ಥಿತಿ ಕೈಮೀರುವ ಸಾಧ್ಯತೆಯಿದೆ ಎಂದು ವಿಶ್ವ ಆರೋಗ್ಯ ಸಂಸ್ಥೆ ಅಧಿಕಾರಿಗಳು ಕಳವಳ ವ್ಯಕ್ತಪಡಿಸಿದ್ದಾರೆ.

ಈ ಬೆನ್ನಲ್ಲೇ ಸಿದ್ಧತಾ ಸಭೆ ನಡೆಸಿರುವ ಕೇಂದ್ರ ಆರೋಗ್ಯ ಕಾರ್ಯದರ್ಶಿ, ದೇಶವು ಸಂಪೂರ್ಣವಾಗಿ ಜಾಗರೂಕವಾಗಿದೆ. ಯಾವುದೇ ಪರಿಸ್ಥಿತಿಗೆ ತ್ವರಿತವಾಗಿ ಪ್ರತಿಕ್ರಿಯಿಸಲು ಸಿದ್ಧವಾಗಿದೆ. ಈಗಾಗಲೇ ಪೂರ್ವಭಾವಿ ತಡೆಗಟ್ಟುವ ಕ್ರಮಗಳನ್ನು ತೆಗೆದುಕೊಂಡಿದೆ. ಸಭೆಯಲ್ಲಿ ಕೇಂದ್ರ ಆರೋಗ್ಯ ಕಾರ್ಯದರ್ಶಿ ವಿದೇಶದಿಂದ ಬರುವವರು ಮೊದಲೇ ತಪಾಸಣೆ ಮಾಡಿಸಿಕೊಂಡಿರುವುದು, ಆಗಮನದ ನಂತರದ ತಪಾಸಣೆ, ಕ್ವಾರಂಟೈನ್ ಇರುವುದು, ಪ್ರಯೋಗಾಲಯ ಪರೀಕ್ಷೆ ಮೊದಲಾದ ವಿವರವಾದ ಮಾರ್ಗಸೂಚಿಗಳನ್ನು ಈಗಾಗಲೇ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ನೀಡಲಾಗಿದೆ ಎಂದು ಹೇಳಿದ್ದಾರೆ.

#### 600 ಶಂಕಿತ ಪ್ರಕರಣ



**ಜಾಗತಿಕವಾಗಿ 600 ಶಂಕಿತ ಎಬೋಲಾ ಪ್ರಕರಣಗಳು ಮತ್ತು 139 ಶಂಕಿತ ಸಾವುಗಳು ಸಂಭವಿಸಿವೆ ಎಂದು WHO ಬುಧವಾರ ತಿಳಿಸಿದೆ. ಇಲ್ಲಿಯವರೆಗೆ, ಮೊದಲ ಪ್ರಕರಣ ವರದಿಯಾದ ಕಾಂಗೋದಲ್ಲಿ 51 ಪ್ರಕರಣಗಳು ಮತ್ತು ಉಗಾಂಡಾದಲ್ಲಿ ಎರಡು ಪ್ರಕರಣಗಳು ದೃಢಪಟ್ಟಿವೆ. ಎಬೋಲಾದ ಬುಂಡಿಬುಗ್ಯೊ ಪ್ರಭೇದ ಏಕಾಏಕಿ ಕೆಲವು ತಿಂಗಳ ಹಿಂದಷ್ಟೇ ಕಾಣಿಸಿಕೊಂಡಿರಬಹುದು ಎಂದು ವಿಶ್ವ ಅರೋಗ್ಯ ಸಂಸ್ಥೆ ಮುಖ್ಯಸ್ಥ ಡಾ. ಟೆಡ್ರೊಸ್ ಅಧಾನೊಮ್ ಘೆಬ್ರೆಯೆಸಸ್ ಹೇಳಿದ್ದಾರೆ.**

## ವೈರಸ್ ಭೀತಿ: ರಾಜ್ಯದಲ್ಲಿ ಕಟ್ಟೆಚ್ಚರ




■ ಸೋಂಕು ನಿಯಂತ್ರಣಕ್ಕೆ ಆರೋಗ್ಯ ಇಲಾಖೆ ಸನ್ನದ್ಧ: ಸಚಿವ ದಿನೇಶ್ ಗುಂಡೂರಾವ್

**ಬೆಂಗಳೂರು,ಮೇ.21:** ಎಬೊಲಾ ವೈರಸ್ ಭೀತಿಯ ಹಿನ್ನೆಲೆಯಲ್ಲಿ ರಾಜ್ಯ ಆರೋಗ್ಯ ಇಲಾಖೆ ಸೋಂಕು ನಿಯಂತ್ರಣಕ್ಕೆ ಸನ್ನದ್ಧವಾಗಿದ್ದು, ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಕ್ರಮ ಕೈಗೊಳ್ಳಲಾಗುವುದು ಎಂದು ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಜಾಗತಿಕ ಮಟ್ಟದಲ್ಲಿ ಆಫ್ರಿಕಾ ಖಂಡದ ಕೆಲವು ದೇಶಗಳಲ್ಲಿ ಎಬೊಲಾ ಸೋಂಕು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ದೇಶಾದ್ಯಂತ ಮುನ್ನೆಚ್ಚರಿಕೆ ವಹಿಸಲು ಕೇಂದ್ರ ಆರೋಗ್ಯ ಸಚಿವಾಲಯ ಸೂಚಿಸಿದ್ದು, ರಾಜ್ಯದಲ್ಲಿ ಕಟ್ಟೆಚ್ಚರ ವಹಿಸಲಾಗಿದೆ ಎಂದಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿದ ಅವರು, ಆರೋಗ್ಯ ಸೇವೆಗಳ ನಿರ್ದೇಶನಾಲಯ ರೋಗಪೀಡಿತ ದೇಶಗಳಿಗೆ ಸಂಚರಿಸುವ ಪ್ರಯಾಣಿಕರಿಗೆ ಎಬೋಲಾ ಸೋಂಕಿನ ಬಗ್ಗೆ ಮಾಹಿತಿ ನೀಡಿದೆ. ಡೆಮಾಕ್ರಟಿಕ್ ರಿಪಬ್ಲಿಕ್ ಆಫ್ ಕಾಂಗೋ, ಉಗಾಂಡಾ ಮತ್ತು ದಕ್ಷಿಣ ಸುಡಾನ್ ಸೇರಿದಂತೆ ಹೆಚ್ಚಿನ ಅಪಾಯದ ದೇಶಗಳಿಗೆ ಭೇಟಿ ನೀಡಿದ ಮತ್ತು ಜ್ವರ, ತಲೆನೋವು, ಸ್ನಾಯುಸೆಳೆತ, ರಕ್ತಸ್ರಾವ ಮತ್ತು ವಾಂತಿಯಂತಹ ರೋಗಲಕ್ಷಣಗಳು ಕಂಡುಬಂದಿರುವ ಪ್ರಯಾಣಿಕರಿಗೆ ತಕ್ಷಣ ವೈದ್ಯಕೀಯ ಚಿಕಿತ್ಸೆ ನೀಡಲು ಸೂಚಿಸಲಾಗಿದೆ ಎಂದರು.

## ನಿತ್ಯ ಪಂಚಾಂಗ 22.05.2026 ಶುಕ್ರವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ

ಅಧಿಕ ಜ್ಯೇಷ್ಠ ಶುದ್ಧ, ಷಷ್ಠಿ, ಪುಷ್ಯ ನಕ್ಷತ್ರ, ಜೈವಿಕ ವೈವಿಧ್ಯತೆಗಾಗಿ ಅಂತರರಾಷ್ಟ್ರೀಯ ದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |






# ದೇವರು ಕಷ್ಟದ ಜತೆಗೆ ಅದನ್ನು ಎದುರಿಸುವ ಶಕ್ತಿಯನ್ನೂ ನೀಡುತ್ತಾನೆ

### ದಾರಿ ತೋರಿಸುವುದ ದೇವರ ಕೆಲಸ, ಗುರಿ ತಲುಪುವುದು ನಮ್ಮ ಕೆಲಸ: ಡಿ.ಕೆ. ಶಿವಕುಮಾರ್



ಬೆಂಗಳೂರು, ಮೇ 21: ದೇವರು ಕಷ್ಟ ಕೊಡುತ್ತಾನೆ, ಜೊತೆಗೆ ಅದನ್ನು ಎದುರಿಸುವ ಶಕ್ತಿಯನ್ನೂ ನೀಡುತ್ತಾನೆ. ದಾರಿ ತೋರಿಸುವುದು ದೇವರ ಕೆಲಸ, ಗುರಿ ತಲುಪಬೇಕಿರುವುದು ನಮ್ಮ ಕೆಲಸ. ದೇವರು ನೀಡುವ ಅವಕಾಶವನ್ನು ಬಳಸಿಕೊಳ್ಳಬೇಕು. ಅವಕಾಶ ಸಿಕ್ಕಾಗ ಕೈಯಿಂದ ದಾನ ಮಾಡಿ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಕೊಳ್ಳೇಗಾಲ ತಾಲ್ಲೂಕಿನ ಶ್ರೀ ಜಗನ್ಮೋಹನ ರಂಗನಾಥಸ್ವಾಮಿ ದೇವಾಲಯ ಜೀರ್ಣೋದ್ಧಾರ ಪೂರಕ ಅಷ್ಟಬಂಧನ ದಿವ್ಯ ಮಹಾ ಕುಂಭಾಭಿಷೇಕ–ಸಂಪ್ರೋಕ್ಷಣ ಮಹೋತ್ಸವದಲ್ಲಿ ಮಾತನಾಡಿದ ಅವರು, ದೇವರಿಗೆ ಜಾತಿ, ಧರ್ಮ ಎಂಬುದು ಇರುವುದಿಲ್ಲ. ಧರ್ಮ ಯಾವುದಾದರೂ ತತ್ವವೊಂದೇ, ದೈವ ನೂರಾದರೂ ಭಕ್ತಿಯೊಂದೆ, ಕರ್ಮ ಹಲವಾದೂ ನಿಷ್ಠೆಯೊಂದೇ, ದೇವನೊಬ್ಬ ನಾಮ ಹಲವು. ಕಾವೇರಿ ನದಿ ಹಾಗೂ ರಂಗನಾಥನ ಮಧ್ಯೆ ದರ್ಗಾವಿದೆ. ಇದೇ ಈ ನೆಲದ ಸೌಹಾರ್ದತೆ ಎಂದರು.

ಚಾಮರಾಜನಗರ ದೇವರ ನಾಡು

ಚಾಮರಾಜನಗರ ಹಿಂದುಳಿದ ಜಿಲ್ಲೆಯಲ್ಲ. ಇದು ದೇವರ ನಾಡು. ಚಾಮರಾಜೇಶ್ವರ, ಬಿಳಿಗಿರಿ ರಂಗನಾಥ, ಹಿಮವದ್ ಗೋಪಾಲಸ್ವಾಮಿ, ಮಲೆ ಮಾದೇಶ್ವರ, ಮಧ್ಯರಂಗ ಹೀಗೆ ದೇವಾಲಯಗಳ ಬೀಡಾಗಿದೆ. ಕಾವೇರಿ ನದಿಯ ತಟದಲ್ಲಿ ರಂಗನಾಥಸ್ವಾಮಿ ನೆಲೆಸಿ ಹರಸುತ್ತಿದ್ದಾನೆ. ಮನುಷ್ಯ ಎಷ್ಟೇ ದೊಡ್ಡವನಾದರೂ ಅವನ ಧರ್ಮ, ಆಚರಣೆಗಳನ್ನು ಬಿಡಲು ಆಗುವುದಿಲ್ಲ ಎಂದು ಹಿರಿಯರು ಮಾರ್ಗದರ್ಶನ ಮಾಡಿದ್ದಾರೆ. ದೇವರ ದೇವ ರಂಗನಾಥನ ಪಾದಗಳಿಗೆ ನನ್ನ ಕುಟುಂಬ ಹಾಗೂ ಎಲ್ಲಾ ಭಕ್ತಾಧಿಗಳ ಪರವಾಗಿ ಸಾಷ್ಟಾಂಗ ನಮಸ್ಕಾರ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

ಇದು ಭಾಗ್ಯ, ಇದು ಭಾಗ್ಯ, ಇದು ಭಾಗ್ಯವಯ್ಯಾ ಪದುಮನಾಭನ ಪಾದ ಭಜನೆ ಪರಮಸುಖವಯ್ಯಾ. ಎಎಂಆರ್ ಗ್ರೂಪಿನ ಮಹೇಶ್ ರೆಡ್ಡಿ ಅವರು ಹಾಗೂ ಕುಟುಂಬ ದೇವಾಲಯದ ಜೀರ್ಣೋದ್ಧಾರ ಮಾಡಿದ್ದಾರೆ. ಲಕ್ಷ್ಮೀ ರಂಗನಾಥಸ್ವಾಮಿಯ ಸೇವೆ ಮಾಡುವ ಭಾಗ್ಯ ಇವರಿಗೆ ಅವಕಾಶ ಸಿಕ್ಕಿದೆ. ಇನ್ನೂ ಹೆಚ್ಚಿನ ಶಕ್ತಿಯನ್ನು ದೇವರು ನೀಡಲಿ ಎಂದು ನಾನು ಪ್ರಾರ್ಥಿಸುತ್ತೇನೆ. ಅರ್ಚಕಸ್ಯ ಪ್ರಭಾವೇನ ಶಿಲಾಭವತಿ ಶಂಕರಃ ಅಂದರೆ ಅರ್ಚಕರ ಪ್ರಭಾವದಿಂದ ಶಿಲೆಯಲ್ಲಲೂ ಶಿವನನ್ನು ಕಾಣಬಹುದು. ದೇವರು, ದೇವಸ್ಥಾನ ಎಲ್ಲರ ಆಸ್ತಿ ಎಂದು ತಿಳಿಸಿದರು.

# ತುಮಕೂರು ಹೆಸರು ಬದಲಿಸುತ್ತೇನೆ ಎಂದು ಹೇಳಿಲ್ಲ: ರಾಗ ಬದಲಿಸಿದ ಪರಂ

### ಜಾಗತಿಕವಾಗಿ ಗುರುತಿಸಲ್ಪಡಲು ಬೆಂಗಳೂರಿನ ಭಾಗವಾಗಿಸಿ ಎಂದು ಸರ್ಕಾರಕ್ಕೆ ಪ್ರಸ್ತಾವನೆ ಇಟ್ಟಿದ್ದೇನೆ ಅಷ್ಟೆ



ತುಮಕೂರು, ಮೇ 21: ಕಲ್ಪತರ ನಾಡು ಎಂದೇ ಹೆಸರಾಗಿರುವ ತುಮಕೂರು ಜಿಲ್ಲೆಯ ಹೆಸರು ಬದಲಾವಣೆ ಆಗಲಿದೆ ಎಂಬ ರೀತಿಯಲ್ಲಿ ಸಾಮಾಜಿಕ ಜಾಲತಾಣಗಳು ಹಾಗೂ ಸಾರ್ವಜನಿಕ ವಲಯದಲ್ಲಿ ಹರಿದಾಡುತ್ತಿದ್ದ ಚರ್ಚೆಗಳಿಗೆ ಇದೀಗ ಸ್ಪಷ್ಟನೆ ದೊರೆತಿದೆ. ರಾಜ್ಯಸರ್ಕಾರದ ಸಾಧನಾ ಸಮಾವೇಶದಲ್ಲಿ ತುಮಕೂರನ್ನು ಬೆಂಗಳೂರು ಭಾಗವಾಗಿಸಿ ಬೆಂಗಳೂರು ಉತ್ತರವಾಗಿ ಘೋಷಿಸಬೇಕೆಂದು ಮಾಡಿದ ಪ್ರಸ್ತಾಪ ಸಾಕಷ್ಟು ಚರ್ಚೆಗೆ ಗ್ರಾಸವಾದ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಜಿ.ಪರಮೇಶ್ವರ್ ಅವರು ಸ್ಪಷ್ಟನೆ ನೀಡಿದ್ದಾರೆ.

ತುಮಕೂರು ಜಿಲ್ಲೆಯ ಹೆಸರು ಬದಲಾವಣೆ ಹೇಳಿಕೆ ಕುರಿತು ಸ್ಪಷ್ಟನೆ ನೀಡಿರುವ ಸಚಿವರು, ತುಮಕೂರಿನ ಐತಿಹಾಸಿಕ ಗುರುತು, ಅಸಿತೆ ಮತ್ತು ವೈಶಿಷ್ಟ್ಯಕ್ಕೆ ಯಾವುದೇ ಧಕ್ಕೆಯಾಗುವುದಿಲ್ಲ, ಬೆಂಗಳೂರು ಅಭಿವೃದ್ಧಿ ವಲಯದೊಂದಿಗಿನ ಸಂಪರ್ಕದ ಪರಿಕಲ್ಪನೆ ಕುರಿತು ಉಂಟಾಗಿದ್ದ ಗೊಂದಲಗಳಿಗೆ ಉತ್ತರ ನೀಡಿದರು. ತುಮಕೂರು ಹೆಸರನ್ನು ಬದಲಿಸುತ್ತೇನೆ ಎಂದು ಹೇಳಿಲ್ಲ. ಜಾಗತಿಕವಾಗಿ ತುಮಕೂರನ್ನು ಗುರುತಿಸಲ್ಪಡಲು ರಾಜಧಾನಿ ಬೆಂಗಳೂರು ಭಾಗವಾಗಿಸಿ ಎಂದು ಸರ್ಕಾರದ ಮುಂದೆ ಪ್ರಸ್ತಾಪ ಇಟ್ಟಿರುವುದಾಗಿ ಸ್ಪಷ್ಟಪಡಿಸಿದರು.

ತುಮಕೂರನ್ನು ಬೆಂಗಳೂರು ಮಾದರಿಯ ಅಭಿವೃದ್ಧಿ ಚಟುವಟಿಕೆಗಳೊಂದಿಗೆ ಸಂಪರ್ಕಿಸುವ ಉದ್ದೇಶ ಕೇವಲ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ವೇಗ ನೀಡುವುದಾಗಿದೆ ಎಂದು ವಿವರಿಸಿದ್ದಾರೆ. ಇದರಿಂದ ಜಿಲ್ಲೆಯ ವಿಸ್ತೀರ್ಣ ಅಥವಾ ಆಡಳಿತಾತಕ ಅಸ್ತಿತ್ವದಲ್ಲಿ ಯಾವುದೇ ಬದಲಾವಣೆ ಆಗುವುದಿಲ್ಲ ಎಂಬುದನ್ನೂ ಸ್ಪಷ್ಟಪಡಿಸಿದ್ದಾರೆ.ಬೆಂಗಳೂರು ಕೇಂದ್ರಿತ ಕೈಗಾರಿಕಾ, ಮೂಲಸೌಕರ್ಯ ಮತ್ತು ಹೂಡಿಕೆ ಮಾದರಿಯನ್ನು ತುಮಕೂರಿಗೂ ವಿಸ್ತರಿಸುವ ಮೂಲಕ ಜಿಲ್ಲೆಯಲ್ಲಿನ ಕೈಗಾರಿಕಾ ಬೆಳವಣಿಗೆಗೆ ಉತ್ತೇಜನ ಸಿಗಲಿದೆ. ಜೊತೆಗೆ ಹೊಸ ಹೂಡಿಕೆಗಳು ಹರಿದುಬರುವುದರಿಂದ ಉದ್ಯೋಗಾವಕಾಶಗಳು ಹೆಚ್ಚಳವಾಗಿ, ಆರ್ಥಿಕ ಚಟುವಟಿಕೆಗಳಿಗೆ ಮತ್ತಷ್ಟು ಚೈತನ್ಯ ದೊರೆಯಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಲಾಗಿದೆ.ಕಳೆದ ಕೆಲ ದಿನಗಳಿಂದ ತುಮಕೂರಿನ ಹೆಸರು ಬದಲಾಗಲಿದೆ, ಬೆಂಗಳೂರು ವಲಯಕ್ಕೆ ವಿಲೀನವಾಗಲಿದೆ ಎಂಬ ರೀತಿಯ ಊಹಾಪೋಹಗಳು ಸಾರ್ವಜನಿಕರಲ್ಲಿ ಗೊಂದಲ ಸೃಷ್ಟಿಸಿದ್ದವು. ಈ ಹಿನ್ನೆಲೆ ಸ್ಪಷ್ಟನೆ ನೀಡಿರುವ ಅವರು, ಕಲ್ಪತರ ನಾಡು ಎಂಬ ತುಮಕೂರಿನ ಐತಿಹಾಸಿಕ ಹೆಗ್ಗಳಿಕೆ ಮತ್ತು ಸಾಂಸ್ಕೃತಿಕ ಗುರುತು ಎಂದಿನಂತೆ ಮುಂದುವರಿಯಲಿದ್ದು, ಜಿಲ್ಲೆಯ ಗೌರವಕ್ಕೆ ಯಾವುದೇ ರೀತಿಯ ಧಕ್ಕೆಯಾಗುವುದಿಲ್ಲ ಎಂದು ತಿಳಿಸಿದ್ದಾರೆ.

# ಎಐಸಿಸಿ ಅಧ್ಯಕ್ಷರಾಗಿದ್ದವರು ಬಾಲಿಶ ಹೇಳಿಕೆ ನೀಡುವುದು ಸಲ್ಲ: ಬಿವೈವಿ

### ಮೋದಿ, ಅಮಿತ್‌ಶಾ ವಿರುದ್ಧದ ರಾಹುಲ್ ಹೇಳಿಕೆಗೆ ಖಂಡನೆ - ದೇಶದ ಜನರ ಕ್ಷಮೆ ಕೇಳುವಂತೆ ಆಗ್ರಹ



ಬೆಂಗಳೂರು, ಮೇ 21: ಪಶ್ಚಿಮ ಬಂಗಾಳ, ಅಸ್ಸಾಂನಲ್ಲಿ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿದೆ. ಇದನ್ನು ರಾಹುಲ್ ಗಾಂಧಿ ಅವರಿಗೆ ಸಹಿಸಲು ಆಗುತ್ತಿಲ್ಲ. ಅವರು ದೇಶದ ಜನರ ಕ್ಷಮೆ ಕೇಳಬೇಕು. ಇಲ್ಲದಿದ್ದರೆ ರಾಜ್ಯಾದ್ಯಂತ ಹೋರಾಟ ನಡೆಸಲಾಗುವುದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹಾಗೂ ಪಕ್ಷದ ಶಾಸಕರು ಎಚ್ಚರಿಸಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಕುರಿತು ರಾಹುಲ್ ಗಾಂಧಿ ಹೇಳಿಕೆಯನ್ನು ಖಂಡಿಸಿರುವ ವಿಜಯೇಂದ್ರ, ಕಾಂಗ್ರೆಸ್‌ನ ರಾಷ್ಟ್ರೀಯ ಅಧ್ಯಕ್ಷರಾಗಿದ್ದವರು ಈ ರೀತಿ ಬಾಲಿಶ ಹೇಳಿಕೆ ನೀಡಬಾರದು. ಎಲುಬಿಲ್ಲದ ನಾಲಿಗೆ ಏನೂ ಬೇಕಾದರೂ ನುಡಿಯಬಾರದು. ಪ್ರಧಾನಿ ಮತ್ತು ಕೇಂದ್ರ ಗೃಹ ಸಚಿವರ ಬಗ್ಗೆ ಅವಮಾನಕರವಾಗಿ ಮಾತನಾಡಬಾರದು. ಹಿಂದುಳಿದ ಸಮಾಜಕ್ಕೆ ಸೇರಿದ ಮೋದಿ ಅವರು ಪ್ರಧಾನಿಯಾಗಿ ಮೂರನೇ ಬಾರಿಗೆ ಕೇಂದ್ರದಲ್ಲಿ ಅಧಿಕಾರದಲ್ಲಿದ್ದಾರೆ. ದೇಶವನ್ನು ನಾಲ್ಕನೇ ಆರ್ಥಿಕ ಶಕ್ತಿಯಾಗಿ ಮಾಡಿದ್ದಾರೆ. ದೇಶದ ಅಭಿವೃದ್ಧಿ ಸಹಿಸದೆ ರಾಹುಲ್ ಗಾಂಧಿ ಅವರು ಈ ರೀತಿ ಮಾತನಾಡುತ್ತಿದ್ದಾರೆಯೇ ಎಂದು ಪ್ರಶ್ನಿಸಿದರು.

ಕಾಶ್ಮೀರದಲ್ಲಿ ಆರ್ಟಿಕಲ್ 370 ನೇ ವಿಧಿಯನ್ನು ಕಿತ್ತು ಹಾಕುವ ಧೈರ್ಯ ಕಾಂಗ್ರೆಸ್‌ಗೆ ಇರಲಿಲ್ಲ. ಅದನ್ನು ತೆಗೆದಿದ್ದು ಅಮಿತ್ ಶಾ. ಇದಕ್ಕೆ ರಾಹುಲ್ ಗಾಂಧಿ ಅವರು ಅಮಿತ್ ಶಾ ಅವರನ್ನು ದೇಶದ್ರೋಹಿ ಎಂದು ಕರೆಯುತ್ತಾರೆಯೇ? ದೇಶದಲ್ಲಿ ನಕ್ಸಲರನ್ನು ಬುಡಸಮೇತ ನಾಶ ಮಾಡುವಲ್ಲಿ ಅಮಿತ್ ಶಾ ಅವರು ಕೆಲಸ ಮಾಡಿದ್ದಾರೆ. ಪ್ರಧಾನಿ ಮೋದಿ ಅವರು ಭ್ರಷ್ಟಾಚಾರ ರಹಿತ ಆಡಳಿತ ನೀಡಿದ್ದಾರೆ. ಅದನ್ನು ರಾಹುಲ್ ಗಾಂಧಿಗೆ ಸಹಿಸಲು ಆಗುತ್ತಿಲ್ಲ ಎಂದರು.

ಲಕ್ಷಾಂತರ ಜನರ ತ್ಯಾಗ–ಬಲಿದಾನದಿಂದ ಸ್ವಾತಂತ್ರ್ಯಗಳಿಸಿದ ಭವ್ಯ ಭಾರತದಲ್ಲಿ ಭಯೋತ್ಪಾದನೆಯ ಬೀಜ ನೆಟ್ಟವರು ಯಾರು ಅದಕ್ಕೆ ನೀರೆರೆದು ಪೋಷಿಸಿದವರು ಯಾರು ಎಂಬುದು ಈ ದೇಶದ ಜನತೆಗೆ ತಿಳಿದಿದೆ. ಕಾಶ್ಮೀರದಲ್ಲಿ ಹಿಂದುಗಳ ನರಮೇಧ ನಡೆಯಿತು, ಹಿಂದೂಗಳನ್ನು ಮೂಲೋಚ್ಛಾಟನೆ ಮಾಡಲಾಯಿತು. ಕಾಶ್ಮೀರವನ್ನು ರಕ್ಷಿಸದ ನೀವು ದೇಶದ್ರೋಹಿಯೋ, ದೇಶ ಪ್ರೇಮಿಯೋ ವಿದೇಶಗಳಿಗೆ ಹೋಗಿ ಭಾರತದ ಗೌರವವನ್ನು ಹರಾಜು ಹಾಕಿದ ರಾಹುಲ್ ಗಾಂಧಿ ಅವರೇ ದೇಶದ್ರೋಹಿಯೋ, ದೇಶ ಪ್ರೇಮಿಯೋ ಎಂದು ಪ್ರಶ್ನಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಅವರನ್ನು ದೇಶದ್ರೋಹಿಗಳು ಎಂದು ಹೇಳುವ ಮೂಲಕ ರಾಹುಲ್ ಗಾಂಧಿ ಭಾರತ ವಿರೋಧಿ, ದೇಶದ್ರೋಹಿ ಎನ್ನುವುದನ್ನು ಅನಾವರಣ ಮಾಡಿಕೊಂಡಿದ್ದಾರೆ ಎಂದು ಟೀಕಾ ಪ್ರಹಾರ ನಡೆಸಿದ್ದಾರೆ. ರಾಜ್ಯದಲ್ಲೂ ನಾಲಾಯಕ್ ಕಾಂಗ್ರೆಸ್ ಪಕ್ಷದ ಮುಖಂಡರು ಇದ್ದಾರೆ. ರಾಜ್ಯದ ಸಚಿವರೇ ವಿದೇಶಾಂಗ ಸಚಿವರಂತೆ, ರಕ್ಷಣಾ ಪರಿಣತರ ರೀತಿ ಹುಚ್ಚು ಹುಚ್ಚಾಗಿ ಮಾತನಾಡುತ್ತಾರೆ. ಅಧಿಕಾರಕ್ಕೆ ಬಂದು ಮೂರು ವರ್ಷವಾದರೂ ಪೌತಿ ಖಾತೆ ಮಾಡಿದ್ದೇ ಸಾಧನೆ ಎಂಬಂತೆ ಮಾತನಾಡುತ್ತಾರೆ ಎಂದು ವ್ಯಂಗ್ಯವಾಡಿದರು.

# ನಾಳೆ ಬೆಂಗಳೂರಿಗೆ ಬಿಜೆಪಿ ರಾಷ್ಟ್ರಾಧ್ಯಕ್ಷ ನಿತಿನ್ ನಬೀನ್

ಬೆಂಗಳೂರು. ಮೇ 21: ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾದ ನಿತಿನ್ ನಬೀನ್ ಅವರು ಇದೇ 23ಕ್ಕೆ ಬೆಂಗಳೂರಿಗೆ ಆಗಮಿಸುತ್ತಿದ್ದಾರೆ. ರಾಷ್ಟ್ರೀಯ ಅಧ್ಯಕ್ಷರಾದ ಬಳಿಕ ರಾಜ್ಯಕ್ಕೆ ಅವರ ಮೊದಲ ಭೇಟಿ ಇದಾಗಿದೆ. 24ರಂದು ಬೆಂಗಳೂರು ಉತ್ತರ ಜಿಲ್ಲೆ ಪ್ರಶಿಕ್ಷಣ ವರ್ಗದಲ್ಲಿ ಭಾಗವಹಿಸಲಿದ್ದಾರೆ. ಬಿಜೆಪಿ ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರೊಂದಿಗೆ ಸಭೆ ಆಯೋಜಿಸಲಾಗಿದೆ ಎಂದು ವಿಜಯೇಂದ್ರ ತಿಳಿಸಿದರು.

ನರೇಂದ್ರ ಮೋದಿ ಅವರು ಪ್ರಧಾನಿಯಾಗಿ 12 ವರ್ಷ ಪೂರೈಸುತ್ತಿದ್ದಾರೆ. ಪ್ರಧಾನಿಗಳಾಗಿ ಇದು ದಾಖಲೆಯಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಹಲವು ಚಟುವಟಿಕೆ, ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ವಿಶ್ವ ಪರಿಸರ ದಿನ, ಯೋಗದಿನ ಆಚರಿಸಲಾಗುವುದು. ಎಲ್ಲಾ ವಿಚಾರಗಳ ಬಗ್ಗೆ ಪ್ರಮುಖರ ಜೊತೆ ಸಮಾಲೋಚನೆ ನಡೆಸುತ್ತೇವೆ.

ರಾಜ್ಯದ ರಾಜಕೀಯ ಸ್ಥಿತಿಗತಿ ಚರ್ಚೆ ನಡೆಸಲಾಗುವುದು ಎಂದರು. ಬಿಡದಿ ಟೌನ್‌ಶಿಪ್‌ಗೆ ಭೂಮಿ ಕಳೆದುಕೊಂಡು ರೈತರು ಬೀದಿ ಪಾಲಾಗಲು ಬಿಡುವುದಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

# ರಿಯಲ್ ಎಸ್ಟೇಟ್ ದಂಧೆ ಸರ್ಕಾರದ ಪ್ರಮುಖ ಕಾರ್ಯಸೂಚಿ: ಅಶೋಕ್



ಬೆಂಗಳೂರು, ಮೇ 21: ರಾಜಧಾನಿಯ ಅಕ್ಕಪಕ್ಕದ ಜಿಲ್ಲೆಗಳಿಗೆ ಬೆಂಗಳೂರು ಹೆಸರು ಅಂಟಿಸಿ ರಿಯಲ್ ಎಸ್ಟೇಟ್ ದಂಧೆ ವಿಸ್ತರಿಸುವುದರಲ್ಲಿ ತೋರಿಸುತ್ತಿರುವ ಆಸಕ್ತಿಯ ಅರ್ಧದಷ್ಟಾದರೂ ಬೆಂಗಳೂರಿನ ಸುರಕ್ಷತೆ, ಕಾನೂನು ಸುವ್ಯವಸ್ಥೆ ಬಗ್ಗೆ ಈ ಕಾಂಗ್ರೆಸ್ ಸರ್ಕಾರಕ್ಕಿದ್ದಿದ್ದರೆ ಇಂದು ಸಿಲಿಕಾನ್ ಸಿಟಿ ಅಪರಾಧಗಳ ನಗರ ಆಗುತ್ತಿರಲಿಲ್ಲ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಬೇಸರ ಹೊರಹಾಕಿದ್ದಾರೆ.

ತಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಬೆಂಗಳೂರಿನ ಅಕ್ಕಪಕ್ಕದ ಜಿಲ್ಲೆಗಳಿಗೆ ಬೆಂಗಳೂರು ಹೆಸರು ತಳಕು ಹಾಕಿ, ಜಮೀನಿನ ಬೆಲೆ ಏರಿಸಿ ರಿಯಲ್ ಎಸ್ಟೇಟ್ ಲಾಬಿಯ ಜೇಬು ತುಂಬಿಸುವುದನ್ನೇ ಏಕೈಕ ಅಜೆಂಡಾ ಮಾಡಿಕೊಂಡಿರುವ ಕಾಂಗ್ರೆಸ್ ಸರ್ಕಾರ ಬೆಂಗಳೂರಿನ ಅಭಿವೃದ್ಧಿ, ಕಾನೂನು ಸುವ್ಯವಸ್ಥೆಯನ್ನು ಸಂಪೂರ್ಣವಾಗಿ ನಿರ್ಲಕ್ಷ್ಯ ಮಾಡಿದೆ ಎಂದು ಆರೋಪಿಸಿದ್ದಾರೆ.

ಇದರ ಪರಿಣಾಮವಾಗಿ ನಮ್ಮ ಹೆಮ್ಮೆಯ ಸಿಲಿಕಾನ್ ಸಿಟಿ, ಕ್ರೈಮ್ ಸಿಟಿಯಾಗಿ ಮಾರ್ಪಟ್ಟಿದೆ. ಆವಿಷ್ಕಾರದ ರಾಜಧಾನಿ, ಅಪರಾಧಗಳ ರಾಜಧಾನಿಯಾಗಿ ಮಾರ್ಪಟ್ಟಿದೆ ಎಂದು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

2024ರಲ್ಲಿ ಬೆಂಗಳೂರಿನಲ್ಲಿ 176 ಕೊಲೆ ಪ್ರಕರಣಗಳು ದಾಖಲು. ಮಹಾನಗರಗಳ ಅಪರಾಧ ಪಟ್ಟಿಯಲ್ಲಿ ಬೆಂಗಳೂರು ಟಾಪ್ ನಗರಗಳಲ್ಲಿ ಒಂದಾಗಿದೆ.ಮಹಿಳೆಯರ ಮೇಲಿನ ದೌರ್ಜನ್ಯ 4,748 ಪ್ರಕರಣಗಳು, ಅದರಲ್ಲೂ 16 ಗ್ಯಾಂಗ್ ರೇಪ್ ಪ್ರಕರಣಗಳು ದಾಖಲಾಗಿವೆ. ಇದೇನಾ ಬ್ರ್ಯಾಂಡ್ ಬೆಂಗಳೂರು ಎಂದು ಪರೋಕ್ಷವಾಗಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಪ್ರಶ್ನಿಸಿದ್ದಾರೆ.

ಒಂದೇ ವರ್ಷದಲ್ಲಿ 17,561 ಸೈಬರ್ ಅಪರಾಧ ಪ್ರಕರಣಗಳು ದಾಖಲಾಗಿವೆ. ಜನರ ಬೆವರಿನ ಹಣವನ್ನು ಸೈಬರ್ ಕಳ್ಳರು ಲೂಟಿ ಮಾಡುತ್ತಿದ್ದಾರೆ. ಗಾಂಜಾ, ಹೆರಾಯಿನ್ ಸೇರಿ 98.69 ಕೋಟಿ ಮೌಲ್ಯದ ಮಾದಕ ವಸ್ತುಗಳು ವಶಪಡಿಸಿಕೊಳ್ಳಲಾಗಿದೆ. ಆದರೆ ಡ್ರಗ್ಸ್ ಮಾಫಿಯಾ ಮಾತ್ರ ನಿರ್ಭಯವಾಗಿ ಓಡಾಡುತ್ತಿದೆ ಎಂದು ಆರೋಪಿಸಿದ್ದಾರೆ.

ಹಿರಿಯರನ್ನು ಗುರಿಯಾಗಿಸಿ 671 ಪ್ರಕರಣಗಳು ದಾಖಲಾಗಿವೆ. ಅಪ್ರಾಪ್ತರ ಅಪರಾಧ ಪ್ರಕರಣಗಳಲ್ಲಿ ಭಾರೀ ಏರಿಕೆಯಾಗಿದೆ. 2022ರಲ್ಲಿ 200 ಇದ್ದ ಪ್ರಕರಣಗಳು 2023ರಲ್ಲಿ 427ಕ್ಕೆ ಏರಿಕೆಯಾಗಿದೆ. 2024ರಲ್ಲಿ ಕೂಡ 386 ಪ್ರಕರಣಗಳು ದಾಖಲಾಗಿವೆ. ಇದೇನಾ ಸಾಧನಾ ಸಮಾವೇಶದ ಸಾಧನೆ ಇದೇನಾ ನಿಮ ಬ್ರ್ಯಾಂಡ್ ಬೆಂಗಳೂರು ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ.

# ಡಿಸಿಎಂ ಡಿಕೆಶಿಗೆ ಸಮ್ಮೇಳನದ ಗೌರವ



ಬೆಂಗಳೂರು, ಮೇ 21: ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಬೆಂಗಳೂರಿನಲ್ಲಿ ಭೇಟಿ ಮಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಶಿವಾನಂದ ತಗಡೂರು, ಬೀದರ್ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಆನಂದ್ ದೇವಪ್ಪ ಹಾಗೂ ಸಂಘದ ಪದಾಧಿಕಾರಿಗಳು ಬೀದರ್‌ನಲ್ಲಿ ನಡೆದ ರಾಜ್ಯ ಸಮ್ಮೇಳನದ ಗೌರವವನ್ನು ಸಮರ್ಪಿಸಿದರು.

ಸಮ್ಮೇಳನಕ್ಕೆ ಅನಿವಾರ್ಯ ಕಾರಣಗಳಿಂದ ಬರಲಾಗಲಿಲ್ಲ ಎಂದ ಅವರು, ಸಮ್ಮೇಳನ ಯಶಸ್ವಿಯಾಗಿ ನಡೆದಿದ್ದಕ್ಕೆ ಅಭಿನಂದನೆ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ಗಡಿ ಜಿಲ್ಲೆಗಳಲ್ಲಿ ಭಾಷೆ ಉಳಿಸುವ ನಿಟ್ಟಿನಲ್ಲಿ ಮಹತ್ವದ ಪಾತ್ರ ಹೊಂದಿರುವ ಗಡಿ ಜಿಲ್ಲೆಯ ಪತ್ರಿಕೆಗಳಿಗೆ ವಿಶೇಷ ಜಾಹಿರಾತುಗಳನ್ನು ನಿಲ್ಲಿಸಬಾರದು. ಈ ಹಿಂದಿನಂತೆಯೇ ಜಾಹಿರಾತು ಮುಂದುವರಿಸಬೇಕು ಎಂದು ಮನವಿ ಸಲ್ಲಿಸಲಾಯಿತು. ಈ ಬಗ್ಗೆ ಪರಿಶೀಲಿಸುವುದಾಗಿ ಭರವಸೆ ನೀಡಿದರು.

# ದ್ವಿತೀಯ ಪಿಯು ಪರೀಕ್ಷೆ 1 ಮತ್ತು 2ರ ಕ್ರೋಢೀಕೃತ ಫಲಿತಾಂಶ ಶೇ.92.25

### ಕಳೆದ ವರ್ಷಕ್ಕೆ ಹೋಲಿಸಿದರೆ ಶೇ. 7.06ರಷ್ಟು ಏರಿಕೆ: ಸಚಿವ ಮಧು ಬಂಗಾರಪ್ಪ

ಬೆಂಗಳೂರು, ಮೇ 21: ದ್ವಿತೀಯ ಪಿಯುಸಿ ಪರೀಕ್ಷೆ 2ರ ಫಲಿತಾಂಶವನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಪ್ರಕಟಿಸಿದೆ. ರಾಜ್ಯದ ಎರಡೂ ಪರೀಕ್ಷೆಗಳ ಒಟ್ಟು ಕ್ರೋಢೀಕೃತ ಫಲಿತಾಂಶವು ಶೇ.92.25ಕ್ಕೆ ಏರಿಕೆಯಾಗಿದೆ ಎಂದು ಶಿಕ್ಷಣ ಸಚಿವ ಎಸ್.ಮಧುಬಂಗಾರಪ್ಪ ತಿಳಿಸಿದ್ದಾರೆ.

ಫಲಿತಾಂಶ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, 2ನೇ ಪರೀಕ್ಷೆ–1ರಲ್ಲಿ ಶೇ.86.52ರಷ್ಟು ಫಲಿತಾಂಶ ಬಂದಿತ್ತು. ಕಳೆದ ವರ್ಷದ ಶೇ.85.19 ಫಲಿತಾಂಶಕ್ಕೆ ಹೋಲಿಸಿದರೆ ಇದು ಶೇ.7.06ರಷ್ಟು ಮಹತ್ವದ ಏರಿಕೆಯಾಗಿದೆ. ಇದು ಕರ್ನಾಟಕದ ಇತಿಹಾಸದಲ್ಲೇ ದೊಡ್ಡ ಸಾಧನೆಯಾಗಿದೆ ಎಂದು ಬಣ್ಣಿಸಿದ್ದಾರೆ.ಈ ವರ್ಷ ದ್ವಿತೀಯ ಪಿಯುಸಿ ಪರೀಕ್ಷೆ –1ರಲ್ಲೇ ರಾಜ್ಯವು ಸಾರ್ವಕಾಲಿಕ ದಾಖಲೆಯ ಫಲಿತಾಂಶ ಸಾಧಿಸಿದ್ದು, ಇದೀಗ ಪರೀಕ್ಷೆ 2ರ ನಂತರ ಈ ದಾಖಲೆಯನ್ನು ಮತ್ತೊಮೆ ಸುಧಾರಿಸಿ ಹೊಸ ಇತಿಹಾಸ ನಿರ್ಮಿಸಿರುವುದು ನಮಗೆ ಹೆಮೆಯ ವಿಷಯವಾಗಿದೆ ಎಂದಿದ್ದಾರೆ.

ದೇಶದಲ್ಲೇ ಈ ಎರಡು ಪರೀಕ್ಷೆಯ ವಿಧಾನವನ್ನು ಕರ್ನಾಟಕ ಸರ್ಕಾರ ಮೊದಲ ಬಾರಿಗೆ ಜಾರಿಗೆ ತಂದಿದೆ. ಇದರಿಂದ ಅಂಕಗಳನ್ನು ಹೆಚ್ಚಿಸಿಕೊಳ್ಳಲು ಬಯಸಿದ ವಿದ್ಯಾರ್ಥಿಗಳಿಗೆ ಅನುಕೂಲವಾಗಿದೆ. ಪರೀಕ್ಷೆ 2ರಲ್ಲಿ ಅಂಥ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಲಾಗಿತ್ತು. ಎರಡೂ ಪರೀಕ್ಷೆಗಳಲ್ಲಿ ಯಾವುದರಲ್ಲಿ ಗರಿಷ್ಠ ಅಂಕ ಪಡೆದಿರುತ್ತಾರೋ ಅದನ್ನು ಪರಿಗಣಿಸುವುದರಿಂದ ಕೇವಲ ಒಟ್ಟಾರೆ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳ ಸಂಖ್ಯೆಯಷ್ಟೇ ಹೆಚ್ಚುವುದಲ್ಲ. ಅವರು ಉತ್ತೀರ್ಣಗೊಂಡಿರುವ ಅಂಕಗಳಲ್ಲೂ ಹೆಚ್ಚಳವಾಗಿದೆ ಎಂದು ಅವರು ಹೇಳಿದ್ದಾರೆ.

ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗಗಳಲ್ಲೂ ಗಮನಾರ್ಹ ಸಾಧನೆ ದಾಖಲಾಗಿದೆ. ಕಲಾ ವಿಭಾಗದ ಫಲಿತಾಂಶ ಕಳೆದ ವರ್ಷದ ಶೇ.69.47ರಿಂದ ಶೇ.83.31ಕ್ಕೆ, ವಾಣಿಜ್ಯ ವಿಭಾಗದ ಫಲಿತಾಂಶ ಶೇ.87.83ರಿಂದ ಶೇ.92.84ಕ್ಕೆ ಹಾಗೂ ವಿಜ್ಞಾನ ವಿಭಾಗದ ಫಲಿತಾಂಶ ಶೇ.91.88ರಿಂದ ಶೇ.96.01ಕ್ಕೆ ಏರಿಕೆಯಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಈ ಬಾರಿ ವಿಶೇಷ ಸಾಧನೆ ಮಾಡಿದ್ದು, ಶೇ.92.77ರಷ್ಟು ಗ್ರಾಮಾಂತರ ಪ್ರದೇಶದ ಫಲಿತಾಂಶ ದಾಖಲಾಗಿದೆ. ನಗರ ಪ್ರದೇಶದ ಫಲಿತಾಂಶ ಶೇ.92.01ರಷ್ಟಾಗಿದೆ. ಕಳೆದ ವರ್ಷ ಗ್ರಾಮೀಣ ಭಾಗದ ಫಲಿತಾಂಶ ಶೇ.84.94ರಷ್ಟು ಬಂದಿತ್ತು. ಈ ಬಾರಿ ಗ್ರಾಮೀಣ ವಿದ್ಯಾರ್ಥಿಗಳ ಫಲಿತಾಂಶದಲ್ಲೂ ಸುಧಾರಣೆಯಾಗಿದೆ ಎಂದು ಸಚಿವರು ಹೇಳಿದ್ದಾರೆ.

ಸರ್ಕಾರಿ ಪದವಿಪೂರ್ವ ಕಾಲೇಜುಗಳ ಫಲಿತಾಂಶವು ಸುಧಾರಿಸಿರುವುದು ಸಂತೋಷ ತಂದಿದೆ. ಕಳೆದ ವರ್ಷ ಶೇ.73.04ರಷ್ಟಿದ್ದ ಕ್ರೋಢೀಕೃತ ಫಲಿತಾಂಶವು ಈ ಬಾರಿ ಶೇ.87.03ಕ್ಕೆ ಏರಿಕೆಯಾಗಿದ್ದು, ಸುಮಾರು ಶೇ.13.99ರಷ್ಟು ಸುಧಾರಣೆಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.ಸಮಾಜದ ಎಲ್ಲಾ ವರ್ಗಗಳ ವಿದ್ಯಾರ್ಥಿಗಳ ಫಲಿತಾಂಶದಲ್ಲೂ ಸುಧಾರಣೆ ಕಂಡುಬಂದಿದೆ. ಇಲಾಖೆಯು ಕೈಗೊಂಡ ಹಲವು ಯೋಜಿತ ಕ್ರಮಗಳಿಂದಾಗಿ ಈ ಸುಧಾರಣೆ ಸಾಧ್ಯವಾಗಿದೆ ಎಂದು ಮಧುಬಂಗಾರಪ್ಪ ತಿಳಿಸಿದ್ದಾರೆ.

# ಕೆಪಿಎಸ್ ಶಾಲೆಗಳ ಪರಿಕಲ್ಪನೆಯ ಮರುಚಿಂತನೆ ಅಗತ್ಯ: ಬರಗೂರು ರಾಮಚಂದ್ರಪ್ಪ– ಅಭಿಮತ

ಬೆಂಗಳೂರು, ಮೇ 21: ರಾಜ್ಯ ಸರ್ಕಾರ ಇದೀಗ ಆರಂಭಿಸುತ್ತಿರುವ ಕರ್ನಾಟಕ ಪಬ್ಲಿಕ್ ಸ್ಕೂಲ್ ಪರಿಕಲ್ಪನೆಯ ಪರಿಣಾಮಗಳ ಕುರಿತು ಮರುಪರಿಶೀಲನೆ ಅತ್ಯಗತ್ಯವೆಂದು ಪ್ರಗತಿಪರ ಚಿಂತಕ ನಾಡೋಜ ಬರಗೂರು ರಾಮಚಂದ್ರಪ್ಪ ಅಭಿಪ್ರಾಯಪಟ್ಟಿದ್ದಾರೆ.

ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕನ್ನಡ ಅಧ್ಯಯನ ವಿಭಾಗದ ವತಿಯಿಂದ ಸೆಂಟ್ರಲ್ ಕಾಲೇಜಿನಲ್ಲಿ ಏರ್ಪಡಿಸಲಾಗಿದ್ದ ಅನ್ನದ ಭಾಷೆಯಾಗಿ ಕನ್ನಡ" ಎಂಬ ವಿಷಯದ ಕುರಿತ ರಾಷ್ಟ್ರೀಯ ವಿಚಾರಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು.

ಈ ಹೊಸ ಯೋಜನೆಯಿಂದ ಸುತ್ತಮುತ್ತಲಿನ ಸರ್ಕಾರಿ ಶಾಲೆಗಳು ಮುಚ್ಚುವ ಗಂಭೀರ ಬಿಕ್ಕಟ್ಟು ಸೃಷ್ಟಿಯಾಗಬಹುದೆಂದು ಎಚ್ಚರಿಸಿದ ಅವರು ಈ ಬಗ್ಗೆ ಮುಖ್ಯಮಂತ್ರಿಯವರು ತಕ್ಷಣ ಗಮನ ಹರಿಸಬೇಕೆಂದು ಮನವಿ ಮಾಡಿದರು.

ಒಂದೊಮ್ಮೆ ಸರ್ಕಾರದ ಕ್ರಮದಿಂದ ಸರ್ಕಾರಿ ಪ್ರಾಥಮಿಕ ಶಾಲೆಗಳು ಮುಚ್ಚಿದರೆ ಅದು "ಹತ್ಯೆ" ಯಾಗುವುದು ಅಥವಾ ಅವುಗಳು ತಾವಾಗಿಯೇ ಮುಚ್ಚಿದರೆ "ಆತ್ಮಹತ್ಯೆ" ಯಾಗುವುದು ಎಂದು ಅವರು ಮಾರ್ಮಿಕವಾಗಿ ಬಣ್ಣಿಸಿದರು.




ಕೆಪಿಎಸ್ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಮತ್ತು ಪ್ರಾಥಮಿಕ ಶಿಕ್ಷಣ ನೀಡುವ ಅಗತ್ಯವಾದರೂ ಏನಿತ್ತೆಂದು ಪ್ರಶ್ನಿಸಿದ ಅವರು ಒಂದೇ ಸೂರಿನಡಿ ವಿಭಿನ್ನ ವಯೋಮಾನದ ವಿದ್ಯಾರ್ಥಿಗಳು ಕಲಿಯುವುದು ಸಂಕೀರ್ಣ ಸವಾಲಾಗ ಬಹುದೆಂದು ನಿರೂಪಿಸಿದರು.

ಈಗಾಗಲೇ ನಿರ್ಧರಿಸಿರುವಂತೆ ಒಂದನೇ ತರಗತಿಯಿಂದಲೇ ಇಂಗ್ಲಿಷ್ ಭಾಷೆಯನ್ನು ಸಮರ್ಪಕವಾಗಿ ಕಲಿಸುವ ಜೊತೆಗೆ ಎಲ್ಲ ಸರ್ಕಾರಿ ಶಾಲೆಗಳ ಗುಣಮಟ್ಟ ಸುಧಾರಣೆಗೆ ರಾಜ್ಯ ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡಬೇಕೆಂದು ಬರಗೂರು ರಾಮಚಂದ್ರಪ್ಪ ಒತ್ತಾಯಿಸಿದರು.

1995ರ ನಂತರ ಪ್ರಾರಂಭಿಸಲಾದ ಖಾಸಗಿ ಕನ್ನಡ ಶಾಲೆಗಳಿಗೂ ಅನುದಾನ ನೀಡುವಂತೆ ರಾಜ್ಯಸರ್ಕಾರವನ್ನು ಆಗ್ರಹಪಡಿಸಿದರು. ಸ್ಥಳೀಯರಿಗೆ ಉದ್ಯೋಗ ಆದ್ಯತೆ ನೀಡುವ ರಾಷ್ಟ್ರೀಯ ನೀತಿ ಜಾರಿಯಾಗಬೇಕೆಂದೂ ಅವರು ಇದೇ ವೇಳೆ ಪ್ರತಿಪಾದಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕುಲಪತಿ ಪ್ರೊ. ರಮೇಶ್.ಬಿ. ಮಾತನಾಡಿ ಆಧುನಿಕ ತಂತ್ರಜ್ಞಾನದ ಸ್ಪರ್ಧಾತ್ಮಕ ಯುಗದ ಅಗತ್ಯಗಳಿಗೆ ಕನ್ನಡ ಭಾಷೆಯ ಬಳಕೆಯನ್ನು ಉನ್ನತೀಕರಿಸಬೇಕಾದ ಅಗತ್ಯವಿದೆ ಎಂದು ತಿಳಿಸಿದರು.

ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಪ್ರಭಾರ ಕುಲಪತಿ ಡಾ.ಕೆ.ವೈ.ನಾರಾಯಣಸ್ವಾಮಿ, ಹಿರಿಯ ಲೇಖಕರಾದ ಡಾ. ರಾಜಪ್ಪ ದಳವಾಯಿ ಮತ್ತು ಡಾ.ಎಚ್.ಎಲ್.ಪುಷ್ಪ ವಿಶೇಷ ಉಪನ್ಯಾಸ ನೀಡಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಸಮಾರೋಪ ಸಮಾರಂಭದ ಮುಖ್ಯ ಅತಿಥಿಗಳಾಗಿ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷ ಡಾ.ಎಲ್.ಎನ್. ಮುಕುಂದರಾಜ್ ಭಾಗವಹಿಸಿದ್ದರು. ಕನ್ನಡ ವಿಭಾಗದ ಮುಖ್ಯಸ್ಥ ಡಾ.ತಾಂಡವಗೌಡ ಉಪಸ್ಥಿತರಿದ್ದರು. ಉಪನ್ಯಾಸಕ ಡಾ.ಎಸ್.ಅಖ್ತರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ.ಮಂಜು.ಸಿ.ಎನ್.ಕಾರ್ಯಕ್ರಮ ನಿರೂಪಿಸಿದರು. ಡಾ. ಚಂದ್ರಾವತಿ ಎಸ್.ಮತ್ತು ಡಾ. ನೇತ್ರಾವತಿ ಜಿ. ಮತ್ತು ಡಾ. ಚಿದಾನಂದ ಗೋಷ್ಠಿಗಳನ್ನು ನಿರ್ವಹಿಸಿದರು.


Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com


Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಅಂಗನವಾಡಿಗಳಿಗೆ 3 ಸಾವಿರ ರೂ ಮೊತ್ತದ ಕಿಟ್, ಪದವಿ, ಪಾಲಿಟೆಕ್ನಿಕ್‌ಗಳಿಗೆ ಪರಿಕರ ಖರೀದಿಗೆ ಸಂಪುಟ ಅನುಮೋದನೆ

**ಬೆಂಗಳೂರು, ಮೇ.21:** ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ 3 ಸಾವಿರ ರೂ ವೆಚ್ಚದಲ್ಲಿ ಶಾಲಾ ಪೂರ್ವ ಶಿಕ್ಷಣ ಕಿಟ್ ಗಳನ್ನು ಒದಗಿಸಲು ರಾಜ್ಯ ಸಚಿವ ಸಂಪುಟ ಸಭೆ ತೀರ್ಮಾನಿಸಿದೆ.

ಸಚಿವ ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಎಚ್.ಕೆ.ಪಾಟೀಲ್, ಒಟ್ಟು 69,922 ಅಂಗನವಾಡಿಗಳಿಗೆ 20.98 ಕೋಟಿ ರೂ ವೆಚ್ಚದಲ್ಲಿ ಕಿಟ್ ಒದಗಿಸಲಾಗುತ್ತಿದೆ ಎಂದರು. ಕರ್ನಾಟಕ ಗೃಹ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕಲ್ಯಾಣ ವಿಧೇಯಕ –2026ಕ್ಕೆ ಅನುಮೋದನೆ ನೀಡಲಾಗಿದೆ. ಏಷ್ಯಾ ಡವಲಪ್‌ಮೆಂಟ್ ಬ್ಯಾಂಕ್ ನೆರವಿನಿಂದ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿವರ್ತನೆ ಯೋಜನೆಯಡಿ ಕೇಂದ್ರ ಸರ್ಕಾರದ ಆರ್ಥಿಕ ವ್ಯವಹಾರಗಳ ಇಲಾಖೆಯಡಿ 53 ಸರ್ಕಾರಿ ಪದವಿ, 14 ಪಾಲಿಟೆಕ್ನಿಕ್ ಗಳು, 5 ಉತ್ಕೃಷ್ಟತಾ ಕೇಂದ್ರಗಳಿಗೆ 802 ಕೋಟಿ ರೂ ವೆಚ್ಚದಲ್ಲಿ ಅಗತ್ಯ ಪರಿಕರಗಳನ್ನು ಖರೀದಿಸಲು ಅನುಮತಿ ನೀಡಲಾಗಿದೆ ಎಂದರು.



ಸರ್ಕಾರಿ ಶಾಲೆಗಳಲ್ಲಿ 10 ನೇ ತರಗತಿಯಲ್ಲಿ ಗಣಿತ ಮತ್ತು ವಿಜ್ಞಾನ ವಿಷಯದಲ್ಲಿ ಹೆಚ್ಚು ಅಂಕ ಗಳಿಸಿದ ಪ್ರತಿ ಜಿಲ್ಲೆಯ 15 ವಿದ್ಯಾರ್ಥಿಗಳಿಗೆ ವಸತಿ ಸಹಿತಿ ಪಿಯುಸಿ ಶಿಕ್ಷಣದೊಂದಿಗೆ ನೀಟ್, ಜೆಇಇ, ಸಿಇಟಿ ಪರೀಕ್ಷಾ ಪೂರ್ವ ತರಬೇತಿ ನೀಡುವ 15 ಕೋಟಿ ರೂ ಮೊತ್ತದ ಪ್ರಸ್ತಾವನೆ, ರಾಜ್ಯದ 32 ಜಿಟಿಟಿಸಿ ಗಳಲ್ಲಿ 92 ಕೋಟಿ ರೂ ವೆಚ್ಚದಲ್ಲಿ ಹೊಸ ಯಂತ್ರೋಪಕರಣಗಳ ಖರೀದಿಗೆ ಸಂಪುಟ ಸಭೆ ಅನುಮೋದನೆ ನೀಡಿದೆ.

ಕಾರವಾರ ಬಂದರಿನ ತೈಲ ಸೋರಿಕೆ ತುರ್ತು ನಿರ್ವಹಣಾ ಯೋಜನೆಯಡಿ ತೈಲ ಸೋರಿಕೆ ಪ್ರಕ್ರಿಯೆ ಉಪಕರಣವನ್ನು 13 ಕೋಟಿ ರೂ ವೆಚ್ಚದಲ್ಲಿ ನಿರ್ಮಿಸುವ ಮತ್ತು ಜೋಯಿಡಾದಲ್ಲಿ 10.16 ಕೋಟಿ ರೂ ವೆಚ್ಚದಲ್ಲಿ ಪ್ರಜಾ ಸೌಧ ನಿರ್ಮಿಸುವ ಪರಿಷ್ಕೃತ ಅಂದಾಜಿಗೆ ಅನುಮತಿ ನೀಡಲಾಗಿದೆ. ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ 200 ಹಾಸಿಗೆಗಳ ಸಾಮರ್ಥ್ಯದ ಹೊಸ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡವನ್ನು 100 ಕೋಟಿ ರೂ ವೆಚ್ಚದಲ್ಲಿ ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ದೊರೆತಿದೆ.

15 ನೇ ಹಣಕಾಸು ಆಯೋಗದ ಅನುದಾನದಲ್ಲಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ನಗರ ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ನಮ್ಮ ಕ್ಲಿನಿಕ್‌ಗಳ ಪ್ರಯೋಗಾಲಯಗಳಿಗೆ 22 ಕೋಟಿ ರೂ ವೆಚ್ಚದಲ್ಲಿ ಪರಿಕರಗಳನ್ನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಯಾದಗಿರಿ ಜಿಲ್ಲೆಯ ಶಹಾಪುರ ಮತ್ತು ರಾಯಚೂರು ಜಿಲ್ಲೆಯ ದೇವದುರ್ಗದಲ್ಲಿ ತಲಾ 50 ಹಾಸಿಗೆಗಳ ಎಂ.ಸಿ.ಎಚ್ ಆಸ್ಪತ್ರೆ ನಿರ್ಮಾಣ ಕಾಮಗಾರಿಯನ್ನು 38 ಕೋಟಿ ರೂ ಅಂದಾಜು ವೆಚ್ಚದಲ್ಲಿ ಕೈಗೆತ್ತಿಕೊಳ್ಳಲು ಅನುಮೋದನೆ.

ರಾಜ್ಯದ ವಿವಿಧ ಪೊಲೀಸ್ ಠಾಣೆಗಳಲ್ಲಿ 52 ಮೊಕದ್ದಮೆಗಳನ್ನು ಹಿಂಪಡೆಯುವ, ಬೆಂಗಳೂರು, ಧಾರವಾಡ, ಬೆಳಗಾವಿ, ಬಳ್ಳಾರಿ, ಕೇಂದ್ರ ಕಾರಾಗೃಹ ಆವರಣದಲ್ಲಿ ಕಾರಾಗೃಹ ಇಲಾಖೆಗೆ ಸೇರಿದ ಜಾಗದಲ್ಲಿ ಪೆಟ್ರೋಲ್ ಪಂಪ್ ಮತ್ತು ಮಾರಾಟ ಮಳಿಗೆ ಆರಂಭಿಸಲು ತೀರ್ಮಾನಿಸಲಾಗಿದೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯ ಸಾತಗಳ್ಳಿ ಗ್ರಾಮದ ವಿವಿಧ ಸರ್ವೆನಂಬರ್ ಗಳಲ್ಲಿರುವ 17.35 ಎಕರೆ ಭೂಮಿಯನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರಿಸುವ, ನಂಜನಗೂಡಿನ ಶ್ರೀಕಂಠೇಶ್ವರ ದೇವಾಲಯದ ಸ್ನಾನಘಟ್ಟದ ಬಳಿ ಕಬಿನಿ ನದಿಗೆ ಅಡ್ಡಲಾಗಿ 15 ಕೋಟಿ ವೆಚ್ಚದಲ್ಲಿ ವಿಯರ್ ನಿರ್ಮಾಣ ಕಾಮಗಾರಿಗೆ ಅನುಮತಿ ನೀಡಲಾಗಿದೆ.

ರಾಯಚೂರು ಮತ್ತು ಮಾನ್ವಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ತುಂಗಭದ್ರಾ ಎಡದಂಡೆ ಕಾಲುವೆಯಡಿ ಬರುವ 102 ಮತ್ತು 102ಎ ಅಚ್ಚುಕಟ್ಟು ಪ್ರದೇಶದಲ್ಲಿ 8320 ಹೆಕ್ಟೇರ್ ಸಂತ್ರಸ್ತ ಅಚ್ಚುಕಟ್ಟಿಗೆ ನೀರಾವರಿ ಸೌಲಭ್ಯ ಕಲ್ಪಿಸುವ 182.70 ಕೋಟಿ ರೂ ಅಂದಾಜು ವೆಚ್ಚದ ಮಾಟಮಾರಿ ವೀರಭದ್ರೇಶ್ವರ ಏತನೀರಾವರಿ ಯೋಜನೆಗೆ ಆಡಳಿತಾತ್ಮಕ ಅನುಮತಿ ನೀಡಲಾಗಿದೆ.

# ಸ್ಥಳೀಯ ಸಂಸ್ಥೆ ಚುನಾವಣೆ ಮುಂದೂಡುವಂತೆ ಸುಪ್ರೀಂ ಕೋರ್ಟ್ ಮೊರೆ ಹೋಗಲು ರಾಜ್ಯಸರ್ಕಾರ ನಿರ್ಧಾರ

**ಡಿಸೆಂಬರ್‌ವರೆಗೆ ಕಾಲಾವಕಾಶ ಕೋರಿಕೆ ಸಾಧ್ಯತೆ, ಪ್ರಮಾಣಪತ್ರ ಸಲ್ಲಿಸುವ ಮೂಲಕ ಕೋರ್ಟ್‌ಗೆ ವಸ್ತುಸ್ಥಿತಿ ಮನವರಿಕೆ ಮಾಡಲು ಸಿದ್ಧತೆ**

**ಬೆಂಗಳೂರು, ಮೇ 21:** ಬಾಕಿ ಇರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯನ್ನು ನಡೆಸಲು ಡಿಸೆಂಬರ್ ತಿಂಗಳವರೆಗೆ ಕಾಲಾವಕಾಶ ನೀಡುವಂತೆ ಕೋರಿ ಸುಪ್ರೀಂ ಕೋರ್ಟ್ ಮೊರೆ ಹೋಗಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಚುನಾವಣಾ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸುಪ್ರೀಂ ಕೋರ್ಟ್ ಆಗಸ್ಟ್ ತಿಂಗಳವರೆಗೆ ಗಡುವು ನೀಡಿರುವ ಬೆನ್ನಲ್ಲೇ ಸ್ಥಳೀಯ ಸಂಸ್ಥೆಗಳ ಚುನಾವಣೆ ಮುಂದೂಡಲು ಸರ್ಕಾರ ಕಾರ್ಯತಂತ್ರ ರೂಪಿಸುತ್ತಿದೆ,

ವಾರ್ಡ್‌ಗಳ ಮರುವಿಂಗಡಣೆ ಹಾಗೂ ಮೀಸಲಾತಿ ನಿಗದಿಯಂತಹ ಆಡಳಿತಾತ್ಮಕ ಮತ್ತು ಕಾನೂನಾತ್ಮಕ ಪ್ರಕ್ರಿಯೆಗಳು ಇನ್ನೂ ಸಂಪೂರ್ಣವಾಗಿ ಮುಕ್ತಾಯಗೊಳ್ಳದ ಹಿನ್ನೆಲೆಯಲ್ಲಿ, ಚುನಾವಣಾ ಪ್ರಕ್ರಿಯೆಯನ್ನು ಸುಸೂತ್ರವಾಗಿ ನಡೆಸಲು ಹೆಚ್ಚಿನ ಸಮಯದ ಅಗತ್ಯವಿದೆ. ಈ ಕಾರಣಕ್ಕಾಗಿ ಡಿಸೆಂಬರ್ ಅಂತ್ಯದವರೆಗೂ ಗಡುವು ವಿಸ್ತರಿಸುವಂತೆ ಸರ್ವೋಚ್ಚ ನ್ಯಾಯಾಲಯಕ್ಕೆ ಮನವಿ ಸಲ್ಲಿಸಲು ಸರ್ಕಾರ ಸಿದ್ಧತೆ ನಡೆಸಿದೆ ಎಂದು ತಿಳಿದು ಬಂದಿದೆ.

ಚುನಾವಣಾ ಆಯೋಗವು ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಿದ್ಧತೆ ನಡೆಸುತ್ತಿದ್ದರೂ, ಮೀಸಲಾತಿ ಮತ್ತು ಕ್ಷೇತ್ರ ವಿಂಗಡಣೆಗೆ ಸಂಬಂಧಿಸಿದಂತೆ ಎದುರಾಗಿರುವ ತಾಂತ್ರಿಕ ಅಡೆತಡೆಗಳನ್ನು ನಿವಾರಿಸಲು ಸರ್ಕಾರಕ್ಕೆ ಕಾಲಾವಕಾಶದ ಅನಿವಾರ್ಯತೆ ಇದೆ. ಈ ಹಿನ್ನೆಲೆಯಲ್ಲಿ ಸುಪ್ರೀಂ ಕೋರ್ಟ್‌ಗೆ ಪ್ರಮಾಣಪತ್ರ ಸಲ್ಲಿಸುವ ಮೂಲಕ ವಸ್ತುಸ್ಥಿತಿಯನ್ನು ಮನವರಿಕೆ ಮಾಡಲು ರಾಜ್ಯ ಸರ್ಕಾರ ಮುಂದಾಗಿದೆ.

ಒಂದು ವೇಳೆ ಸರ್ವೋಚ್ಚ ನ್ಯಾಯಾಲಯವು ರಾಜ್ಯ ಸರ್ಕಾರದ ಈ ಮನವಿಯನ್ನು ಪುರಸ್ಕರಿಸಿದರೆ, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಸೇರಿದಂತೆ ಪ್ರಮುಖ ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಈ ವರ್ಷದ ಅಂತ್ಯದವರೆಗೆ ನಡೆಯುವುದು ಬಹುತೇಕ ಅನುಮಾನವಾಗಿದೆ. ಡಿಸೆಂಬರ್ ವರೆಗೆ ಕಾಲಾವಕಾಶ ಸಿಕ್ಕರೆ, ಮುಂದಿನ ವರ್ಷದ ಆರಂಭದಲ್ಲಿ ಚುನಾವಣೆ ಎದುರಾಗುವ ಸಾಧ್ಯತೆಗಳಿವೆ.

ರಾಜ್ಯದ ಹಲವಾರು ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಅವಧಿ ಮುಕ್ತಾಯಗೊಂಡಿದ್ದರೂ, ವಿವಿಧ ತಾಂತ್ರಿಕ ಹಾಗೂ ಕಾನೂನಾತ್ಮಕ ಕಾರಣಗಳಿಂದ ಚುನಾವಣೆಗಳು ಮುಂದೂಡಲ್ಪಟ್ಟಿವೆ. ಇದರ ಪರಿಣಾಮವಾಗಿ ಅನೇಕ ಸ್ಥಳೀಯ ಸಂಸ್ಥೆಗಳಲ್ಲಿ ಆಯ್ಕೆಯಾದ ಪ್ರತಿನಿಧಿಗಳ ಬದಲು ಆಡಳಿತಾಧಿಕಾರಿಗಳ ಮೂಲಕ ಆಡಳಿತ ನಡೆಯುತ್ತಿದೆ. ಈ ಹಿನ್ನೆಲೆ ರಾಜ್ಯ ಸರ್ಕಾರದ ನಡೆ ರಾಜಕೀಯ ಹಾಗೂ ಆಡಳಿತಾತ್ಮಕ ವಲಯದಲ್ಲಿ ಸಾಕಷ್ಟು ಚರ್ಚೆಗೆ ಕಾರಣವಾಗಿದೆ.

ಸರ್ಕಾರದ ವಾದದ ಪ್ರಕಾರ, ಹೊಸ ಜನಸಂಖ್ಯಾ ಅಂಕಿಅಂಶಗಳು, ಕ್ಷೇತ್ರಗಳ ಜನಸಂಖ್ಯಾ ಪ್ರಮಾಣ, ಸಾಮಾಜಿಕ ನ್ಯಾಯದ ಅಂಶಗಳು ಹಾಗೂ ಮೀಸಲಾತಿ ನಿಯಮಾವಳಿಯನ್ನು ಪರಿಗಣಿಸಿ ವಾರ್ಡ್‌ಗಳ ಮರುವಿಂಗಡಣೆ ಕಾರ್ಯ ಕೈಗೊಳ್ಳಲಾಗುತ್ತಿದೆ. ಈ ಪ್ರಕ್ರಿಯೆ ಕೇವಲ ಆಡಳಿತಾತ್ಮಕ ವಿಷಯವಲ್ಲದೆ ಕಾನೂನಾತ್ಮಕವಾಗಿ ಸೂಕ್ಷ್ಮವಾಗಿರುವುದರಿಂದ ಯಾವುದೇ ದೋಷಗಳು ಉಂಟಾದರೆ ಮುಂದಿನ ದಿನಗಳಲ್ಲಿ ನ್ಯಾಯಾಂಗ ಸವಾಲು ಎದುರಾಗುವ ಸಾಧ್ಯತೆ ಇದೆ ಎಂದು ಸರ್ಕಾರ ವಾದಿಸುತ್ತಿದೆ.

ವಿಶೇಷವಾಗಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳು ಮತ್ತು ಮಹಿಳೆಯರ ಮೀಸಲಾತಿ ನಿಗದಿಯಲ್ಲಿ ಸಂವಿಧಾನಾತ್ಮಕ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕಾಗುತ್ತದೆ. ಮೀಸಲಾತಿ ಹಂಚಿಕೆಯಲ್ಲಿ ಅಸಮತೋಲನ ಅಥವಾ ನಿಯಮ ಉಲ್ಲಂಘನೆ ನಡೆದಿದೆ ಎಂಬ ಆಕ್ಷೇಪಣೆಗಳು ಬಂದರೆ ಚುನಾವಣಾ ಪ್ರಕ್ರಿಯೆ ಒಳಗಾಗಬಹುದು. ಈ ಹಿನ್ನೆಲೆಯಲ್ಲಿ ಎಲ್ಲಾ ಪ್ರಕ್ರಿಯೆಗಳನ್ನು ಕಾನೂನುಬದ್ಧವಾಗಿ ಮತ್ತು ಪಾರದರ್ಶಕವಾಗಿ ಪೂರ್ಣಗೊಳಿಸಲು ಹೆಚ್ಚಿನ ಸಮಯ ಅಗತ್ಯವಿದೆ ಎಂದು ಸರ್ಕಾರ ತನ್ನ ಮನವಿಯಲ್ಲಿ ಉಲ್ಲೇಖಿಸಲು ಸಿದ್ಧತೆ ನಡೆಸಿದೆ.

ಇನ್ನೊಂದೆಡೆ, ವಿರೋಧ ಪಕ್ಷಗಳು ಸರ್ಕಾರದ ಈ ನಿರ್ಧಾರವನ್ನು ತೀವ್ರವಾಗಿ ಟೀಕಿಸುತ್ತಿವೆ. ಚುನಾವಣೆಗಳನ್ನು ಉದ್ದೇಶಪೂರ್ವಕವಾಗಿ ವಿಳಂಬ ಮಾಡಲಾಗುತ್ತಿದೆ ಎಂದು ಆರೋಪಿಸಿರುವ ವಿರೋಧ ಪಕ್ಷಗಳು, ಸ್ಥಳೀಯ ಸಂಸ್ಥೆಗಳಲ್ಲಿ ಜನಪ್ರತಿನಿಧಿಗಳ ಕೊರತೆಯಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗುತ್ತಿವೆ ಎಂದು ಅಭಿಪ್ರಾಯಪಟ್ಟಿವೆ. ಜನರ ನೇರ ಪ್ರಾತಿನಿಧಿತ್ವ ಇಲ್ಲದ ಕಾರಣ ಸ್ಥಳೀಯ ಸಮಸ್ಯೆಗಳ ಪರಿಹಾರದಲ್ಲಿ ವಿಳಂಬವಾಗುತ್ತಿದೆ ಎಂಬ ಟೀಕೆಗಳು ಕೇಳಿಬರುತ್ತಿವೆ.

ರಾಜಕೀಯ ವಲಯದಲ್ಲಿ ಮತ್ತೊಂದು ಚರ್ಚೆಯ ವಿಷಯವೆಂದರೆ, ಮುಂದಿನ ವಿಧಾನಸಭೆ ಹಾಗೂ ಇತರ ರಾಜಕೀಯ ಬೆಳವಣಿಗೆಗಳನ್ನು ಗಮನದಲ್ಲಿಟ್ಟುಕೊಂಡೇ ಸರ್ಕಾರ ಚುನಾವಣಾ ವೇಳಾಪಟ್ಟಿಯನ್ನು ರೂಪಿಸುತ್ತಿದೆಯೇ ಎಂಬ ಪ್ರಶ್ನೆ ಎದ್ದಿದೆ.

ಕಾನೂನುತಜ್ಞರ ಅಭಿಪ್ರಾಯದಂತೆ, ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಸಮಯಕ್ಕೆ ಸರಿಯಾಗಿ ನಡೆಸುವುದು ಸಂವಿಧಾನಬದ್ಧ ಜವಾಬ್ದಾರಿಯಾಗಿದೆ. ಆದರೆ, ನ್ಯಾಯಸಮ್ಮತ ಹಾಗೂ ದೋಷರಹಿತ ಚುನಾವಣೆಯನ್ನು ನಡೆಸಲು ಅಗತ್ಯವಿರುವ ಪ್ರಕ್ರಿಯೆಗಳು ಪೂರ್ಣಗೊಳ್ಳದಿದ್ದರೆ ನ್ಯಾಯಾಲಯಗಳು ಕೆಲವು ಸಂದರ್ಭಗಳಲ್ಲಿ ಕಾಲಾವಕಾಶ ನೀಡಿರುವ ಉದಾಹರಣೆಗಳೂ ಇವೆ. ಹೀಗಾಗಿ ರಾಜ್ಯ ಸರ್ಕಾರ ಸಲ್ಲಿಸಲಿರುವ ಮನವಿಗೆ ಸುಪ್ರೀಂ ಕೋರ್ಟ್ ಯಾವ ರೀತಿಯ ಪ್ರತಿಕ್ರಿಯೆ ನೀಡುತ್ತದೆ ಎಂಬುದು ಕುತೂಹಲಕ್ಕೆ ಕಾರಣವಾಗಿದೆ.

ಸ್ಥಳೀಯ ಸಂಸ್ಥೆಗಳ ಚುನಾವಣೆಗಳ ವಿಳಂಬವು ಆಡಳಿತ, ರಾಜಕೀಯ ಹಾಗೂ ಪ್ರಜಾಪ್ರಭುತ್ವದ ದೃಷ್ಟಿಯಿಂದ ಮಹತ್ವದ ಚರ್ಚೆಯ ವಿಷಯವಾಗಿ ಪರಿಣಮಿಸಿದೆ. ಒಂದು ಕಡೆ ಕಾನೂನುಬದ್ಧ ಮತ್ತು ಸಮಗ್ರ ಸಿದ್ಧತೆ ಅಗತ್ಯವಿದೆ ಎಂಬ ಸರ್ಕಾರದ ವಾದವಿದ್ದರೆ, ಮತ್ತೊಂದೆಡೆ ಜನಪ್ರತಿನಿಧಿಗಳಿಲ್ಲದ ಆಡಳಿತ ಪ್ರಜಾಪ್ರಭುತ್ವದ ಆತ್ಮಕ್ಕೆ ವಿರುದ್ಧವಾಗಿದೆ ಎಂಬ ವಿರೋಧ ಪಕ್ಷಗಳ ಟೀಕೆ ಕೂಡ ಜೋರಾಗಿದೆ.

# ಸಿಎಂ ಹುದ್ದೆಗೆ ಇಬ್ಬರಲ್ಲ ಮೂವರ ನಡುವೆ ಪೈಪೋಟಿ

**ಸಿದ್ದರಾಮಯ್ಯ, ಡಿಕೆಶಿ ನಡುವೆ ಜಗಳ ಹಚ್ಚಿ ಅಧಿಕಾರಕ್ಕೇರಲು ಖರ್ಗೆ ಯತ್ನ**

**ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಧಾಮೋಹನ್ ದಾಸ್ ಅಗರವಾಲ್ ಆರೋಪ**

**ಬೆಂಗಳೂರು, ಮೇ 21:** ಮಂಗ ಮತ್ತು ಎರಡು ಬೆಕ್ಕಿನ ಕತೆಯಂತೆ ದೆಹಲಿಯಲ್ಲಿರುವ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ನಡುವೆ ಜಗಳ ಹಚ್ಚುತ್ತಿದ್ದಾರೆ ಎಂದು ಬಿಜೆಪಿ ಕರ್ನಾಟಕ ರಾಜ್ಯ ಉಸ್ತುವಾರಿ ಹಾಗೂ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಧಾಮೋಹನ್ ದಾಸ್ ಅಗರವಾಲ್ ಆರೋಪಿಸಿದ್ದಾರೆ.

ಮಲ್ಲೇಶ್ವರಂನ ಬಿಜೆಪಿ ರಾಜ್ಯ ಕಾರ್ಯಾಲಯ 'ಜಗನ್ನಾಥ ಭವನ'ದಲ್ಲಿ ಗುರುವಾರ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರದ ಆಂತರಿಕ ಬಿಕ್ಕಟ್ಟು ಮತ್ತು ಆಡಳಿತ ವೈಫಲ್ಯವನ್ನು ಕಟುವಾಗಿ ಟೀಕಿಸಿದರು. ಇಲ್ಲಿ ಸಿದ್ದರಾಮಯ್ಯ ಮತ್ತು ಶಿವಕುಮಾರ್ ಪರಸ್ಪರ ಜಗಳ ಮಾಡಿಕೊಂಡು ಇಬ್ಬರೂ ಮುಳುಗಲಿ, ಆ ಮೂಲಕ ತಮಗೆ ಮುಖ್ಯಮಂತ್ರಿ ಆಗಲು ಅವಕಾಶ ಸಿಗಲಿ ಎಂದು ಖರ್ಗೆಯವರು ಕಾಯುತ್ತಿದ್ದಾರೆ. ಸದ್ಯದ ಪರಿಸ್ಥಿತಿಯಲ್ಲಿ ಕರ್ನಾಟಕದಲ್ಲಿ ಮುಖ್ಯಮಂತ್ರಿ ಹುದ್ದೆಗೆ ಕೇವಲ ಇಬ್ಬರು ಪೈಪೋಟಿ ನಡೆಸುತ್ತಿಲ್ಲ, ಬದಲಿಗೆ ಮೂರು ಮುಖಗಳು ಇಲ್ಲಿವೆ ಎಂದು ಅಗರವಾಲ್ ಹೊಸ ರಾಜಕೀಯ ವಿಶ್ಲೇಷಣೆ ನೀಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಪರಿಸ್ಥಿತಿ ಸಂಪೂರ್ಣ ಹದಗೆಟ್ಟಿದೆ. ಆಡಳಿತ ಪಕ್ಷದ ಹಲವಾರು ಶಾಸಕರು ಈಗಾಗಲೇ ನಮ್ಮ ಸಂಪರ್ಕದಲ್ಲಿದ್ದಾರೆ. ಒಂದು ವೇಳೆ ನಾಳೆಯೇ ರಾಜ್ಯದಲ್ಲಿ ವಿಧಾನಸಭಾ ಚುನಾವಣೆ ನಡೆದರೂ ಸಹ, ಜನರೇ ಕಾಂಗ್ರೆಸ್ ಅನ್ನು ಸೋಲಿಸಿ ಮತ್ತೆ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರಲು ಸ್ಪಷ್ಟ ಅವಕಾಶ ಮಾಡಿಕೊಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

**ಆರೇಳು ತಿಂಗಳಿಂದ ರಾಜ್ಯದಲ್ಲಿ ಸರ್ಕಾರವೇ ಇಲ್ಲ!**

ರಾಜ್ಯದ ಆರ್ಥಿಕ ಪರಿಸ್ಥಿತಿಯ ಕುರಿತು ಕಳವಳ ವ್ಯಕ್ತಪಡಿಸಿದ ರಾಜ್ಯ ಉಸ್ತುವಾರಿಗಳು, "ಹೊರಗಡೆಯಿಂದ ಮಿತಿಮೀರಿ ಸಾಲ ಪಡೆದಿರುವುದರಿಂದ ಕರ್ನಾಟಕವು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದೆ. ಕಳೆದ ಆರೇಳು ತಿಂಗಳುಗಳಿಂದ ರಾಜ್ಯದಲ್ಲಿ ಸರ್ಕಾರವೇ ಇಲ್ಲದಂತಾಗಿದೆ. ಜನಸಾಮಾನ್ಯರ ಸಮಸ್ಯೆಗಳನ್ನು ಆಲಿಸುವ ಬದಲು ಇವರು ಕೇವಲ ಪರಸ್ಪರ ಜಗಳ ಮಾಡಿಕೊಳ್ಳುವುದರಲ್ಲೇ ನಿರತರಾಗಿದ್ದಾರೆ. ಕಾಂಗ್ರೆಸ್ ಸರ್ಕಾರವು ತುಷ್ಟೀಕರಣ ರಾಜಕಾರಣದ ಆಧಾರದ ಮೇಲೆ ನಡೆಯುತ್ತಿದ್ದು, ಗ್ಯಾರಂಟಿಗಳನ್ನು ಸರಿಯಾಗಿ ನೀಡದೆ ಜನರಿಗೆ ಮೋಸ ಮಾಡಿದೆ," ಎಂದು ರಾಧಾಮೋಹನ್ ದಾಸ್ ಅಗರವಾಲ್ ಆಕ್ಷೇಪಿಸಿದರು.



**ಪಕ್ಷದ ಸಂಘಟನೆ ಮತ್ತು ಅಧ್ಯಕ್ಷರ ಬದಲಾವಣೆ ಕುರಿತು ಸ್ಪಷ್ಟನೆ**

ಬಿಜೆಪಿ ರಾಜ್ಯ ಅಧ್ಯಕ್ಷರ ಬದಲಾವಣೆ ಮತ್ತು ಮೌಲ್ಯಮಾಪನ ಕುರಿತು ಮಾಧ್ಯಮಗಳು ಕೇಳಿದ ಪ್ರಶ್ನೆಗಳಿಗೆ ರಾಧಾಮೋಹನ್ ದಾಸ್ ಅವರು ನೇರವಾಗಿ ಉತ್ತರಿಸಿದರು.

**ಅಧ್ಯಕ್ಷತೆ ಎಂಬುದು ಉದ್ಯೋಗವಲ್ಲ:** 3ನೇ ತಾರೀಖಿಗೆ ಫಾರ್ಮ್ ಭರ್ತಿ ಮಾಡಬೇಕು, 5ರಂದು ಸಂದರ್ಶನ ನಡೆಸಿ, 7ರಂದು ಹೆಸರು ಘೋಷಿಸಿ ಇಂತಿಷ್ಟು ಸಂಬಳ ನೀಡಲು ಅಧ್ಯಕ್ಷ ಹುದ್ದೆ ಎಂಬುದು ಯಾವುದೇ ಕಂಪನಿಯ ಉದ್ಯೋಗವಲ್ಲ. ಈಗ ನಮ್ಮಲ್ಲಿ ಶಕ್ತಿಶಾಲಿ ಅಧ್ಯಕ್ಷರಿದ್ದಾರೆ (ವಿಜಯೇಂದ್ರ). ನೇತೃತ್ವದಲ್ಲೇ ನಾವು ಲೋಕಸಭಾ ಚುನಾವಣೆ ಎದುರಿಸಿದ್ದೇವೆ. ಮುಂದಿನ ವಿಧಾನಸಭಾ ಚುನಾವಣೆಯನ್ನೂ ಯಾರು ಅಧ್ಯಕ್ಷರಿರುತ್ತಾರೋ ಅವರ ನೇತೃತ್ವದಲ್ಲೇ ಎದುರಿಸಲಿದ್ದೇವೆ. ನಮ್ಮ ಪಕ್ಷದಲ್ಲಿ ನಾಯಕರ ಮೌಲ್ಯಮಾಪನ ನಿರಂತರವಾಗಿ ನಡೆಯುತ್ತಿರುತ್ತದೆ. ಯಾವ ನಾಯಕ ಏನು ಮಾಡುತ್ತಿದ್ದಾರೆ ಎಂದು ತಿಳಿಯಲು ನಾನು ಇಲ್ಲಿಗೇ ಬರಬೇಕಾಗಿಲ್ಲ. ನಾನು ಕೇವಲ ಅಧ್ಯಕ್ಷರ ಕಾರ್ಯಕರ್ತನಲ್ಲ, ಬದಲಿಗೆ ಬಿಜೆಪಿಯ ಶಿಸ್ತಿನ ಕಾರ್ಯಕರ್ತ. ಪಕ್ಷದ ಒಳಹೊರಗು ನನಗೇ ಚೆನ್ನಾಗಿ ತಿಳಿದಿದೆ. ಹೊಸ ಅಧ್ಯಕ್ಷರು ಬಂದ ತಕ್ಷಣ ಕೋರ್ ಕಮಿಟಿ ಬದಲಾಗುವುದಿಲ್ಲ. ಕೋರ್ ಕಮಿಟಿ ನಿರ್ಧಾರವನ್ನು ರಾಷ್ಟ್ರೀಯ ಘಟಕ ಕೈಗೊಳ್ಳುತ್ತದೆ. ಹೊಸ ತಂಡ ರಚನೆಯಾಗುವಾಗ ಸಹಜವಾಗಿ ಒಂದಿಬ್ಬರು ಹಳೆಯ ಮುಖಗಳು ಬದಲಾಗಿ ಹೊಸಬರಿಗೆ ಅವಕಾಶ ಸಿಗಬಹುದು ಅಷ್ಟೆ. ಪಕ್ಷದ ರಾಷ್ಟ್ರೀಯ ಸಹ–ಸಂಘಟನಾ ಕಾರ್ಯದರ್ಶಿಯವರು ಈಗಾಗಲೇ ರಾಜ್ಯಕ್ಕೆ ಆಗಮಿಸಿದ್ದು, ಮುಂದಿನ 2028ರ ವಿಧಾನಸಭಾ ಚುನಾವಣೆಗೆ ಪಕ್ಷವನ್ನು ಸಜ್ಜುಗೊಳಿಸುವ ಪ್ರಕ್ರಿಯೆ ಆರಂಭವಾಗಿದೆ. ಪ್ರಸ್ತುತ ಇರುವ ವಿಫಲ ಮತ್ತು ಭ್ರಷ್ಟ ಸರ್ಕಾರದ ವಿರುದ್ಧ ಹೋರಾಟ ರೂಪಿಸಲು ಬಿಜೆಪಿ ಸಜ್ಜಾಗುತ್ತಿದೆ ಎಂದು ರಾಧಾಮೋಹನ್‌ದಾಸ್ ಅಗರವಾಲ್ ಪ್ರಕಟಿಸಿದರು.

# 2027ರ ಮಾರ್ಚ್ 31ರವರೆಗೆ ಜನಗಣತಿ ಸಿಬ್ಬಂದಿ ವರ್ಗಾವಣೆ ಇಲ್ಲ

**ಬೆಂಗಳೂರು, ಮೇ 21:** ಮುಂಬರುವ 2027ರ ರಾಷ್ಟ್ರೀಯ ಜನಗಣತಿ ಪ್ರಕ್ರಿಯೆಯು ಯಾವುದೇ ಅಡೆತಡೆಯಿಲ್ಲದೆ ಸುಗಮವಾಗಿ ನಡೆಯಲು ಅನುಕೂಲವಾಗುವಂತೆ ಜನಗಣತಿ ಕಾರ್ಯಕ್ಕೆ ನೇಮಕಗೊಂಡಿರುವ ಯಾವುದೇ ಅಧಿಕಾರಿ ಅಥವಾ ಸಿಬ್ಬಂದಿಯನ್ನು 2027ರ ಮಾರ್ಚ್ 31ರವರೆಗೆ ವರ್ಗಾವಣೆ ಮಾಡಬಾರದು ಎಂದು ಕರ್ನಾಟಕ ಸರ್ಕಾರ ಕಟ್ಟುನಿಟ್ಟಿನ ಆದೇಶ ಹೊರಡಿಸಿದೆ. ಕಂದಾಯ ಇಲಾಖೆಯ (ವಿಪತ್ತು ನಿರ್ವಹಣೆ) ಸರ್ಕಾರದ ಅಧೀನ ಕಾರ್ಯದರ್ಶಿ ಜಿ.ಕೆ. ನರಸಿಂಹಮೂರ್ತಿ ಅವರು ಈ ಕುರಿತು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು, ಮಹಾನಗರ ಪಾಲಿಕೆ ಆಯುಕ್ತರು ಹಾಗೂ ಸಂಬಂಧಪಟ್ಟ ಹಿರಿಯ ಅಧಿಕಾರಿಗಳಿಗೆ ಅಧಿಕೃತ ಸುತ್ತೋಲೆ ರವಾನಿಸಿದ್ದಾರೆ.

ಕೇಂದ್ರ ಗೃಹ ಸಚಿವಾಲಯದ ಸೂಚನೆಯನ್ವಯ, 1948ರ ಜನಗಣತಿ ಕಾಯ್ದೆ ಹಾಗೂ 1990ರ ಜನಗಣತಿ ನಿಯಮಗಳ ಅಡಿಯಲ್ಲಿ 2027ರ ಜನಗಣತಿಯನ್ನು ಎರಡು ಪ್ರಮುಖ ಹಂತಗಳಲ್ಲಿ ನಡೆಸಲು ಉದ್ದೇಶಿಸಲಾಗಿದೆ. ಮೊದಲ ಹಂತ (ಮನೆಗಳ ಪಟ್ಟಿ ಮತ್ತು ಮನೆ ಗಣತಿ – ಈಗಾಗಲೇ ಏಪ್ರಿಲ್ 1, 2026 ರಿಂದ ಏಪ್ರಿಲ್ 15, 2026 ರವರೆಗೆ ಸ್ವಯಂ ನೋಂದಣಿ ಪ್ರಕ್ರಿಯೆ ಹಾಗೂ ಏಪ್ರಿಲ್ 16, 2026 ರಿಂದ ಮೇ 15, 2026 ರವರೆಗೆ ಗಣತಿದಾರರಿಂದ ಮನೆಗಳ ಪಟ್ಟಿ ಮಾಡುವ ಕಾರ್ಯಕ್ಕೆ ಅಧಿಸೂಚನೆ ಹೊರಡಿಸಿ ಪ್ರಕ್ರಿಯೆ ಕೈಗೊಳ್ಳಲಾಗಿದೆ.2ನೇ ಹಂತ (ಜನಸಂಖ್ಯೆ ಗಣತಿ – ಜನಸಂಖ್ಯೆ ಗಣತಿಯ ಅಂತಿಮ ಪ್ರಕ್ರಿಯೆಯು 2027ರ ಫೆಬ್ರವರಿ ತಿಂಗಳಿನಲ್ಲಿ ನಡೆಯಲಿದೆ.

ರಾಜ್ಯ, ಜಿಲ್ಲೆ, ತಾಲೂಕು ಮತ್ತು ಬ್ಲಾಕ್ ಮಟ್ಟದಲ್ಲಿ ಜನಗಣತಿ ಕಾರ್ಯಗಳಿಗಾಗಿ ಈಗಾಗಲೇ ಅಧಿಕಾರಿಗಳನ್ನು ನೇಮಿಸಿ, ಅವರಿಗೆ ಸೂಕ್ತ ತರಬೇತಿಯನ್ನು ಕೂಡ ನೀಡಲಾಗಿದೆ. ಈ ಅಧಿಕಾರಿಗಳು ಶಾಸನಬದ್ಧ ಕರ್ತವ್ಯಗಳನ್ನು ನಿರ್ವಹಿಸಬೇಕಿರುವುದರಿಂದ, ಮಧ್ಯದಲ್ಲಿ ಇವರನ್ನು ವರ್ಗಾವಣೆ ಮಾಡುವುದರಿಂದ ಜನಗಣತಿ ಕಾರ್ಯಕ್ಕೆ ಹಿನ್ನಡೆಯಾಗಬಹುದು. ಈ ಹಿನ್ನೆಲೆಯಲ್ಲಿ 2027ರ ಮಾರ್ಚ್ 31ರವರೆಗೆ ಇವರ ವರ್ಗಾವಣೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.ಜನಗಣತಿ ಕಾರ್ಯಕ್ಕಾಗಿ ತರಬೇತಿ ಪಡೆದು ನಿಯೋಜನೆಗೊಂಡಿರುವ ಅಧಿಕಾರಿಗಳ ಇಲಾಖಾವಾರು ಮಾಹಿತಿಯನ್ನು ಸರ್ಕಾರ ಒದಗಿಸಿರುವ Google Spread Sheet ಲಿಂಕ್‌ನಲ್ಲಿ 3 ದಿನಗಳ ಒಳಗಾಗಿ ಕಡ್ಡಾಯವಾಗಿ ಅಪ್ಲೋಡ್ ಮಾಡುವಂತೆ ಎಲ್ಲಾ ಇಲಾಖಾ ಮುಖ್ಯಸ್ಥರಿಗೆ ಸರ್ಕಾರ ಕಟ್ಟುನಿಟ್ಟಿನ ನಿರ್ದೇಶನ ನೀಡಿದೆ.



ಬೆಂಗಳೂರಿನ ವಿಧಾನಸೌಧದಲ್ಲಿ ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಇತರರು ಭಯೋತ್ಪಾದನಾ ವಿರೋಧಿ ದಿನದ ಪ್ರತಿಜ್ಞೆ ಸ್ವೀಕರಿಸಿದರು.

# ಔರಾದ್ ಶಾಸಕ ಪ್ರಭು ಚವ್ಹಾಣ ವಿರುದ್ಧ ಸಲ್ಲಿಸಿದ್ದ ಅರ್ಜಿ ಸುಪ್ರೀಂನಲ್ಲಿ ವಜಾ

**ಬೀದರ್, ಮೇ. 21:** ಮೂಲ ನಿವಾಸ ಸ್ಥಳ ಹಾಗೂ ಜಾತಿ ಮೂಲ ಪ್ರಶ್ನಿಸಿ ಸಲ್ಲಿಸಿದ್ದ ಜಿಲ್ಲೆಯ ಔರಾದ್ ಶಾಸಕ ಪ್ರಭು ಚವ್ಹಾಣ ವಿರುದ್ಧದ ಸಲ್ಲಿಸಲಫಿದ್ದ ಅರ್ಜಿ ಮತ್ತೊಮ್ಮೆ ಸುಪ್ರೀಂ ಕೋರ್ಟ್‌ನಲ್ಲಿ ವಜಾಗೊಂಡಿದೆ.



ಶಾಸಕ ಪ್ರಭು ಚವ್ಹಾಣ ಮಹಾರಾಷ್ಟ್ರ ಮೂಲದವರಿದ್ದಾರೆ. ಮಹಾರಾಷ್ಟ್ರದಲ್ಲಿ ಲಂಬಾಣಿ ಸಮಾಜವು ವಿಮುಕ್ತ ಜಾತಿ (ವಿಜೆ–ಎ) ಮೀಸಲಾತಿ ಹೊಂದಿದೆ. ಆದರೆ ಇವರು ಬೀದರ್ ಜಿಲ್ಲೆಯ ಬೋಂತಿ ತಾಂಡಾ ಮೂಲದವರೆಂದು ರಹವಾಸಿ ಪತ್ರ ಪಡೆದು, ಲಂಬಾಣಿ ಸಮಾಜ ಇಲ್ಲಿ ಎಸ್‌ಸಿ ಮೀಸಲು ಸೌಲಭ್ಯದ ಮೇಲೆ 2008ರಿಂದ ಔರಾದ ಕ್ಷೇತ್ರದ ಶಾಸಕರಾಗಿ ಆಯ್ಕೆಯಾಗುತ್ತಿದ್ದಾರೆ. ಮೀಸಲು ಸೌಲಭ್ಯ ದುರ್ಬಳಕೆ ಮಾಡಿಕೊಂಡಿರುವ ಚವ್ಹಾಣ ಶಾಸಕತ್ವ ಅನರ್ಹಗೊಳಿಸುವಂತೆ ಕೋರಿ ಕಮಲನಗರದ ಹಾಲಹಳ್ಳಿಯ ನರಸಿಂಗ ತುಕಾರಾಮ ಅವರು ಸಲ್ಲಿಸಿದ್ದ ರಿಟ್ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ.

ಚವ್ಹಾಣ ಅವರ ಜಾತಿ ಮೂಲ ಮತ್ತು ಮೂಲ ನಿವಾಸದ ಬಗ್ಗೆಯೇ ಕ್ಯಾತೆ ತೆಗೆದು ಈ ಹಿಂದೆ ವಿಧಾನಸಭೆ ಚುನಾವಣೆಯಲ್ಲಿ ಪರಾಜಿತ ಅಭ್ಯರ್ಥಿ ವಿಜಯಕುಮಾರ ಕೌಡ್ಯಾಳ್ ಮತ್ತು ಬೀದರನ ರವೀಂದ್ರ ಸ್ವಾಮಿ ಸಲ್ಲಿಸಿದ್ದ ಅರ್ಜಿಯನ್ನು ಈ ಹಿಂದೆಯೇ ಒಂದು ಬಾರಿ ಸುಪ್ರೀಂ ಕೋರ್ಟ್ ವಜಾಗೊಳಿಸಿತ್ತು. ಮತ್ತೆ ಮತ್ತೆ ಇದೇ ವಿಷಯ ಪ್ರಶ್ನಿಸಿ ನರಸಿಂಗ ಅವರು ಸಲ್ಲಿಸಿದ್ದ ರಿಟ್ ಅರ್ಜಿಯನ್ನು ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳಾದ ದೀಪಂಕರ್ ದತ್ತಾ, ಸತೀಶಚಂದ್ರ ಶರ್ಮಾ ಅವರುಳ್ಳ ಪೀಠ ವಜಾಗೊಳಿಸಿದೆ. ಕಲಬುರಗಿ ಹೈಕೋರ್ಟ್ ಪೀಠ ಶಾಸಕ ಚವ್ಹಾಣ ಪರವಾಗಿ ನೀಡಿದ್ದ ತೀರ್ಪನ್ನು ಸುಪ್ರೀಂ ಕೋರ್ಟ್ ಎರಡನೇ ಬಾರಿಯೂ ಎತ್ತಿ ಹಿಡಿದಿದೆ. ಇದೇ ಸಂದರ್ಭದಲ್ಲಿ ಮೇಲಿಂದ ಮೇಲೆ ಇದೇ ಪ್ರಕರಣವನ್ನು ನ್ಯಾಯಾಲಯದ ಮುಂದೆ ತಿರುಗಿಮುರುಗಿ ಮಾಡಿ ತಂದದ್ದೇ ಆದರೆ ನಿಮ್ಮ ವಿರುದ್ಧವೇ ಕಾನೂನು ಕ್ರಮ ಜರುಗಿಸಬೇಕಾಗುತ್ತದೆ ಎಂದು ನ್ಯಾಯಾಲಯವು ಅರ್ಜಿದಾರರಿಗೆ ಎಚ್ಚರಿಕೆಯನ್ನೂ ನೀಡುವ ಮೂಲಕ ಬಿಸಿಮುಟ್ಟಿಸಿದೆ.

ಅಂತಿಮವಾಗಿ ಸತ್ಯವೇ ಗೆದ್ದಿದೆ: ನಾನು ಕನ್ನಡಿಗ, ಕರ್ನಾಟಕದವನು. ಇಲ್ಲೇ ಹುಟ್ಟಿ ಬೆಳೆದಿದ್ದೇನೆ. ಹೌದು ಉದ್ಯೋಗ ಅರಸಿಕೊಂಡು ನಮ್ಮ ತಂದೆ ತಾಯಿ ಮಹಾರಾಷ್ಟ್ರಕ್ಕೆ ಹೋದರು. ನನ್ನ ಬಾಲ್ಯವೂ ಅಲ್ಲೇ ಕಳೆಯಿತು. ಅನಂತರ ನಾವು ಮತ್ತೆ ನಮ್ಮೂರು ಬೋಂತಿ ತಾಂಡಾಕ್ಕೆ ಬಂದಿದ್ದೇವೆ. ಅಲ್ಲಿ ನಮ್ಮ ಸ್ವಂತ ಪುರಾತನ ಮನೆ ಹೊಲ ಎಲ್ಲವೂ ಇದೆ. ವಿನಾಕಾರಣ ನನ್ನ ಜಾತಿ, ನಿವಾಸದ ಮೂಲ ಕೆದಕಿ ವಿವಾದ ಸೃಷ್ಟಿಸುವ ಕೆಲಸ ಮಾಡಲಾಗುತ್ತಿದೆ. ಇದೊಂದು ರೀತಿಯ ಬ್ಲಾಕ್ ಮೇಲ್ ಎನ್ನಬಹುದು. ಈ ಕುರಿತು ಈಗಾಗಲೇ ಹೈಕೋರ್ಟ್ ನಂತರ ಇದೀಗ ಸುಪ್ರೀಂ ಕೋರ್ಟ್ ಕೂಡ ಮತ್ತೊಮ್ಮೆ ನನ್ನ ವಿರುದ್ಧದ ಅರ್ಜಿ ವಜಾಗೊಳಿಸಿದೆ. ಇದು 'ಸತ್ಯಮೇವ ಜಯತೆ'. ಎಲ್ಲ ದಾಖಲಾತಿ ಪರಿಶೀಲನೆ ಬಳಿಕ ನನಗೆ ಇಲ್ಲಿ ಗ್ರೀನ್ ಸಿಗ್ನಲ್ ಸಿಕ್ಕಿದ್ದು, ಜನರ ಆಶೀರ್ವಾದಿಂದ ಎರಡು ಬಾರಿ ಸಚಿವನಾಗಿದ್ದೇನೆ. ನಾಲ್ಕನೇ ಬಾರಿ ಶಾಸಕನಾಗಿದ್ದೇನೆ. ಕೆಲವರು ನನಗೆ ನಿರಂತರ ಕಿರಿಕಿರಿ ನೀಡುವುದು, ನನ್ನ ವಿರುದ್ಧ ಸುಳ್ಳು ದೂರು, ಸುಳ್ಳು ಪ್ರಕರಣ ದಾಖಲಿಸುವುದು ಮಾಡುತ್ತಿದ್ದಾರೆ. ನನ್ನ ಪರಿವಾರದವರ ಮೇಲೂ ಸುಳ್ಳು ಕೇಸ್ ಹಾಕಿಸಿದ್ದಾರೆ. ಅಭಿವೃದ್ಧಿ ಕೆಲಸಗಳಿಗೆ ಅಡ್ಡಿಪಡಿಸುತ್ತಿದ್ದಾರೆ. ನಾನು ಇದ್ಯಾವುದಕ್ಕೂ ಜಗ್ಗಲ್ಲ, ಬಗ್ಗಲ್ಲ. ಅಂತಿಮವಾಗಿ ಸತ್ಯವೇ ಗೆಲ್ಲುತ್ತದೆ ಎಂದು ಶಾಸಕ ಪ್ರಭು ಚವ್ಹಾಣ ಪ್ರತಿಕ್ರಿಯಿಸಿದ್ದಾರೆ.

# ಕೇಂದ್ರ ಬೆಲೆ ಏರಿಸಿದರೆ ಮೌನವಾಗಿದ್ದು, ನಮ್ಮನ್ನು ಮಾತ್ರ ಪ್ರಶ್ನಿಸುತ್ತೀರಿ

**ಬಿಜೆಪಿಯವರ ನಡೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಕ್ಷೇಪ**

**ಬೆಂಗಳೂರು, ಮೇ 21:** ಕೇಂದ್ರ ಸರ್ಕಾರದವರು ಪೆಟ್ರೋಲ್, ಡೀಸೆಲ್ ಬೆಲೆ ಏರಿಸಿದಾಗ ಮಾತನಾಡದೆ ಮೌನಕ್ಕೆ ಜಾರುತ್ತೀರಿ, ಏನೂ ಪ್ರಶ್ನಿಸುವುದಿಲ್ಲ, ಈಗ ನಮ್ಮನ್ನು ದರ ಇಳಿಸುತ್ತೀರಾ ಎಂದು ಪ್ರಶ್ನೆ ಮಾಡುತ್ತೀರಿ ಎಂದು ಬಿಜೆಪಿಯವರ ನಡೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಕ್ಷೇಪ ವ್ಯಕ್ತಪಡಿಸಿದರು.

ಬೆಂಗಳೂರಿನಲ್ಲಿಂದು ಸುದ್ದಿಗಾರರ ಜೊತೆ ಮಾತನಾಡಿದ ಅವರು, ನರೇಂದ್ರ ಮೋದಿಯವರು ಅಧಿಕಾರಕ್ಕೆ ಬಂದಾಗ 2014ರಲ್ಲಿ ಡೀಸೆಲ್ ಬೆಲೆ 48 ರೂಪಾಯಿ, ಪೆಟ್ರೋಲ್ ಬೆಲೆ 70 ರೂಪಾಯಿ ಇತ್ತು, ಗ್ಯಾಸ್ ಸಿಲಿಂಡರ್ ಬೆಲೆ 414 ರೂಪಾಯಿ ಇತ್ತು, ಇಂದು ಇಷ್ಟು ಬೆಲೆ ಏರಿಕೆ ಮಾಡಿದ್ದು ಯಾರು ಎಂದು ಕೇಳಿದರು. ರಾಜ್ಯದಿಂದ ಪೆಟ್ರೋಲ್ ಮತ್ತು ಡೀಸೆಲ್ ಮೇಲೆ ತೆರಿಗೆ ಕಡಿಮೆ ಮಾಡುತ್ತೀರಾ ಎಂದು ಕೇಳಿದ್ದಕ್ಕೆ ಪ್ರತಿಕ್ರಿಯೆ ನೀಡದೆ ಹೋದರು.

## 3 ವರ್ಷದಲ್ಲಿ ಪರಿಶಿಷ್ಟರ ಕಲ್ಯಾಣಕ್ಕೆ ಹಲವು ಯೋಜನೆ ಜಾರಿ

ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಪರಿಶಿಷ್ಟ ಪಂಗಡಗಳ ಕಲ್ಯಾಣಕ್ಕಾಗಿ ಹಲವು ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಮೂರು ವರ್ಷಗಳಲ್ಲಿ ಅರಣ್ಯ ಮತ್ತು ಅರಣ್ಯದಂಚಿನಲ್ಲಿ ವಾಸಿಸುತ್ತಿರುವ ಬುಡಕಟ್ಟು ಸಮುದಾಯದ ಸುಮಾರು 50 ಸಾವಿರಕ್ಕೂ ಅಧಿಕ ಕುಟುಂಬಗಳಿಗೆ ಪೌಷ್ಟಿಕ ಆಹಾರ ಪೂರೈಸಲು 269.02 ಕೋಟಿ ರೂಪಾಯಿ ವಿನಿಯೋಗಿಸಲಾಗಿದೆ. ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ 73 ಸಾವಿರದ 982 ವಿದ್ಯಾರ್ಥಿಗಳಿಗೆ 176.07 ಕೋಟಿ ರೂ. ಪ್ರೋತ್ಸಾಹಧನ ವಿತರಿಸಲಾಗಿದೆ ಎಂದು ತಿಳಿಸಿದ್ದಾರೆ. ಮೂರು ವರ್ಷಗಳ ಅವಧಿಯಲ್ಲಿ ರಾಜ್ಯಾದ್ಯಂತ ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗಾಗಿ 34, ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳನ್ನು ಆರಂಭಿಸಲಾಗಿದೆ. ನವಕರ್ನಾಟಕ ನಿರ್ಮಾಣಕ್ಕೆ ಸರ್ಕಾರ ಬದ್ಧವಾಗಿದೆ ಎಂದು ಮಾಹಿತಿ ನೀಡಿದ್ದಾರೆ.

# ನಗರ-ಪಟ್ಟಣ ಸಮೀಪದ ಅರಣ್ಯಭೂಮಿ ಒತ್ತುವರಿ ತಡೆಗೆ ಬೇಲಿ: ಅಧಿಕಾರಿಗಳಿಗೆ ಸಚಿವ ಖಂಡ್ರೆ ಸೂಚನೆ

**ಬೆಂಗಳೂರು, ಮೇ 21:** ಕಾಂಪಾ ನಿಧಿಯಲ್ಲಿ ಅರಣ್ಯ ಭೂಮಿ ರಕ್ಷಣೆಗೆ ಹಣ ಒದಗಿಸಲು ಅವಕಾಶವಿದ್ದು, ನಗರ ಮತ್ತು ಪಟ್ಟಣದ ಸಮೀಪ ಇರುವ ಕೋಟ್ಯಂತರ ರೂ. ಬೆಲೆ ಬಾಳುವ ಅರಣ್ಯಭೂಮಿ ಒತ್ತುವರಿ ಆಗದಂತೆ ಬೇಲಿಹಾಕಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಅವರು ಅರಣ್ಯಾಧಿಕಾರಿಗಳಿಗೆ ಸೂಚಿಸಿದ್ದಾರೆ.



ಬೆಂಗಳೂರಿನಲ್ಲಿ ಉನ್ನತಾಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಇತ್ತೀಚೆಗೆ ತಾವು ಹಾಸನ ನಗರಕ್ಕೆ ಹೊಂದಿಕೊಂಡಿರುವ ಮಡೆನೂರು ಅರಣ್ಯ ಪ್ರದೇಶಕ್ಕೆ ಭೇಟಿ ನೀಡಿದ್ದು, ಇಲಾಖೆ ಹೆಸರಲ್ಲಿ ಆರ್.ಟಿ.ಸಿ. ಇದ್ದರೂ ಅಲ್ಲಿ ಅರಣ್ಯ ಬೆಳೆಸಿಲ್ಲ. ಹೀಗಾಗಿ ಒತ್ತುವರಿ ನಡೆಯುತ್ತದೆ. ಕೂಡಲೇ ಇಂತಹ ಭೂಮಿ ಗುರುತಿಸಿ ಬೇಲಿಹಾಕಿ, ಸ್ಥಳೀಯ ಪ್ರಭೇದದ ಸಸಿಗಳನ್ನು ನೆಟ್ಟು ನೆಡುತೋಪು ಅಭಿವೃದ್ಧಿಪಡಿಸಿ ಎಂದು ಸೂಚಿಸಿದರು.

**ಅರಣ್ಯ ಭೂಮಿಯ ಇಂಡೀಕರಣಕ್ಕೆ ಸೂಚನೆ:** ಸರ್ಕಾರದಿಂದ ಮತ್ತು ಹಿಂದೆ ರಾಜರ ಆಳ್ವಿಕೆ ಕಾಲದಲ್ಲಿ ಅರಣ್ಯ ಎಂದು ಗೆಜೆಟ್ ಅಧಿಸೂಚನೆ ಆಗಿದ್ದರೂ ಅರಣ್ಯ ಸ್ವರೂಪವಿದ್ದರೂ ಇನ್ನೂ ಕೆಲವು ಕಡೆ ಅರಣ್ಯ ಎಂದು ಇಂಡೀಕರಣ ಆಗದೆ, ಆರ್.ಟಿ.ಸಿ.ಯಲ್ಲಿ ಅರಣ್ಯ ಎಂದು ದಾಖಲಾಗದ ಕಾರಣ ಅಕ್ರಮ ಮಂಜೂರಾತಿ, ಒತ್ತುವರಿ ಆಗುತ್ತಿದ್ದು, ಕೂಡಲೇ ಇಂಡೀಕರಣಕ್ಕೆ (ಮ್ಯುಟೇಷನ್) ಕ್ರಮ ವಹಿಸುವಂತೆ ಈಶ್ವರ ಖಂಡ್ರೆ ನಿರ್ದೇಶನ ನೀಡಿದರು.

**ತುಮಕೂರಿಗೆ ಪ್ರತ್ಯೇಕ ಚಿರತೆ ಕಾರ್ಯಪಡೆ:** ತುಮಕೂರು ಜಿಲ್ಲೆಯಲ್ಲಿ ಊರಿನತ್ತ ಚಿರತೆಗಳು ಬರುವುದು ಹೆಚ್ಚಾಗಿದ್ದು, ಚಿರತೆಗಳನ್ನು ಹಿಡಿದು ಕಾಡಿಗೆ ಮರಳಿಸಲು ಅಥವಾ ಪುನರ್ವಸತಿ ಕೇಂದ್ರಗಳಿಗೆ ಸ್ಥಳಾಂತರಿಸಲು ಚಿರತೆ ಕಾರ್ಯಪಡೆ ರಚನೆಗೆ ಕೂಡಲೆ ಪ್ರಕ್ರಿಯೆ ಆರಂಭಿಸುವಂತೆ ತಿಳಿಸಿದರು.

ಚಿರತೆಗಳು ನಾಡಿಗೆ ಬಂದಾಗ ಜನರು ಭಯಭೀತರಾಗುತ್ತಾರೆ. ಹೀಗಾಗಿ ತಕ್ಷಣ ಸ್ಪಂದಿಸುವ ಅಗತ್ಯವಿದ್ದು, ಅವುಗಳನ್ನು ಸೆರೆ ಹಿಡಿಯಲು ಸಿಬ್ಬಂದಿಗೆ ಸುರಕ್ಷತಾ ಉಪಕರಣಗಳು, ಬೋನುಗಳು ಮತ್ತು ವಾಹನ ಒದಗಿಸುವಂತೆಯೂ ಈಶ್ವರ ಖಂಡ್ರೆ ಸೂಚಿಸಿದರು. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಅರಣ್ಯ ಕಾರ್ಯಪಡೆ ಮುಖ್ಯಸ್ಥರಾದ ಮೀನಾಕ್ಷಿ ನೇಗಿ, ಮುಖ್ಯ ವನ್ಯಜೀವಿ ಪರಿಪಾಲಕರಾದ ಕುಮಾರ್ ಪುಷ್ಕರ್, ಕಾಂಪಾ ವಿಭಾಗದ ಪಿಸಿಸಿಎಫ್ ರಾಧಾದೇವಿ ಮತ್ತಿತರರು ಪಾಲ್ಗೊಂಡಿದ್ದರು,

# ದೇಶದ ಒಂದು ಲಕ್ಷ ಶಾಲೆಗಳಲ್ಲಿ ಶೌಚಾಲಯವೇ ಇಲ್ಲ: ವರದಿ

## ಡಿಜಿಟಲ್ ಶಿಕ್ಷಣ ಮತ್ತು ತಾಂತ್ರಿಕ ಪ್ರಗತಿಯ ಚರ್ಚೆಗಳ ನಡುವೆ ಕನಿಷ್ಠ ಸೌಲಭ್ಯವೂ ಇಲ್ಲದೆ ನರಳುತ್ತಿರುವ ಸರ್ಕಾರಿ ಶಾಲೆಗಳು

**ನವದೆಹಲಿ, ಮೇ 20:** ಯಾವುದೇ ಒಂದು ದೇಶ ಮುಂದುವರಿಯಬೇಕೆಂದರೆ ಮೂಲಭೂತವಾಗಿ ಬೇಕಾದ್ದು ಶಿಕ್ಷಣ. ಆದರೆ, ಶಿಕ್ಷಣವು ಇಂದು ಮಾರುವ/ಕೊಳ್ಳುವ ಸರಕಾಗಿದೆ. ಶಿಕ್ಷಣದ ಖಾಸಗೀಕರಣದಿಂದಾಗಿ ಶಾಲೆಗಳು ಮಾರುಕಟ್ಟೆಗಳಾಗಿಯೂ, ವಿದ್ಯಾರ್ಥಿಗಳು ಗ್ರಾಹಕರಾಗಿಯೂ ಮಾರ್ಪಟ್ಟಿದ್ದಾರೆ. ಸರ್ಕಾರಿ ಶಾಲೆಗಳು ಶೋಚನೀಯ ಪರಿಸ್ಥಿತಿ ತಲುಪುತ್ತಿವೆ. ಇಂತಹ ಸಮಯದಲ್ಲಿಯೇ ಇತ್ತೀಚೆಗೆ, ನೀತಿ ಆಯೋಗ ಹಾಗೂ ಯುಡಿಐಎಸ್‌ಇ ಬಿಡುಗಡೆ ಮಾಡಿರುವ ಜಂಟಿ ವರದಿಯು ಭಾರತದ ಶಾಲಾ ಶಿಕ್ಷಣ ವ್ಯವಸ್ಥೆಯಲ್ಲಿನ ಕಳವಳಕಾರಿ ಅಂಶವನ್ನು ಬಹಿರಂಗಪಡಿಸಿದೆ.

ದೇಶದಲ್ಲಿ ಡಿಜಿಟಲ್ ಶಿಕ್ಷಣ ಮತ್ತು ತಾಂತ್ರಿಕ ಪ್ರಗತಿ ಬಗ್ಗೆ ದೊಡ್ಡ ಮಟ್ಟದ ಚರ್ಚೆಗಳು ನಡೆಯುತ್ತಿದ್ದರೂ, ತಳಮಟ್ಟದ ಸರ್ಕಾರಿ ಶಾಲೆಗಳು ಇಂದಿಗೂ ಕನಿಷ್ಠ ಸೌಲಭ್ಯಗಳಿಗಾಗಿ ಒದ್ದಾಡುತ್ತಿವೆ. ಪ್ರಸ್ತುತ ದೇಶದ 14.71 ಲಕ್ಷ ಶಾಲೆಗಳಲ್ಲಿ 24.69 ಕೋಟಿಗೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ವರದಿಯ ಪ್ರಕಾರ, ಕಳೆದ ಹತ್ತು ವರ್ಷಗಳಲ್ಲಿ ಶಾಲೆಗಳಲ್ಲಿ ಕ್ರಿಯಾತ್ಮಕ ಶೌಚಾಲಯಗಳ ಪ್ರಮಾಣ ಶೇಕಡಾ 85ರಿಂದ 94ಕ್ಕೆ ಏರಿಕೆಯಾಗಿದ್ದರೂ, ವಾಸ್ತವ ಬೇರೆಯದೇ ಆಗಿದೆ. ಇಂದಿಗೂ ದೇಶದ ಸುಮಾರು 98,592 ಸರ್ಕಾರಿ ಶಾಲೆಗಳಲ್ಲಿ ಬಾಲಕಿಯರಿಗೆ ಯೋಗ್ಯವಾದ ಪ್ರತ್ಯೇಕ ಶೌಚಾಲಯಗಳಿಲ್ಲ ಮತ್ತು 61,540 ಶಾಲೆಗಳಲ್ಲಿ ಕನಿಷ್ಠ ಶೌಚಾಲಯ ಸೌಲಭ್ಯವೂ ಕಾರ್ಯನಿರ್ವಹಿಸುತ್ತಿಲ್ಲ. ಪ್ರೌಢಾವಸ್ಥೆಗೆ ತಲುಪುವ ಹೆಣ್ಣುಮಕ್ಕಳು ಅರ್ಧಕ್ಕೇ ಶಾಲೆ ಬಿಡಲು ಈ ಶೌಚಾಲಯಗಳ ಕೊರತೆಯೂ ಒಂದು ಪ್ರಮುಖ ಕಾರಣವಾಗಿದೆ. ಅಲ್ಲದೆ, ಸುಮಾರು 1.19 ಲಕ್ಷ ಶಾಲೆಗಳಲ್ಲಿ ಇಂದಿಗೂ ವಿದ್ಯುತ್ ಸಂಪರ್ಕವಿಲ್ಲದೆ ವಿದ್ಯಾರ್ಥಿಗಳು ಕತ್ತಲೆಯಲ್ಲೇ ಕಲಿಯುತ್ತಿದ್ದಾರೆ. ಹಾಗೆಯೇ 14,505 ಶಾಲೆಗಳಲ್ಲಿ ಕುಡಿಯುವ ನೀರಿನ ಮೂಲಗಳಿಲ್ಲದಿರುವುದು ಮತ್ತು 59,829 ಶಾಲೆಗಳಲ್ಲಿ ಕೈ ತೊಳೆಯುವ ಸೌಲಭ್ಯವಿಲ್ಲದಿರುವುದು ಮಕ್ಕಳ ನೈರ್ಮಲ್ಯ ಮತ್ತು ಆರೋಗ್ಯದ ಮೇಲೆ ತೀವ್ರ ಪರಿಣಾಮ ಬೀರುತ್ತಿದೆ.




### ಖಾಸಗಿ ಶಾಲೆಗಳತ್ತ ಮುಖ ಮಾಡುತ್ತಿರುವ ಪೋಷಕರು

ಈ ಎಲ್ಲ ಕಾರಣಗಳಿಂದಾಗಿ ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯ ಮೇಲಿನ ಪೋಷಕರ ನಂಬಿಕೆ ಕುಸಿಯುತ್ತಿದೆ. 2005ರಲ್ಲಿ ಒಟ್ಟು ದಾಖಲಾತಿಯಲ್ಲಿ ಸರ್ಕಾರಿ ಶಾಲೆಗಳ ಪಾಲು 71% ರಷ್ಟಿದ್ದರೆ, 2024–25ರ ವೇಳೆಗೆ ಅದು 49.24%ಗೆ ಕುಸಿದಿದೆ. ಅಂದರೆ ಅರ್ಧಕ್ಕಿಂತ ಹೆಚ್ಚು ಪೋಷಕರು ಬಡತನದ ನಡುವೆಯೂ ಸಾಲ–ಸೋಲ ಮಾಡಿ ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಸೇರಿಸುತ್ತಿದ್ದಾರೆ. ಇದಲ್ಲದೆ, ಇಂದಿಗೂ 11.5%ರಷ್ಟು ವಿದ್ಯಾರ್ಥಿಗಳು ಮಾಧ್ಯಮಿಕ ಹಂತ ತಲುಪುವಷ್ಟರಲ್ಲಿ ಶಿಕ್ಷಣವನ್ನು ಅರ್ಧಕ್ಕೆ ಕೈಬಿಡುತ್ತಿದ್ದಾರೆ. ಕಳೆದ ಕೆಲವು ವರ್ಷಗಳಲ್ಲಿ ಸರ್ಕಾರದ ಶಾಲಾ ಬಲವರ್ಧನೆ ಯೋಜನೆಯಡಿ ಕಡಿಮೆ ವಿದ್ಯಾರ್ಥಿಗಳಿರುವ ಸುಮಾರು 92,000 ಶಾಲೆಗಳನ್ನು ಹತ್ತಿರದ ಶಾಲೆಗಳೊಂದಿಗೆ ವಿಲೀನಗೊಳಿಸಲಾಗಿದೆಯಾದರೂ, ಇದರಿಂದ ಗ್ರಾಮೀಣ ಭಾಗದ ಬಡಮಕ್ಕಳಿಗೆ ಶಾಲೆಗಳು ಮತ್ತಷ್ಟು ದೂರವಾಗುವ ಆತಂಕ ಎದುರಾಗಿದೆ ಎಂದು ವರದಿ ಹೇಳಿದೆ.

### ಶಿಕ್ಷಕರ ಕೊರತೆಯ ಸವಾಲು

ಮೂಲಸೌಕರ್ಯಗಳ ಜೊತೆಗೆ ಶಿಕ್ಷಕರ ಕೊರತೆಯೂ ದೊಡ್ಡ ಸವಾಲಾಗಿದೆ. ದೇಶದ 1 ಲಕ್ಷಕ್ಕೂ ಹೆಚ್ಚು ಶಾಲೆಗಳು (ಒಟ್ಟು ಶಾಲೆಗಳಲ್ಲಿ 7% ಕ್ಕಿಂತ ಹೆಚ್ಚು) ಏಕ ಶಿಕ್ಷಕ ಶಾಲೆಗಳಾಗಿವೆ. ಏಕಶಿಕ್ಷಕ ಶಾಲೆಗಳಲ್ಲಿ ಒಬ್ಬರೇ ಶಿಕ್ಷಕರು ಆಡಳಿತಾತ್ಮಕ ಕೆಲಸಗಳ ಜೊತೆಗೆ ಒಂದರಿಂದ ಐದನೇ ತರಗತಿಯವರೆಗಿನ ಎಲ್ಲ ಮಕ್ಕಳನ್ನು ಒಂದೇ ಕೋಣೆಯಲ್ಲಿ ಕೂರಿಸಿ ಪಾಠ ಮಾಡಬೇಕಿದೆ. ಇದರಿಂದ ಶಿಕ್ಷಣದ ಗುಣ ಮಟ್ಟದ ಮೇಲೆ ಪರಿಣಾಮ ಬೀರಿದೆ. ಮತ್ತೊಂದೆಡೆ, ಯೋಜನಾ ಲೋಪದಿಂದಾಗಿ ದೇಶದ 7,993 ಶಾಲೆಗಳಲ್ಲಿ 1ನೇ ತರಗತಿಗೆ ಒಬ್ಬನೇ ಒಬ್ಬ ವಿದ್ಯಾರ್ಥಿಯೂ ದಾಖಲಾ ಗುತ್ತಿಲ್ಲ. ಹಳೆಯ ದಾಖಲೆಗಳು ಮತ್ತು ವಿದ್ಯಾರ್ಥಿ ಗಳಿರುವ ಕಾರಣಕ್ಕಾಗಿ ಆ ಶಾಲೆ ಗಳು ನಡೆಯುತ್ತಿವೆ. ಮುಚ್ಚುವ ಹಂತಕ್ಕೆ ತಲುಪಿವೆ.



ಇಟಲಿಯಿಂದ ಐದು ರಾಷ್ಟ್ರಗಳ ಭೇಟಿಯನ್ನು ಯಶಸ್ವಿಯಾಗಿ ಮುಗಿಸಿದ ನಂತರ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ದೆಹಲಿಗೆ ಪ್ರಯಾಣ ಬೆಳಸಿದರು..

# ಗೋವನ್ನು ರಾಷ್ಟ್ರೀಯ ಪ್ರಾಣಿ ಎಂದು ಘೋಷಿಸಿ ಕೇಂದ್ರಕ್ಕೆ ಬಾಬರಿ ಪ್ರಕರಣದ ವಾದಿ ಇಕ್ಬಾಲ್ ಮನವಿ

**ಲಖನೌ,ಮೇ 21:** ಗೋವನ್ನು ರಾಷ್ಟ್ರೀಯ ಪ್ರಾಣಿ ಎಂದು ಘೋಷಿಸುವಂತೆ ರಾಮ ಜನ್ಮಭೂಮಿ ಬಾಬರಿ ಮಸೀದಿ ಭೂ ವಿವಾದ ಪ್ರಕರಣದ ಪ್ರಮುಖ ಹಾಗೂ ಹಿರಿಯ ಮುಸ್ಲಿಂ ಅರ್ಜಿದಾರರಾದ ಇಕ್ಬಾಲ್ ಅನ್ಸಾರಿ ಮನವಿ ಮಾಡಿದರು.



ಮಾಧ್ಯಮವೊಂದಕ್ಕೆ ಪ್ರತಿಕ್ರಿಯೆ ನೀಡಿರುವ ಅವರು, ಕೇಂದ್ರ ಸರ್ಕಾರವು ಗೋವಿಗೆ ರಾಷ್ಟ್ರೀಯ ಸ್ಥಾನಮಾನ ನೀಡುವಂತೆ ಮನವಿ ಮಾಡಿದರು. ಅಲ್ಲದೇ ಮುಸ್ಲಿಮರು ಗೋವುಗಳನ್ನು ಗೌರವಿಸಬೇಕು, ಅವುಗಳ ಗೋಹತ್ಯೆಯನ್ನು ನಿಲ್ಲಿಸಬೇಕು. ಕಾರಣ, ಗೋಹತ್ಯೆಯ ವಿಚಾರವನ್ನೇ ಮುಂದಿಟ್ಟುಕೊಂಡು ಕೋಮುಗಲಭೆ ಸೃಷ್ಟಿಸುವ ಹಾಗೂ ಸಮುದಾಯವನ್ನು ಕೆಣಕುವ ಕೆಲಸಗಳಾಗುತ್ತಿವೆ ಎಂದು ಅಸಮಾಧಾನ ಹೊರಹಾಕಿದರು.

ಭಾರತದಲ್ಲಿ ಗೋವುಗಳ ಸಾಂಸ್ಕೃತಿಕ ಮತ್ತು ಧಾರ್ಮಿಕ ಮಹತ್ವವನ್ನು ಪ್ರತಿಪಾದಿಸಿದ ಅನ್ಸಾರಿ, ಬಹುಸಂಖ್ಯಾತ ಸಮುದಾಯಗಳ ಭಾವನೆಗಳನ್ನು ಗೌರವಿಸಬೇಕು, ಗೋವನ್ನು ಬಲಿಕೊಡಲೇಬಾರದು (ಕುರ್ಬಾನಿ). ಏಕೆಂದ್ರೆ ನಾವು ಭಾರತೀಯರು, ಗೋವನ್ನು ಗೋಮಾತೆ ಎಂದು ಕರೆಯುತ್ತೇವೆ, ಹಿಂದೂಗಳು ಅದನ್ನು ಪೂಜಿಸುತ್ತಾರೆ. ಹಾಗಾಗಿ ಮುಸ್ಲಿಮರು ಗೋವುಗಳನ್ನು ಗೌರವಿಸಬೇಕು, ಇಸ್ಲಾಮಿಕ್ ಸಂಪ್ರದಾಯಗಳು ಗೋಮಾಂಸ ಸೇವನೆಯನ್ನು ಉತ್ತೇಜಿಸುವುದಿಲ್ಲ ಎಂದು ಹೇಳಿದರು.

ಗೋವಿನ ಹಾಲು ಪ್ರಯೋಜನಕಾರಿ ಮತ್ತು ಔಷಧಿಯ ಗುಣಗಳ ಆಗರವಾಗಿದೆ. ಹಸುವಿನ ಮಾಂಸ ತಿನ್ನುವುದನ್ನು ನಮ್ಮ ಇಸ್ಲಾಂ ಧರ್ಮ ನಿಷೇಧಿಸಿದೆ. ಆದಾಗ್ಯೂ ಕೆಲವರು ನಮ್ಮ ದೇಶದಲ್ಲಿ ಮುಸ್ಲಿಮರನ್ನು ಕೆಣಕಲು ಇದೆಲ್ಲವನ್ನ ಮಾಡ್ತಿದ್ದಾರೆ. ಮುಸ್ಲಿಮರೆಲ್ಲರೂ ಎಚ್ಚೆತ್ತುಕೊಂಡು ಗೋಹತ್ಯೆಯನ್ನು ನಿಲ್ಲಿಸಬೇಕು ಎಂದು ಕರೆ ನೀಡಿದರು. ಕೋಲ್ಕತ್ತಾದ ನಖೋಡಾ ಮಸೀದಿಯ ಇಮಾಮ್ ಮೌಲಾನಾ ಮೊಹಮ್ಮದ್ ಶಫೀಕ್ ಖಾಸ್ಮಿ ಅವರು ಇದೇ ರೀತಿ ಮನವಿ ಮಾಡಿದ ಒಂದು ದಿನದ ನಂತರ ಇಕ್ಬಾಲ್ ಅನ್ಸಾರಿ ಅವರು ಹೇಳಿಕೆ ನೀಡಿದ್ದಾರೆ.

# ವಿಜಯ್ ಸರ್ಕಾರದ ಸಚಿವ ಸಂಪುಟ ವಿಸ್ತರಣೆ 23 ಶಾಸಕರು ಸಚಿವರಾಗಿ ಪ್ರಮಾಣವಚನ ಸ್ವೀಕಾರ

**ಚೆನ್ನೈ, ಮೇ 21:** ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ನೇತೃತ್ವದ ಸರ್ಕಾರದ ಸಚಿವ ಸಂಪುಟ ವಿಸ್ತರಣೆಯಾಗಿದ್ದು, 23 ಶಾಸಕರು ನೂತನ ಸಚಿವರಾಗಿ ಗುರುವಾರ ಪ್ರಮಾಣ ವಚನ ಸ್ವೀಕರಿಸಿದ್ದಾರೆ.

ಟಿವಿಕೆ ಪಕ್ಷದ 21 ಶಾಸಕರು ಹಾಗೂ ಕಾಂಗ್ರೆಸ್ ಪಕ್ಷದ ಇಬ್ಬರು ಶಾಸಕರು ಸಚಿವ ಸಂಪುಟಕ್ಕೆ ಸೇರ್ಪಡೆಯಾದರು. ಈ ಮೂಲಕ ವಿಜಯ್ ಸರ್ಕಾರದಲ್ಲಿ ಸಚಿವರ ಸಂಖ್ಯೆ 32ಕ್ಕೆ ಏರಿಕೆಯಾಗಿದೆ. ತಮಿಳುನಾಡು ವಿಧಾನಸಭೆಯ ಬಲದ ಆಧಾರದ ಮೇಲೆ ಸರ್ಕಾರದಲ್ಲಿ ಗರಿಷ್ಠ 35 ಸಚಿವರನ್ನು ಹೊಂದಲು ಅವಕಾಶವಿದೆ.

ನೂತನ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ ಟಿವಿಕೆ ಶಾಸಕರಲ್ಲಿ ಶ್ರೀನಾಥ್, ಕಮಲಿ ಎಸ್, ಸಿ.ವಿಜಯಲಕ್ಷ್ಮಿ, ಆರ್ ವಿ.ರಂಜಿತ್ ಕುಮಾರ್, ವಿನೋತ್, ರಾಜೀವ್, ಬಿ. ರಾಜ್ಕುಮಾರ್, ವಿ.ಗಂಧಿರಾಜ್, ಮಧನ್ ರಾಜಾ ಪಿ, ಜಗದೇಶ್ವರಿ ಕೆ, ರಾಜೇಶ್ ಕುಮಾರ್ ಎಸ್, ಎಂ.ವಿಜಯ್ ಬಾಲಾಜಿ, ಲೋಗೇಶ್ ತಮಿಳ್‌ಸೆಲ್ವನ್ ಡಿ, ವಿಜಯ್ ತಮಿಳನ್ ಪಾರ್ಥಿಬನ್ ಎ, ರಮೇಶ್, ಪಿ.ವಿಶ್ವನಾಥನ್, ಕುಮಾರ್ ಆರ್, ತೆನ್ನರಸು ಕೆ, ವಿ.ಸಂಪತ್ ಕುಮಾರ್, ಮೊಹಮ್ಮದ್ ಫರ್ವಾಸ್ ಜೆ, ಡಿ.ಶರತ್ ಕುಮಾರ್, ಎನ್.ಮೇರಿ ವಿಲ್ಸನ್ ಹಾಗೂ ವಿಘ್ನೇಶ್ ಕೆ ಸೇರಿದ್ದಾರೆ. ಕಾಂಗ್ರೆಸ್ ಪಕ್ಷದ ರಾಜೇಶ್ ಕುಮಾರ್ ಹಾಗೂ ಪಿ.ವಿಶ್ವನಾಥನ್ ಕೂಡ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದರು. ಸುಮಾರು ಆರು ದಶಕಗಳ ಬಳಿಕ ತಮಿಳುನಾಡು ಸರ್ಕಾರದಲ್ಲಿ ಕಾಂಗ್ರೆಸ್ ಪಕ್ಷ ಸಚಿವ ಸಂಪುಟದ ಭಾಗವಾಗಿರುವುದು ವಿಶೇಷವಾಗಿದೆ. 1967ರಲ್ಲಿ ಎಂ. ಭಕ್ತವತ್ಸಲಂ ನೇತೃತ್ವದ ಕಾಂಗ್ರೆಸ್ ಸರ್ಕಾರದ ಬಳಿಕ ಪಕ್ಷ ರಾಜ್ಯ ಸರ್ಕಾರದಲ್ಲಿ ಸ್ಥಾನ ಪಡೆದಿರಲಿಲ್ಲ.

ಮೈತ್ರಿ ಪಕ್ಷಗಳಾದ ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ ಮತ್ತು ವಿಡುತಲೈ ಚಿರುತೈಗಳ್ ಕಚ್ಚಿ ಪಕ್ಷಗಳಿಗೆ ತಲಾ ಒಂದು ಸಚಿವ ಸ್ಥಾನ ಮೀಸಲಿಡಲಾಗಿದೆ ಎಂದು ಮೂಲಗಳು ತಿಳಿಸಿವೆ. ಆದರೆ ಈ ಪಕ್ಷಗಳು ಇನ್ನೂ ತಮ್ಮ ಅಭ್ಯರ್ಥಿಗಳ ಹೆಸರನ್ನು ಘೋಷಿಸಿಲ್ಲ. ಮುಂದಿನ ಹಂತದಲ್ಲಿ ಅವರನ್ನು ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳುವ ಸಾಧ್ಯತೆ ಇದೆ.

ಮೇ 10ರಂದು ವಿಜಯ್ ಮುಖ್ಯಮಂತ್ರಿಯಾಗಿ ಹಾಗೂ 9 ಸಚಿವರು ಪ್ರಮಾಣವಚನ ಸ್ವೀಕರಿಸಿದ್ದರು.

ಇದೀಗ ಸಚಿವ ಸಂಪುಟ ವಿಸ್ತರಣೆ ಬಳಿಕ ವಿಜಯ್ ಸರ್ಕಾರ ಆಡಳಿತಾತ್ಮಕ ಚಟುವಟಿಕೆಗಳನ್ನು ಮತ್ತಷ್ಟು ವೇಗಗೊಳಿಸುವ ನಿರೀಕ್ಷೆಯಿದೆ.




# ವಾಣಿಜ್ಯ ವಾಹನಗಳ ಮೇಲೆ ಪರಿಸರ ಸೆಸ್ ವಿರೋಧಿಸಿ ಮಾಲೀಕರು, ಚಾಲಕರ ಮುಷ್ಕರ

**ನವದೆಹಲಿ, ಮೇ 21:** ಇಂಧನ ಬೆಲೆಗಳ ಏರಿಕೆಯ ನಡುವೆ ದರ ಏರಿಕೆ ಮತ್ತು ದೆಹಲಿ–ಎನ್‌ಸಿಆರ್‌ಗೆ ಪ್ರವೇಶಿಸುವ ವಾಣಿಜ್ಯ ಸರಕು ಸಾಗಣೆದಾರರ ಮೇಲೆ ವಿಧಿಸಲಾದ ಪರಿಸರ ಸೆಸ್ ವಿರುದ್ಧ ಒತ್ತಾಯಿಸಿ ಟ್ಯಾಕ್ಸಿಗಳು, ಟ್ರಕ್‌ಗಳು ಮತ್ತು ಹಲವಾರು ಸಾರಿಗೆದಾರರು ಮುಷ್ಕರ ನಡೆಸಿದರು.

ವಾಣಿಜ್ಯ ವಾಹನಗಳ ಮೇಲಿನ ಹೆಚ್ಚಿದ ಪರಿಸರ ಪರಿಹಾರ ಸೆಸ್ ಅನ್ನು ಹಿಂಪಡೆಯುವಂತೆ AIMTC ಒತ್ತಾಯಿಸಿತ್ತು, ಆದರೆ BS-IV ಅಥವಾ ಹಿಂದಿನ ಹಂತದ ಹೊರಸೂಸುವಿಕೆ ಮಾನದಂಡಗಳನ್ನು ಹೊಂದಿರುವ ವಾಹನಗಳ ಮೇಲಿನ ನಿಷೇಧವನ್ನು ರದ್ದುಗೊಳಿಸುವಂತೆಯೂ ಅವರು ಕೋರಿದ್ದರು.

ಹಲವಾರು ಟ್ಯಾಕ್ಸಿಗಳು ಈ ಕರೆಗೆ ಬೆಂಬಲ ವ್ಯಕ್ತಪಡಿಸಲು ಓಡಲಿಲ್ಲ, ಆದರೆ ಚಾಲಕರು ಇಂಧನ ಬೆಲೆ ಏರಿಕೆಯ ಬಗ್ಗೆ ಕಳವಳ ವ್ಯಕ್ತಪಡಿಸಿದರು. ಎಲ್ಲದರ ಬೆಲೆ ಏರಿಕೆಯೊಂದಿಗೆ ದರಗಳನ್ನು ಪರಿಷ್ಕರಿಸಬೇಕಾಗಿದೆ ಎಂದು ಕೆಲವರು ಹೇಳಿದರು.

ರಾಷ್ಟ್ರವ್ಯಾಪಿ ಮುಷ್ಕರಕ್ಕೆ ಕರೆ ನೀಡಿದ ಸಾರಿಗೆದಾರರ ಸಂಸ್ಥೆಯು, ವಾಹನಗಳ ಮೇಲಿನ ನಿರ್ಬಂಧಗಳು ಅನ್ಯಾಯವಾಗಿದೆ ಎಂದು ಹೇಳುತ್ತದೆ, ಅವು ನಿಜವಾದ ಹೊರಸೂಸುವಿಕೆಯ ಪ್ರಕಾರ ನಡೆಯುತ್ತಿಲ್ಲ ಎಂದು ಆರೋಪಿಸುತ್ತದೆ.

ಮಾಲಿನ್ಯ ನಿಯಂತ್ರಣ ಕ್ರಮಗಳ ಕಠಿಣ ಅವಧಿಯಲ್ಲಿ ರಸ್ತೆಗಿಳಿಯಲು ಅವಕಾಶ ನೀಡಿದ್ದರೂ, ಬಿಎಸ್–6 ನಿಯಮ ಪಾಲಿಸುವ ವಾಹನಗಳ ಮೇಲೂ ಪರಿಸರ ಸೆಸ್ ವಿಧಿಸುವುದು ಏಕೆ ಎಂದು ಅವರು ಪ್ರಶ್ನಿಸಿದ್ದಾರೆ.

ದೆಹಲಿಗೆ ಖಾಲಿಯಾಗಿ ಬಂದು ಅಗತ್ಯ ವಸ್ತುಗಳನ್ನು ಲೋಡ್ ಮಾಡಲು ಬರುವ ಟ್ರಕ್‌ಗಳಿಂದ ಸೆಸ್ ತೆಗೆದುಕೊಳ್ಳಲಾಗುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಕ್ಯಾಬ್ ಮತ್ತು ಆಟೋರಿಕ್ಷಾ ನಿರ್ವಾಹಕರು ಸಹ ಈ ಕರೆಗೆ ಬೆಂಬಲ ವ್ಯಕ್ತಪಡಿಸಿದ್ದಾರೆ ಮತ್ತು ಇಂಧನ ಬೆಲೆ ಏರಿಕೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ.

ತಮ್ಮ ಕ್ರಮದ ಹಿಂದಿನ ಕಾರಣಗಳು ಗಂಭೀರವಾಗಿದ್ದು, ಅವು ತಮ್ಮ ಕೆಲಸದ ಮೇಲೆ ಪರಿಣಾಮ ಬೀರುತ್ತಿವೆ ಎಂದು ಒಕ್ಕೂಟಗಳು ಹೇಳುತ್ತವೆ, ಆದರೆ ಕ್ಯಾಬ್ ಮಾಲೀಕರು, ಚಾಲಕರು ಬೆಲೆ ಮಾತ್ರವಲ್ಲದೆ ವಾಹನದ ನಿರ್ವಹಣಾ ವೆಚ್ಚವೂ ಹೆಚ್ಚಾಗಿದೆ ಎಂದು ಹೇಳುತ್ತಿದ್ದಾರೆ, ಆದರೆ ಇತರ ವೆಚ್ಚಗಳು ಸಹ ಅವರನ್ನು ಚಿಂತಿತರನ್ನಾಗಿಸಿವೆ.

AIMTC ಕರೆ ನೀಡಿರುವ ಮೂರು ದಿನಗಳ ಮುಷ್ಕರವು ಇದೀಗ ಸಾಂಕೇತಿಕವಾಗಿ ತೋರುತ್ತದೆ, ಆದರೆ ಸಾಗಣೆದಾರರು ತಮ್ಮ ಸಮಸ್ಯೆಗಳನ್ನು ಪರಿಹರಿಸದಿದ್ದರೆ ಮುಂದಿನ ದಿನಗಳಲ್ಲಿ ಮುಷ್ಕರದ ದಿನಗಳು ಮತ್ತು ತೀವ್ರತೆಯನ್ನು ಹೆಚ್ಚಿಸಬಹುದು ಎಂದು ಸಂಸ್ಥೆ ಎಚ್ಚರಿಸಿದೆ.

# ಸೋಶಿಯಲ್ ಮಿಡಿಯಾದಲ್ಲಿ ಧೂಳೆಬ್ಬಿಸಿದ ಕಾಕ್ರೋಚ್ ಜನತಾ ಪಾರ್ಟಿ

## ನಾಲ್ಕೇ ದಿನದಲ್ಲಿ ಒಂದು ಕೋಟಿ ಅನುಯಾಯಿಗಳು | ಫಾಲೋವರ್ಸ್ ವಿಚಾರದಲ್ಲಿ ಬಿಜೆಪಿ ಹಿಂದಿಕ್ಕಿದ ಸಿಜೆಪಿ

**ನವದೆಹಲಿ, ಮೇ 21:** ಸಾಮಾಜಿಕ ಜಾಲತಾಣದಲ್ಲಿ ಹೊಸ ಸುನಾಮಿಯನ್ನೇ ಸೃಷ್ಟಿ ಮಾಡಿರುವ ಸಿಜೆಪಿ ಇನ್ಸ್ಟಾಗ್ರಾಮ್ ಫಾಲೋವರ್ಸ್ ಸಂಖ್ಯೆಯಲ್ಲಿ ಆಡಳಿತಾರೂಢ ಬಿಜೆಪಿಯನ್ನೇ ಮೀರಿಸಿದೆ. ಇನ್ಸ್ಟಾಗ್ರಾಮ್‌ನಲ್ಲಿ ಬಿಜೆಪಿಯು 87 ಲಕ್ಷ ಫಾಲೋವರ್ಸ್ ಹೊಂದಿದ್ದರೆ, ಈ ಡಿಜಿಟಲ್ ಪಾರ್ಟಿಯು ಬರೋಬ್ಬರಿ 1 ಕೋಟಿಗೂ ಹೆಚ್ಚು ಫಾಲೋವರ್ಸ್ ದಾಟುವ ಮೂಲಕ ದಾಖಲೆ ಬರೆದಿದೆ.

ಕಾಕ್ರೋಚ್ ಜನತಾ ಪಾರ್ಟಿ ಇದೊಂದು ಕಾಲ್ಪನಿಕ ರಾಜಕೀಯ ಪಕ್ಷ, ಚುನಾವಣಾ ಆಯೋಗದಲ್ಲಿ ಇದು ಇನ್ನು ನೊಂದಣಿಯಾಗಿಲ್ಲ. ಮೇ 15 ರಂದು ಸುಪ್ರೀಂ ಕೋರ್ಟ್ ವಿಚಾರಣೆಯೊಂದರ ಸಂದರ್ಭದಲ್ಲಿ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಅವರು, "ಕೆಲವು ನಿರುದ್ಯೋಗಿ ಯುವಕರು ಪತ್ರಕರ್ತರು, ಆರ್‌ಟಿಐ ಕಾರ್ಯಕರ್ತರು ಅಥವಾ ಸೋಶಿಯಲ್ ಮೀಡಿಯಾ ಬಳಕೆದಾರರಾಗಿ ಎಲ್ಲರ ಮೇಲೂ ಆರೋಪಗಳ ದಾಳಿ ಮಾಡುತ್ತಿದ್ದಾರೆ ಎಂಬ ವರದಿಗಳನ್ನು ಉಲ್ಲೇಖಿಸಿ ಯುವಕರನ್ನು ಜಿರಳೆಗಳು ಮತ್ತು ಪರಾವಲಂಬಿಗಳಿಗೆ ಹೋಲಿಸಿದ್ದರು

ಈ ಹೇಳಿಕೆ ಆನ್‌ಲೈನ್‌ನಲ್ಲಿ ಯುವಜನತೆಯ ಆಕ್ರೋಶಕ್ಕೆ ಕಾರಣವಾಗಿತ್ತು. ತದನಂತರ ಮುಖ್ಯ ನ್ಯಾಯಮೂರ್ತಿಗಳು ತಮ್ಮ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಲಾಗಿದೆ ಎಂದು ಸ್ಪಷ್ಟನೆ ನೀಡಿದರೂ, ವಾಕ್ ಸ್ವಾತಂತ್ರ್ಯ ಮತ್ತು ಸಂವಿಧಾನದ ರಕ್ಷಕರಾಗಬೇಕಾದವರೇ ಯುವಕರನ್ನು ಹೀಗೆ ಅವಮಾನಿಸಿದ್ದು ಪ್ರಜಾಪ್ರಭುತ್ವಕ್ಕೆ ಒಪ್ಪುವಂಥದ್ದಲ್ಲ ಎಂದು ಪ್ರತಿಭಟಿಸಲು ಪುಣೆ ಮೂಲದ ಅಭಿಜೀತ್ ದಿಪ್ಕೆ ಈ ಕಾಕ್ರೋಚ್ ಜನತಾ ಪಾರ್ಟಿಯನ್ನು ಹುಟ್ಟುಹಾಕಿದರು.

ಇಂಟರ್‌ನೆಟ್‌ನಲ್ಲಿ ಕೇವಲ ಒಂದು ಜೋಕ್ ಆಗಿ ಆರಂಭವಾದ ಇದು, ಗೂಗಲ್ ಫಾರ್ಮ್ ಹಂಚಿಕೊಂಡ ಕೆಲವೇ ಗಂಟೆಗಳಲ್ಲಿ 5,000 ಕ್ಕೂ ಹೆಚ್ಚು ನೋಂದಣಿಗಳನ್ನು ಪಡೆದು, ಕೇವಲ ಎರಡೇ ದಿನಗಳಲ್ಲಿ 40,000 ಕ್ಕೂ ಅಧಿಕ ಯುವಕರು ಸೇರ್ಪಡೆಗೊಳ್ಳುವ ಮೂಲಕ ವ್ಯವಸ್ಥೆಯ ವಿರುದ್ಧದ ಯುವ ಜನಾಂಗದ ಅಸಮಾಧಾನದ ವೇದಿಕೆಯಾಗಿ ಹಾಗೂ ಒಂದು ಅನೌಪಚಾರಿಕ ಸಂಘಟನೆಯಾಗಿ ರೂಪಾಂತರಗೊಂಡಿದೆ.

ಸೋಮಾರಿಗಳ ಮತ್ತು ನಿರುದ್ಯೋಗಿಗಳ ಧ್ವನಿ ಎಂಬ ಟ್ಯಾಗ್‌ಲೈನ್ನೊಂದಿಗೆ ಬಂದಿರುವ ಈ ಪಾರ್ಟಿ, ವ್ಯವಸ್ಥೆಯು ಯಾರನ್ನು ಲೆಕ್ಕಕ್ಕೇ ಇಟ್ಟುಕೊಳ್ಳಲು ಮರೆತಿದೆಯೋ ಅಂತಹ ಜನರನ್ನು ನಾವು ಪ್ರತಿನಿಧಿಸುತ್ತೇವೆ ಎಂದು ಹೇಳಿಕೊಂಡಿದೆ. ಯಾವುದೇ ಪ್ರಾಯೋಜಕರಿಲ್ಲದ ಈ ಪಕ್ಷವು ತನ್ನನ್ನು ದೊಡ್ಡದಾದ ಹಾಗೂ ನಿರಂತರವಾಗಿ ಕಾಡುವ ಜಿರಳೆಗಳ ಹಿಂಡು ಎಂದು ಘೋಷಿಸಿಕೊಂಡಿದ್ದು, ನಾವು ಇಲ್ಲಿ ಮತ್ತೊಂದು ಪಿಎಂ ಕೇರ್ಸ್ ನಿಧಿಯನ್ನು ಸ್ಥಾಪಿಸಲು ಬಂದಿಲ್ಲ, ತೆರಿಗೆದಾರರ ಹಣದಲ್ಲಿ ದಾವೋಸ್‌ಗೆ ಪ್ರವಾಸ ಹೋಗಿ ರಜೆ ಕಳೆಯಲು ಬಂದಿಲ್ಲ, ಅಥವಾ ಭ್ರಷ್ಟಾಚಾರಕ್ಕೆ ಸ್ಟ್ರಾಟೆಜಿಕ್ ಸ್ಪೆಂಡಿಂಗ್ ಎಂದು ಹೊಸ ಹೆಸರಿಡಲು ಬಂದಿಲ್ಲ, ಬದಲಿಗೆ ಜನರ ಹಣ ಏನಾಯಿತು ಎಂದು ಲಿಖಿತವಾಗಿ, ಗಟ್ಟಿಯಾಗಿ ಮತ್ತು ಪದೇಪದೇ ಪ್ರಶ್ನಿಸಲು ನಾವು ಇಲ್ಲಿದ್ದೇವೆ ಎಂದು ವ್ಯವಸ್ಥೆಯ ವಿರುದ್ಧ ಅತ್ಯಂತ ಪ್ರಬಲವಾಗಿ ವೆಬ್‌ಸೈಟ್‌ನಲ್ಲಿ ಬರೆದುಕೊಂಡಿದೆ. ಈ ಪಕ್ಷವು ಬಿಡುಗಡೆ ಮಾಡಿರುವ 5 ಅಂಶಗಳ ಪ್ರಣಾಳಿಕೆಯು ದೇಶದ ರಾಜಕೀಯ ವ್ಯವಸ್ಥೆಯನ್ನು ನೇರವಾಗಿ ಪ್ರಶ್ನಿಸುವಂತಿದ್ದು, ಕೇಂದ್ರ ಸಚಿವ ಸಂಪುಟದಲ್ಲಿ ಮಹಿಳೆಯರಿಗೆ ಶೇ. 50 ರಷ್ಟು ಮೀಸಲಾತಿ, ಪಕ್ಷಾಂತರ ಮಾಡುವ ಶಾಸಕ–ಸಂಸದರ ಮೇಲೆ 20 ವರ್ಷಗಳ ನಿಷೇಧ, ಅರ್ಹ ಮತದಾರರ ಹೆಸರು ಕೈಬಿಟ್ಟರೆ ಚುನಾವಣಾ ಆಯುಕ್ತರ ಮೇಲೆ ಯುಎಪಿಎ ಕಾಯ್ದೆಯಡಿ ಕ್ರಮ ಹಾಗೂ ನಿವೃತ್ತ ಸುಪ್ರೀಂ ಕೋರ್ಟ್ ಮುಖ್ಯ ನ್ಯಾ.ಗಳಿಗೆ ರಾಜ್ಯಸಭಾ ಹುದ್ದೆ ನೀಡುವುದನ್ನು ತಡೆಯುವುದಾಗಿ ಘೋಷಿಸಿದೆ. ಇದರೊಂದಿಗೆ, ಸಿಬಿಎಸ್‌ಇ ಮರುಮೌಲ್ಯಮಾಪನ ಶುಲ್ಕ ರದ್ದುಪಡಿಸುವುದು ಮತ್ತು ಇತ್ತೀಚಿನ ನೀಟ್ ಪರೀಕ್ಷಾ ಹಗರಣದ ಸಂತ್ರಸ್ತ ವಿದ್ಯಾರ್ಥಿಗಳಿಗೆ ಬೆಂಬಲ ನೀಡುವುದರ ಜೊತೆಗೆ ಶೀಘ್ರದಲ್ಲೇ ವರ್ಚುವಲ್ 'Gen-Z' ಸಮಾವೇಶ ನಡೆಸುವುದಾಗಿ ತಿಳಿಸಿರುವ ಈ ಪಕ್ಷಕ್ಕೆ ಸೇರಲು ನಿರುದ್ಯೋಗಿ, ಸೋಮಾರಿ, ಸದಾ ಇಂಟರ್ನೆಟ್‌ನಲ್ಲೇ ಇರುವ ಮತ್ತು ಸುದೀರ್ಘವಾಗಿ ವಾದಿಸುವ/ದೂರುವ ಕಲೆ ಹೊಂದಿರುವವರು ಅರ್ಹರಾಗಿದ್ದಾರೆ ಎಂದು ವ್ಯಂಗ್ಯವಾಗಿ ಹೇಳಲಾಗಿದೆ.




### ಬಿಜೆಪಿ ಹಿಂದಿಕ್ಕಿದ ಬೆನ್ನಲ್ಲೇ ಕಾಕ್ರೋಚ್ ಜನತಾ ಪಾರ್ಟಿ ಎಕ್ಸ್ ಖಾತೆ ನಿರ್ಬಂಧ

ಇನ್ಸ್ಟಾಗ್ರಾಮ್‌ನಲ್ಲಿ ಇಷ್ಟೊಂದು ಜನಪ್ರಿಯತೆ ಗಳಿಸಿ ಬಿಜೆಪಿಯನ್ನು ಹಿಂದಿಕ್ಕಿದ ಬೆನ್ನಲ್ಲೇ, ಎಕ್ಸ್ ವೇದಿಕೆಯು ಸಿಜೆಪಿ ಖಾತೆಯನ್ನು ಭಾರತದ ಐಟಿ ನಿಯಮಾವಳಿಗಳ ಅನ್ವಯ ಭಾರತದಲ್ಲಿ ತಡೆಹಿಡಿಯಲಾಗಿದೆ ಎಂದು ನಿರ್ಬಂಧಿಸಿದೆ. ಈ ದಿಢೀರ್ ಬೆಳವಣಿಗೆಯ ಬಗ್ಗೆ ಪ್ರತಿಕ್ರಿಯಿಸಿರುವ ಸಿಜೆಪಿ ಸಂಸ್ಥಾಪಕ, 30 ವರ್ಷದ ಯುವಕ ಅಭಿಜೀತ್ ದಿಪ್ಕೆ, ನಿರೀಕ್ಷೆಯಂತೆಯೇ ಭಾರತದಲ್ಲಿ ಕಾಕ್ರೋಚ್ ಜನತಾ ಪಾರ್ಟಿಯ ಖಾತೆಯನ್ನು ನಿರ್ಬಂಧಿಸಲಾಗಿದೆ, ಎಂದು ಎಕ್ಸ್‌ನಲ್ಲಿ ಬರೆದುಕೊಂಡು, ನಿರ್ಬಂಧಿತ ಖಾತೆಯ ಸ್ಕ್ರೀನ್–ಶಾಟ್ ಹಂಚಿಕೊಂಡಿದ್ದಾರೆ. ಬೋಸ್ಟನ್ ವಿಶ್ವವಿದ್ಯಾಲಯದಲ್ಲಿ ಸಾರ್ವಜನಿಕ ಸಂಪರ್ಕ ವಿಷಯದಲ್ಲಿ ಸ್ನಾತಕೋತ್ತರ ವ್ಯಾಸಂಗ ಮಾಡುತ್ತಿರುವ ಅಭಿಜೀತ್, ಈ ಹಿಂದೆ ಆಮ್ ಆದ್ಮಿ ಪಾರ್ಟಿಯ ಸಾಮಾಜಿಕ ಜಾಲತಾಣ ವಿಭಾಗದಲ್ಲಿಯೂ ಸ್ವಯಂಸೇವಕನಾಗಿ ಕೆಲಸ ಮಾಡಿದ್ದರು. ಇದು ಕೇವಲ ಟ್ರೆಂಡ್ ಅಲ್ಲ, ಯುವಕರ ಹತಾಶೆಯ ನೇರ ಪ್ರತಿರೂಪ ಎಂದು ದಿಪ್ಕೆ ಪ್ರತಿಪಾದಿಸಿದ್ದರು. ಇದೀಗ ವಾಕ್–ಸ್ವಾತಂತ್ರ್ಯದ ವೇದಿಕೆಯಾಗಿದ್ದ ಈ ಖಾತೆಯನ್ನು ನಿರ್ಬಂಧಿಸಿರುವುದು ಡಿಜಿಟಲ್ ಸೆನ್ಸಾರ್ಶಿಪ್ ಹಾಗೂ ಯುವಕರ ಧ್ವನಿಯನ್ನು ಅಡಗಿಸುವ ಪ್ರಯತ್ನ ಎಂದು ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಆಕ್ರೋಶ ವ್ಯಕ್ತವಾಗುತ್ತಿದೆ. ಒಂದು ಸಣ್ಣ ಮೀಮ್ ಪೇಜ್ ಆಗಿ ಶುರುವಾದ ಈ ಆಂದೋಲನ, ಇಂದು ರಾಷ್ಟ್ರ ರಾಜಕಾರಣದ ಚರ್ಚಾ ವಿಷಯವಾಗಿ ಮಾರ್ಪಟ್ಟಿರುವುದು ಸ್ಪಷ್ಟವಾಗಿದೆ.

# ಮುಸ್ಲಿಮರ ಮೀಸಲಾತಿ ರದ್ದು, ಮದರಸಾಗಳಲ್ಲಿ ವಂದೇಮಾತರಂ ಗಾಯನ: ಸುವೇಂದು ಆದೇಶ

**ಕೋಲ್ಕತ್ತಾ, ಮೇ 21:** ಸುವೇಂದು ಅಧಿಕಾರಿ ಈಗ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ. ಅಧಿಕಾರಕ್ಕೆ ಏರುತ್ತಿದ್ದಂತೆ ಒಂದಾದ ಮೇಲೆ ಒಂದರಂತೆ ಅಲ್ಪಸಂಖ್ಯಾತ ಅದರಲ್ಲೂ ನೇರವಾಗಿ ಮುಸ್ಲಿಂ ವಿರೋಧಿ ಕ್ರಮಗಳನ್ನು, ಆದೇಶಗಳನ್ನು ಹೊರಡಿಸಲು ಶುರು ಮಾಡಿದ್ದಾರೆ. ಮುಸ್ಲಿಮರಿಗೆ ಓಬಿಸಿ ಮೀಸಲಾತಿ ರದ್ದು ಮಾಡಿದ್ದು, ಮದರಸಾಗಳಲ್ಲಿ ವಂದೇಮಾತರಂ ಹಾಡುವುದು ಕಡ್ಡಾಯಗೊಳಿಸಿದ್ದಾರೆ.



ಪಶ್ಚಿಮ ಬಂಗಾಳದ ಸಿಎಂ ಸುವೇಂದು ಅಧಿಕಾರಿ ನೇತೃತ್ವದ ನೂತನ ಸರ್ಕಾರವು ಹಿಂದಿನ ಮಮತಾ ಬ್ಯಾನರ್ಜಿ ಸರ್ಕಾರದ ಅವಧಿಯಲ್ಲಿ ಸೇರಿಸಲಾಗಿದ್ದ ಮುಸ್ಲಿಂ ಸಮುದಾಯಗಳ ಓಬಿಸಿ ಮೀಸಲಾತಿಯನ್ನು ಸಂಪೂರ್ಣವಾಗಿ ರದ್ದುಗೊಳಿಸಿದೆ. ಇದರಿಂದಾಗಿ ರಾಜ್ಯದಲ್ಲಿದ್ದ ಒಟ್ಟು ಓಬಿಸಿ ಮೀಸಲಾತಿ ಪ್ರಮಾಣವು ಶೇಕಡ 17 ರಿಂದ ಶೇಕಡಾ 7ಕ್ಕೆ ಕುಸಿದಿದೆ.

ಮುಸ್ಲಿಮರಿಗೆ ಓಬಿಸಿ ಮೀಸಲಾತಿ ತೆಗೆದುಹಾಕಬೇಕೆಂದು ಕೋಲ್ಕತ್ತಾ ಹೈಕೋರ್ಟ್‌ನಲ್ಲಿ ಅಮಲ್‌ಚಂದ್ರ ದಾಸ್, ನೀಲಮಾಧಬ್ ಕರ್ಮಾಕರ್ ಮತ್ತು ಇತರರು ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್ 2024ರ ಮೇ 22ರಂದು ಮುಸ್ಲಿಂ ಸಮುದಾಯಗಳಿಗೆ ನೀಡಲಾಗಿದ್ದ ಓಬಿಸಿ ಮೀಸಲಾತಿಯನ್ನು ರದ್ದುಗೊಳಿಸಿ ತೀರ್ಪು ನೀಡಿತ್ತು.

2010ರ ನಂತರ ಮಮತಾ ಬ್ಯಾನರ್ಜಿ ಸರ್ಕಾರವು ಸೂಕ್ತ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆ ನಡೆಸದೇ ಕೇವಲ ಧರ್ಮದ ಆಧಾರದ ಮೇಲೆ 77 ಸಮುದಾಯಗಳನ್ನು ಓಬಿಸಿ ಮೀಸಲಾತಿ ನೀಡಿರುವುದು ಸರಿಯಲ್ಲ ಎಂದು ಹೇಳಿತ್ತು. ಈ ತೀರ್ಪನ್ನು ಪ್ರಶ್ನಿಸಿ ಟಿಎಂಸಿ ಸರ್ಕಾರವು ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿತ್ತು.

ಆದರೆ ಅಧಿಕಾರ ಪಡೆದ ಹತ್ತು ದಿನದಲ್ಲೇ ಸುವೇಂದು ಅಧಿಕಾರಿ ಸರ್ಕಾರವು ಆ ಅರ್ಜಿಯನ್ನು ಸುಪ್ರೀಂ ಕೋರ್ಟ್‌ನಿಂದ ಅಧಿಕೃತವಾಗಿ ಹಿಂಪಡೆದಿದೆ. ಹಾಗೆಯೇ ಈ ಹಿಂದಿನ ಹೈಕೋರ್ಟ್ ತೀರ್ಪು ಯಥಾವತ್ತಾಗಿ ಜಾರಿಗೊಳಿಸಿದೆ. 2010ರ ನಂತರ ವಿತರಿಸಲಾದ ಲಕ್ಷಾಂತರ ಮುಸ್ಲಿಂ ಓಬಿಸಿ ಪ್ರಮಾಣಪತ್ರಗಳು ಈಗ ರದ್ದಾಗಿವೆ. ಈ ಪರಿಷ್ಕೃತ ನೀತಿಯು ರಾಜ್ಯದ ಸರ್ಕಾರಿ ಉದ್ಯೋಗ ನೇಮಕಾತಿ ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳ ಪ್ರವೇಶ ಪ್ರಕ್ರಿಯೆಯಲ್ಲಿ ತಕ್ಷಣದಿಂದಲೇ ಜಾರಿಗೆ ಬಂದಿದೆ.

ಮುಸ್ಲಿಮರಿಗೆ ಓಬಿಸಿ ಮೀಸಲಾತಿಯನ್ನು ಹೈಕೋರ್ಟ್ ತೀರ್ಪು ಜಾರಿ ಎಂಬಂತೆ ಬಿಂಬಿಸಿದರೂ, ಮದರಸಾಗಳಲ್ಲಿ ವಿವಾದಿತ ವಂದೇಮಾತರಂ ಹಾಡುವುದು ಕಡ್ಡಾಯಗೊಳಿಸುವುದರ ವಿರುದ್ಧ ಸದ್ಯ ತೀವ್ರ ಆಕ್ರೋಶ ವ್ಯಕ್ತವಾಗಿದೆ. ಬಂಕಿಮ್‌ಚಂದ್ರ ಚಟರ್ಜಿ ಅವರು ಬರೆದ ವಂದೇ ಮಾತರಂನ ಕೆಲವು ಚರಣಗಳು ದುರ್ಗಾ ಮತ್ತು ಲಕ್ಷ್ಮಿ ದೇವತೆಯರ ಗುಣಗಾನವನ್ನು ಹೊಂದಿದೆ.

ಆದರೆ ಭಾರತ ಬಹುಸಂಸ್ಕೃತಿಯ ದೇಶ. ಒಂದೇ ಧರ್ಮದ ದೇವತೆಗಳ ಹೆಸರಿರುವ ಹಾಡುಗಳನ್ನು ಸರ್ಕಾರಿ ಕಚೇರಿ, ಶಾಲೆಗಳಲ್ಲಿ ಹಾಡುವುದು ಎಲ್ಲ ಧರ್ಮದವರಿಗೂ ಇದು ಒಪ್ಪಿಗೆಯಾಗುವುದಿಲ್ಲ. ಈ ಕಾರಣದಿಂದಾಗಿ ವಂದೇ ಮಾತರಂ ತೀವ್ರ ವಿವಾದದಲ್ಲೇ ಸಿಲುಕಿದೆ. 1937ರಲ್ಲೇ ಕಾಂಗ್ರೆಸ್ ಧಾರ್ಮಿಕ ಸಾಲುಗಳನ್ನು ಕೈಬಿಟ್ಟು, ಕೇವಲ ಮೊದಲ ಎರಡು ಚರಣಗಳನ್ನು ಮಾತ್ರ ಹಾಡಲು ನಿರ್ಧರಿಸಿತ್ತು.

ಆದರೆ ಪಶ್ಚಿಮ ಬಂಗಾಳದ ಬಿಜೆಪಿ ಸರ್ಕಾರವು ಸರ್ಕಾರಿ ಕಾರ್ಯಕ್ರಮಗಳಲ್ಲಿ, ಶಾಲೆಗಳಲ್ಲಿ ಗೀತೆಯ ಎಲ್ಲ 6 ಚರಣಗಳನ್ನು ಹಾಡುವುದನ್ನು ಕಡ್ಡಾಯಗೊಳಿಸಲಾಗಿದೆ. ಈಗ ಅಲ್ಪಸಂಖ್ಯಾತ ವಿದ್ಯಾ ಸಂಸ್ಥೆ ಮದರಸಾದಲ್ಲಿ ವಂದೇಮಾತರಂ ಗೀತೆಯನ್ನು ಹಾಡುವುದನ್ನು ಕಡ್ಡಾಯಗೊಳಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

# ಫೆಬ್ರವರಿ-ಮಾರ್ಚ್‌ನ ಗೃಹಲಕ್ಷ್ಮಿ ಹಿಂಬಾಕಿ ಹಣ ಬಿಡುಗಡೆ ಕೋರಿ ಅರ್ಜಿ: ನೋಟೀಸ್ ಜಾರಿ

**ಬೆಂಗಳೂರು, ಮೇ 21:** ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಿಗೆ 2025ರ ಫೆಬ್ರವರಿ ಹಾಗೂ ಮಾರ್ಚ್ ತಿಂಗಳ ಹಿಂಬಾಕಿ ಹಣ ಬಿಡುಗಡೆ ಮಾಡಲು ಆದೇಶಿಸುವಂತೆ ಕೋರಿ ಸಲ್ಲಿಸಲಾಗಿರುವ ಅರ್ಜಿ ಸಂಬಂಧ ರಾಜ್ಯ ಸರ್ಕಾರಕ್ಕೆ ಕರ್ನಾಟಕ ಹೈಕೋರ್ಟ್ ಗುರುವಾರ ನೋಟಿಸ್ ಜಾರಿ ಮಾಡಿದೆ.

ಗೃಹಲಕ್ಷ್ಮಿ ಯೋಜನೆಯಡಿ ಹಿಂಬಾಕಿ ಹಣ ಬಿಡುಗಡೆ ಮಾಡಲು ಸರ್ಕಾರಕ್ಕೆ ನಿರ್ದೇಶಿಸುವಂತೆ ಕೋರಿ ಬೆಂಗಳೂರಿನ ಸಿ.ಆರ್. ಗಂಗಾ ಮತ್ತು ನಂದಿನಿ ಲೇಔಟ್ ನಿವಾಸಿ ಜಿ.ಡಿ. ಪವಿತ್ರಾ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿಗಳಾದ ಸೂರಜ್ ಗೋವಿಂದರಾಜ್ ಮತ್ತು ಡಾ. ಕೆ.ಮನ್ಮಥ ರಾವ್ ಅವರ ರಜಾಕಾಲೀನ ವಿಭಾಗೀಯ ಪೀಠ ನಡೆಸಿತು.

ಅರ್ಜಿದಾರರ ಪರ ಹಿರಿಯ ವಕೀಲ ವಿಕ್ರಮ್ ಹುಯಿಲಗೋಳ ಅವರ ವಾದ ಆಲಿಸಿದ ಪೀಠವು ಪ್ರತಿವಾದಿಗಳಾದ ರಾಜ್ಯ ಹಣಕಾಸು ಇಲಾಖೆಯ ಪ್ರಧಾನ ಕಾರ್ಯದರ್ಶಿ,




ರಾಜ್ಯ ಪಂಚಾಯತ್ ರಾಜ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ನೋಟಿಸ್ ಜಾರಿ ಮಾಡಿ ವಿಚಾರಣೆ ಮುಂದೂಡಿತು.

ರಾಜ್ಯ ಸರ್ಕಾರವು 2023ರ ಮೇ 5ರಂದು ಗೃಹಲಕ್ಷ್ಮಿ ಯೋಜನೆ ಜಾರಿಗೆ ಅನುಮೋದನೆ ನೀಡಿತು. ಮನೆಯ ಮುಖ್ಯಸ್ಥರಾದ ಮಹಿಳೆಗೆ ಮಾಸಿಕ 2 ಸಾವಿರ ರೂಪಾಯಿ ನೀಡಲು ಗೃಹಲಕ್ಷ್ಮಿ ಯೋಜನೆಯನ್ನು 2023ರ ಜೂನ್ 6ರಂದು ಜಾರಿಗೊಳಿಸಿ ಸರ್ಕಾರ ಆದೇಶ ಹೊರಡಿಸಿತ್ತು. 2023ರ ಆಗಸ್ಟ್‌ನಲ್ಲಿ ಈ ಯೋಜನೆಯಡಿ ಹಣ ಬಿಡುಗಡೆ ಆರಂಭವಾಗಿತ್ತು ಎಂದು ಅರ್ಜಿಯಲ್ಲಿ ವಿವರಿಸಲಾಗಿದೆ.

ಅಲ್ಲದೇ, ಅಕ್ಟೋಬರ್ ವೇಳೆಗೆ ಈ ಯೋಜನೆಯಡಿ 1,28,80,594 ಫಲಾನುಭವಿಗಳು ನೋಂದಣಿಯಾಗಿದ್ದರು. 2023ರ ಆಗಸ್ಟ್‌ನಿಂದ 2024 ಮಾರ್ಚ್‌ವರೆಗೆ ಎಂಟು ತಿಂಗಳ ಕಾಲ ಹಣ ಬಿಡುಗಡೆ ಮಾಡಲಾಗಿತ್ತು. ಸರ್ಕಾರದ 2024–2025ನೇ ಹಣಕಾಸಿನ ಸಾಲಿಗೂ ಈ ಯೋಜನೆ ಮುಂದುವರಿಸಿತು. 2024ರ ಏಪ್ರಿಲ್‌ರಿಂದ 2025ರ ಜನವರಿವರೆಗೆ ಹಣ ಬಿಡುಗಡೆ ಮಾಡಿದ ಸರ್ಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬದಲಿಗೆ ತಾಲೂಕು ಪಂಚಾಯಿತಿ ಮೂಲಕ ಹಣವನ್ನು ಫಲಾನುಭವಿಗಳಿಗೆ ಪಾವತಿ ಮಾಡಲು ನಿರ್ಧಾರ ಕೈಗೊಂಡ ಹಿನ್ನೆಲೆಯಲ್ಲಿ 2025ರ ಫೆಬ್ರವರಿ ತಿಂಗಳ ಹಣ ಬಿಡುಗಡೆ ಮಾಡಿಲ್ಲ. ಹಾಗೆಯೇ ಮಾರ್ಚ್ ತಿಂಗಳ ಹಣವನ್ನು ಪಾವತಿ ಮಾಡಿಲ್ಲ ಎಂದು ಅರ್ಜಿಯಲ್ಲಿ ಆಕ್ಷೇಪಿಸಲಾಗಿದೆ.

ಇದರ ಪರಿಣಾಮವಾಗಿ ಹಣಕಾಸು ಇಲಾಖೆಯು ಪಾವತಿಸದ ಮೊತ್ತವನ್ನು ಹೊಸ ಹಣಕಾಸು ವರ್ಷಕ್ಕೆ ಮುಂದುವರಿಸಲು ವಿಫಲವಾದ ಕಾರಣ 2025ರಲ್ಲಿ ಸುಮಾರು ರೂ.5,000 ಕೋಟಿ ರೂಪಾಯಿ ಹಣ ಫಲಾನುಭವಿಗಳಿಗೆ ಪಾವತಿಯಾಗಿಲ್ಲ. ಯೋಜನೆಯಡಿ ಎರಡು ಕಂತು ಹಣ ಪಾವತಿಸದಿರುವುದರ ಕುರಿತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಸಾರ್ವಜನಿಕವಾಗಿ ಒಪ್ಪಿಕೊಂಡಿದ್ದರು.

2025ರ ಏಪ್ರಿಲ್ 4ರಂದು ಸರ್ಕಾರವು 2025–2026ರ ಹಣಕಾಸು ವರ್ಷಕ್ಕೆ ಜಿಲ್ಲಾ ಪಂಚಾಯಿತಿಗಳ ಮೂಲಕ ಯೋಜನೆಯ ಅನುಷ್ಠಾನಕ್ಕಾಗಿ ಹಣ ಮಂಜೂರು ಮಾಡುವ ಆದೇಶ ಮತ್ತು 2023–2024ನೇ ಆರ್ಥಿಕ ವರ್ಷಕ್ಕೆ ಅನ್ವಯವಾಗುವ ಅದೇ ನಿಯಮಗಳು ಮತ್ತು ಷರತ್ತುಗಳ ಮೇಲೆ ಯೋಜನೆಯನ್ನು ಮುಂದುವರೆಸಿತ್ತು. ಗೃಹಲಕ್ಷ್ಮಿ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಕಂತುಗಳನ್ನು ವಿತರಿಸದಿರುವುದು ಮತ್ತು ಬಾಕಿ ಹಣವನ್ನು ಬಿಡುಗಡೆ ಮಾಡಿಲ್ಲ. ಇದರಿಂದ ಬಾಕಿ ಹಣವನ್ನು ಬಿಡುಗಡೆ ಮಾಡಲು ಸರ್ಕಾರಕ್ಕೆ ನಿರ್ದೇಶಿಸಬೇಕು ಎಂದು ಅರ್ಜಿದಾರರು ಕೋರಿದ್ದಾರೆ.

# ಸೂರ್ಯನಗರ 4ನೇ ಹಂತದ ನಿವೇಶನ ಹಂಚಿಕೆಗೆ 'ಇ-ಲಾಟರಿ': ನಾಳೆ ಮುಖ್ಯಮಂತ್ರಿ ಚಾಲನೆ

ಬೆಂಗಳೂರು, ಮೇ.21: ರಾಜಧಾನಿಯಲ್ಲಿ ಸ್ವಂತ ಸೂರು ನಿರ್ಮಿಸಿಕೊಳ್ಳುವ ಕನಸಿನೊಂದಿಗೆ ನಿವೇಶನಕ್ಕಾಗಿ ಕಾದಿರುವ ಕೆಳ, ಮಧ್ಯಮ ಸೇರಿದಂತೆ ವಿವಿಧ ವರ್ಗದ ಸಾವಿರಾರು ಜನರಿಗೆ ಕರ್ನಾಟಕ ಗೃಹ ಮಂಡಳಿಯಿಂದ ನಿವೇಶನ ಪಡೆಯುವ ಶುಭ ಘಳಿಗೆ ಕೂಡಿ ಬಂದಿದೆ.

ಆನೇಕಲ್ ತಾಲೂಕಿನ ಸೂರ್ಯನಗರ 4ನೇ ಹಂತದಲ್ಲಿ ಅಭಿವೃದ್ಧಿಪಡಿಸಿರುವ ಬಡಾವಣೆಯಲ್ಲಿ ನಿವೇಶನಗಳನ್ನು ಹಂಚಿಕೆ ಮಾಡಲು 'ಇ–ಲಾಟರಿ' ಪ್ರಕ್ರಿಯೆಗೆ ಮೇ 23ರಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಚಾಲನೆ ನೀಡಲಿದ್ದಾರೆ. ಈ ಮೂಲಕ ತೀವ್ರಗತಿಯ ಅಭಿವೃದ್ಧಿ, ಏರುತ್ತಿರುವ ಬೆಲೆಯ ನಡುವೆ ಸ್ವಂತ ಮನೆ ನಿರ್ಮಿಸಿಕೊಳ್ಳುವ ನೂರಾರು ಕುಟುಂಬಗಳ ಕನಸು ನನಸಾಗಲು ಮಂಡಳಿ ನೀರೆರೆಯಲಿದೆ.



ನಿವೇಶನಗಳ ಹಂಚಿಕೆಗೆ 2017–18ರಲ್ಲಿಅರ್ಜಿ ಕರೆಯಲಾಗಿತ್ತು. ನಂತರ ಕಾನೂನು ತೊಡಕುಗಳು ಮುಗಿದ ಬಳಿಕ ವಿವಿಧ ಅಳತೆಯ ನಿವೇಶನಗಳನ್ನು ರಚಿಸಲಾಗಿದೆ. ಚದರ ಅಡಿಗೆ 1425 ರೂ.ನಿಂದ 2,975ರೂ.ವರೆಗೆ ದರ ನಿಗದಿಪಡಿಸಲಾಗಿದೆ. ದರದಲ್ಲಿ ಆರ್ಥಿಕ ಹಿಂದುಳಿದ ವರ್ಗದವರಿಗೆ ಶೇ.50 ರಿಯಾಯಿತಿ ನೀಡಿದೆ.

**14000 ನಿವೇಶನಕ್ಕೆ 16222 ಅರ್ಜಿ:** 1200 ಎಕರೆಯಲ್ಲಿ ಅಭಿವೃದ್ಧಿಪಡಿಸಿರುವ ನಿವೇಶನಗಳಲ್ಲಿ ಸುಮಾರು 14000 ನಿವೇಶನಗಳಿಗೆ 16222 ಅರ್ಜಿಗಳು ಸಲ್ಲಿಕೆಯಾಗಿವೆ.

ಈ ಪೈಕಿ ಮೊದಲ ಹಂತದಲ್ಲಿ 2390 ನಿವೇಶನಗಳನ್ನು ಹಂಚಿಕೆ ಮಾಡಲು ಉದ್ದೇಶಿಸಿದ್ದು, ಉಳಿದವುಗಳನ್ನು ನಂತರದ ದಿನಗಳಲ್ಲಿ ಹಂಚಿಕೆ ಮಾಡಲಾಗುತ್ತದೆ. ಈಗಾಗಲೇ ಅಂತಿಮ ಅರ್ಹ ಪಟ್ಟಿಯನ್ನು ಪ್ರಕಟಿಸಲಾಗಿದೆ. ಮೇ 23ರಂದು ಇಂಡ್ಲವಾಡಿಯಲ್ಲಿ ಹಮ್ಮಿಕೊಂಡಿರುವ ಅಂತಾರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂ ಶಂಕುಸ್ಥಾಪನೆ ಕಾರ್ಯಕ್ರಮದ ವೇಳೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ವಸತಿ ಸಚಿವ ಜಮೀರ್ ಅಹಮದ್ ಅವರು 'ಇ–ಲಾಟರಿ' ಮೂಲಕ ಹಂಚಿಕೆ ಮಾಡಲಿದ್ದಾರೆ ಎಂದು ಮಂಡಳಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ



ನೀಟ್–ಯುಜಿ ಪ್ರಶ್ನೆಪತ್ರಿಕೆ ಸೋರಿಕೆ ವಿವಾದದ ಬಗ್ಗೆ ನ್ಯಾಯಯುತ ತನಿಖೆ ಮತ್ತು ಹೊಣೆಗಾರಿಕೆಗೆ ಒತ್ತಾಯಿಸಿ ಗುರುವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಿಂದ ಕೆಪಿಸಿಸಿ ನಡೆಸಿದ ರಾಜಭವನ ಚಲೋದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಎಐಸಿಸಿ ಪ್ರಧಾನ ಕಾರ್ಯದರ್ಶಿ ರಂದೀಪ್ ಸುರ್ಜೇವಾಲಾ, ಎಐಸಿಸಿ ಯುವ ಕಾಂಗ್ರೆಸ್ ಅಧ್ಯಕ್ಷ ಉದಯ್‌ಭಾನು ಚಿಬ್, ಕೆಪಿಸಿಸಿ ಯುವ ಕಾಂಗ್ರೆಸ್ ಅಧ್ಯಕ್ಷ ಎಂಎಸ್ ಮಂಜುನಾಥ್ ಭಾಗವಹಿಸಿದ್ದರು.

### ಬಿಬಿಎಂಪಿ 2009-2014ರ ಅವಧಿಯಲ್ಲಿ 118 ಕೋಟಿ ರೂ. ಗೋಲ್‌ಮಾಲ್

# ವಿಚಾರಣೆಗೆ ಒಳಪಡಬೇಕಿರುವ 310 ಇಂಜನಿಯರ್‌ಗಳ ಪತ್ತೆಗೆ ಜಿಬಿಎ ಕ್ರಮ

ಬೆಂಗಳೂರು, ಮೇ 21: ಹಿಂದಿನ ಬಿಬಿಎಂಪಿ ಅವಧಿಯಲ್ಲಿ ನಡೆದಿದೆ ಎನ್ನಲಾದ ಬಹುಕೋಟಿ ಅಕ್ರಮ ಕಾಮಗಾರಿ ಮತ್ತು ನಕಲಿ ಬಿಲ್ ಹಗರಣ ಪ್ರಕರಣ ಇದೀಗ ಮತ್ತೆ ಚರ್ಚೆಗೆ ಬಂದಿದೆ.

2009 ರಿಂದ 2014ರ ಅವಧಿಯಲ್ಲಿ ಗಾಂಧಿನಗರ, ಮಲ್ಲೇಶ್ವರ ಮತ್ತು ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರಗಳಲ್ಲಿ ನಡೆದ ಸಾರ್ವಜನಿಕ ಕಾಮಗಾರಿಗಳ ಹೆಸರಿನಲ್ಲಿ ಸುಮಾರು 118 ಕೋಟಿ ರೂಪಾಯಿ ಗೋಲ್ಮಾಲ್ ನಡೆದಿರುವ ಆರೋಪ ಕೇಳಿಬಂದಿದ್ದು, ಈ ಸಂಬಂಧ ವಿಚಾರಣೆಗೆ ಒಳಪಡಬೇಕಿರುವ 310 ಇಂಜಿನಿಯರ್‌ಗಳ ಪತ್ತೆಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮುಂದಾಗಿದೆ.

**ಏನು ಪ್ರಕರಣ:** ಅವಧಿಯಲ್ಲಿ ಕಾಮಗಾರಿಗಳು ವಾಸ್ತವವಾಗಿ ನಡೆಯದೇ ಇದ್ದರೂ, ನಕಲಿ ಬಿಲ್‌ಗಳನ್ನು ಸೃಷ್ಟಿಸಿ ಹಣ ಬಿಡುಗಡೆ ಮಾಡಲಾಗಿದೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ ಸರ್ಕಾರವು ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್ ನೇತೃತ್ವದಲ್ಲಿ ತನಿಖಾ ಸಮಿತಿಯನ್ನು ರಚಿಸಿತ್ತು.

ಸಮಿತಿಯು ಕೂಲಂಕುಷ ಪರಿಶೀಲನೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಿದ್ದು, ವರದಿ ಆಧರಿಸಿ ಆ ಸಮಯದಲ್ಲಿ ಕಾರ್ಯನಿರ್ವಹಿಸಿದ್ದ ಅಧಿಕಾರಿಗಳು ಮತ್ತು ಇಂಜಿನಿಯರ್‌ಗಳ ವಿರುದ್ಧ ವಿಚಾರಣೆ ನಡೆಸುವಂತೆ



ಸೂಚಿಸಲಾಗಿದೆ.

**ಯಾರಿಗೆ ನೋಟಿಸ್?:** ಆ ಅವಧಿಯಲ್ಲಿ ಸಂಬಂಧಿತ ವಲಯಗಳಲ್ಲಿ ಕೆಲಸ ಮಾಡಿದ್ದ AE, AEE ಮತ್ತು EE ಹುದ್ದೆಯ ಒಟ್ಟು 310 ಇಂಜಿನಿಯರ್‌ಗಳಿಗೆ ನೋಟಿಸ್ ಜಾರಿಗೊಳಿಸಲು ಜಿಬಿಎ ಮುಂದಾಗಿದೆ. ಆದರೆ, ಅಚ್ಚರಿಯ ಸಂಗತಿಯೆಂದರೆ ಇವರ ವಿಳಾಸ ಮತ್ತು ಸೇವಾ ವಿವರಗಳೇ ಲಭ್ಯವಾಗುತ್ತಿಲ್ಲ.

**ಇಂಜಿನಿಯರ್‌ಗಳು ನಾಪತ್ತೆ:** ಜಿಬಿಎ ಅಧಿಕಾರಿಗಳ ಪ್ರಕಾರ, ಆ ಕಾಲದ ಬಿಬಿಎಂಪಿ ದಾಖಲೆಯಲ್ಲಿಯೂ ಹಲವರ ಮಾಹಿತಿ ಲಭ್ಯವಿಲ್ಲ. ಕೆಲವರು ಬೇರೆ ಇಲಾಖೆಯಿಂದ ವರ್ಗಾವಣೆ ಆಗಿ ಬಂದಿದ್ದರೆ, ಕೆಲವರು ನಿವೃತ್ತರಾಗಿರುವ ಸಾಧ್ಯತೆಯಿದೆ. ಈಗ ಅವರು ಯಾವ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ ಅಥವಾ ಎಲ್ಲಿದ್ದಾರೆ ಎಂಬ ಮಾಹಿತಿ ಕೂಡ ಸ್ಪಷ್ಟವಾಗಿಲ್ಲ.

ಈ ಹಿನ್ನೆಲೆಯಲ್ಲಿ ಸಾರ್ವಜನಿಕ ಪ್ರಕಟಣೆ ಹೊರಡಿಸಿರುವ ಜಿಬಿಎ, ಸಂಬಂಧಿತ ಇಂಜಿನಿಯರ್‌ಗಳು ವಿಚಾರಣೆಗೆ ಸಹಕರಿಸುವಂತೆ ಜಿಬಿಎ ಚೀಫ್ ಕಮೀಷನರ್ ಮಹೇಶ್ವರ್ ರಾವ್ ಮನವಿ ಮಾಡಿದ್ದಾರೆ.

**ಸರ್ಕಾರದ ಸೂಚನೆ ಮೇರೆಗೆ ಕ್ರಮ:** ಜಿಬಿಎ ಮುಖ್ಯ ಆಯುಕ್ತ ಮಹೇಶ್ವರರಾವ್ ಮಾತನಾಡಿ, ಇದು ಬಹಳ ಹಿಂದಿನ ಅವಧಿಯಲ್ಲಿ ನಡೆದಿದೆ ಎನ್ನಲಾದ ಅಕ್ರಮ. ಸರ್ಕಾರದಿಂದ ಈಗ ಸೂಚನೆ ಬಂದಿದೆ.

ಹೀಗಾಗಿ ಸಂಬಂಧಿತ ಇಂಜಿನಿಯರ್‌ಗಳ ಮಾಹಿತಿ ಕಲೆ ಹಾಕಲಾಗುತ್ತಿದೆ. ಆದರೆ ಅವರ ವಿವರಗಳು ಪಾಲಿಕೆಯ ದಾಖಲೆಗಳಲ್ಲಿ ಲಭ್ಯವಾಗುತ್ತಿಲ್ಲ. ಕೆಲವರು ಬೇರೆ ಇಲಾಖೆಯಿಂದ ಬಂದಿದ್ದರು. ಈಗ ಅವರು ಎಲ್ಲಿದ್ದಾರೆ, ನಿವೃತ್ತರಾಗಿದ್ದಾರೆಯೇ ಎಂಬುದು ಸ್ಪಷ್ಟವಾಗಿಲ್ಲ. ವಿಚಾರಣೆಗೆ ಸಹಕರಿಸುವಂತೆ ಸಾರ್ವಜನಿಕ ಪ್ರಕಟಣೆ ನೀಡಿದ್ದೇವೆ. 15 ದಿನಗಳ ಕಾಲಾವಕಾಶ ನೀಡಿದ್ದೇವೆ. ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

### ರಾಜ್ಯ ಬಿಜೆಪಿ ಅಧ್ಯಕ್ಷರ ಆಯ್ಕೆ ಸಂಬಂಧ ಅಭಿಪ್ರಾಯ ಸಂಗ್ರಹ

# ಶಾಸಕರು, ಸಂಸದರು, ಮುಖಂಡರ ಜತೆ ರಾಷ್ಟ್ರೀಯ ಸಹ ಸಂಘಟನಾ ಕಾರ್ಯದರ್ಶಿ ಶಿವಪ್ರಕಾಶ್ ಚರ್ಚೆ

## ರಾಷ್ಟ್ರೀಯ ಅಧ್ಯಕ್ಷರಿಗೆ ವರದಿ ಸಲ್ಲಿಕೆ

**ಬೆಂಗಳೂರು, ಮೇ 21** ರಾಜ್ಯ ಬಿಜೆಪಿ ಅಧ್ಯಕ್ಷರ ನೇಮಕಾತಿ ಸಂಬಂಧ ಅಭಿಪ್ರಾಯ ಸಂಗ್ರಹ ಪ್ರಕ್ರಿಯೆ ನಡೆದಿದ್ದು, ಹಾಲಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಮುಂದುವರಿಯುತ್ತಾರೆಯೇ, ಇಲ್ಲವೇ ರಾಜ್ಯ ಬಿಜೆಪಿಗೆ ಹೊಸ ಸಾರಥಿ ನೇಮಕವಾಗುತ್ತಾರೆಯೇ ಎಂಬ ಕುತೂಹಲ ಮೂಡಿದೆ.

ರಾಜ್ಯ ಬಿಜೆಪಿಗೆ ಪೂರ್ಣಾವಧಿ ಅಧ್ಯಕ್ಷರ ನೇಮಕ ಸಂಬಂಧ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಸೂಚನೆಯಂತೆ ಬಿಜೆಪಿಯ ರಾಷ್ಟ್ರೀಯ ಸಹ ಸಂಘಟನಾ ಕಾರ್ಯದರ್ಶಿ ಶಿವಪ್ರಕಾಶ್ ಅವರು ನಿನ್ನೆ ಬೆಂಗಳೂರಿಗೆ ಆಗಮಿಸಿದ್ದು, ಇಂದು ನೂತನ ಅಧ್ಯಕ್ಷರ ನೇಮಕಾತಿ ಸಂಬಂಧ ಎಲ್ಲರ ಅಭಿಪ್ರಾಯಗಳನ್ನು ಸಂಗ್ರಹಿಸಿದರು.

ಬೆಂಗಳೂರಿನ ಬಿಜೆಪಿ ಪ್ರಧಾನ ಕಚೇರಿಯಲ್ಲಿಂದು ಇಡೀ ದಿನ ಬಿಜೆಪಿಯ ಎಲ್ಲಾ ಶಾಸಕರು, ಸಂಸದರು, ಪ್ರಮುಖ ಮುಖಂಡರು, ಪದಾಧಿಕಾರಿಗಳು ಹಾಗೂ ಹಿರಿಯ ನಾಯಕರನ್ನು ಪ್ರತ್ಯೇಕವಾಗಿ ಭೇಟಿ ಮಾಡಿ ನೂತನ ಅಧ್ಯಕ್ಷರ ಆಯ್ಕೆ ಸಂಬಂಧ ಅವರ ಅಭಿಪ್ರಾಯಗಳನ್ನು ಶಿವಪ್ರಕಾಶ್ ಆಲಿಸಿದರು. ನಂತರ



ರಾಜ್ಯ ಕೋರ್ ಕಮಿಟಿ ಸಭೆಯಲ್ಲೂ ಪಾಲ್ಗೊಂಡು ನೂತನ ರಾಜ್ಯಾಧ್ಯಕ್ಷರ ನೇಮಕಾತಿ ಸಂಬಂಧ ಪ್ರಮುಖ ಮುಖಂಡರ ಜತೆಯೂ ಸಮಾಲೋಚನೆ ನಡೆಸಿದರು. ಎಲ್ಲ ಅಭಿಪ್ರಾಯಗಳನ್ನು ಸಂಗ್ರಹಿಸಿರುವ ಶಿವಪ್ರಕಾಶ್ ಅವರು ನಾಳೆ ದೆಹಲಿಗೆ ತೆರಳಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರಿಗೆ ನೂತನ ಅಧ್ಯಕ್ಷರ ನೇಮಕಾತಿ ಸಂಬಂಧ ವರದಿ ಸಲ್ಲಿಸಲಿದ್ದಾರೆ.

ಇದರ ಆಧಾರದಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರು ರಾಜ್ಯವನ್ನು ಪ್ರತಿನಿಧಿಸುವ ಕೇಂದ್ರ ಸಚಿವರು ಹಾಗೂ ಹಿರಿಯ ನಾಯಕರುಗಳ ಜತೆ ಮತ್ತೊಮ್ಮೆ ಸಮಾಲೋಚನೆ ನಡೆಸಿ ನೂತನ ಅಧ್ಯಕ್ಷರ ಆಯ್ಕೆಯನ್ನು ಪ್ರಕಟಿಸುವರು ಎಂದು ಹೇಳಲಾಗಿದೆ.

ಇದೇ ತಿಂಗಳ 25ರಂದು ನಿತಿನ್ ನಬಿನ್ ರಾಜ್ಯಕ್ಕೆ ಆಗಮಿಸಲಿದ್ದು, ಆ ಸಂದರ್ಭದಲ್ಲಿ ಅವರು ನೂತನ ಅಧ್ಯಕ್ಷರ ಆಯ್ಕೆಯನ್ನು ಅಂತಿಮ ಗೊಳಿಸುವರು ಎಂದು ಬಿಜೆಪಿಯ ಮೂಲಗಳು ಹೇಳಿವೆ.

# ಚುನಾವಣಾ ರಾಜಕೀಯಕ್ಕಾಗಿ ಲೋಕಸಭೆ ಕ್ಷೇತ್ರಗಳ ಹೆಚ್ಚಳ ಅತಾರ್ಕಿಕ: ಡಾ.ಎಚ್.ಸಿ. ಮಹದೇವಪ್ಪ

**ಬೆಂಗಳೂರು, ಮೇ. 21:** ಜನಸಂಖ್ಯೆ ಯನ್ನು ಮಾನವ ಸಂಪನ್ಮೂಲವಾಗಿ ಪರಿವರ್ತಿಸಬೇಕಾದ ಕೇಂದ್ರ ಸರ್ಕಾರವು ಜನಸಂಖ್ಯಾ ನಿಯಂತ್ರಣದ ಬಗ್ಗೆ ಅರಿವು ಮೂಡಿಸಿ, ಕಾರ್ಯಕ್ರಮ ಹಮ್ಮಿಕೊಳ್ಳುವುದನ್ನು ಬಿಟ್ಟು, ಚುನಾವಣಾ ರಾಜಕೀಯ ದೃಷ್ಟಿಯಿಂದ ಅತಾರ್ಕಿಕವಾಗಿ ಲೋಕಸಭಾ ಕ್ಷೇತ್ರಗಳ ಹೆಚ್ಚಳಕ್ಕೆ ಮುಂದಾಗಿರುವುದು ಅತ್ಯಂತ ಕೆಟ್ಟ ಸಂಗತಿ' ಎಂದು ಸಮಾಜ ಕಲ್ಯಾಣ ಸಚಿವ ಎಚ್.ಸಿ. ಮಹದೇವಪ್ಪ ಅಭಿಪ್ರಾಯಪಟ್ಟಿದ್ದಾರೆ.

ಜನಸಂಖ್ಯೆ ಆಧರಿಸಿ ಉತ್ತರದ ರಾಜ್ಯಗಳಿಗೆ ಹೆಚ್ಚಿನ ಚುನಾವಣಾ ಕ್ಷೇತ್ರಗಳನ್ನು ನೀಡಿ, ದಕ್ಷಿಣದ ರಾಜ್ಯಗಳಿಗೆ ಕಡಿಮೆ ಚುನಾವಣಾ ಕ್ಷೇತ್ರಗಳನ್ನು ನೀಡುವ ಕೇಂದ್ರದ ಹುನ್ನಾರವು ದಕ್ಷಿಣ ಭಾರತ ವಿರೋಧಿ ನಡೆಯಾಗಿದೆ ಎಂದಿದ್ದಾರೆ.

ತೆರಿಗೆ ಪಾವತಿಯಿಂದ ಹಿಡಿದು, ದೇಶದ ಅಭಿವೃದ್ಧಿಯ ಎಲ್ಲ ಮಗ್ಗುಲು ಗಳಲ್ಲೂ ದಕ್ಷಿಣ ಭಾರತದ ರಾಜ್ಯಗಳು ತನ್ನದೇ ಆದ ಕೊಡುಗೆ ನೀಡಿವೆ. ಕೇಂದ್ರದ ಬಿಜೆಪಿ ಸರ್ಕಾರ, ದಕ್ಷಿಣದ ರಾಜ್ಯಗಳ ರಾಜಕೀಯ ಅಸ್ಮಿತೆಗೆ ಕೊಡಲಿ ಪೆಟ್ಟು ನೀಡುವ ದುರುದ್ದೇಶ ದಿಂದ ಉತ್ತರ ಭಾರತಕ್ಕೆ ಹೆಚ್ಚು ಮತ್ತು ದಕ್ಷಿಣ ಭಾರತಕ್ಕೆ ಕಡಿಮೆ ಮತ ಕ್ಷೇತ್ರಗಳನ್ನು ಹಂಚಿಕೆ ಮಾಡಲು ಹೊರಟಿರುವುದನ್ನು ದಕ್ಷಿಣದ ರಾಜ್ಯಗಳು ಖಂಡಿಸಬೇಕು ಎಂದಿದ್ದಾರೆ.

ಕ್ಷೇತ್ರಗಳ ಹೆಚ್ಚಳದ ಮಸೂದೆಯನ್ನು ಈಗಾಗಲೇ




ಅನುಮೋದಿತವಾಗಿದ್ದ ಮಹಿಳಾ ಮೀಸಲಾತಿ ಮಸೂದೆಯ ಒಳಗಿಟ್ಟು, ದಕ್ಷಿಣದ ರಾಜ್ಯಗಳನ್ನು ಹಣಿಯಲು ಕೇಂದ್ರದ ಬಿಜೆಪಿಗರು ಸಂಚು ರೂಪಿಸಿದ್ದರು. ಅಲ್ಲದೆ, ಮತ ಕ್ಷೇತ್ರಗಳ ಹೆಚ್ಚಳ ಕಾಯ್ದೆಯನ್ನು, ಮುನ್ನೆಲೆಗೆ ತಾರದೇ, ಒಳಗಿಂದೊಳಗೆಯೇ ಮಾಡುವ ಉದ್ದೇಶವು ಕೇಂದ್ರ ಸರ್ಕಾರದ ಕುತಂತ್ರವಾಗಿದೆ ಎಂದಿದ್ದಾರೆ.

# ಕೆಫಿಎ: ನೇಮಕಾತಿಗೆ ಅರ್ಜಿ ಆಹ್ವಾನ

**ಬೆಂಗಳೂರು, ಮೇ 21:** ಕೃಷಿ ಮಾರಾಟ, ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಮತ್ತು ಬೆಂಗಳೂರು ಜಲಮಂಡಲಿಯಲ್ಲಿ ಖಾಲಿ ಇರುವ ವಿವಿಧ ರೀತಿಯ ಒಟ್ಟು 37 ಎಂಜಿನಿಯರ್ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಿದ್ದು, ಅರ್ಜಿ ಸಲ್ಲಿಸಲು ಜೂನ್ 4 ಕೊನೇ ದಿನ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ತಿಳಿಸಿದ್ದಾರೆ.

ಪರಿಶಿಷ್ಟ ಜಾತಿಯ ಒಳ ಮೀಸಲಾತಿ ನಿಗದಿ ನಂತರ ಪರೀಕ್ಷೆ ನಡೆಸದೇ ಇರುವ ನೇಮಕಾತಿ ಪ್ರಕ್ರಿಯೆಯನ್ನು ತಡೆ ಹಿಡಿದು, ಮರು ಅಧಿಸೂಚನೆ ಹೊರಡಿಸಲು ಸರ್ಕಾರ ಸೂಚಿಸಿತ್ತು. ಆ ಪ್ರಕಾರ ಸಂಬಂಧಪಟ್ಟ ಇಲಾಖೆಗಳಿಂದ ಒಳ ಮೀಸಲಾತಿ ಅಳವಡಿಸಿಕೊಂಡು ಮರು ಅಧಿಸೂಚನೆ ಹೊರಡಿಸಿದ ನಂತರ ಅರ್ಜಿ ಕರೆದಿದ್ದು, ಈ ಹಿಂದೆ ಅರ್ಜಿ ಸಲ್ಲಿಸಿದವರು ಪುನಃ ಅರ್ಜಿ ಸಲ್ಲಿಸುವ ಅಗತ್ಯ ಇಲ್ಲ ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಪರಿಶಿಷ್ಟ ಜಾತಿಯ ಎ, ಬಿ ಮತ್ತು ಸಿ ವರ್ಗ ಗಳ ಆರ್ ಡಿ ಸಂಖ್ಯೆ ದಾಖಲು ಮಾಡದವರು ಕೂಡ ಈ ಹಿಂದಿನ ಅರ್ಜಿಯಲ್ಲೇ ಎಡಿಟ್ ಮಾಡಿ, ದಾಖಲಿಸಬಹುದು



ಎಂದು ಅವರು ವಿವರಿಸಿದ್ದಾರೆ. ಹೊಸದಾಗಿ ಅರ್ಜಿ ಸಲ್ಲಿಸುವವರು ಕೂಡ ಅರ್ಜಿ ಸಲ್ಲಿಸಬಹುದು. ಆದರೆ ಈ ಹುದ್ದೆಗಳಿಗೆ ಈ ಮೊದಲು ಅರ್ಜಿ ಸಲ್ಲಿಸಿದ್ದು, ಪುನಃ ಸಲ್ಲಿಸುವ ಅಗತ್ಯ ಇರುವುದಿಲ್ಲ ಎಂದು ಅವರು ತಿಳಿಸಿದರು.

## ನಾಳೆ ಡಿಸಿಇಟಿ, ಎಂ.ಟೆಕ್ ಪ್ರವೇಶ ಪರೀಕ್ಷೆ

**ಬೆಂಗಳೂರು, ಮೇ 21:** ಎಂಜಿನಿಯರಿಂಗ್ ಕೋರ್ಸ್‌ನ ಮೂರನೇ ಸೆಮಿಸ್ಟರ್ ಅಥವಾ ಎರಡನೇ ವರ್ಷಕ್ಕೆ ಪ್ರವೇಶ ಕಲ್ಪಿಸುವ ಡಿಸಿಇಟಿ ಹಾಗೂ ಎಂ.ಟೆಕ್/ಎಂಇ ಪ್ರವೇಶ ಪರೀಕ್ಷೆಗಳು ಮೇ 23ರಂದು ನಡೆಯಲಿದ್ದು ಸಕಲ ತಯಾರಿ ಮಾಡಿಕೊಳ್ಳಲಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ.

ಈ ಎರಡೂ ಪರೀಕ್ಷೆಗಳು ಅಂದು ಬೆಂಗಳೂರು, ಬಳ್ಳಾರಿ, ಬಾಗಲಕೋಟೆ, ದಾವಣಗೆರೆ, ಧಾರವಾಡ, ಕಲ್ಬುರ್ಗಿ, ಮೈಸೂರು ಮತ್ತು ತುಮಕೂರು ಕೇಂದ್ರಗಳಲ್ಲಿ ನಡೆಯಲಿವೆ ಎಂದು ಅವರು ವಿವರಿಸಿದ್ದಾರೆ. ಡಿಸಿಇಟಿ ಪರೀಕ್ಷೆಯನ್ನು 51 ಕೇಂದ್ರಗಳಲ್ಲಿ ಒಟ್ಟು 21,095 ಹಾಗೂ ಎಂ.ಟೆಕ್ ಪರೀಕ್ಷೆಯನ್ನು 26 ಕೇಂದ್ರಗಳಲ್ಲಿ ಒಟ್ಟು 12,116 ಅಭ್ಯರ್ಥಿಗಳು ಬರೆಯುತ್ತಿದ್ದಾರೆ. ಈ ಎರಡೂ ಕೋರ್ಸ್ ಗಳಿಂದ ಒಟ್ಟು 34,211 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದು ಬಿಗಿ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಇದಲ್ಲದೇ ಹೊರನಾಡು, ಗಡಿನಾಡು ಅಭ್ಯರ್ಥಿಗಳಿಗೆ ಕಡ್ಡಾಯ ಕನ್ನಡ ಪರೀಕ್ಷೆ ಕೂಡ ಬೆಂಗಳೂರಿನಲ್ಲಿ ಅಂದು ನಡೆಯಲಿದೆ ಎಂದು ಅವರು ವಿವರಿಸಿದ್ದಾರೆ.

### ಲ್ಯಾಂಡಿಂಗ್ ವೇಳೆ ನೆಲಕ್ಕಪ್ಪಳಿಸಿದ ಏರ್‌ಇಂಡಿಯಾ ವಿಮಾನದ ಬಾಲ

# ಸುರಕ್ಷಿತವಾಗಿ ರನ್‌ವೇನಲ್ಲಿ ವಿಮಾನ ಇಳಿಸಿದ ಪೈಲಟ್, ತಪ್ಪಿದ ಅಪಘಾತ

**ಬೆಂಗಳೂರು, ಮೇ 21:** ಏರ್ ಇಂಡಿಯಾ ವಿಮಾನವೊಂದು ಸ್ವಲ್ಪದರಲ್ಲೇ ಅಪಘಾತದಿಂದ ಪಾರಾಗಿದೆ. ದೆಹಲಿಯಿಂದ ಆಗಮಿಸಿದ ವಿಮಾನ ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಲ್ಯಾಂಡ್ ಆಗುತ್ತಿದ್ದಾಗ, ಅದರ ಬಾಲದ ಭಾಗವು ರನ್‌ವೇಗೆ ಅಪ್ಪಳಿಸಿದೆ. ಆದರೆ ವಿಮಾನ ಯಾವುದೇ ಅಪಾಯ ಇಲ್ಲದೇ ಸುರಕ್ಷಿತವಾಗಿ ಲ್ಯಾಂಡ್ ಆಗು ತ್ತಿರುವಂತೆಯೇ ಎಲ್ಲರೂ ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದಾರೆ.

ವಿಮಾನದಲ್ಲಿ 181 ಜನರಿದ್ದರು. ಈ ಘಟನೆಯ ಹಿನ್ನೆಲೆಯಲ್ಲಿ, ವಿಮಾನವನ್ನು ತಪಾಸಣೆ ನಡೆಸಲಾ ಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪರಿಣಾಮ ದೆಹಲಿಗೆ ಹಿಂತಿರುಗುವ ವಿಮಾನದ ಸಂಚಾರವನ್ನು ಸಹ ರದ್ದುಗೊಳಿಸಲಾಗಿದೆ.



**ಘಟನೆಯನ್ನು ದೃಢಪಡಿಸಿದ ಏರ್ ಇಂಡಿಯಾ:** ಏರ್ ಇಂಡಿಯಾ ಈ ಘಟನೆಯನ್ನು ದೃಢಪಡಿಸಿದೆ. ಈ ವಿಷಯದ ಬಗ್ಗೆ ತನಿಖೆ ನಡೆಸುವುದಾಗಿ ಘೋಷಿಸಿದೆ.

ಈ ಘಟನೆಯಿಂದ ತೊಂದರೆಗೊಳಗಾದ ಪ್ರಯಾಣಿಕರಿಗೆ ಪರ್ಯಾಯ ವ್ಯವಸ್ಥೆಗಳನ್ನು ಮಾಡಲಾಗುತ್ತಿದೆ ಎಂದು ವಿಮಾನಯಾನ ಸಂಸ್ಥೆ ತಿಳಿಸಿದೆ. ಬೆಂಗಳೂರಿನಲ್ಲಿರುವ ತಮ್ಮ ತಂಡಗಳು ಅಗತ್ಯವಿರುವ ಎಲ್ಲಾ ಸಹಾಯವನ್ನು ನೀಡುತ್ತಿವೆ ಎಂದು ಹೇಳಿದೆ.

ಈ ಘಟನೆಯಿಂದ ಆದ ಅನಾನುಕೂಲತೆಗೆ ವಿಮಾನಯಾನ ಸಂಸ್ಥೆ ವಿಷಾದ ವ್ಯಕ್ತಪಡಿಸಿದೆ. ಪ್ರಯಾಣಿಕರು ಮತ್ತು ಸಿಬ್ಬಂದಿಯ ಸುರಕ್ಷತೆಯೇ ಸಂಸ್ಥೆಯ ಮೊದಲ ಆದ್ಯತೆ ಎಂದು ಏರ್ ಇಂಡಿಯಾ ಮತ್ತೊಮ್ಮೆ ಸ್ಪಷ್ಟಪಡಿಸಿದೆ.

# ಟೆಕ್ಕಿಗಳಿಗಿಂತ ತರಕಾರಿ ವ್ಯಾಪಾರಿಯೇ ಸ್ಮಾರ್ಟ್, ತಲೆಗೆ ಐಫೋನ್, ಕಟ್ಟಿಕೊಂಡು ಡೇಟಾ ಸಂಗ್ರಹ, ತಿಂಗಳಿಗೆ ಲಕ್ಷ ರೂ.ಗಳಿಗೂ ಹೆಚ್ಚು ಆದಾಯ

**ಬೆಂಗಳೂರು, ಮೇ 21:** ಸಿಲಿಕಾನ್ ಸಿಟಿ ಬೆಂಗಳೂರು ತಂತ್ರಜ್ಞಾನದ ಹಬ್ ಅನ್ನುವುದರಲ್ಲಿ ಯಾವುದೇ ಸಂಶಯವಿಲ್ಲ. ಆದರೆ, ಇಲ್ಲಿನ ಸಾಮಾನ್ಯ ತರಕಾರಿ ವ್ಯಾಪಾರಿಯೊಬ್ಬರು ಐಫೋನ್ ಮತ್ತು ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ತಂತ್ರಜ್ಞಾನ ಬಳಸಿ ಕಾರ್ಪೊರೇಟ್ ಉದ್ಯೋಗಿಗಳಿಗಿಂತಲೂ ಹೆಚ್ಚು ಆದಾಯ ಗಳಿಸುತ್ತಿರುವ ರೋಚಕ ಸಂಗತಿಯೊಂದು ಈಗ ಬೆಳಕಿಗೆ ಬಂದಿದೆ ತಲೆಯ ಮೇಲೆ ಐಫೋನ್ ಕಟ್ಟಿಕೊಂಡು ಓಡಾಡುತ್ತಿರುವ ಈ ಯುವಕನ ವಿಡಿಯೋ ಸದ್ಯ ಸೋಷಿಯಲ್ ಮೀಡಿಯಾದಲ್ಲಿ ಭಾರಿ ವೈರಲ್ ಆಗುತ್ತಿದ್ದು, ನೆಟ್ಟಿಗರನ್ನು ಒಮ್ಮೆಗೆ ಆಶ್ಚರ್ಯ ಮತ್ತು ಗೊಂದಲದ ಕಡಲಲ್ಲಿ ತೇಲಿಸಿದೆ.

ವೈಭವ್ ಎಂಬ ವ್ಯಕ್ತಿ ತಮ್ಮ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಈ ಅಪರೂಪದ ದೃಶ್ಯವನ್ನು ಹಂಚಿಕೊಂಡಿದ್ದಾರೆ. 'ನಾನು ಸ್ಕೂಟಿಯಲ್ಲಿ ರಸ್ತೆಯ ಬದಿಯಲ್ಲಿ ಹೋಗುತ್ತಿದ್ದಾಗ ಈ ವಿಭಿನ್ನ ಸಿಸ್ಟಮ್ ನೋಡಿ ಶಾಕ್ ಆದೆ. ತಕ್ಷಣವೇ ಬೈಕ್ ನಿಲ್ಲಿಸಿ ಆ ತರಕಾರಿ ವ್ಯಾಪಾರಿಯನ್ನು ಮಾತನಾಡಿಸಿ ವಿಡಿಯೋ



ಮಾಡಿದೆ' ಎಂದು ಬರೆದುಕೊಂಡಿದ್ದಾರೆ. ಆ ಯುವಕ ಸಾಮಾನ್ಯ ತರಕಾರಿ ವ್ಯಾಪಾರದ ಜೊತೆಗೆ ಜಾಗತಿಕ ಮಟ್ಟದ ಎಐ ಮಾದರಿಗಳಿಗೆ ತರಬೇತಿ ನೀಡುವ ಹೈಟೆಕ್ ಕೆಲಸದಲ್ಲೂ ತೊಡಗಿಸಿಕೊಂಡಿರುವುದು ಆಗ ರಿವೀಲ್ ಆಗಿದೆ. ವಿಡಿಯೋದಲ್ಲಿರುವಂತೆ, ಈ ತರಕಾರಿ ವ್ಯಾಪಾರಿ ತನ್ನ ತಲೆಗೆ ಒಂದು ವಿಶೇಷವಾದ ಬೆಲ್ಟ್ ಧರಿಸಿದ್ದು, ಅದಕ್ಕೆ ಐಫೋನ್ ಮತ್ತು ಮೆಮೊರಿ ಡಿವೈಸ್ ಒಂದನ್ನು ಕನೆಕ್ಟ್ ಮಾಡಿದ್ದಾರೆ. ಅಸಲಿಗೆ ಈತ ಮಾಡುತ್ತಿರುವುದಾದರೂ ಏನು ಎಂದು ವೈಭವ್ ಪ್ರಶ್ನಿಸಿದಾಗ ಊಹೆಗೂ ನಿಲುಕದ ಉತ್ತರ ಸಿಕ್ಕಿದೆ. ಭವಿಷ್ಯದ ರೊಬೋಟಿಕ್ ಮತ್ತು ಹ್ಯೂಮನಾಯ್ಡ್ (ಮನುಷ್ಯ ರೂಪದ ರೊಬೊಗಳು) ಗಳ ಅಭಿವೃದ್ಧಿಗಾಗಿ ಬೇಕಾಗುವ ರಿಯಲ್ ವರ್ಲ್ಡ್ ಡೇಟಾವನ್ನು ಸಂಗ್ರಹಿಸುತ್ತಿರುವುದಾಗಿ ಆ ಯುವಕ ತಿಳಿಸಿದ್ದಾನೆ. ಅಂದರೆ, ಮನುಷ್ಯರು ದಿನನಿತ್ಯದ ಮಾರುಕಟ್ಟೆಯಲ್ಲಿ ಹೇಗೆ ವರ್ತಿಸುತ್ತಾರೆ ಗ್ರಾಹಕರೊಂದಿಗೆ ಹೇಗೆ ವ್ಯವಹರಿಸುತ್ತಾರೆ ಮತ್ತು ವಸ್ತುಗಳನ್ನು ಹೇಗೆ ಹಿಡಿದುಕೊಳ್ಳುತ್ತಾರೆ ಎಂಬುದನ್ನು ಈ ಐಫೋನ್ ಲೈವ್ ಆಗಿ ರೆಕಾರ್ಡ್ ಮಾಡುತ್ತಿದೆ. ಈ ವಿಡಿಯೋದಲ್ಲಿ ರಿವೀಲ್ ಆಗಿರುವ ಅತ್ಯಂತ ಶಾಕಿಂಗ್ ಸಂಗತಿ ಎಂದರೆ, ಈ ಡೇಟಾ ಕಲೆಕ್ಷನ್ ಕೆಲಸಕ್ಕಾಗಿ ಆ ತರಕಾರಿ ವ್ಯಾಪಾರಿಗೆ ಭಾರಿ ಮೊತ್ತದ ಸಂಬಳ ಸಿಗುತ್ತಿದೆ.

**ಒಂದು ಗಂಟೆಗೆ ಸಿಗುವ ಹಣ:** 350, ದಿನಕ್ಕೆ 10 ಗಂಟೆ ಕೆಲಸ ಮಾಡಿದರೆ – 3,500 ತಿಂಗಳ ಒಟ್ಟು ಆದಾಯ 1,05,000 ರೂ.ಗಳಿಗೂ ಅಧಿಕ. ತಲೆಯ ಮೇಲೆ ಕೇವಲ ಒಂದು ಸ್ಮಾರ್ಟ್ ಫೋನ್ ಧರಿಸಿ ಓಡಾಡುತ್ತಾ, ನಮ್ಮ ಕಾರ್ಪೊರೇಟ್ ಇಂಡಿಯಾದಲ್ಲಿ ಹಗಲಿರುಳು ಕಷ್ಟಪಡುವ ಅರ್ಧದಷ್ಟು ಸಾಫ್ಟ್‌ವೇರ್ ಎಂಜಿನಿಯರ್‌ಗಳಿಗಿಂತ ಈ ತರಕಾರಿ ವ್ಯಾಪಾರಿಯೇ ಸ್ಮಾರ್ಟ್ ಆಗಿ ಹೆಚ್ಚು ಆದಾಯ ಗಳಿಸುತ್ತಿದ್ದಾನೆ ಎಂದು ವೈಭವ್ ಅಚ್ಚರಿ ವ್ಯಕ್ತಪಡಿಸಿದ್ದಾರೆ.

# 4462 ಟಿಕೆಟ್‌ರಹಿತ ಪ್ರಯಾಣಿಕರಿಂದ 8.67 ಲಕ್ಷ ರೂ. ದಂಡ ವಸೂಲಿ


**ಬೆಂಗಳೂರು, ಮೇ 21:** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ತನಿಖಾ ತಂಡಗಳು ಏಪ್ರಿಲ್ ತಿಂಗಳಲ್ಲಿ ರಾಜ್ಯಾದ್ಯಂತ ತಪಾಸಣಾ ಕಾರ್ಯವನ್ನು ತೀವ್ರಗೊಳಿಸಿದ್ದು, ಟಿಕೆಟ್‌ರಹಿತ ಪ್ರಯಾಣಿಕರಿಗೆ ಭಾರಿ ದಂಡ ವಿಧಿಸಿವೆ.

ನಿಗಮದ ವ್ಯಾಪ್ತಿಯಲ್ಲಿ ಸಂಚರಿಸುವ ಒಟ್ಟು 41,308 ವಾಹನಗಳನ್ನು ತೀವ್ರ ತನಿಖೆಗೊಳಪಡಿಸಿದ ಅಧಿಕಾರಿಗಳು, 4,337 ಪ್ರಕರಣಗಳನ್ನು ಪತ್ತೆಹಚ್ಚಿದ್ದಾರೆ. ಈ ಕಾರ್ಯಾಚರಣೆಯಲ್ಲಿ ಟಿಕೆಟ್ ಇಲ್ಲದೆ ಪ್ರಯಾಣಿಸುತ್ತಿದ್ದ 4,462 ಪ್ರಯಾಣಿಕರಿಂದ ಒಟ್ಟು 8,67,590/– ರೂ.ಗಳನ್ನು ದಂಡದ ರೂಪದಲ್ಲಿ ವಸೂಲಿ ಮಾಡಲಾಗಿದೆ.

**ಆದಾಯ ಸೋರಿಕೆ ಪತ್ತೆ ಮತ್ತು ಶಿಸ್ತು ಕ್ರಮ:** ನಿಗಮದ ಆದಾಯಕ್ಕೆ ಕತ್ತರಿ ಬೀಳುತ್ತಿದ್ದ 1,32,973/– ರೂ.ಗಳ ಆದಾಯ ಸೋರಿಕೆಯನ್ನು ತನಿಖಾಧಿಕಾರಿಗಳು ಯಶಸ್ವಿಯಾಗಿ ಪತ್ತೆಹಚ್ಚಿದ್ದಾರೆ. ಈ ಅಕ್ರಮ ಮತ್ತು ಕರ್ತವ್ಯಲೋಪಕ್ಕೆ ಸಂಬಂಧಿಸಿದಂತೆ ತಪ್ಪಿತಸ್ಥ ಸಿಬ್ಬಂದಿಗಳ ವಿರುದ್ಧ ಇಲಾಖಾ ರೀತ್ಯಾ ಸೂಕ್ತ ಶಿಸ್ತು ಕ್ರಮಗಳನ್ನು ಜರುಗಿಸಲಾಗಿದೆ ಎಂದು ನಿಗಮದ ಪ್ರಕಟಣೆ ತಿಳಿಸಿದೆ.

**ಪ್ರಯಾಣಿಕರಿಗೆ ಮನವಿ:** ಸಾರ್ವಜನಿಕ ಪ್ರಯಾಣಿಕರು ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವಾಗ ಜವಾಬ್ದಾರಿಯುತವಾಗಿ ಸರಿಯಾದ ಟಿಕೆಟ್ ಅಥವಾ ಪಾಸುಗಳನ್ನು ಪಡೆದೇ ಪ್ರಯಾಣಿಸಬೇಕು. ಆ ಮೂಲಕ ನಿಗಮದೊಂದಿಗೆ ಸಹಕರಿಸಬೇಕಾಗಿ ಕೆ.ಎಸ್.ಆರ್.ಟಿ.ಸಿ ಈ ಮೂಲಕ ಪ್ರಕಟಣೆಯಲ್ಲಿ ಕೋರಿದೆ.

# ಬಿಡಿಸಿಸಿಐನ ಕೃಷಿಮೇಳ ಉದ್ಘಾಟನೆ ಸಚಿವ ಚಲುವರಾಯಸ್ವಾಮಿಗೆ ಆಹ್ವಾನ



ಬೆಂಗಳೂರು, ಮೇ. 21: ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ನೇತೃತ್ವದಲ್ಲಿ ಜಿಲ್ಲಾಡಳಿತದ ಸಹಕಾರದಲ್ಲಿ ಮೇ 26ರ ಮಂಗಳವಾರ ನಡೆಯಲಿರುವ ಗುಣಮಟ್ಟದ ಬೀಜ ಮತ್ತು ವೈಜ್ಞಾನಿಕ ಕೃಷಿ ವಿಷಯದ ಕೃಷಿಮೇಳವನ್ನು ಉದ್ಘಾಟಿಸಲು ಕೃಷಿಸಚಿವರಾದ ಎನ್. ಚಲುವರಾಯಸ್ವಾಮಿ ಅವರನ್ನು ಬೆಂಗಳೂರಿನಲ್ಲಿ ಗುರುವಾರ ಭೇಟಿ ಮಾಡಿ, ಸ್ವಾಗತ ಕೋರಲಾಯಿತು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಅವ್ವಾರು ಮಂಜುನಾಥ್ ಅವರು ಸಚಿವ ಚಲುವರಾಯಸ್ವಾಮಿ ಅವರಿಗೆ ಕೃಷಿಮೇಳದ ಕುರಿತು ಮಾಹಿತಿ ನೀಡಿ, ಆಹ್ವಾನ ಪತ್ರಿಕೆಯನ್ನು ನೀಡಿ ಸ್ವಾಗತಿಸಿದರು.

ಸಚಿವರಾದ ಎನ್. ಚಲುವರಾಯಸ್ವಾಮಿ ಅವರು ಕೃಷಿ ಮೇಳ ಉದ್ಘಾಟನೆಗೆ ಬರುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಖಜಾಂಚಿ ಸಿ.ಎಸ್. ಸತ್ಯನಾರಾಯಣ ಹಾಗೂ ಬಳ್ಳಾರಿ ಮಹಾನಗರ ಪಾಲಿಕೆಯ ಮಾಜಿ ಉಪಮೇಯರ್ ಆಗಿರುವ ಬೆಣಕಲ್ಲು ಬಸವರಾಜಗೌಡ ಅವರು ಇದ್ದರು

# ಕರ್ನಾಟಕದಲ್ಲಿ ಕನ್ನಡಿಗನೇ ಸಾರ್ವಭೌಮ: ನಾರಾ ಭರತ್ ರೆಡ್ಡಿ




**ಬಳ್ಳಾರಿ, ಮೇ.21:** ಕರ್ನಾಟಕದಲ್ಲಿ ಕನ್ನಡಿಗನೇ ಸಾರ್ವಭೌಮ ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ನಗರದ ಖಾಸಗಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಕರ್ನಾಟಕ ಯುವ ಜಾಗೃತಿ ವೇದಿಕೆಯನ್ನು ಉದ್ಘಾಟಿಸಿ ಮಾತನಾಡಿದರು.

ಕನ್ನಡ ನೆಲದ ಉದ್ಯೋಗಗಳು ಕನ್ನಡಿಗರಿಗೆ ಸಿಗಬೇಕು, ಕನ್ನಡಿಗರಿಗೆ ಸಿಗಬೇಕಾದ ಅವಕಾಶಗಳು ಹಿಂದಿ ಮಾತಾಡುವವರ ಪಾಲಾಗುತ್ತಿವೆ ಎಂದು ವಿಷಾದ ವ್ಯಕ್ತಪಡಿಸಿದರು.

ನಮ್ಮ ನೆಲ ನಮ್ಮ ಹಕ್ಕು – ನಮ್ಮ ಉದ್ಯೋಗ ನಮ್ಮ ಹಕ್ಕು ಎಂಬ ಘೋಷಣೆಯಡಿ ಹೋರಾಟ ಕಟ್ಟೋಣ ಎಂದು ಕರೆ ನೀಡಿದ ಅವರು ನಮ್ಮ ಯುವಕರಿಗೆ ಉದ್ಯೋಗ ದೊರಕಿಸುವುದಕ್ಕೆ ನಾನು ಬದ್ಧ ಎಂದರು.

ನಗರದಲ್ಲಿ ಜನರು, ಅಕ್ಕ ತಂಗಿಯರು ನನ್ನನ್ನು ಭೇಟಿ ಮಾಡಿದಾಗ ಉದ್ಯೋಗ ಕೊಡಿಸುವಂತೆ ಕೇಳುತ್ತಾರೆ, ಆದರೆ ನಮ್ಮ ನೆಲದಲ್ಲಿ ಸಾವಿರಾರು ಕೋಟಿ ಸಂಪಾದಿಸುವ ಕಾರ್ಖಾನೆಯವರು ಹೊರ ರಾಜ್ಯದವರಿಗೆ ಉದ್ಯೋಗ ನೀಡುತ್ತಾರೆ ಎಂದರು.

ನಾವೆಲ್ಲ ಸೇರಿ ಹೋರಾಟ ಕಟ್ಟೋಣ, ನಾವೆಲ್ಲ ಸೇರಿ ನಮ್ಮ ಯುವಕರ ಬೇಡಿಕೆಗಳಿಗಾಗಿ ಹೋರಾಡೋಣ, ಯುವಶಕ್ತಿ ಮುಂದೆ ಯಾವ ಶಕ್ತಿಯೂ ಇಲ್ಲ ಎಂದು ಹೇಳಿದ ಶಾಸಕ ನಾರಾ ಭರತ್‌ರೆಡ್ಡಿ ವ್ಯವಸ್ಥೆಯನ್ನು ಪ್ರಶ್ನಿಸುವ ಮನೋಭಾವ ರೂಢಿಸಿಕೊಳ್ಳೋಣ ಎಂದರು.

ನನಗೆ ಹಣ ಮಾಡುವ ಉದ್ದೇಶ ಇಲ್ಲ, ನನ್ನ ತಂದೆ ಉದ್ಯಮಿ – ಶ್ರೀಮಂತ ವ್ಯಕ್ತಿ, ನಾನು ಕೂಡ ಆರ್ಥಿಕವಾಗಿ ಸ್ಥಿತಿವಂತ, ನನಗೆ ರಾಜಕೀಯದ ಮೂಲಕ ಹಣ ಸಂಪಾದಿಸಬೇಕಿಲ್ಲ, ನಿಮ್ಮ ಬೇಡಿಕೆಗಳಿಗಾಗಿ ನನ್ನ ಹೋರಾಟ ಪ್ರಾಮಾಣಿಕವಾಗಿರುತ್ತದೆ ಎಂದರು.

ನಮ್ಮ ನೆಲ ನಮ್ಮ ಜಲ ನಮ್ಮ ಹಕ್ಕು ಆಗಿದೆ, ಸ್ಥಳೀಯವಾಗಿ ಇರುವ ಉದ್ಯೋಗಗಳನ್ನು ಸ್ಥಳೀಯರಿಗೇ ನೀಡಬೇಕೆಂದು ಸಿಎಂ–ಡಿಸಿಎಂ ಅವರಿಗೆ ಮನವಿ ಮಾಡುವೆ ಎಂದ ಅವರು ಯುವಕರಿಗೆ ಉದ್ಯೋಗ ದೊರಕಿಸುವ ಸಂಬಂಧ ಸ್ಥಳೀಯವಾಗಿ ಬೃಹತ್ ಹೋರಾಟ ಆಯೋಜಿಸಲಿದ್ದೇವೆ, ನೀವೆಲ್ಲ ದೊಡ್ಡ ಸಂಖ್ಯೆಯಲ್ಲಿ ಭಾಗಿಯಾಗಬೇಕು ಎಂದರು.

ನಮ್ಮ ಭಾಗದ ಯುವಕರು ಸಣ್ಣ ಪುಟ್ಟ ಉದ್ಯೋಗ ಮಾಡುವುದನ್ನು ಕಂಡಾಗ ನನಗೆ ನೋವಾಗುತ್ತದೆ, ನಮ್ಮ ನೆಲದಲ್ಲಿ ಎಲ್ಲ ಸವಲತ್ತು ಪಡೆದು ಕಾರ್ಖಾನೆ ಸ್ಥಾಪಿಸಿದವರು ನಮಗೆ ಉದ್ಯೋಗ ಕೊಡುವವರೆಗೆ ಬಿಡುವುದಿಲ್ಲ ಎಂದರು.

ನಾವು ಯುವಕರು ಪ್ರಶ್ನೆ ಮಾಡುವ ಮನೋಭಾವ ಬೆಳೆಸಿಕೊಳ್ಳಬೇಕು, ಗುಮಾಸ್ತನಿಂದ ಪ್ರಧಾನಿಯ ವರಿಗೆ ಎಲ್ಲರನ್ನೂ ಪ್ರಶ್ನೆ ಮಾಡಬೇಕು, ನಿಮಗೆ ಪ್ರಶ್ನಿಸುವ ಹಕ್ಕಿದೆ, ಮಾತಾಡಿ, ಬಾಬಾಸಾಹೇಬ ಅಂಬೇಡ್ಕರ್ ಅವರು ಕೊಟ್ಟ ಅಧಿಕಾರವನ್ನು ನಾವು ಬಳಸೋಣ, ಡಾ.ಅಂಬೇಡ್ಕರ್ ಅವರನ್ನು ಸ್ಮರಿಸೋಣ, ಐತಿಹಾಸಿಕ ವ್ಯಕ್ತಿಗಳ ಬಗ್ಗೆ ತಿಳಿಯೋಣ ಎಂದರು.

ಇತ್ತೀಚೆಗೆ ಮಾದಕ ವಸ್ತುಗಳ ಬಳಕೆ ಯುವಕರಲ್ಲಿ ಹೆಚ್ಚಾಗಿದೆ, ಯುವಕರು ಇದರಿಂದ ದೂರ ಇರಬೇಕು, ಈ ನಿಟ್ಟಿನಲ್ಲಿ ಜಾಗೃತಿ ಮಾಡೋಣ ಎಂದು ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ಕಾಂಗ್ರೆಸ್ ಮುಖಂಡ ಸುಬ್ಬರಾಯುಡು, ಸಂಘಟನೆಯ ಸಂಸ್ಥಾಪಕ ಯಾಳ್ಪಿ ವಲಿ ಬಾಷ ಮತ್ತು ನಿಯೋಜಿತ ಪದಾಧಿಕಾರಿಗಳು ವೇದಿಕೆ ಮೇಲಿದ್ದರು.

### ವಿಶ್ರೀಕೃವಿವಿಯಲ್ಲಿ ಎರಡು ದಿನಗಳ ವಿಜ್ಞಾನ ಪ್ರದರ್ಶನ, ವಿಜ್ಞಾನವು ಸಾಮಾನ್ಯ ಜನರಿಗೆ ತಲುಪಲಿ ಎಂದು ಅಭಿಮತ

# ವಿವಿಗಳು ತಂತ್ರಜ್ಞಾನ ಆಧಾರಿತ ಶಿಕ್ಷಣ ನೀಡಲಿ: ನಾಗೇಂದ್ರ ಪ್ರಸಾದ್

**ಬಳ್ಳಾರಿ, ಮೇ21:** ವಿಶ್ವ ವಿದ್ಯಾ ಲಯಗಳು ತಂತ್ರಜ್ಞಾನ ಆಧಾರಿತ ಶಿಕ್ಷಣ ಹಾಗೂ ವಿನೂತನ ಮಾದರಿಯ ಗ್ರಂಥಾಲಯಗಳನ್ನು ಹೊಂದಬೇಕು. ಸಾಮಾನ್ಯ ವಿಜ್ಞಾನದ ಮಹತ್ವ ಕುರಿತು ಜನಸಾಮಾನ್ಯರು ಜ್ಞಾನ ಲಭಿಸಲು ದಾರಿದೀಪವಾಗಬೇಕು ಎಂದು ಬಳ್ಳಾರಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣ ದೇವರಾಯ ವಿಶ್ವವಿದ್ಯಾಲಯದ ಪ್ರೊ ಸಿದ್ದು ಪಿ ಆಲಗೂರ ಸಭಾಂಗಣದಲ್ಲಿ ಆಯೋಜಿಸಿರುವ ಎರಡು ದಿನಗಳ ವಿಜ್ಞಾನ ಪ್ರದರ್ಶನ–2026 ಮೇಳವನ್ನು ಗಣ್ಯರೊಂದಿಗೆ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಇಂದಿನ ಎಐ ಯುಗದಲ್ಲಿ ವಿಜ್ಞಾನವನ್ನು ಸ್ಥಳೀಯ ಭಾಷೆಯಲ್ಲಿ ಜನಸಾಮಾನ್ಯರಿಗೆ ತಲುಪುವ ಹಾಗೆ ರೂಪಾಂತರಗೊಳಿಸುವುದು ಅಗತ್ಯವಿದೆ. ಎಲ್ಲ ಕ್ಷೇತ್ರಗಳಲ್ಲೂ ತಂತ್ರಜ್ಞಾನ ಅವಶ್ಯಕವಾಗಿದೆ ಅದನ್ನು ಸದ್ಬಳಕೆಯಿಂದ ಬಳಸಿ ಎಂದು ಅಭಿಪ್ರಾಯಪಟ್ಟರು. ವಿಶ್ವ ವಿದ್ಯಾಲಯಕ್ಕೆ ಅವಶ್ಯವಿರುವ ಗ್ರಂಥಾಲಯ ಹಾಗೂ ಇನ್ನಿತರ ಮೂಲ ಸೌಲಭ್ಯಗಳನ್ನು ಒದಗಿಸಲು ವಿಶೇಷ ಆಸಕ್ತಿ ವಹಿಸುವುದಾಗಿ ತಿಳಿಸಿದರು.



ತಂತ್ರಜ್ಞಾನ ಬದಲಾದಂತೆ ಪ್ರಾದೇಶಿಕ ವಾತಾವರಣವು ಬದಲಾ ಗುತ್ತದೆ ಎಂಬುದಕ್ಕೆ ನಮ್ಮ ಬಳ್ಳಾರಿಯೇ ಸ್ಪಷ್ಟ ನಿದರ್ಶನವಾಗಿದ್ದು, ಬಳ್ಳಾರಿಯು ಹಸಿರೀಕರಣಗೊಂಡಿರುವುದು ಇದಕ್ಕೆ ಸಾಕ್ಷಿ ಎಂದರು.

ಗೌರವ ಅತಿಥಿಗಳಾಗಿ ವೇದಿಕೆಯಲ್ಲಿದ್ದ ಬಳ್ಳಾರಿ ಜಿಲ್ಲಾ ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ ಮೊಹ್ಮದ ಹ್ಯಾರಿಸ್ ಸುಮೈರ್ ಮಾತನಾಡಿ, ವಿಜ್ಞಾನವು ಶೋಧನೆ ಮತ್ತು ಕ್ರೀಯಾತ್ಮಕ ವಿಚಾರಳಿಗೆ ವೇದಿಕೆಯಾಗಿದೆ. ವಿಜ್ಞಾನ ಬೆಳೆದಷ್ಟು ಸವಾಲುಗಳು ಸಾಕಷ್ಟು ಉದ್ಭವಿಸುತ್ತವೆ.

ರಾಮನ್ ಪರಿಣಾಮವನ್ನು ಹಲವಾರು ಕ್ಷೇತ್ರಗಳಲ್ಲಿ ಪರಿಣಾಮಕಾರಿಯಾಗಿ ಬಳಸುತ್ತಿದ್ದೇವೆ. ಈ ನಿಟ್ಟಿನಲ್ಲಿ ಸಂಶೋಧನಗಳಲ್ಲಿ ಎಲ್ಲರೂ ಹೆಚ್ಚಾಗಿ ಭಾಗಿಯಾಗಬೇಕು ಎಂದು ತಿಳಿಸಿದರು.

ಮುಖ್ಯ ಭಾಷಣಕಾರರಾಗಿ ಆಗಮಿಸಿದ್ದ ಮೈಸೂರು ವಿಶ್ವ ವಿದ್ಯಾಲಯದ ಕುಲಪತಿ ಪ್ರೊ ಎನ್.ಕೆ.ಲೋಕನಾಥ್ ಮಾತನಾಡಿ, ಇಂದಿನ ದಿನಮಾನಗಳಲ್ಲಿ ಸ್ಮಾರ್ಟ್‌ಫೋನ್ ಗೀಳಿಗಿಂತ 'ಸ್ಮಾರ್ಟ್' (ಸ್ಪೆಸಿಫಿಕ್, ಮೆಸರೇಬಲ್, ಅಚಿವೆಬಲ್, ರಿಲೆವೆಂಟ್, ಟೈಮ್ ಬಾಂಡ್) ಆಗಿ ಕಾರ್ಯನಿರ್ವಹಿಸಿದಲ್ಲಿ ಎಲ್ಲ ಕ್ಷೇತ್ರದ ವಿದ್ಯಾರ್ಥಿಗಳ ಜ್ಞಾನಾಭಿವೃದ್ಧಿಯಾಗುತ್ತದೆ ಎಂದು ಹೇಳಿದರು.

ವಿಜ್ಞಾನವು ವಿಶ್ವದಾದ್ಯಂತ ವ್ಯಾಪಕವಾಗಿ ಹರಡಿದೆ. ವಿಜ್ಞಾನ ಆಧಾರಿತ ಪ್ರಯೋಗಗಳು ಮಾನವಿಯತೆಗೆ ಮಾರಕವಾಗಬಾರದು. ವಿದ್ಯಾರ್ಥಿಗಳು ತಮ್ಮಲ್ಲಿರುವ ನವೀನ ವಿಚಾರಧಾರೆಗಳನ್ನು ತಮ್ಮ ಸಂಶೋಧನೆಗಳಾಗಿ ಮಾರ್ಪಡಿಸಬೇಕು.

ಈ ಮಾದರಿಯ ಮೇಳವು ವಿದ್ಯಾರ್ಥಿ ಹಾಗೂ ಶಿಕ್ಷಕರ ವೈಜ್ಞಾನಿಕ ಚಟುವಟಿಕೆಗಳನ್ನು ಅನಾವರಣಗೊಳಿಸುವ ಮೂಲಕ ಅವರಲ್ಲಿ ಹೊಸ ಆಸಕ್ತಿ,

ಅನ್ವೇಷಣೆ ಹಾಗೂ ವಿಚಾರಗಳು ಆಳವಾಗಿ ಬೇರೂರುವಂತೆ ಮಾಡುತ್ತವೆ. ನೂತನ ಅನ್ವೇಷಣೆ, ಸಕಾರಾತ್ಮಕ ಚಿಂತನೆ ಮತ್ತು ಧನಾತ್ಮಕ ವಿಚಾರಗಳಿಗೆ ಮಾತ್ರ ವಿದ್ಯಾರ್ಥಿಗಳು ಗಮನ ಹರಿಸಬೇಕೆಂದು ಸಂದೇಶ ನೀಡಿದರು.

### ದೇಶದ ಜನರಿಗೂ ಬಣ್ಣಬಣ್ಣದ ಚಾಕೊಲೇಟ್ ನೀಡುತ್ತಲೇ ಇರುವ ಪ್ರಧಾನಿ

# ಪ್ರತಿ ವರ್ಷ, ಪ್ರತಿ ಚುನಾವಣೆ, ಪ್ರತಿ ವೈಫಲ್ಯ ಮುಚ್ಚಿಕೊಳ್ಳಲು ಒಂದೊಂದು ಘೋಷಣೆ: ಪ್ರಿಯಾಂಕ್ ಖರ್ಗೆ ಲೇವಡಿ

**ಬೆಂಗಳೂರು, ಮೇ 21:** ಪ್ರಧಾನಿ ನರೇಂದ್ರ ಮೋದಿಯವರು ಚಾಕೊಲೇಟ್ ನೀಡುತ್ತಿರುವುದು ವಿದೇಶಿ ನಾಯಕರಿಗೆ ಮಾತ್ರವಲ್ಲ, ಕಳೆದ 13 ವರ್ಷಗಳಿಂದ ಭಾರತಿಯರಿಗೂ ಬಗೆಬಗೆಯ, ಬಣ್ಣಬಣ್ಣದ ಚಾಕೋಲೇಟ್ ನೀಡಿದ್ದಾರೆ ಮತ್ತು ನೀಡುತ್ತಲೇ ಇದ್ದಾರೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಲೇವಡಿ ಮಾಡಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿರುವ ಅವರು, ಮಕ್ಕಳು ಅಳುವಾಗ ಹೇಗೆ ಚಾಕೊಲೇಟ್ ನೀಡಿ ಸಮಾಧಾನಿಸುತ್ತಾರೋ ಹಾಗೆಯೇ, ದೇಶದ ಜನ ಸಮಸ್ಯೆಗಳಲ್ಲಿರುವಾಗ ಘೋಷಣೆಗಳೆಂಬ ಚಾಕೋಲೇಟ್ ನೀಡಿ ಸಮಾಧಾನಿಸುವ ಕೆಲಸವನ್ನು ಪ್ರಧಾನಿಯವರು ಮಾಡುತ್ತಿದ್ದಾರೆ ಎಂದು ಕುಟುಕಿದ್ದಾರೆ.



ದೇಶದ ಜನರು ಈ ಕನಸು ಎನ್ನುವ ಚಾಕೊಲೇಟ್‌ಗಳನ್ನು ಸವಿಯುತ್ತಾ ಸಮಾಧಾನಗೊಳ್ಳಬೇಕಿದೆ. ಗುಜರಾತ್ ಮಾಡೆಲ್, ಅಚ್ಛೇದಿನ್, ವಿಶ್ವಗುರು, ಮೇಕ್ ಇನ್ ಇಂಡಿಯಾ, ಖೇಲೋ ಇಂಡಿಯಾ, ಅಮೃತ್ ಕಾಲ್, ವಿಕಸಿತ್ ಭಾರತ್, ಸ್ಟಾರ್ಟ್ ಅಪ್ ಇಂಡಿಯಾ, ಸ್ಕಿಲ್ ಇಂಡಿಯಾ, ಆತ ನಿರ್ಭರ ಭಾರತ್, ಬೇಟಿ ಬಚಾವೋ, ಬೇಟಿ ಪಡಾವೋ, ಖೇಲೋ ಇಂಡಿಯಾ 20 ಲಕ್ಷ ಕೋಟಿ ಪ್ಯಾಕೇಜ್ ಸೇರಿದಂತೆ ಮೋದಿಯವರು ಭಾರತೀಯರಿಗೆ ಕೊಟ್ಟಿರುವ ಘೋಷಣೆಗಳೆಂಬ ಚಾಕೊಲೇಟ್ ಹಲವಾರು ಎಂದಿದ್ದಾರೆ.

ಪ್ರತಿ ಚುನಾವಣೆಗೊಂದು ಘೋಷಣೆ, ಪ್ರತಿ ವರ್ಷಕ್ಕೊಂದು ಘೋಷಣೆ, ಪ್ರತಿ ವೈಫಲ್ಯಕ್ಕೊಂದು ಘೋಷಣೆ, ಇವುಗಳು ವಾಸ್ತವವಾಗಿದ್ದು ಮಾತ್ರ ಸೊನ್ನೆ. ಭಾರತೀಯರಿಗೆ ಹುಸಿ ಸಂತೋಷವನ್ನು ನೀಡುವ ಈ ಚಾಕೋಲೇಟ್‌ಗಳು ಈಗ ಸಲಹೆಗಳೆಂಬ ಹೊಸ ರೂಪಕ್ಕೆ ತಿರುಗಿವೆ ಎಂದಿದ್ದಾರೆ.

ಅಡುಗೆಗೆ ಎಣ್ಣೆ ಬಳಸಬೇಡಿ, ಪೆಟ್ರೋಲ್ ಬಳಕೆ ಕಡಿಮೆಗೊಳಿಸಿ, ಗ್ಯಾಸ್ ಬದಲು ಗಟರ್ ಗ್ಯಾಸ್ ಬಳಸಿ, ವರ್ಕ್‌ಫ್ರಮ್ ಹೋಮ್ ಮಾಡಿ, ಬ್ಯೂಟಿ ಪಾರ್ಲರ್‌ಗೆ ಹೋಗಬೇಡಿ, ರಾಸಾಯನಿಕ ಗೊಬ್ಬರ ಬಳಸದೆ ಕೃಷಿ ಮಾಡಿ, ಇತ್ಯಾದಿ ಸಲಹೆ ನೀಡುತ್ತಿದ್ದಾರೆ ಎಂದರು.

## ಮೊದಲನೇ ಪುಟದಿಂದ

# ಎಸ್‌ಐಆರ್ ಪ್ರಕ್ರಿಯೆಯಲ್ಲಿ ಮತದಾರನ ಹಕ್ಕು ಕಸಿಯುವ ಯತ್ನ ನಡೆದರೆ ಕೋರ್ಟ್ ಮೊರೆ

ರಾಜ್ಯದ ವಿವಿಧ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ 52 ಕ್ರಿಮಿನಲ್ ಮೊಕದ್ದಮೆಯನ್ನು ಅಭಿಯೋಜನೆಯಿಂದ ಹಿಂಪಡೆಯುವ ತೀರ್ಮಾನಿಸಲಾಗಿದೆ ಎಂದರು ಸರಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡಿ 10ನೇ ತರಗತಿಯ ಬೋರ್ಡ್ ಪರೀಕ್ಷೆಯಲ್ಲಿ ಗಣಿತ ಮತ್ತು ವಿಜ್ಞಾನ ವಿಷಯಗಳಲ್ಲಿ ಅತೀ ಹೆಚ್ಚು ಅಂಕಗಳನ್ನು ಗಳಿಸಿದ ಪ್ರತಿ ಜಿಲ್ಲೆಗೆ 15 ವಿದ್ಯಾರ್ಥಿಗಳಂತೆ 500 ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ 15 ಕೋಟಿ ರೂ. ವೆಚ್ಚದಲ್ಲಿ 2 ವರ್ಷಗಳ ವಸತಿ ಸಹಿತ ಪಿಯುಸಿ (ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ) ಶಿಕ್ಷಣದೊಂದಿಗೆ ಜೆಇಇ, ನೀಟ್, ಸಿಇಟಿ ಪರೀಕ್ಷಾ ಪೂರ್ವ ತರಬೇತಿ ನೀಡಲು ಒಪ್ಪಿಗೆ ನೀಡಲಾಗಿದೆ. ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಶಾಲಾಪೂರ್ವ ಶಿಕ್ಷಣ ಕಿಟ್‌ಗಳನ್ನು ಪ್ರತಿ ಕೇಂದ್ರಕ್ಕೆ 3000 ರೂ.ಗಳಂತೆ 69,922 ಅಂಗನವಾಡಿಗಳಿಗೆ 20.98 ಕೋಟಿಗಳ ಮೊತ್ತದಲ್ಲಿ ಖರೀದಿಸಲು ಒಪ್ಪಿಗೆ ನೀಡಲಾಗಿದೆ ಎಂದರು.

ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ 200 ಹಾಸಿಗೆಗಳ ಸಾಮರ್ಥ್ಯದ ಹೊಸ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡವನ್ನು 100 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ, ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ತಾಲ್ಲೂಕು ಪ್ರಜಾಸೌಧ ಕಟ್ಟಡ ನಿರ್ಮಾಣಕ್ಕೆ 10.61 ಕೋಟಿ ರೂ., ರಾಯಚೂರು ಮತ್ತು ತಾಲ್ಲೂಕಿನ ವ್ಯಾಪ್ತಿಯಲ್ಲಿ ತುಂಗಭದ್ರಾ ಎಡದಂಡೆ ಕಾಲುವೆಯಡಿ ಬರುವ ವಿತರಣಾ ಕಾಲುವೆ ನೀರಾವರಿ ಸೌಲಭ್ಯ ಕಲ್ಪಿಸುವ 182.70 ಕೋಟಿ ರೂ.ಮೊತ್ತದ ಮಟಮಾರಿ ವೀರಭದ್ರೇಶ್ವರ ಏತ ನೀರಾವರಿ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಏಷ್ಯನ್ ಡೆವಲಪ್‌ಮೆಂಟ್ ಬ್ಯಾಂಕ್ ನೆರವಿನ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿವರ್ತನೆ ಯೋಜನೆಯಡಿ ಕೇಂದ್ರ ಸರಕಾರದ ಆರ್ಥಿಕ ವ್ಯವಹಾರಗಳ ಇಲಾಖೆಯ ಸಾಲದ ಮಾತುಕತೆ ಸಿದ್ಧತೆಯ ಮಾನದಂಡಗಳ ಪ್ರಕಾರ 53 ಸರ್ಕಾರಿ ಪದವಿ ಕಾಲೇಜುಗಳು, 14 ಸರ್ಕಾರಿ ಪಾಲಿಟೆಕ್ನಿಕ್‌ಗಳು, 5 ಉತ್ಕೃಷ್ಟತಾ ಕೇಂದ್ರಗಳು ಹಾಗೂ ಯೋಜನಾ ನಿರ್ವಹಣಾ ಘಟಕಕ್ಕೆ ಒಟ್ಟು 802 ಕೋಟಿ ರು. ಗಳ ಮೊತ್ತದ ವಸ್ತುಗಳ ಮುಂಗಡ ಖರೀದಿಗೆ ಅನುಮೋದನೆ. ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ನಗರ ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ನಮ್ಮ ಕ್ಲಿನಿಕ್‌ಗಳಿಗೆ ಅವಶ್ಯವಿರುವ ಪ್ರಯೋಗಾಲಯ ಉಪಭೋಗ್ಯ ಹಾಗೂ ಉಪಕರಣ ಖರೀದಿಗೆ 22 ಕೋಟಿ ರು. ನೀಡಲು ಒಪ್ಪಿ?ಗೆ ನೀಡಲಾಗಿದೆ ಎಂದರು.

**ಪ್ರಮುಖಾಂಶ**

* ಸರಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರಕ್ಕೆ ಯಂತ್ರೋಪಕರಣ ಖರೀದಿಗೆ 90 ಕೋಟಿ ರೂ.
* ಮಂಡ್ಯ ಜಿಲ್ಲೆ, ನಾಗಮಂಗಲ ತಾಲೂಕಿನ ದಾಸನಕೆರೆ ಅಭಿವೃದ್ಧಿ ಹಾಗೂ ವಿದ್ಯುದ್ದೀಕರಣ ಕಾಮಗಾರಿಗೆ 25 ಕೋಟಿ ರೂ.
* ಯಾದಗಿರಿ ಜಿಲ್ಲೆಯ ಶಹಾಪುರದಲ್ಲಿ ಹಾಗೂ ರಾಯಚೂರು ಜಿಲ್ಲೆಯ ದೇವದುರ್ಗದಲ್ಲಿ ತಲಾ 50 ಹಾಸಿಗೆ ಆಸ್ಪತ್ರೆಗೆ 38 ಕೋಟಿ ರು.
* ಮಂಡ್ಯ ಜಿಲ್ಲೆಯ100 ಎಕರೆ ಜಮೀನು ಹೇಮಗಿರಿ ಶುಗರ್ಸ್ ರಿನ್ಯೂವಬಲ್ಸ್ ಪ್ರೈವೇಟ್ ಲಿಮಿಟೆಡ್‌ಗೆ ಮಾರಾಟ ಮಾಡಲು ಅನುಮತಿ
* ಕಲಬುರಗಿ ಶರಣಸಿರಸಗಿ ಗ್ರಾಮದ 4 ಎಕರೆ ಗೋಮಾಳ ಜಮೀನನ್ನು ಕಲಬುರಗಿ ಜಿಲ್ಲಾ ಆದಿ ವೀರಶೈವ ಬಣಜಿಗ ಸಮಾಜಕ್ಕೆ ಮಂಜೂರು
* ನಂಜನಗೂಡುಶ್ರೀಕಂಠೇಶ್ವರ ದೇವಾಲಯದ ಸ್ನಾನಘಟ್ಟದ ಹತ್ತಿರ ಕಬಿನಿ ನದಿಗೆ ಅಡ್ಡಲಾಗಿ ವಿಯರ್ ನಿರ್ಮಾಣ ಕಾಮಗಾರಿಗೆ 15 ಕೋಟಿ ರೂ.
* ವೈದ್ಯಕೀಯ ಶಿಕ್ಷಣ ಇಲಾಖೆಯಡಿಯಲ್ಲಿನ ವೈದ್ಯಕೀಯ ಬೋಧನಾ ಕಾಲೇಜು ಆಸ್ಪತ್ರೆಗಳಲ್ಲಿನ ಕ್ಲೇಮ್ ಪ್ರಕ್ರಿಯೆ ಹಾಗೂ ಡಿಜಟಲೀಕರಣಕ್ಕೆ 17.85 ಕೋಟಿ ರೂ.
* ಬೆಂಗಳೂರು ಕೇಂದ್ರ ಕಾರಾಗೃಹದ ಆವರಣದಲ್ಲಿ ಕಾರಾಗೃಹ ಇಲಾಖೆಗೆ ಸೇರಿದ ಜಮೀನಿನಲ್ಲಿ ಪೆಟ್ರೋಲ್ ಪಂಪ್ ಮತ್ತು ಮಾರಾಟ ಮಳಿಗೆ ಸ್ಥಾಪಿಸಲು ಅನುಮತಿ
* ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಮಾಲೀಕತ್ವದಲ್ಲಿರುವ ಪ್ರಾಧಿಕಾರದ 17.35 ಎಕರೆ ಜಮೀನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರಿಸಲು ಒಪ್ಪಿಗೆ

# 136 ಕುಟುಂಬಗಳಿಗೆ ಹಕ್ಕುಪತ್ರ ನೀಡದಿದ್ದರೆ ನಗರಸಭೆ ಎದುರು ಹೋರಾಟ: ಶ್ರೀನಿವಾಸ್

**ಶಿವಮೊಗ್ಗ, ಮೇ 21:** ಜಿಲ್ಲೆಯ ಸಾಗರ ಪಟ್ಟಣ ಸಮೀಪದ ಅರಳಿಕೊಪ್ಪ ಗ್ರಾಮದ ಜನ್ನತ್‌ನಗರದಲ್ಲಿರುವ 136 ಕುಟುಂಬಗಳಿಗೆ ಶನಿವಾರದೊಳಗೆ ಹಕ್ಕುಪತ್ರ ನೀಡದಿದ್ದಲ್ಲಿ ನಗರಸಭೆಯ ಎದುರು ನಿವಾಸಿಗಳೊಂದಿಗೆ ಅನಿರ್ಧಿಷ್ಟಾವಧಿ ಪ್ರತಿಭಟನೆ ನಡೆಸಲಾಗುವುದು ಎಂದು ಸಾಮಾಜಿಕ ಹೋರಾಟಗಾರ ತೀ.ನ.ಶ್ರೀನಿವಾಸ್ ಗಡುವು ನೀಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ, ರಾಜ್ಯ ಸರ್ಕಾರವು ಹಿಂದೆ ಒಟ್ಟು 600 ಮನೆಗಳಿಗೆ ಹಕ್ಕುಪತ್ರ ನೀಡಿತ್ತು. ಅದರಲ್ಲಿ ಜನ್ನತ್ ನಗರದ 136 ಮನೆಗಳು ಸಹ ಸೇರಿವೆ. ಆದರೆ, ಈ ಮನೆ ಮಾಲೀಕರಿಗೆ 'ಇ–ಸ್ವತ್ತು' ಮಾಡಿಕೊಡದೆ ನಗರಸಭೆಯು ಸತಾಯಿಸುತ್ತಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಎಂಟು ವರ್ಷಗಳ ಅಲೆದಾಟ– "ಜನ್ನತ್ ನಗರ ಬಡಾವಣೆಯಲ್ಲಿ ಕಳೆದ ನಾಲ್ಕೈದು ದಶಕಗಳಿಂದ 136 ಕುಟುಂಬಗಳು ವಾಸವಿದ್ದು, ನಗರಸಭೆಗೆ ನಿಯಮಿತವಾಗಿ ಕಂದಾಯ ಪಾವತಿ ಮಾಡುತ್ತಾ ಬಂದಿವೆ. ಆದಾಗ್ಯೂ ಅವರಿಗೆ ಫಾರಂ ನಂ. 3 ನೀಡುತ್ತಿಲ್ಲ. ಕಳೆದ ಎಂಟು ವರ್ಷಗಳಿಂದ ಈ ಕುಟುಂಬಗಳು ಫಾರಂ ನಂ. 3 ಮತ್ತು ಇ–ಸ್ವತ್ತು ಮಾಡಿಸಿಕೊಳ್ಳಲಾಗದೆ ಕಚೇರಿಗಳಿಗೆ ಅಲೆಯುತ್ತಿದ್ದಾರೆ. ಈ ಕುರಿತು ಮಾಜಿ ಹಾಗೂ ಹಾಲಿ ಶಾಸಕರಿಗೆ ಮನವಿ ಸಲ್ಲಿಸಿದ್ದರೂ ಯಾರೂ ಸೂಕ್ತ ನ್ಯಾಯ ದೊರಕಿಸಿಕೊಟ್ಟಿಲ್ಲ" ಎಂದು ದೂರಿದರು.ನಗರಸಭೆಯ ಆಡಳಿತ ವೈಖರಿಯನ್ನು ಟೀಕಿಸಿದ ಅವರು, "ನಗರಸಭೆಯಲ್ಲಿ ಹಣ ಕೊಟ್ಟರೆ ಯಾವ ಕೆಲಸ ಬೇಕಾದರೂ ಮಾಡಿಕೊಡುತ್ತಾರೆ. ನಗರಸಭೆ ವ್ಯಾಪ್ತಿಯಲ್ಲಿ ಬಹುಕೋಟಿ ಮೊತ್ತದ 'ಸೇಲ್ ಸರ್ಟಿಫಿಕೇಟ್' ಹಗರಣ ನಡೆದಿದ್ದರೂ, ಈವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಆದರೆ ಬಡ ಕುಟುಂಬಗಳು ಇ–ಸ್ವತ್ತು ಮಾಡಿಕೊಡಿ ಎಂದು ಅಂಗಲಾಚಿದರೂ ಅಧಿಕಾರಿಗಳ ಮನಸ್ಸು ಕರಗುತ್ತಿಲ್ಲ" ಎಂದು ಆರೋಪಿಸಿದರು.ಸ್ಥಳೀಯ ನಿವಾಸಿ ಅಶ್ವಿನಿ ಹೆಗಡೆ ಮಾತನಾಡಿ, "ಜನ್ನತ್ ನಗರದಲ್ಲಿರುವ 136 ಕುಟುಂಬಗಳಲ್ಲಿ ಶೇಕಡಾ 90 ರಷ್ಟು ಜನರು ಕಡುಬಡವರಾಗಿದ್ದು, ಕೂಲಿ ಕೆಲಸ ಮಾಡಿಕೊಂಡು ಜೀವನ ಸಾಗಿಸುತ್ತಿದ್ದಾರೆ. ಫಾರಂ ನಂ. 3 ಮತ್ತು ಇ–ಸ್ವತ್ತು ಇಲ್ಲದ ಕಾರಣ ಯಾವುದೇ ಸರ್ಕಾರಿ ಸೌಲಭ್ಯಗಳನ್ನು ಪಡೆದುಕೊಳ್ಳಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ನಮ್ಮ ಮನೆ ಹಕ್ಕಿಗಾಗಿ ನಗರಸಭೆ ಎದುರು ಪ್ರತಿಭಟನೆ ಮಾಡುವುದು ನಮಗೆ ಅನಿವಾರ್ಯವಾಗಿದೆ" ಎಂದು ತಮ್ಮ ಅಳಲನ್ನು ತೋಡಿಕೊಂಡರು.



# ನಾಮಧಾರಿ ವಿದ್ಯಾರ್ಥಿಗಳಿಗೆ ಮೇ 24ರಂದು ಪ್ರತಿಭಾ ಪುರಸ್ಕಾರ

**ಅಂಕೋಲಾ, ಮೇ.21:** ರಾಷ್ಟ್ರೀಯ ಈಡಿಗ ಮಹಾಮಂಡಳಿ ಅಂಕೋಲಾ ಹಾಗೂ ನಾರಾಯಣಗುರು ವೇದಿಕೆ ಅಂಕೋಲಾ ಇವರ ಆಶ್ರಯದಲ್ಲಿ ಮೇ 24 ರಂದು ಭಾನುವಾರ 3 ಗಂಟೆಗೆ ಪಟ್ಟಣದ ಪಿ.ಎಂ. ಹೈಸ್ಕೂಲ್ ರೈತಭವನದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ ವಿದ್ಯಾರ್ಥಿಗಳಿ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗಿದೆ.

ನೇಸರ ರಾಜೇಶ ನಾಯ್ಕ ಶೇ.97.12, ಸ್ವೀಕಾರ ಅರುಣ ನಾಯ್ಕ ಶೇ.97.6, ಭೂಮಿಕಾ ನಿರಂಜನ್ ನಾಯ್ಕ ಶೇ. 96.48, ಪ್ರೀತಿ ಮಾರುತಿ ನಾಯ್ಕ ಶೇ. 95.68, ನಿಹಾರ ರಾಜೇಶ ನಾಯ್ಕ ಶೇ. 92.64, ತನಯ್ ರವೀಂದ್ರ ನಾಯ್ಕ ಶೇ.92.48, ಮಾನ್ಸಿ ರಾಮಚಂದ್ರ ನಾಯ್ಕ ಶೇ.88.96, ಶಿವಾನಿ ರವಿ ನಾಯ್ಕ ಶೇ. 86.24 ಅಂಕ ಪಡೆದಿದ್ದು ಪ್ರತಿಭಾ ಪುರಸ್ಕಾರ ನಡೆಯಲಿದೆ.


# ಅಂಕೋಲಾದ ಕರಿ ಇಷಾಡ ಮಾವಿನ ಹಣ್ಣಿಗೆ ಹೆಚ್ಚಿದ ಬೇಡಿಕೆ

**ಅಂಕೋಲಾ, ಮೇ.21**–ಅಂಕೋಲಾದ ಕರಿ ಇಷಾಡ ಮಾವಿನಹಣ್ಣು ಕರ್ನಾಟಕದ ಕರಾವಳಿ ಭಾಗದ ಅತ್ಯಂತ ರುಚಿಕರ ಮತ್ತು ಅಪರೂಪದ ಮಾವಿನ ತಳಿಗಳಲ್ಲಿ ಒಂದಾಗಿದೆ. ಇದು ಮುಖ್ಯವಾಗಿ ಉತ್ತರ ಕನ್ನಡ ಜಿಲ್ಲೆಯ ಅಂಕೋಲಾಕ್ಕೆ ಸೀಮಿತವಾಗಿದೆ.

ಅಂಕೋಲಾದ ಮಣ್ಣಿನ ಗುಣಗಳಿಂದಾಗಿಯೇ ಇಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬೆಳೆಯುತ್ತವೆ. ಬ್ರಿಟಿಷರ ಆಡಳಿತದ ಕಾಲದಲ್ಲಿ ದೊಡ್ಡ ಮಾರುಕಟ್ಟೆಗೆ ತೆರಳುತ್ತಿತ್ತು. ಆದರೆ ಈಗ ಹುಬ್ಬಳ್ಳಿ ಸೇರಿದಂತೆ ವಿವಿಧ ಭಾಗಗಳಲ್ಲಿ ಪ್ರಮುಖ ಬೇಡಿಕೆಗಳಿವೆ.

**ಜಿಐ ಟ್ಯಾಗ್:** ಅಂಕೋಲಾದ ಕರಿ ಇಷಾಡ ಮಾವು 2023ರಲ್ಲಿ ಪ್ರತಿಷ್ಠಿತ ಭೌಗೋಳಿಕ ಗುರುತು ಮಾನ್ಯತೆಯನ್ನು ಪಡೆದಿದೆ. ರುಚಿ ಮತ್ತು ಸುವಾಸನೆ, ಈ ಮಾವಿನ ಹಣ್ಣಿನವಿಶೇಷ ಗುಣವಾಗಿದೆ. ದಪ್ಪನೆಯ ತಿರುಳು ಮತ್ತು ಅತ್ಯಂತ ರುಚಿಕರವಾದ ಸಿಹಿಗೆ ಹೆಸರುವಾಸಿ ಯಾಗಿದೆ.

ಬೆಳೆಯುವ ಪ್ರದೇಶ:ಅಂಕೋಲಾದ ನಂತರ ಸಣ್ಣ ಪ್ರಮಾಣದಲ್ಲಿ ಕಾರವಾರ ಮತ್ತು ಕುಮಟಾದ ಕೆಲವು ಭಾಗಗಳಲ್ಲಿ ಕರಿಇಶಾಡ ಮಾವಿನಹಣ್ಣು ಬೆಳೆಯಲಾಗುತ್ತದೆ. ಹಾಲಕ್ಕಿ ಸಮುದಾಯದವರು ಈ ಹಣ್ಣನ್ನು ಸಾಂಪ್ರದಾಯಿಕವಾಗಿ ಬೆಳೆಯುತ್ತಾರೆ. ಬಣ್ಣ ಮತ್ತು ಗಾತ್ರ ಹಣ್ಣು ಬಲಿತಾಗ ಕಡು ಹಸಿರು ಅಥವಾ ಕಪ್ಪು ಮಿಶ್ರಿತ ಹಸಿರು ಬಣ್ಣದಲ್ಲಿರುತ್ತದೆ, ಗಾತ್ರದಲ್ಲಿ ಮಧ್ಯಮದಿಂದ ದೊಡ್ಡದಾಗಿರುತ್ತದೆ.ಈ ಕರಿಇಶಾಡ ಮಾವಿನಹಣ್ಣು ಮೇ–ಜೂನ್‌ನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ದೊರೆಯುತ್ತದೆ. ತಾಲೂಕಿನ ಸುಮಾರು 537 ಎಕರೆ ಪ್ರದೇಶದಲ್ಲಿ ಮಾವು ಬೆಳೆಯಲಾಗುತ್ತಿದೆ. ಇದರಿಂದಾಗಿ ಪ್ರತಿ ವರ್ಷ ಸುಮಾರು 2 ಕೋಟಿ 93 ಲಕ್ಷ ರೂಪಾಯಿಗಳ ಆದಾಯವನ್ನು ಮಾವು ಬೆಳೆಗಾರರು ಪಡೆದು ಕೊಳ್ಳುತ್ತಿದ್ದಾರೆ. ಆದರೆ ಕೆಲವೊಮ್ಮೆ ವಾತಾವರಣಗಳ ಬದಲಾವಣೆ ಯಿಂದಾಗಿ ನಿರೀಕ್ಷಿತ ಆದಾಯವನ್ನು ಪಡೆದುಕೊಳ್ಳಲು ಸಾಧ್ಯವಾಗುತ್ತಿಲ್ಲ.



**ಮಾರುಕಟ್ಟೆ :** ಇಲ್ಲಿ ಬೆಳೆದ ಮಾವನ್ನು ಬಿದಿರಿನ ಬುಟ್ಟಿಯಲ್ಲಿ ತುಂಬಿ ಅದನ್ನು ಗೊವಾ ಮತ್ತು ಹುಬ್ಬಳ್ಳಿ ಮಾರುಕಟ್ಟೆಗೆ ಸಾಗಿಸಲಾಗುತ್ತದೆ. ಬೆಳೆಗಾರರಿಂದ ನೇರವಾಗಿಯೇ ಏಜೆಂಟರು ಖರೀದಿಸಿ ಅದನ್ನು ಬೇರೆ ಬೇರೆ ಸ್ಥಳಗಳಲ್ಲಿ ಮಾರುಕಟ್ಟೆಗೆ ಸ್ಥಳಾಂತರಿಸಲಾಗುತ್ತಿದೆ. ಹೀಗಾಗಿ ಬೆಳೆಗಾರರಿಗೂ ಕೂಡ ಇದು ಅನುಕೂಲ. ಆದರೆ ಈ ವರ್ಷ ಮೋಡ ಮುಸುಕಿದ ವಾತಾವರಣ ಮತ್ತು ವಿಪರೀತ ಬಿಸಿಲಿನಿಂದಾಗಿ ಬಹುತೇಕ ಮಾವಿನ ಬೆಳೆಯು ನೆಲಕಚ್ಚಿದಂತಾಗಿದೆ.


**ದರ :** ಅಂಕೋಲಾ ಮಾರುಕಟ್ಟೆಯಲ್ಲಿ ಈಗ ಒಂದು ಡಜನ್ ಮಾವಿನ ಹಣ್ಣಿಗೆ 400 ರಿಂದ 300 ರವರೆಗೆ ದರವಿದೆ. ಆದರೂ ಕೂಡ ಮಾವು ಪ್ರಿಯರು ಇದನ್ನು ಖರೀದಿಸುತ್ತಾರೆ. ಕೆಲವು ಹಾಲಕ್ಕಿ ಮಹಿಳೆಯರು ಸ್ಥಳೀಯ ಬೆಳೆಗಾರರಿಂದ ಮಾವು ಖರೀದಿಸಿ ಪಟ್ಟಣದ ಮಾರುಕಟ್ಟೆಯಲ್ಲಿ ಹೆಚ್ಚಿನ ಬೆಲೆ ಮಾರುತ್ತಾರೆ. ಕಳೆದ ನಾಲ್ಕು ವರ್ಷಗಳಿಂದ ಬೆಳೆಗಾರರ ಸಮಿತಿಯ ಪ್ರಮುಖರಾದ ನಾಗರಾಜ ನಾಯಕ ಅವರು ಮಾವು ಮೇಳವನ್ನು ಹಮ್ಮಿಕೊಳ್ಳುತ್ತ ಬಂದಿದ್ದಾರೆ. ಇದರಿಂದಾಗಿ ಮಾವು ಮೇಳದಲ್ಲಿ ಅಂಕೋಲಾದಲ್ಲಿ ಬೆಳೆದ ವಿವಿಧ ಪ್ರಬೇಧದ ಮಾವುಗಳು ಕೂಡ ಆಗಮಿಸುತ್ತವೆ. ಏನೆ ಆಗಲಿ ಅಂಕೋಲಾ ಕರಿ ಇಶಾಡ ಮಾವಿನಹಣ್ಣಿಗೆ ಬಾರಿ ಡಿಮಾಂಡ್ ಇದ್ದು, ತನ್ನ ಘನತೆಯನ್ನು ಟ್ಯಾಗ್ ಮೂಲಕ ಇನ್ನಷ್ಟು ಇಮ್ಮಡಿಗೊಳಿಸಿಕೊಂಡಿದೆ.

**ಕರಿ ಇಷಾಡ ಮಾವಿನ ಬೆಳೆ ನಮಗೆ ವರದಾನವಾಗಿದೆ. ಆದರೆ ಕೆಲವು ವರ್ಷಗಳಲ್ಲಿ ಲಾಭದ ಪ್ರಮಾಣವು ತಗ್ಗುತ್ತಿದೆ. ಹವಾಮಾನ ವೈಪರಿತ್ಯದಿಂದಾಗಿ ಮಾವಿನ ಬೆಳೆಯು ನಿರ್ಧಾರವಾಗುತ್ತದೆ. ಈ ವರ್ಷ ಕರಿಇಶಾಡ ಮಾವಿನಹಣ್ಣು ತಾಲೂಕಿನಲ್ಲಿ ಸ್ವಲ್ಪ ಕಡಿಮೆ ಇಳುವರಿ ಬಂದಿದೆ.**

**– ಸೋಮು ಗೌಡ, ಮಾವು ಬೆಳೆಗಾರ, ಹೊಸಗದ್ದೆ**

# ರಾಜಕಾಲುವೆ ತಕ್ಷಣ ಸ್ವಚ್ಛಗೊಳಿಸಿ, ಮೇಯರ್ ಎಂ.ಎಸ್. ಕರಡಿ ಅಧಿಕಾರಿಗಳಿಗೆ ಸೂಚನೆ

**ವಿಜಯಪುರ, ಮೇ.21:** ನಗರದ ಪ್ರಮುಖ ರಾಜಕಾಲುವೆಗಳು, ಒಳಚರಂಡಿಗಳು ಹಾಗೂ ಮಳೆ ನೀರು ಹರಿವಿನ ಮಾರ್ಗಗಳನ್ನು ತಕ್ಷಣ ಸ್ವಚ್ಛಗೊಳಿಸುವಂತೆ ಮಹಾನಗರ ಪಾಲಿಕೆ ಮೇಯರ್ ಎಂ.ಎಸ್. ಕರಡಿ ಅವರು ಅಧಿಕಾರಿಗಳಿಗೆ ಸೂಚಿಸಿದರು.




ನಗರ ವ್ಯಾಪ್ತಿಯಲ್ಲಿ ಮುಂಗಾರು ಹಾಗೂ ಪ್ರವಾಹ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಪಾಲಿಕೆಯ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ಗುರುವಾರ ಹಮ್ಮಿಕೊಂಡಿದ್ದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದ ಅವರು, ನೀರು ನಿಲ್ಲುವ ಪ್ರದೇಶಗಳಲ್ಲಿ ಅಗತ್ಯ ಪಂಪ್ ಸೆಟ್ ಗಳನ್ನು ಸಿದ್ಧವಾಗಿಡಬೇಕು.

ತುರ್ತು ದುರಸ್ತಿ ಕಾಮಗಾರಿಗಳನ್ನು ಕೈಗೊಳ್ಳುವುದು ಹಾಗೂ ಸಾರ್ವಜನಿಕರಿಗೆ ಯಾವುದೇ ತೊಂದರೆ ಉಂಟಾಗದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಅನುಸರಿಸಬೇಕು ಎಂದು ಮೇಯರ್ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದರು.

ಅಗ್ನಿಶಾಮಕ ದಳ, ಆರೋಗ್ಯ ಇಲಾಖೆ, ವಿದ್ಯುತ್ ಇಲಾಖೆ ಹಾಗೂ ಇತರೆ ಸಂಬಂಧಿತ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ತುರ್ತು ಪರಿಸ್ಥಿತಿಗಳನ್ನು ಎದುರಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲು ಸೂಚಿಸಿದರು. ಸಾರ್ವಜನಿಕರು ಮಳೆ ಸಂದರ್ಭದಲ್ಲಿ ಎಚ್ಚರಿಕೆಯಿಂದ ಇರಬೇಕು. ಯಾವುದೇ ತುರ್ತು ಪರಿಸ್ಥಿತಿ ಉಂಟಾದಲ್ಲಿ ಮಹಾನಗರ ಪಾಲಿಕೆಯ ಸಹಾಯವಾಣಿ ಸಂಖ್ಯೆ: 08352–222474 ಸಂಪರ್ಕಿಸಲು ಮೇಯರ್ ಮನವಿ ಮಾಡಲಾಯಿತು.

ಸಭೆಯಲ್ಲಿ ಮುಂಗಾರು ಸಂದರ್ಭದಲ್ಲಿ ಸಂಭವಿಸಬಹುದಾದ ಜಲಾವೃತ ಪ್ರದೇಶಗಳು, ಮಳೆ ನೀರಿನ ಹರಿವು, ಚರಂಡಿ ಸ್ವಚ್ಛತೆ, ರಸ್ತೆ ಹಾನಿ, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ತುರ್ತು ಪರಿಸ್ಥಿತಿಗಳ ನಿರ್ವಹಣೆ ಕುರಿತು ಸಮಗ್ರವಾಗಿ ಚರ್ಚಿಸಲಾಯಿತು.

# ಬೇಸೂರು ಅಣುಸ್ಥಾವರ ವಿರೋಧಿಸಿ ಗ್ರಾಮಸ್ಥರಿಂದ ಸಾಗರದವರೆಗೆ ಭಾರಿ ಪಾದಯಾತ್ರೆ ಆರಂಭ



**ಶಿವಮೊಗ್ಗ, ಮೇ 21:** ಬೇಸೂರಿನಲ್ಲಿ ಅಣುಸ್ಥಾವರ ನಿರ್ಮಾಣಕ್ಕೆ ವಿರೋಧ ವ್ಯಕ್ತಪಡಿಸಿ ಬೇಸೂರು ಗ್ರಾಮಸ್ಥರು ಬೇಸೂರಿನಿಂದ ಸಾಗರದ ಉಪ ವಿಭಾಗಾಧಿಕಾರಿ ಕಚೇರಿವರೆಗೂ ಪಾದಯಾತ್ರೆ ಆರಂಭಿಸಿದ್ದಾರೆ.

ಬೇಸೂರು ಗ್ರಾಮದಿಂದ ಬುಧವಾರ ಬೆಳಗ್ಗೆ ಪ್ರಾರಂಭವಾದ ಪಾದಯಾತ್ರೆಗೆ ಹೊಸನಗರ ಮಾಜಿ ಶಾಸಕ ಸ್ವಾಮಿರಾವ್ ಚಾಲನೆ ನೀಡಿದರು. ಈ ವೇಳೆ ಮೂಲೆಗದ್ದೆ ಮಠದ ಸ್ವಾಮೀಜಿ ಹಾಜರಿದ್ದರು. ಬೇಸೂರು ಗ್ರಾಮದಿಂದ ಹೊರಟ ಪಾದಯಾತ್ರೆಯು ಸಾಗರ ರಸ್ತೆಯ ಮೂಲಕ ಸಾಗರ ಪಟ್ಟಣ ತಲುಪಿದೆ. 'ಬಿಸೂರು ಕೊಟ್ಟರೂ ಬೇಸೂರು ಕೊಡೆವು' ಎಂಬ ಘೋಷಣೆಯೊಂದಿಗೆ ಪಾದಯಾತ್ರೆ ನಡೆಸಲಾಗುತ್ತಿದೆ.

ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಸಾಗರ ತಾಲೂಕಿನಲ್ಲಿ ರೈತರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪಾದಯಾತ್ರೆಯಲ್ಲಿ ಬೇಸೂರು ಗ್ರಾಮದವರು ಸೇರಿದಂತೆ, ಅಕ್ಕಪಕ್ಕದ ಗ್ರಾಮಸ್ಥರು, ರೈತ ಸಂಘಟನೆಯವರು, ಹೋರಾಟಗಾರರು ಹಾಗೂ ಮಕ್ಕಳೂ ಸಹ ಭಾಗಿಯಾಗಿದ್ದಾರೆ.

ಪ್ರತಿಭಟನಾಕಾರರು ಸಾಗರ ಪಟ್ಟಣದ ಉಪವಿಭಾಗಾಧಿಕಾರಿ ಕಚೇರಿ ತಲುಪಿದ್ದು, ಮೇ 21ರಿಂದ ಮೇ 26ರ ತನಕ ಸಾಗರ ಎಸಿ ಕಚೇರಿ ಮುಂಭಾಗ ಸರಣಿ ಧರಣಿ ನಡೆಸಲಿದ್ದಾರೆ. ನಂತರ ಏಪ್ರಿಲ್ 27 ರಂದು ಶಿವಮೊಗ್ಗದ ಡಿಸಿ ಕಚೇರಿ ಮುಂಭಾಗ ಧರಣಿ ನಡೆಸುವುದಾಗಿ ಹೇಳಿದರು.

**ಹೋರಾಟಕ್ಕೆ ಸಂಸದ ಬಿ.ವೈ. ರಾಘವೇಂದ್ರ ಬೆಂಬಲ**

ಪ್ರತಿಭಟನೆಯಲ್ಲಿ ಭಾಗಿಯಾದ ಸಂಸದ ಬಿ.ವೈ. ರಾಘವೇಂದ್ರ ಅವರು ಮಾತನಾಡಿ, 'ನಾನು ಬೆಂಗಳೂರಿಗೆ ಹೋಗಬೇಕಿತ್ತು. ಆದರೆ ರೈತರ, ಮುಳುಗಡೆ ಸಂತ್ರಸ್ತರ ಪರವಾದ ಹೋರಾಟಕ್ಕೆ ಬೆಂಬಲ ನೀಡಲು ಬಂದಿದ್ದೇನೆ. ಕೇಂದ್ರದ ಪರವಾಗಿ ನಾನು, ರಾಜ್ಯ ಸರ್ಕಾರದ ಪರವಾಗಿ ಶಾಸಕ ಗೋಪಾಲಕೃಷ್ಣ ಬೇಳೂರು ಅವರು ಇದ್ದಾರೆ. ನಾವು ಇಲ್ಲಿ ಅಣುಸ್ಥಾವರ ಸ್ಥಾಪನೆ ಆಗಲು ಬಿಡುವುದಿಲ್ಲ. ನಾನು ಈ ಕುರಿತು ಕೇಂದ್ರ ಸರ್ಕಾರದ ಜೊತೆ ಮಾತನಾಡುತ್ತೇನೆ. ನಾನು ನಿಮ್ಮೊಂದಿಗೆ ಇದ್ದೇನೆ' ಎಂದು ಅಭಯ ನೀಡಿದರು.

**ಅಣುಸ್ಥಾವರ ಸ್ಥಾಪನೆ ಪ್ರಸ್ತಾವನೆ ಇಲ್ಲ**

ಇದೇ ವೇಳೆ ಪ್ರತಿಭಟನಾಕಾರರ ಮನವಿ ಸ್ವೀಕರಿಸಲು ಆಗಮಿಸಿದ್ದ ಡಿಸಿ ಪ್ರಭುಲಿಂಗ ಕವಳಿಕಟ್ಟಿ ಅವರು ಮಾತನಾಡಿದ್ದು, ಈ ಹಿಂದೆ ಎನ್‌ಟಿಪಿಸಿಎಲ್‌ನವರು ನಡೆಸಿದ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಭೂಮಿ ಕೇಳಿದ್ದರು.

ಆದರೆ ಇದುವರೆಗೂ ನಮ್ಮ ಕಡೆಯಿಂದ ಎನ್‌ಟಿಪಿಸಿಎಲ್ ನವರಿಗೆ ನಮ್ಮ ಜಿಲ್ಲೆಯಲ್ಲಿ ಭೂಮಿ ಇದೆ, ಬೇಸೂರು ಇದೆ ಎಂದು ತಿಳಿಸಿಲ್ಲ. ನಮ್ಮಲ್ಲಿ ಅಣುವಿದ್ಯುತ್ ಸ್ಥಾವರ ಸ್ಥಾಪನೆಯ ಪ್ರಸ್ತಾವನೆ ಇಲ್ಲ ಎಂದು ಪ್ರತಿಭಟನಾಕಾರರ ಮುಂದೆ ಸ್ಪಷ್ಟಪಡಿಸಿದರು.



ತಣ್ಣೀರುಬಾವಿ ಮಂಗಳೂರಿನ ಬ್ಲೂ ಬೇ ಇಕೋ ಬೀಚ್‌ನಲ್ಲಿ ಗುರುವಾರ ನಡೆದ ಪ್ರಾಯೋಗಿಕ ಸರ್ಫಿಂಗ್‌ನಲ್ಲಿ ಉತ್ಸಾಹಿಗಳು ಭಾಗವಹಿಸಿದ್ದರು. 7ನೇ NMPA ಇಂಡಿಯನ್ ಓಪನ್ ಆಫ್ ಸರ್ಫಿಂಗ್ ಮೇ 29–31 ರಂದು ನಡೆಯಲಿದೆ.

## ಚಂದನ ವಾಹಿನಿ ಅಧಿಕಾರಿ ಅಂತರಂಗದಲ್ಲಿ ಹಾಸನ ಡಿಸಿ ಲತಾಕುಮಾರಿ: ನಾಳೆ ಪ್ರಸಾರ

**ಹಾಸನ, ಮೇ 21:** ದೂರದರ್ಶನ ಚಂದನವಾಹಿನಿಯ ಜನಪ್ರಿಯ ಅಧಿಕಾರಿ ಅಂತರಂಗ ಕಾರ್ಯಕ್ರಮದಲ್ಲಿ 23 ರ ಭಾನುವಾರ ರಾತ್ರಿ 8 ಗಂಟೆಗೆ ಹಾಸನ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಬದುಕಿನ ಪಯಣ ಮೂಡಿ ಬರಲಿದೆ. ಇತಿಹಾಸದ ಹೆಮ್ಮೆಯ ನೆಲ ಹಾಸನ ಜಿಲ್ಲೆಯ 50ನೇ ಜಿಲ್ಲಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ಅವರ ಬದುಕಿನ ಚಿತ್ರಣವನ್ನು ಈ ಕಾರ್ಯಕ್ರಮ ಕಟ್ಟಿಕೊಡಲಿದೆ. ಮದುವೆಯ ನಂತರದ ಓದಿ ವಿಜ್ಞಾನಿಯಾಗುವ ಹಂಬಲ ಹೊಂದಿದ್ದ ಕೆ.ಎಸ್. ಲತಾಕುಮಾರಿ ಐಎಎಸ್ ಅಧಿಕಾರಿಯಾಗುವವರೆಗಿನ ರೋಚಕ ಬದುಕಿನ ಕಥನವನ್ನು ಇದು ಒಳಗೊಂಡಿದೆ.




## ಪನ್ಸೋಲಿ ಆನೆ ಬಿಡಾರಕ್ಕೂ ಸಾರ್ವಜನಿಕರ ಪ್ರವೇಶ ನಿರ್ಬಂಧ

# ದುಬಾರೆ ಬಿಡಾರದಲ್ಲಿ ಮಹಿಳೆ ಬಲಿಯಾದ ಬೆನ್ನಲ್ಲೇ ಮುನ್ನೆಚ್ಚರಿಕೆ



**ಕಾರವಾರ, ಮೇ 21:** ಕೊಡಗು ಜಿಲ್ಲೆಯ ದುಬಾರೆ ಆನೆ ಶಿಬಿರದಲ್ಲಿ ಸಾಕಾನೆಗಳ ಕಾದಾಟಕ್ಕೆ ಪ್ರವಾಸಿ ಮಹಿಳೆ ಬಲಿಯಾದ ಬೆನ್ನಲ್ಲೇ ಮುನ್ನೆಚ್ಚರಿಕಾ ಕ್ರಮವಾಗಿ ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ತಾಲೂಕಿನ ಪನ್ಸೋಲಿ ಆನೆ ಬಿಡಾರಕ್ಕೆ ಸಾರ್ವಜನಿಕರ ಪ್ರವೇಶವನ್ನು ಅರಣ್ಯ ಇಲಾಖೆ ನಿರ್ಬಂಧಿಸಿದೆ.ಪನ್ಸೋಲಿ ಆನೆ ಬಿಡಾರಕ್ಕೆ ಪ್ರವೇಶವಿಲ್ಲ. ಮುಂದಿನ ಆದೇಶದವರೆಗೆ ಸಾರ್ವಜನಿಕರಿಗೆ ಆನೆ ವೀಕ್ಷಣೆಗೆ ನಿರ್ಬಂಧ ಹೇರಿ ಅರಣ್ಯ ಇಲಾಖೆ ಆದೇಶ ಹೊರಡಿಸಿದೆ.ಪನ್ಸೋಲಿ ಆನೆ ಬಿಡಾರ ಪ್ರವಾಸಿಗರ ನೆಚ್ಚಿನ ತಾಣವಾಗಿದೆ. ಇಲ್ಲಿ ಒಟ್ಟು ಐದು ಆನೆಗಳಿವೆ. ನಿತ್ಯ ಬೆಳಗ್ಗೆ ಮತ್ತು ಸಾಯಂಕಾಲ ಆನೆ ವೀಕ್ಷಣೆಗೆ ಅವಕಾಶವಿತ್ತು. ಆನೆ ಚಿಕಿತ್ಸಾ ಕೇಂದ್ರ ಮತ್ತು ತರಬೇತಿ ಕೇಂದ್ರವಾಗಿ ಅರಣ್ಯ ಇಲಾಖೆ ಮಾರ್ಪಡಿಸಿದೆ. ದುಬಾರೆ ಆನೆ ಬಿಡಾರದಲ್ಲಿ ಸಂಭವಿಸಿದ ದುರಂತದ ಬೆನ್ನಲ್ಲೇ ಈಗ ಸಾರ್ವಜನಿಕರಿಗೆ ಪ್ರವೇಶ ನಿರ್ಬಂಧಿಸಲಾಗಿದೆ.ಕೊಡಗು ಜಿಲ್ಲೆಯ ದುಬಾರೆ ಆನೆ ಶಿಬಿರದಲ್ಲಿ ನೂರಾರು ಪ್ರವಾಸಿಗರ ಎದುರಲ್ಲೇ ಮೇ 18ರಂದು ಘೋರ ದುರಂತ ನಡೆದಿತ್ತು. ಮದವೇರಿ ಬಂದಿದ್ದ ಕಂಜನ್ ಆನೆ ನೇರವಾಗಿ ಮಾರ್ತಾಂಡ ಆನೆ ಮೇಲೆ ದಾಳಿ ಮಾಡಿತ್ತು. ತಕ್ಷಣ ಮಾರ್ತಾಂಡ ಪ್ರವಾಸಿಗರ ಮೇಲೆಯೇ ಉರುಳಿ ಬಿದ್ದಿತ್ತು. ಆನೆ ಅಡಿ ಸಿಲುಕಿ ಚೆನ್ನೈ ಮೂಲದ ತುಳಸಿ ಎಂಬ ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿದ್ದರು. ಆಕೆಯ ಪತಿ ಜೋಯೆಲ್ ಹಾಗೂ ಪುತ್ರಿ ಪ್ರಾಣಾಪಾಯದಿಂದ ಪಾರಾಗಿದ್ದರು.ಈ ಘಟನೆ ಬೆನ್ನಲ್ಲೇ ರಾಜ್ಯದ ವನ್ಯಜೀವಿ ಧಾಮಗಳಲ್ಲಿ ಸಫಾರಿಗೆ ತೆರೆದ ವಾಹನಗಳಿಗಳನ್ನು ಬಳಸಲು ನಿಷೇಧಿಸಲಾಗಿದೆ. ಇನ್ಮುಂದೆ ಪ್ರವಾಸಿಗರಿಗೆ ಕೇವಲ ಬಸ್ ಸಫಾರಿಗೆ ಮಾತ್ರ ಅವಕಾಶ ನೀಡಲಾಗುವುದು ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ.

## ದಿಡುಪೆ ಜಲಪಾತಕ್ಕೆ ಭೇಟಿ ನೀಡಿದ್ದ ಯುವತಿಯರಿಗೆ ಲೈಂಗಿಕ ಕಿರುಕುಳ

# ಬೆಳ್ತಂಗಡಿ ಪೊಲೀಸರಿಂದ ಕೇರಳದ ಮೂವರು ಯುವಕರ ಬಂಧನ



**ಬೆಳ್ತಂಗಡಿ, ಮೇ 21:** ನೈಸರ್ಗಿಕ ಸೌಂದರ್ಯಕ್ಕೆ ಹೆಸರುವಾಸಿಯಾದ ದಕ್ಷಿಣ ಕನ್ನಡ ಜಿಲ್ಲೆಯ ಪ್ರವಾಸಿ ತಾಣವೊಂದರಲ್ಲಿ ಆಘಾತಕಾರಿ ಘಟನೆ ಬೆಳಕಿಗೆ ಬಂದಿದೆ. ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಪ್ರಸಿದ್ಧ ದಿಡುಪೆ ಜಲಪಾತಕ್ಕೆ ಭೇಟಿ ನೀಡಿದ್ದ ಯುವತಿಯರ ಮೇಲೆ ಲೈಂಗಿಕ ಕಿರುಕುಳದ ಗಂಭೀರ ಆರೋಪಗಳು ಬಂದಿವೆ. ಈ ಘಟನೆಗೆ ಸಂಬಂಧಿಸಿದಂತೆ, ಬೆಳ್ತಂಗಡಿ ಪೊಲೀಸ್ ಠಾಣೆಯ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ಕೇರಳದ ಮೂವರು ಯುವಕರನ್ನು ಬಂಧಿಸಿದ್ದಾರೆ.

ಬಂಧಿತ ಆರೋಪಿಗಳನ್ನು ಅಬ್ದುಲ್ ಖಾದರ್ (36), ಫೈಸಲ್ ಆದಿಲ್ (27) ಮತ್ತು ಉಸ್ಮಾನ್ ಸಲೀಂ (18) ಎಂದು ಗುರುತಿಸಲಾಗಿದೆ. ಈ ಮೂವರು ಕೇರಳದ ಕಾಸರಗೋಡು ನಿವಾಸಿಗಳು. ಆರೋಪಿಗಳು ಅನ್ಯಕೋಮಿ ಸಮುದಾಯದ ಯುವತಿಯರನ್ನು ಜಲಪಾತದ ಸೌಂದರ್ಯವನ್ನು ನೋಡುವ ನೆಪದಲ್ಲಿ ದಿಡುಪೆಗೆ ಕರೆತಂದಿದ್ದರು ಎಂದು ಹೇಳಲಾಗಿದೆ.

ಆರೋಪಿಗಳು ಜಲಪಾತದ ಬಳಿ ಯುವತಿಯರೊಂದಿಗೆ ಇದ್ದಾಗ ಅವರಿಗೆ ಲೈಂಗಿಕ ಕಿರುಕುಳ ನೀಡಲು ಪ್ರಯತ್ನಿಸಿದ್ದಾರೆ ಎಂದು ತಿಳಿದು ಬಂದಿದೆ.

ಹುಡುಗಿಯರ ನಡವಳಿಕೆ ಮತ್ತು ಆರೋಪಿಗಳ ನಡವಳಿಕೆಯನ್ನು ನೋಡಿದ ಸ್ಥಳೀಯ ನಿವಾಸಿಗಳಿಗೆ ತಕ್ಷಣವೇ ಎಚ್ಚರಿಕೆ ನೀಡಲಾಯಿತು. ಪರಿಸ್ಥಿತಿಯನ್ನು ಅರಿತ ಸ್ಥಳೀಯರು ಮೂವರು ಆರೋಪಿಗಳನ್ನು ಹಿಡಿದು ಪೊಲೀಸರನ್ನು ಸ್ಥಳಕ್ಕೆ ಕರೆಸಿ ವಶಕ್ಕೆ ಒಪ್ಪಿಸಿದ್ದಾರೆ.

ಯುವತಿಯರು ಸಲ್ಲಿಸಿದ ಲಿಖಿತ ದೂರಿನ ಆಧಾರದ ಮೇಲೆ, ಬೆಳ್ತಂಗಡಿ ಪೊಲೀಸ್ ಠಾಣೆಯಲ್ಲಿ ಭಾರತೀಯ ದಂಡ ಸಂಹಿತೆಯ ಸಂಬಂಧಿತ ವಿಭಾಗಗಳ ಅಡಿಯಲ್ಲಿ ಆರೋಪಿಗಳ ವಿರುದ್ಧ ಪ್ರಥಮ ಮಾಹಿತಿ ವರದಿ (ಎಫ್‌ಐಆರ್) ದಾಖಲಿಸಲಾಗಿದೆ.

ಪ್ರಸ್ತುತ, ಪೊಲೀಸರು ಮೂವರು ಆರೋಪಿಗಳನ್ನು ವಶಕ್ಕೆ ಪಡೆದು ಅವರನ್ನು ಕೂಲಂಕಷವಾಗಿ ವಿಚಾರಣೆ ನಡೆಸುತ್ತಿದ್ದಾರೆ. ಅಲ್ಲದೆ, ಈ ಘಟನೆಯ ಹಿಂದಿನ ನಿಖರವಾದ ಕಾರಣ ಮತ್ತು ಉದ್ದೇಶವನ್ನು ಕಂಡುಹಿಡಿಯಲು ತನಿಖೆಯನ್ನು ತೀವ್ರಗೊಳಿಸಲಾಗಿದೆ. ಈ ಘಟನೆಯು ಪ್ರವಾಸಿ ತಾಣಗಳಲ್ಲಿ ಮಹಿಳೆಯರ ಸುರಕ್ಷತೆಯ ಬಗ್ಗೆ ಮತ್ತೊಮ್ಮೆ ಕಳವಳವನ್ನು ಹುಟ್ಟು ಹಾಕಿದೆ.

# ಜೂ.10ರಿಂದ ಕಲಬುರಗಿ ನಿತ್ಯ ವಿಮಾನ ಸಂಚಾರಕ್ಕೆ ಮತ್ತೆ ಚಾಲನೆ





**ಕಲಬುರಗಿ, ಮೇ 21:** ಕಳೆದ ಎಂಟು ತಿಂಗಳಿನಿಂದ ಸ್ಥಗಿತಗೊಂಡಿರುವ ಕಲಬುರಗಿ ಮತ್ತು ಬೆಂಗಳೂರು ನಡುವಣ ನಿತ್ಯ ವಿಮಾನ ಸೇವೆಗೆ ಜೂನ್ 10ರಿಂದ ಮತ್ತೆ ಚಾಲನೆ ಸಿಗಲಿದೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಸ್ಟಾರ್ ಏರ್ ಸಂಸ್ಥೆಯು, ನಿತ್ಯ ಸಂಜೆ 6 ಗಂಟೆಗೆ ಬೆಂಗಳೂರಿನಿಂದ ಹೊರಟು ಸಂಜೆ 7.10ಕ್ಕೆ ಕಲಬುರಗಿ ತಲುಪಲಿದೆ.ಸಂಜೆ 7.40ಕ್ಕೆ ಕಲಬುರಗಿಯಿಂದ ಹೊರಟು ರಾತ್ರಿ 8.50ಕ್ಕೆ ಬೆಂಗಳೂರು ತಲುಪಲಿದೆ ಎಂದು ಸ್ಪಷ್ಟಪಡಿಸಿದೆ.

ಅಲ್ಲದೇ, ಜೂನ್ 10ರಿಂದ ಬುಕಿಂಗ್‌ಗೂ ಅವಕಾಶ ನೀಡಿದೆ. ಈ ನಿರ್ಧಾರವು ಈ ಭಾಗದ ಜನರಲ್ಲಿ ಹರ್ಷ ಮೂಡಿಸಿದೆ.2025ರ ಅಕ್ಟೋಬರ್ 8ರಂದು ಕಲಬುರಗಿ–ಬೆಂಗಳೂರು ನಡುವೆ ಕೊನೆಯದಾಗಿ ವಿಮಾನ ಹಾರಾಡಿತ್ತು. ಅಂದಿನಿಂದ ಇಂದಿನ ತನಕ ಹೆಲಿಕಾಪ್ಟರ್‌ಗಳು ಹಾಗೂ ವಿಶೇಷ ವಿಮಾನಗಳಿಗೆ ಮಾತ್ರವೇ ಕಲಬುರಗಿ ವಿಮಾನ ನಿಲ್ದಾಣದ ಸೇವೆ ಸೀಮಿತವಾಗಿದೆ.

ಕೆಕೆಸಿಸಿಐ ಸೇರಿದಂತೆ ಈ ಭಾಗದ ಅನೇಕ ಸಂಘ–ಸಂಸ್ಥೆಗಳು, ಜನಪ್ರತಿನಿಧಿಗಳು ವಿಮಾನಯಾನ ಪುನರಾರಂಭಕ್ಕೆ ಒತ್ತಾಯಿಸಿದ್ದರು. ವಿಮಾನಯಾನ ಸೇವೆ ಸ್ಥಗಿತವು ಬಿಜೆಪಿ–ಕಾಂಗ್ರೆಸ್ ನಡುವೆ ವಾಕ್ಸಮರಕ್ಕೂ ಕಾರಣವಾಗಿತ್ತು.

# ಬಾನೆಟ್ ಮೇಲೆ ನೇತಾಡುತ್ತಿದ್ದರೂ ಕಾರು ನಿಲ್ಲಿಸದ ಚಾಲಕನ ಬಂಧನ



**ಮೈಸೂರು, ಮೇ 21:** ಬಾನೆಟ್ ಮೇಲೆ ನೇತಾಡುತ್ತಿದ್ದರೂ ಕಾರು ನಿಲ್ಲಿಸದೇ ಚಾಲನೆ ಮಾಡಿದ ಆರೋಪದ ಮೇಲೆ ಆರ್‌ಟಿಐ ಕಾರ್ಯಕರ್ತ ಗಂಗರಾಜುವನ್ನು ಕುವೆಂಪುನಗರ ಠಾಣಾ ಪೊಲೀಸರು ಬಂಧಿಸಿದ್ದಾರೆ. ನಿವೇಶನ ವಿಚಾರಕ್ಕೆ ಕೊಟ್ಟ ಹಣ ವಾಪಸ್ ಕೇಳಿದ್ದಕ್ಕೆ ಗಂಗರಾಜು ಅವರು ಸಬ್ ರಿಜಿಸ್ಟ್ರಾರ್ ಕಚೇರಿ ಬಳಿಯಿಂದ ಕುವೆಂಪುನಗರ ಪೊಲೀಸ್ ಠಾಣೆವರೆಗೆ ಕಾರಿನ ಬಾನೆಟ್ ಮೇಲೆಯೇ ಕರೆದೊಯ್ದಿದ್ದಾರೆ ಎಂದು ದೂರಿನಲ್ಲಿ ಧನಂಜಯ ಉಲ್ಲೇಖಿಸಿದ್ದಾರೆ.

ಸುಮಾರು 1 ಕಿಮೀವರೆಗೆ ಚಾಲನೆ ಮಾಡಿದ ಬಳಿಕ ಗಂಗರಾಜು ಅವರು ಕೊನೆಗೆ ಕುವೆಂಪು ನಗರ ಪೊಲೀಸ್ ಠಾಣೆ ಮುಂದೆ ಕಾರು ನಿಲ್ಲಿಸಿದ್ದಾರೆ. ಕೊಟ್ಟ ಹಣ ಕೇಳಿದ್ದಕ್ಕೆ ಗಂಗರಾಜು ನನ್ನನ್ನು ಕೊಲೆ ಮಾಡಲು ಯತ್ನಿಸಿದ್ದಾನೆ ಎಂದು ಆರೋಪಿಸಿ ಧನಂಜಯ್ ಅವರು ಕುವೆಂಪುನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲು ಮಾಡಿದ್ದಾರೆ. ಪ್ರಕರಣ ಸಂಬಂಧ ಗಂಗರಾಜುವನ್ನು ಕುವೆಂಪುನಗರ ಠಾಣಾ ಪೊಲೀಸರು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಬೇರೊಬ್ಬರ ನಿವೇಶನವೊಂದರ ಖರೀದಿಗಾಗಿ 2024ರ ಜೂನ್‌ನಲ್ಲಿ ಗಂಗ ರಾಜು ಅವರಿಗೆ 20 ಲಕ್ಷ ರೂ ನಗದು ಹಣ ನೀಡಿದ್ದೆ. ಆಗ ಗಂಗರಾಜು ಅವರು ನಿವೇಶನ ಟೈಟಲ್ ಡೀಡ್ ಮಾಡಿಕೊಡಿಸುವುದಾಗಿ ಭರವಸೆ ನೀಡಿದ್ದರು. ನಂತರ ಈ ವಿಚಾರವಾಗಿ ಹಲವು ಬಾರಿ ಗಂಗರಾಜು ಅವರನ್ನು ಸಂಪರ್ಕಿಸಿದ್ದರೂ ಇಲ್ಲಿಯವರೆಗೆ ಟೈಟಲ್ ಡೀಡ್ ಮಾಡಿಸಿಕೊಟ್ಟಿಲ್ಲ. ಜೊತೆಗೆ ವಾಪಸ್ ಹಣವನ್ನೂ ಕೊಟ್ಟಿಲ್ಲ. ಮೇ 20, 2026 ರಂದು ಮೈಸೂರಿನ ರಾಮಕೃಷ್ಣ ನಗರದ ಉಪನೋಂದಣಾಧಿಕಾರಿ ಕಚೇರಿಯ ಬಳಿ ಗಂಗರಾಜು ಅವರನ್ನು ನೋಡಿದೆ. ಆಗ ಅವರ ಜೊತೆ ಮಾತನಾಡಲು ಪ್ರಯತ್ನಿಸಿದರೂ ಅವರು ಮಾತನಾಡದೇ ಕಾರಿನಲ್ಲಿ ಕುಳಿತುಕೊಂಡರು. ನಂತರ ನಾನು ಅವರ ಕಾರಿನ ಮುಂದೆ ಬಂದಾಗ, ಅವರು ಕಾರು ಸ್ಟಾರ್ಟ್ ಮಾಡಿ ನನ್ನನ್ನು ಕೊಲ್ಲುವ ಉದ್ದೇಶದಿಂದಲೇ ನನ್ನ ಮೇಲೆ ನುಗ್ಗಿಸಿದರು. ನಾನು ಗಾಬರಿಗೊಂಡು ಕಾರಿನ ಬಾನೆಟ್ ಮೇಲೆ ಬಿದ್ದೆ. ಆಗ ಅವರು ಕಾರು ನಿಲ್ಲಿಸದೇ ವೇಗವಾಗಿ ಚಲಿಸ ತೊಡಗಿದರು. ನಾನು ಕಾರಿನ ವೈಫರ್ ಹಿಡಿದು ಬಾನೆಟ್ ಮೇಲೆ ಕುಳಿತು ಕೊಂಡೆ, ಸುಮಾರು 1 ಕಿಮೀವರೆಗೆ ಹೀಗೆ ಕಾರು ಚಲಿಸಿದ್ದಾರೆ. ಬಳಿಕ ಕುವೆಂಪು ಪೊಲೀಸ್ ಠಾಣೆಯ ಮುಂದೆ ನಿಲ್ಲಿಸಿದ್ದಾರೆ. ನನಗೆ ಕೊಡ ಬೇಕಿರುವ 20 ಲಕ್ಷ ಹಣ ವಾಪಸ್ ಕೊಡಬೇಕಾಗುತ್ತದೆ ಎಂಬ ಕಾರಣದಿಂದ ನನ್ನನ್ನು ಕೊಲ್ಲುವ ಉದ್ದೇಶದಿಂದಲೇ ಗಂಗರಾಜು ಈ ರೀತಿ ಮಾಡಿದ್ದಾರೆ ಎಂದು ದೂರಿನಲ್ಲಿ ಧನಂಜಯ ಆರೋಪಿಸಿದ್ದಾರೆ.

## ಧರ್ಮಸ್ಥಳ ಬುರುಡೆ ಪ್ರಕರಣ: ಮತ್ತೆ ಎಸ್‌ಐಟಿ ತನಿಖೆ ಚುರುಕು

# ಬಂಗ್ಲೆಗುಡ್ಡೆ ಅರಣ್ಯ ಪ್ರದೇಶಕ್ಕೆ ಅಧಿಕಾರಿಗಳು, ತಜ್ಞರ ತಂಡ ಭೇಟಿ, ಪರಿಶೀಲನೆ



**ಮಂಗಳೂರು, ಮೇ 21:** ಕರಾವಳಿ ಭಾಗದಲ್ಲಿ ತೀವ್ರ ಸಂಚಲನ ಸೃಷ್ಟಿಸಿರುವ ಧರ್ಮಸ್ಥಳ ಗ್ರಾಮದ 'ಬುರುಡೆ ರಹಸ್ಯ' ಪ್ರಕರಣದ ತನಿಖೆ ಇದೀಗ ಮತ್ತೆ ಚುರುಕುಗೊಂಡಿದೆ. ಸುಮಾರು ನಾಲ್ಕು ತಿಂಗಳ ಹಿಂದೆ ಒಟ್ಟು 7 ಅಸ್ಥಿಪಂಜರಗಳು ಪತ್ತೆಯಾಗಿದ್ದ ಬಂಗ್ಲೆಗುಡ್ಡೆ ಅರಣ್ಯ ಪ್ರದೇಶಕ್ಕೆ ಗುರುವಾರ ವಿಧಿವಿಜ್ಞಾನ ಪ್ರಯೋಗಾಲಯದ ತಜ್ಞರ ತಂಡ ಭೇಟಿ ನೀಡಿ ಮಹತ್ವದ ಪರಿಶೀಲನೆ ನಡೆಸಿದೆ.

ಮೂವರು ಹಿರಿಯ ಅಧಿಕಾರಿಗಳನ್ನೊಳಗೊಂಡ ಎಫ್‌ಎಸ್‌ಎಲ್ ತಂಡವು ಬೆಂಗಳೂರಿನಿಂದ ಆಗಮಿಸಿದ್ದು, ವಿಶೇಷ ತನಿಖಾ ತಂಡದ ಅಧಿಕಾರಿ ಗಳೊಂದಿಗೆ ಜಂಟಿಯಾಗಿ ಬಂಗ್ಲೆಗುಡ್ಡೆ ಕಾಡಿನಲ್ಲಿ ತಪಾಸಣೆ ಕೈಗೊಂಡಿದೆ. ಆರೋಪಿ ಪ್ರದೀಪ್ ಕುಲಾಲ್‌ನನ್ನು ಸ್ಥಳಕ್ಕೆ ಕರೆತಂದ ಅಧಿಕಾರಿಗಳು ಆತನ ಸಮ್ಮುಖದಲ್ಲಿ ಮಹಜರು ಮತ್ತು ಪರಿಶೀಲನಾ ಪ್ರಕ್ರಿಯೆಗಳನ್ನು ನಡೆಸಿದರು.

**ತಪ್ಪೊಪ್ಪಿಗೆ ಹೇಳಿಕೆ:** ಬುರುಡೆ ಷಡ್ಯಂತ್ರ ಪ್ರಕರಣದಲ್ಲಿ ನೇರವಾಗಿ ಭಾಗಿಯಾಗಿದ್ದ ಈತ, ಭಾರತೀಯ ನ್ಯಾಯ ಸಂಹಿತೆ ಸೆಕ್ಷನ್ 183ರ ಅಡಿಯಲ್ಲಿ ನ್ಯಾಯಾಲಯದ ಮುಂದೆ ಈಗಾಗಲೇ ತನ್ನ ತಪ್ಪೊಪ್ಪಿಗೆಯನ್ನು ನೀಡಿದ್ದಾನೆ.

**ವಿಡಿಯೋ ಸಾಕ್ಷ್ಯ:** ಕತ್ತಲೆಯ ರಾತ್ರಿಯ ವೇಳೆಯಲ್ಲಿ ಕಾಡಿನ ನಿರ್ಜನ ಪ್ರದೇಶದಲ್ಲಿ ಬುರುಡೆಗಳನ್ನು ಹೊರತೆಗೆಯುತ್ತಿದ್ದ ರಹಸ್ಯ ವಿಡಿಯೋದಲ್ಲೂ ಪ್ರದೀಪ್ ಕುಲಾಲ್ ಕಾಣಿಸಿಕೊಂಡಿದ್ದ, ಇದು ತನಿಖಾ ತಂಡಕ್ಕೆ ಪ್ರಮುಖ ಸಾಕ್ಷ್ಯವಾಗಿ ಸಿಕ್ಕಿತ್ತು. ಕಾಡಿನಲ್ಲಿ ಅಸ್ಥಿಪಂಜರಗಳ ಉತ್ಖನನ ಹಿನ್ನೆಲೆ ಪ್ರಕರಣದ ಸತ್ಯಾಸತ್ಯತೆ ತಿಳಿಯಲು ಕಾರ್ಯಾಚರಣೆ ನಡೆಸಿದ್ದ ಎಸ್‌ಐಟಿ ತಂಡವು ನಾಲ್ಕು ತಿಂಗಳ ಹಿಂದೆ ಬಂಗ್ಲೆಗುಡ್ಡೆ ಅರಣ್ಯದಲ್ಲಿ ದೊಡ್ಡ ಮಟ್ಟದ ಉತ್ಖನನ ನಡೆಸಿತ್ತು. ಈ ವೇಳೆ ಬೆಚ್ಚಿಬೀಳಿಸುವ ಮಾಹಿತಿ ಹೊರಬಂದಿತ್ತು.

**ಸೆಪ್ಟೆಂಬರ್ 17:** ಕಾಡಿನ ಮಣ್ಣಿನಡಿಯಲ್ಲಿ ಹೂತುಹಾಕಲಾಗಿದ್ದ 5 ಅಸ್ಥಿಪಂಜರಗಳು ಪತ್ತೆಯಾಗಿದ್ದವು. ಸೆಪ್ಟೆಂಬರ್ 18: ಮರುದಿನವೇ ಅದೇ ಪರಿಸರದಲ್ಲಿ ಮತ್ತೊಂದು ಕಡೆ ಇನ್ನೂ 2 ಅಸ್ಥಿಪಂಜರಗಳು ಪತ್ತೆಯಾಗಿದ್ದವು. ಪತ್ತೆಯಾದ ಎಲ್ಲಾ 7 ಅಸ್ಥಿಪಂಜರಗಳು ಪ್ರಥಮ ದೃಷ್ಟಿಯಲ್ಲಿ ಆತ್ಮಹತ್ಯೆ ಮಾಡಿಕೊಂಡ ಸ್ಥಿತಿಯಲ್ಲಿದ್ದವು ಎಂದು ಅಧಿಕಾರಿಗಳು ಗುರುತಿಸಿದ್ದರು. ಬೆಳ್ತಂಗಡಿಯ ಎಸ್‌ಐಟಿ ಕಚೇರಿಯಲ್ಲಿ ಸುರಕ್ಷಿತವಾಗಿಡಲಾಗಿದ್ದ ಈ 7 ಅಸ್ಥಿಪಂಜರಗಳನ್ನು ಮತ್ತು ಅದಕ್ಕೆ ಸಂಬಂಧಿಸಿದ ಮೂಳೆಗಳ ಅವಶೇಷಗ 'ಳನ್ನು ಹೆಚ್ಚಿನ ವೈಜ್ಞಾನಿಕ ತನಿಖೆಗಾಗಿ ಬೆಂಗಳೂರಿನ ಮಡಿವಾಳದಲ್ಲಿರುವ ಕೇಂದ್ರ ಎಫ್‌ಎಸ್‌ಎಲ್ ಪ್ರಯೋಗಾಲಯಕ್ಕೆ ರವಾನಿಸಲಾಗಿದೆ. ಡಿಎನ್‌ಎ ಪರೀಕ್ಷೆ ಹಾಗೂ ವಿಧಿವಿಜ್ಞಾನ ವರದಿಯ ನಂತರವೇ ಈ ಮೃತದೇಹಗಳು ಯಾರಿಗೆ ಸೇರಿದ್ದು ಮತ್ತು ಸಾವಿನ ಹಿಂದಿನ ನೈಜ ಕಾರಣವೇನು ಎಂಬುದು ಅಧಿಕೃತವಾಗಿ ಹೊರಬರಬೇಕಿದೆ.

ಧರ್ಮಸ್ಥಳ ಗ್ರಾಮದಲ್ಲಿ ನಡೆದಿದೆ ಎನ್ನಲಾದ ಈ ಅಪರಾಧ ಕೃತ್ಯಗಳು ಹಾಗೂ ಮೃತದೇಹಗಳನ್ನು ಅಕ್ರಮವಾಗಿ ಹೂತುಹಾಕಿರುವ ಆರೋಪದ ತನಿಖೆ ನಡೆಸುತ್ತಿರುವ ಎಸ್‌ಐಟಿ, ಕಳೆದ ನವೆಂಬರ್ 20 ರಂದು ಬೆಳ್ತಂಗಡಿಯ ಜೆಎಂಎಫ್‌ಸಿ ನ್ಯಾಯಾಲಯಕ್ಕೆ ತನ್ನ ಪ್ರಾಥಮಿಕ ತನಿಖಾ ವರದಿಯನ್ನು ಸಲ್ಲಿಸಿತ್ತು.

ಆ ಸಂದರ್ಭದಲ್ಲಿ ಪ್ರಕರಣದ ಗಾಂಭೀರ್ಯತೆಯನ್ನು ಪರಿಗಣಿಸಿದ್ದ ನ್ಯಾಯಾಲಯವು, ಶೀಘ್ರದಲ್ಲೇ ತನಿಖೆಯನ್ನು ಪೂರ್ಣಗೊಳಿಸಿ ಅಂತಿಮ ಸಮಗ್ರ ವರದಿಯನ್ನು ಸಲ್ಲಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿತ್ತು. ಈ ಹಿನ್ನೆಲೆಯಲ್ಲಿ ಇಂದಿನ ಎಫ್‌ಎಸ್‌ಎಲ್ ತಂಡದ ಭೇಟಿ ಅತ್ಯಂತ ಪ್ರಾಮುಖ್ಯತೆ ಪಡೆದುಕೊಂಡಿದೆ.

# ದುಬಾರೆ ದುರಂತ: ಅರಣ್ಯ ಇಲಾಖೆ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮಕ್ಕೆ ಒತ್ತಾಯ

**ಮಡಿಕೇರಿ, ಮೇ 21:** ದುಬಾರೆ ಆನೆ ಶಿಬಿರದಲ್ಲಿ ನಡೆದ ದುರ್ಘಟನೆಗೆ ಅರಣ್ಯ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಹೊಣೆಗಾರರಾಗಿದ್ದು ಅವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ಕಾವಲು ಪಡೆ ಜಿಲ್ಲಾಧ್ಯಕ್ಷ ಎಂ. ಕೃಷ್ಣ ಒತ್ತಾಯಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದುಬಾರೆಯಲ್ಲಿ ಪ್ರವಾಸಿ ಮಹಿಳೆ ಮೃತಪಟ್ಟ ಘಟನೆ ತುಂಬಾ ದುಃಖಕರ. ಪ್ರವಾಸಿಗರಿಗೆ ಸೂಕ್ತ ರಕ್ಷಣಾ ವ್ಯವಸ್ಥೆ ಕಲ್ಪಿಸುವಲ್ಲಿ ಸಂಬಂಧಿಸಿದ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ನಿರ್ಲಕ್ಷ್ಯ ವಹಿಸಿದ್ದಾರೆ. ಸಾಕಾನೆಗಳಿಗೆ ಸ್ನಾನ ಮಾಡಿಸುವುದು, ಆಹಾರ ತಿನ್ನಿಸುವುದು, ಈ ಮೂಲಕ ಅರಣ್ಯ ಇಲಾಖೆಯ ಅಧಿಕಾರಿ, ಸಿಬ್ಬಂದಿ ಘಟನೆಗೆ ಕಾರಣಕರ್ತರಾಗಿದ್ದಾರೆ ಎಂದು ಹೇಳಿದರು.

ಪ್ರವಾಸಿ ತಾಣಗಳಿಗೆ ಆಗಮಿಸುವ ಪ್ರವಾಸಿಗರಿಗೆ ಸೂಕ್ತ ಭದ್ರತೆ ಒದಗಿಸಬೇಕಿದೆ. ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳು ಕನಿಷ್ಠ ವಾರಕ್ಕೊಮ್ಮೆ ಜಿಲ್ಲೆಯ ಪ್ರಮುಖ ಪ್ರವಾಸಿ ತಾಣಗಳಿಗೆ ಭೇಟಿ ನೀಡಿ ಅಲ್ಲಿನ ಪರಿಸ್ಥಿತಿ ಬಗ್ಗೆ ಅವಲೋಕನ ಮಾಡಬೇಕು. ಇದರೊಂದಿಗೆ ಪ್ರವಾಸಿಗರು ಕೂಡ ದುಸ್ಸಾಹಸಕ್ಕೆ ಕೈಹಾಕಿ ತಮ್ಮ ಪ್ರಾಣ ಕಳೆದುಕೊಳ್ಳುವಂತಾಗಬಾರದು ಎಂದು ಸಲಹೆ ನೀಡಿದರು. ದುಬಾರೆ, ಕಾವೇರಿ ನಿಸರ್ಗಧಾಮದ ಪ್ರವಾಸಿ ತಾಣಗಳ ಹಲವೆಡೆ, ನದಿ ತಟದಲ್ಲಿ ನಿಯಮಬಾಹಿರವಾಗಿ ಅಂಗಡಿ ಮಳಿಗೆಗಳನ್ನು ನಿರ್ಮಿಸಿರುವುದು ಕಂಡುಬಂದಿದೆ.

ಈ ಬಗ್ಗೆ ತಕ್ಷಣ ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು. ಪ್ರವಾಸಿ ಕೇಂದ್ರಗಳಲ್ಲಿ ಮುಂದಿನ ದಿನಗಳಲ್ಲಿ ಇಂತಹ ದುರ್ಘಟನೆ ಮರುಕಳಿಸದಂತೆ ಎಚ್ಚರ ವಹಿಸಬೇಕು ಎಂದು ಆಗ್ರಹಿಸಿದರು. ಕಾವಲು ಪಡೆ ತಾಲ್ಲೂಕು ಘಟಕದ ಅಧ್ಯಕ್ಷ ಸಮೀರ್ ಮಾತನಾಡಿ, ಆಸ್ಪತ್ರೆಯಲ್ಲಿ ಮೂಲಸೌಲಭ್ಯಗಳ ಕೊರತೆ ಕಂಡುಬರುತ್ತಿದೆ. ಆಸ್ಪತ್ರೆಗೆ ಬರುವ ರೋಗಿಗಳನ್ನು ಅಲ್ಲಿನ ವೈದ್ಯರು ಮಡಿಕೇರಿ ಅಥವಾ ಮೈಸೂರಿಗೆ ತೆರಳಲು ಸೂಚಿಸುತ್ತಿದ್ದು ಇದರಿಂದ ಬಡ ರೋಗಿಗಳಿಗೆ ಸಮಸ್ಯೆ ಉಂಟಾಗಿದೆ ಎಂದು ಹೇಳಿದರು.ಕಾವಲು ಪಡೆಯ ಯುವ ಘಟಕದ ಅಧ್ಯಕ್ಷ ಸ್ವಾಮಿ, ಕಾರ್ಯದರ್ಶಿ ಮಧು ಸದಸ್ಯ ಜಾಫರ್ ಸುದ್ದಿಗೋಷ್ಠಿಯಲ್ಲಿ ಭಾಗವಹಿಸಿದ್ದರು.

## ಜ್ಞಾನ ಭಾರತಂ ಮಿಷನ್ ಅಡಿ ಹಸ್ತಪ್ರತಿಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣ

# ಸಾರ್ವಜನಿಕರ ಸಹಕಾರಕ್ಕೆ ಡಿ.ಸಿ ಡಾ.ಆನಂದ ಮನವಿ



**ವಿಜಯಪುರ,ಮೇ.21:** ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಜ್ಞಾನ ಭಾರತಂ ಮಿಷನ್ ಯೋಜನೆಯಡಿ ದೇಶಾದ್ಯಂತ ಲಭ್ಯವಿರುವ ಶತಮಾನಗಳಷ್ಟು ಹಳೆಯ ಕೈಬರಹದ ಪ್ರತಿಗಳು, ಹಸ್ತಪ್ರತಿಗಳು ಹಾಗೂ ಐತಿಹಾಸಿಕ ದಾಖಲೆಗಳನ್ನು ಸಂರಕ್ಷಿಸಿ, ಡಿಜಿಟಲೀಕರಣ ಮಾಡುವ ಮಹತ್ತರ ಕಾರ್ಯ ಆರಂಭ ವಾಗಿದೆ.

ಭಾರತದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಶಾಶ್ವತವಾಗಿ ಉಳಿಸುವ ಜೊತೆಗೆ, ಸಾರ್ವಜನಿಕರಿಗೆ ಒಂದೇ ರಾಷ್ಟ್ರೀಯ ವೇದಿಕೆಯ ಮೂಲಕ ಡಿಜಿಟಲ್ ರೂಪದಲ್ಲಿ ಇವುಗಳನ್ನು ಲಭ್ಯ ವಾಗಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದು ವಿಯಪುರ ಡಿ.ಸಿ ಡಾ. ಆನಂದ್ ಹೇಳಿದ್ದಾರೆ.

ಯೋಜನೆಯ ಭಾಗವಾಗಿ ಹಸ್ತಪ್ರತಿಗಳ ಸಮೀಕ್ಷೆ, ಸಂರಕ್ಷಣೆ, ರಕ್ಷಣೆ, ನೋಂದಣಿ, ವಿಮರ್ಶಾತ್ಮಕ ಸಂಪಾದನೆ ಮತ್ತು ಮೊಬೈಲ್ ಪ್ರಕಟಣೆ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ.

# ಟ್ರಂಪ್ ಪ್ರಮುಖ ಬೇಡಿಕೆ ಧಿಕ್ಕರಿಸಿದ ಮೊಜ್ತಬಾ ಖಮೇನಿ

**ಟೆಹ್ರಾನ್, ಮೇ 21:** ಇರಾನ್‌ನ ಸರ್ವೋಚ್ಚ ನಾಯಕ ಮೊಜ್ತಬಾ ಖಮೇನಿ ಅವರು ದೇಶದ ಶಸ್ತ್ರಾಸ್ತ್ರ ದರ್ಜೆಯ ಪುಷ್ಟೀಕರಿಸಿದ ಯುರೇನಿಯಂ ದಾಸ್ತಾನು ಇರಾನ್ನೊಳಗೆಯೇ ಇರಬೇಕೆಂದು ಆದೇಶಿಸಿದ್ದಾರೆ ಎಂದು ಇಬ್ಬರು ಹಿರಿಯ ಇರಾನಿನ ಮೂಲಗಳು ರಾಯಿಟರ್ಸ್‌ಗೆ ತಿಳಿಸಿವೆ, ಇದು ನಡೆಯುತ್ತಿರುವ ಪ್ರಾದೇಶಿಕ ಸಂಘರ್ಷದ ಮಧ್ಯೆ ಅಮೆರಿಕ ಮತ್ತು ಇಸ್ರೇಲ್ ಜೊತೆ ಶಾಂತಿ ಮಾತುಕತೆಗಳನ್ನು ಇನ್ನಷ್ಟು ಸಂಕೀರ್ಣಗೊಳಿಸಬಹುದು. ಅಯತೊಲ್ಲಾ ಮೊಜ್ತಬಾ ಖಮೇನಿ ಅವರ ನಿರ್ದೇಶನವು ಇರಾನ್ ವಿರುದ್ಧದ ಅಮೆರಿಕ–ಇಸ್ರೇಲಿ ಯುದ್ಧವನ್ನು ಕೊನೆಗೊಳಿಸುವ ಗುರಿಯನ್ನು ಹೊಂದಿರುವ ಮಾತುಕತೆಗಳ ಸಮಯದಲ್ಲಿ ವಾಷಿಂಗ್ಟನ್‌ನ ಪ್ರಮುಖ ಬೇಡಿಕೆಗಳಲ್ಲಿ ಒಂದಾದ ಟೆಹ್ರಾನ್‌ನ ನಿಲುವನ್ನು ಗಟ್ಟಿಗೊಳಿಸುತ್ತದೆ. ಯಾವುದೇ ಶಾಂತಿ ಒಪ್ಪಂದವು ಇರಾನ್‌ನ ಹೆಚ್ಚು ಪುಷ್ಟೀಕರಿಸಿದ ಯುರೇನಿಯಂ ದಾಸ್ತಾನನ್ನು ದೇಶದಿಂದ ತೆಗೆದುಹಾಕುವುದನ್ನು ಒಳಗೊಂಡಿರುತ್ತದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇಸ್ರೇಲ್‌ಗೆ ಭರವಸೆ ನೀಡಿದ್ದಾರೆ ಎಂದು ಇಸ್ರೇಲಿ ಅಧಿಕಾರಿಗಳು ರಾಯಿಟರ್ಸ್‌ಗೆ ತಿಳಿಸಿದ್ದಾರೆ. "ಸುಪ್ರೀಂ ನಾಯಕರ ನಿರ್ದೇಶನ ಮತ್ತು ಸ್ಥಾಪನೆಯೊಳಗಿನ ಒಮ್ಮತವು, ಪುಷ್ಟೀಕರಿಸಿದ ಯುರೇನಿಯಂ ದಾಸ್ತಾನು ದೇಶವನ್ನು ಬಿಡಬಾರದು" ಎಂಬುದು ಸಮಸ್ಯೆಯ ಸೂಕ್ಷ್ಮತೆಯ ಕಾರಣದಿಂದಾಗಿ ಅನಾಮಧೇಯತೆಯ ಷರತ್ತಿನ ಮೇಲೆ. ಯುರೇನಿಯಂ ಅನ್ನು ವಿದೇಶಕ್ಕೆ ಕಳುಹಿಸುವುದರಿಂದ ಅಮೆರಿಕ ಮತ್ತು ಇಸ್ರೇಲ್‌ನ ಭವಿಷ್ಯದ ದಾಳಿಗಳಿಗೆ ದೇಶ ಗುರಿಯಾಗುತ್ತದೆ ಎಂದು ಇರಾನ್ ನಾಯಕರು ನಂಬಿದ್ದಾರೆ ಎಂದು ಮೂಲಗಳು ತಿಳಿಸಿವೆ. ಇರಾನ್‌ನ ಸರ್ವೋಚ್ಚ ನಾಯಕ ಪ್ರಮುಖ ರಾಜ್ಯ ನಿರ್ಧಾರಗಳ



ಮೇಲೆ ಅಂತಿಮ ಅಧಿಕಾರವನ್ನು ಹೊಂದಿದ್ದಾರೆ. ಇರಾನ್ ತನ್ನ ಪುಷ್ಟೀಕರಿಸಿದ ಯುರೇನಿಯಂ ದಾಸ್ತಾನನ್ನು ತೆಗೆದುಹಾಕದ ಹೊರತು, ಪ್ರಾಕ್ಸಿ ಮಿಲಿಟಿಯಾಗಳಿಗೆ ಬೆಂಬಲವನ್ನು ನಿಲ್ಲಿಸದ ಹೊರತು ಮತ್ತು ಅದರ ಬ್ಯಾಲಿಸ್ಟಿಕ್ ಕ್ಷಿಪಣಿ ಕಾರ್ಯಕ್ರಮವನ್ನು ಕಿತ್ತುಹಾಕದ ಹೊರತು ಯುದ್ಧ ಕೊನೆಗೊಳ್ಳಲು ಸಾಧ್ಯವಿಲ್ಲ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಸಮರ್ಥಿಸಿಕೊಂಡಿದ್ದಾರೆ.

ಮೂಲಗಳ ಪ್ರಕಾರ, ಎರಡೂ ಕಡೆಯವರು ಮಾತುಕತೆಗಳಲ್ಲಿ ಕೆಲವು ವ್ಯತ್ಯಾಸಗಳನ್ನು ಕಡಿಮೆ ಮಾಡಿದ್ದಾರೆ, ಆದರೆ ಇರಾನ್ನ ಪರಮಾಣು ಕಾರ್ಯಕ್ರಮದ ಬಗ್ಗೆ, ವಿಶೇಷವಾಗಿ ಪುಷ್ಟೀಕರಿಸಿದ ಯುರೇನಿಯಂ ದಾಸ್ತಾನಿನ ಭವಿಷ್ಯ ಮತ್ತು ಟೆಹ್ರಾನ್ ತನ್ನ ಪುಷ್ಟೀಕರಣದ ಹಕ್ಕನ್ನು ಉಳಿಸಿಕೊಳ್ಳುವ ಒತ್ತಾಯದ ಬಗ್ಗೆ ಪ್ರಮುಖ ಭಿನ್ನಾಭಿಪ್ರಾಯಗಳು ಉಳಿದಿವೆ.

ಟೆಹ್ರಾನ್‌ನ ಪ್ರಾಥಮಿಕ ಉದ್ದೇಶವು ಯುದ್ಧಕ್ಕೆ ಶಾಶ್ವತ ಅಂತ್ಯವನ್ನು ಖಚಿತಪಡಿಸಿಕೊಳ್ಳುವುದು ಮತ್ತು ಅಮೆರಿಕ ಮತ್ತು ಇಸ್ರೇಲ್ ಭವಿಷ್ಯದ ದಾಳಿಗಳನ್ನು ಪ್ರಾರಂಭಿಸುವುದಿಲ್ಲ ಎಂಬ ವಿಶ್ವಾಸಾರ್ಹ ಖಾತರಿಗಳನ್ನು ನೀಡುವುದಾಗಿ ಇರಾನ್ ಅಧಿಕಾರಿಗಳು ಪದೇ ಪದೇ ಹೇಳಿದ್ದಾರೆ.

**ಜೂನ್ 2025 ರಲ್ಲಿ ಇಸ್ರೇಲ್ ಮತ್ತು ಅಮೆರಿಕ ಪಡೆಗಳು ಇರಾನಿನ ಪರಮಾಣು ಸೌಲಭ್ಯಗಳ ಮೇಲೆ ದಾಳಿ ಮಾಡಿದಾಗ ಇರಾನ್ 440.9 ಕಿಲೋಗ್ರಾಂಗಳಷ್ಟು ಪುಷ್ಟೀಕರಿಸಿದ ಯುರೇನಿಯಂ ಅನ್ನು 60% ಗೆ ಹೊಂದಿತ್ತು ಎಂದು ಅಂತರರಾಷ್ಟ್ರೀಯ ಪರಮಾಣು ಶಕ್ತಿ ಸಂಸ್ಥೆ ಅಂದಾಜಿಸಿದೆ. ಆ ದಾಸ್ತಾನಿನ ಪ್ರಸ್ತುತ ಸ್ಥಿತಿ ಸ್ಪಷ್ಟವಾಗಿಲ್ಲ.**

ಅಂತಹ ಭರವಸೆಗಳ ನಂತರವೇ, ಇರಾನ್ ವಿವರವಾದ ಪರಮಾಣು ಮಾತುಕತೆಗಳಲ್ಲಿ ತೊಡಗುತ್ತದೆ ಎಂದು ಅವರು ಹೇಳಿದರು. ಇಸ್ರೇಲ್ ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದಿದೆ ಎಂದು ವ್ಯಾಪಕವಾಗಿ ನಂಬಲಾಗಿದೆ, ಆದರೂ ಅದು ಪರಮಾಣು ಶಸ್ತ್ರಾಗಾರವನ್ನು ಹೊಂದಿದೆ ಎಂದು ಅಧಿಕೃತವಾಗಿ ದೃಢೀಕರಿಸಿಲ್ಲ ಅಥವಾ ನಿರಾಕರಿಸಿಲ್ಲ ಮತ್ತು ಈ ವಿಷಯದ ಬಗ್ಗೆ ಅಸ್ಪಷ್ಟತೆಯ ನೀತಿಯನ್ನು ಕಾಯ್ದುಕೊಳ್ಳುವುದನ್ನು ಮುಂದುವರೆಸಿದೆ. ಸಂಘರ್ಷ ಉಲ್ಬಣಗೊಳ್ಳುವ ಮೊದಲು, ಇರಾನ್ ತನ್ನ ಪುಷ್ಟೀಕರಿಸಿದ ಯುರೇನಿಯಂನ ಅರ್ಧದಷ್ಟು ಭಾಗವನ್ನು 60% ಗೆ ರಫ್ತು ಮಾಡಲು ಇಚ್ಛೆ ವ್ಯಕ್ತಪಡಿಸಿತ್ತು ಎಂದು ವರದಿಯಾಗಿದೆ. ಆದಾಗ್ಯೂ, ಟ್ರಂಪ್ ಇರಾನ್ ಮೇಲೆ ದಾಳಿ ಮಾಡುವುದಾಗಿ ಪದೇ ಪದೇ ಬೆದರಿಕೆ ಹಾಕಿದ ನಂತರ ಆ ಸ್ಥಾನ ಬದಲಾಯಿತು ಎಂದು ಆಂತರಿಕ ಮೂಲಗಳು ತಿಳಿಸಿವೆ. ಟ್ರಂಪ್ ಇರಾನ್ ಮೇಲೆ ಮತ್ತೊಂದು ಮುಷ್ಕರಕ್ಕೆ ಅಧಿಕಾರ ನೀಡುತ್ತಾರೆಯೇ ಅಥವಾ ಇಸ್ರೇಲ್ ಮಿಲಿಟರಿ ಕಾರ್ಯಾಚರಣೆಯನ್ನು ಪುನರಾರಂಭಿಸಲು ಅವಕಾಶ ನೀಡುತ್ತಾರೆಯೇ ಎಂಬುದು ಸ್ಪಷ್ಟವಾಗಿಲ್ಲ ಎಂದು ಇಸ್ರೇಲಿ ಅಧಿಕಾರಿಗಳು ರಾಯಿಟರ್ಸ್‌ಗೆ ತಿಳಿಸಿದ್ದಾರೆ. ಭವಿಷ್ಯದ ಯಾವುದೇ ದಾಳಿಗೆ ಬಲವಾಗಿ ಪ್ರತಿಕ್ರಿಯಿಸುವುದಾಗಿ ಟೆಹ್ರಾನ್ ಎಚ್ಚರಿಸಿದೆ.

# ಹಾರ್ಮುಜ್ ಜಲಸಂಧಿ ನಿಯಂತ್ರಣ ವಲಯ ಇರಾನ್‌ಘೋಷಣೆ

## ಹಡಗುಗಳು ಪೂರ್ವ ಸಾಗಣೆ ಅನುಮೋದನೆ ಕಡ್ಡಾಯ

**ಟೆಹ್ರಾನ್, ಮೇ 21:** ಇರಾನ್ ಗುರುವಾರ ಹಾರ್ಮುಜ್ ಜಲಸಂಧಿಯಲ್ಲಿ ತನ್ನ ಹೊಸದಾಗಿ ಪ್ರಾರಂಭಿಸಲಾದ ಪರ್ಷಿಯನ್ ಗಲ್ಫ್ ಜಲಸಂಧಿ ಪ್ರಾಧಿಕಾರ ಅಡಿಯಲ್ಲಿ ಹೊಸ ನಿಯಂತ್ರಿತ ಸಮುದ್ರ ವಲಯವನ್ನು ಸ್ಥಾಪಿಸುವುದಾಗಿ ಘೋಷಿಸಿದೆ, ಎಲ್ಲಾ ಹಡಗುಗಳು ಕಾರ್ಯತಂತ್ರದ ಜಲಮಾರ್ಗವನ್ನು ಸಾಗಿಸುವ ಮೊದಲು ಪೂರ್ವ ಸಮನ್ವಯ ಮತ್ತು ಪರವಾನಗಿಗಳನ್ನು ಪಡೆಯಬೇಕೆಂದು ಪ್ರಾಧಿಕಾರವು ಒತ್ತಾಯಿಸುತ್ತದೆ.

ಜಲಸಂಧಿಯ ನಿರ್ವಹಣೆ ಮತ್ತು ಮೇಲ್ವಿಚಾರಣಾ ಗಡಿಗಳನ್ನು ವಿವರಿಸುತ್ತಾ, ಸಾಮಾಜಿಕ ಮಾಧ್ಯಮದಲ್ಲಿ ಹೇಳಿಕೆಯಲ್ಲಿ ಪ್ರಾಧಿಕಾರವು, ಮೇಲ್ವಿಚಾರಣಾ ಪ್ರದೇಶವು ಇರಾನ್ನ ಕುಹ್–ಇ ಉಬಾರಕ್‌ನಿಂದ ಯುನೈಟೆಡ್ ಅರಬ್ ಎಮಿರೇಟ್ಸ್‌ನ ಫುಜೈರಾದ ದಕ್ಷಿಣಕ್ಕೆ ಜಲಸಂಧಿಯ ಪೂರ್ವ ಭಾಗಕ್ಕೆ ಮತ್ತು ಇರಾನ್‌ನ ಕೆಶ್ಮ್ ದ್ವೀಪದ ತುದಿಯಿಂದ ಪಶ್ಚಿಮ ಭಾಗದಲ್ಲಿ ಯುಎಇಯ ಉಮ್ ಅಲ್ ಕುವೈನ್‌ವರೆಗೆ ವ್ಯಾಪಿಸಿದೆ ಎಂದು ಹೇಳಿದೆ. ಗೊತ್ತುಪಡಿಸಿದ ಗಡಿಗಳು ವಿಶ್ವದ ಪ್ರಮುಖ ತೈಲ ಹಡಗು ಕಾರಿಡಾರ್‌ಗಳಲ್ಲಿ ಒಂದಾದ



ಮೂಲಕ ಹಡಗು ಚಲನೆಗಾಗಿ ನಿಯಂತ್ರಿತ ನಿರ್ವಹಣಾ ವಲಯವನ್ನು ವ್ಯಾಖ್ಯಾನಿಸುತ್ತವೆ. ಗೊತ್ತುಪಡಿಸಿದ ಪ್ರದೇಶದ ಮೂಲಕ ಹಾದುಹೋಗುವ ಹಡಗುಗಳು ಪರ್ಷಿಯನ್ ಗಲ್ಫ್ ಜಲಮಾರ್ಗ ನಿರ್ವಹಣಾ ಪ್ರಾಧಿಕಾರದೊಂದಿಗೆ ಸಮನ್ವಯ ಸಾಧಿಸುವುದು ಮತ್ತು ಜಲಸಂಧಿಯನ್ನು ಪ್ರವೇಶಿಸುವ ಮೊದಲು ಸಾರಿಗೆ ಪರವಾನಗಿಗಳನ್ನು ಪಡೆಯುವುದು ಅಗತ್ಯವಾಗಿರುತ್ತದೆ ಎಂದು PGSA ಹೇಳಿದೆ.

ಅಮೆರಿಕ–ಇರಾನ್ ಮಾತುಕತೆಗಳಲ್ಲಿ ಬಿಕ್ಕಟ್ಟು ಮುಂದುವರಿದಿದ್ದು, ಎರಡೂ ಕಡೆಯವರು ತಮ್ಮ ನಿಲುವುಗಳನ್ನು ಮೃದುಗೊಳಿಸಲು ನಿರಾಕರಿಸುತ್ತಿರುವುದರಿಂದ ಈ ಬೆಳವಣಿಗೆ ಸಂಭವಿಸಿದೆ. ಇರಾನ್‌ನ ಪರಮಾಣು ಕಾರ್ಯಕ್ರಮವನ್ನು ಸಂಪೂರ್ಣವಾಗಿ ನಿಲ್ಲಿಸುವಂತೆ ವಾಷಿಂಗ್ಟನ್ ಒತ್ತಾಯಿಸಿದೆ, ಆದರೆ ಟೆಹ್ರಾನ್ ತನ್ನ ಇಂಧನ ಭದ್ರತಾ ಹಿತಾಸಕ್ತಿಗಳನ್ನು ರಕ್ಷಿಸಲು ಮತ್ತು ಹಾರ್ಮುಜ್ ಜಲಸಂಧಿಯ ಮೇಲೆ ನಿಯಂತ್ರಣವನ್ನು ಕಾಯ್ದುಕೊಳ್ಳಲು ಒತ್ತಾಯಿಸಿದೆ.

ಇರಾನ್ PGSAಅನ್ನು ಹೊಸ ನಿಯಂತ್ರಕ ಸಂಸ್ಥೆಯಾಗಿ ಪ್ರಾರಂಭಿಸಿತು, ಇದು ತೈಲ ಮತ್ತು ಇಂಧನ ಸಾಗಣೆಗೆ ವಿಶ್ವದ ಅತ್ಯಂತ ನಿರ್ಣಾಯಕ ಕಡಲ ವ್ಯಾಪಾರ ಮಾರ್ಗಗಳಲ್ಲಿ ಒಂದಾದ ಹಾರ್ಮುಜ್ ಜಲಸಂಧಿಗೆ ಸಂಬಂಧಿಸಿದ ಕಾರ್ಯಾಚರಣೆಗಳನ್ನು ನಿರ್ವಹಿಸುವ ಮತ್ತು ಮೇಲ್ವಿಚಾರಣೆ ಮಾಡುವ ಕಾರ್ಯವನ್ನು ಹೊಂದಿದೆ. ಸುಪ್ರೀಂ ರಾಷ್ಟ್ರೀಯ ಭದ್ರತಾ ಮಂಡಳಿಯು ಪ್ರಾಧಿಕಾರದ ಕಾರ್ಯಾಚರಣೆಯ ಪ್ರಾರಂಭವನ್ನು ದೃಢಪಡಿಸಿತು.

ಚೌಕಟ್ಟಿನ ಅಡಿಯಲ್ಲಿ, ಹಾರ್ಮುಜ್ ಜಲಸಂಧಿಯನ್ನು ಸಾಗಿಸಲು ಉದ್ದೇಶಿಸಿರುವ ಹಡಗುಗಳು ಮಾರ್ಗಕ್ಕಾಗಿ ನಿಯಮಗಳು ಮತ್ತು ಕಾರ್ಯವಿಧಾನಗಳನ್ನು ವಿವರಿಸುವ ಇಮೇಲ್ ಮೂಲಕ ಅಧಿಕೃತ ಸೂಚನೆಗಳನ್ನು ಪಡೆಯುತ್ತವೆ.

ಹೊಸ ವ್ಯವಸ್ಥೆಯ ಅಡಿಯಲ್ಲಿ ನೀಡಲಾದ ನಿರ್ದೇಶನಗಳನ್ನು ಪಾಲಿಸುವುದು ಮತ್ತು ಜಲಸಂಧಿಯನ್ನು ಪ್ರವೇಶಿಸುವ ಮೊದಲು ಸಾರಿಗೆ ಪರವಾನಗಿಗಳನ್ನು ಪಡೆಯುವುದು ಕಡ್ಡಾಯವಾಗಿದೆ, ಇದು ಪಶ್ಚಿಮ ಏಷ್ಯಾದಲ್ಲಿ ಅಮೆರಿಕ–ಇಸ್ರೇಲಿ ಒಕ್ಕೂಟ ಪಡೆಗಳು ಮತ್ತು ಇರಾನ್ ನಡುವಿನ ಸಂಘರ್ಷದ ನಂತರ ಹೆಚ್ಚಿನ ಉದ್ವಿಗ್ನತೆಯನ್ನು ಕಂಡಿದೆ.

PGSA ಈ ಉಪಕ್ರಮವನ್ನು ವಾಣಿಜ್ಯ ಸಾಗಣೆಯೊಂದಿಗೆ ಸಮನ್ವಯವನ್ನು ಸುಧಾರಿಸುವ ಮತ್ತು ಹಾರ್ಮುಜ್ ಜಲಸಂಧಿಯಲ್ಲಿ ಸಮುದ್ರ ಸಾಗಣೆಗೆ ಸಂಬಂಧಿಸಿದ ನೈಜ–ಸಮಯದ ಕಾರ್ಯಾಚರಣೆಯ ನವೀಕರಣಗಳನ್ನು ಒದಗಿಸುವ ಗುರಿ ಹೊಂದಿರುವ ಸಾರ್ವಭೌಮ ಆಡಳಿತ ಕಾರ್ಯವಿಧಾನ ಎಂದು ವಿವರಿಸಿದೆ.

# ಯುದ್ಧ ಅಧಿಕಾರ ಮಿತಿಗೊಳಿಸಲು ಅಮೆರಿಕ ಸೆನೆಟ್ ನಿರ್ಣಯ

**ವಾಷಿಂಗ್ಟನ್, ಮೇ 20:** ನಡೆಯುತ್ತಿರುವ ಇರಾನ್ ಯುದ್ಧದಲ್ಲಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅಧಿಕಾರವನ್ನು ಮಿತಿಗೊಳಿಸಲು ಅಮೆರಿಕ ಸೆನೆಟ್ ಮಂಗಳವಾರ ನಿರ್ಣಯವನ್ನು ಮಂಡಿಸಿತು, ಇದೇ ರೀತಿಯ ಕ್ರಮಗಳನ್ನು ಮುಂದಕ್ಕೆ ತರಲು ಏಳು ವಿಫಲ ಪ್ರಯತ್ನಗಳ ನಂತರ, ಡೆಮೋಕ್ರಾಟ್‌ಗಳಿಗೆ ಅವರ ಮೊದಲ ಕಾರ್ಯವಿಧಾನದ ಗೆಲುವು ಸಿಕ್ಕಿತು.


ಸೆನೆಟರ್‌ಗಳು 50–47 ಮತಗಳಲ್ಲಿ ಸಮಿತಿಯಿಂದ ನಿರ್ಣಯವನ್ನು ಬಿಡುಗಡೆ ಮಾಡುವ ನಿರ್ಣಯವನ್ನು ಅನುಮೋದಿಸಿದರು, ಇದು ಸೆನೆಟ್ ಮಹಡಿಯಲ್ಲಿ ಹೆಚ್ಚಿನ ಪರಿಗಣನೆಗೆ ಮುಂದುವರಿಯಲು ಅವಕಾಶ ಮಾಡಿಕೊಟ್ಟಿತು. ನಾಲ್ವರು ರಿಪಬ್ಲಿಕನ್‌ನರು – ಮೈನೀಯ ಸುಸಾನ್ ಕಾಲಿನ್ಸ್, ಅಲಾಸ್ಕಾದ ಲಿಸಾ ಮುರ್ಕೋವ್ಸ್ಕಿ, ಕೆಂಟುಕಿಯ ರಾಂಡ್ ಪಾಲ್ ಮತ್ತು ಲೂಸಿಯಾನದ ಬಿಲ್ ಕ್ಯಾಸಿಡಿ – ನಿರ್ಣಯವನ್ನು ಮುಂದಕ್ಕೆ ತರುವ ಪರವಾಗಿ ಬಹುಪಾಲು ಡೆಮೋಕ್ರಾಟ್‌ಗಳೊಂದಿಗೆ ಸೇರಿಕೊಂಡರು, ಆದರೆ ಪೆನ್ಸಿಲ್ವೇನಿಯಾದ ಸೆನೆಟರ್ ಜಾನ್ ಫೆಟರ್ಮ್ಯಾನ್ ವಿರೋಧಿಸಿದ ಏಕೈಕ ಡೆಮೋಕ್ರಾಟ್. ಕ್ಯಾಸಿಡಿ ಇರಾನ್‌ಗಾಗಿ ಯುದ್ಧ ಅಧಿಕಾರ ಅಳತೆಯ ಮೇಲೆ ಮುಂದುವರಿಯುವುದನ್ನು ಬೆಂಬಲಿಸಿದ ಮೊದಲ ಬಾರಿಗೆ ಮತವು ಗುರುತಿಸಲ್ಪಟ್ಟಿದೆ. ಲೂಸಿಯಾನದ ರಿಪಬ್ಲಿಕನ್ ಸೆನೆಟ್ ಪ್ರಾಥಮಿಕದಲ್ಲಿ ರನ್‌ಆಫ್ ತಲುಪಲು GOP ಸೆನೆಟರ್ ಸಾಕಷ್ಟು ಬೆಂಬಲವನ್ನು ಪಡೆಯಲು ವಿಫಲವಾದ ಕೆಲವೇ ದಿನಗಳ ನಂತರ ಈ ಬೆಳವಣಿಗೆ ಸಂಭವಿಸಿದೆ, ಅಲ್ಲಿ ಟ್ರಂಪ್ ತಮ್ಮ ಪ್ರತಿಸ್ಪರ್ಧಿಗಳಲ್ಲಿ ಒಬ್ಬರನ್ನು ಅನುಮೋದಿಸಿದ್ದರು. ಮೂವರು ರಿಪಬ್ಲಿಕನ್ ಪಕ್ಷದ ಸೆನೆಟರ್‌ಗಳಾದ ಜಾನ್ ಕಾರ್ನಿನ್, ಟಾಮಿ ಟ್ಯೂಬರ್ವಿಲ್ಲೆ ಮತ್ತು ಥಾಮ್ ಟಿಲ್ಲಿಸ್ ಮತದಾನದಿಂದ ದೂರ ಉಳಿದರು, ಇರಾನ್‌ಗೆ ಸಂಬಂಧಿಸಿದ ಯುದ್ಧ ಅಧಿಕಾರ ನಿರ್ಣಯಗಳನ್ನು ಪರಿಚಯಿಸಲು ಪ್ರಾರಂಭಿಸಿದ ನಂತರ ಮೊದಲ ಬಾರಿಗೆ ಡೆಮೋಕ್ರಾಟ್‌ಗಳ ಪರವಾಗಿ ಸಮತೋಲನವನ್ನು ಕಾಯ್ದುಕೊಳ್ಳಲು ಸಹಾಯ ಮಾಡಿದರು. ಈ ಕ್ರಮವು ಕಾನೂನಾಗಿ ಕ್ರೋಡೀಕರಿಸುವ ಮಾರ್ಗದಿಂದ ದೂರವಿದ್ದರೂ, ಇರಾನ್ನಲ್ಲಿ ಅಧ್ಯಕ್ಷೀಯ ಮಿಲಿಟರಿ ಅಧಿಕಾರದ ವ್ಯಾಪ್ತಿಯ ಕುರಿತು ಶಾಸಕರಲ್ಲಿ ನಡೆಯುತ್ತಿರುವ ಚರ್ಚೆಯ ಮಧ್ಯೆ, ಈ ಮತವು ಗಮನಾರ್ಹ ಸಾಂಕೇತಿಕ ಮತ್ತು ರಾಜಕೀಯ ತೂಕವನ್ನು ಹೊಂದಿದೆ ಎಂದು ಡೆಮೋಕ್ರಾಟ್‌ಗಳು ವಾದಿಸುತ್ತಾರೆ. ಇದು ಕಾಂಗ್ರೆಸ್‌ನ ಎರಡೂ ಸದನಗಳಲ್ಲಿ ಅಂಗೀಕಾರವಾದರೂ, ಟ್ರಂಪ್ ಅದನ್ನು ವೀಟೋ ಮಾಡುವ ನಿರೀಕ್ಷೆಯಿದೆ, ಆದರೂ ನಿರ್ಣಯದ ಬೆಂಬಲಿಗರು ಇದು ಶ್ವೇತಭವನದ ಮೇಲೆ ಒತ್ತಡವನ್ನು ಹೆಚ್ಚಿಸಬಹುದು ಮತ್ತು ಭವಿಷ್ಯದ ಮಿಲಿಟರಿ ಕ್ರಮದ ಕುರಿತು ಟ್ರಂಪ್ರ ಲೆಕ್ಕಾಚಾರಗಳ ಮೇಲೆ ಪ್ರಭಾವ ಬೀರಬಹುದು ಎಂದು ಹೇಳುತ್ತಾರೆ.

# ಸಿಎಸ್‌ಕೆ ವಿರುದ್ಧ 89 ರನ್‌ಗಳಿಂದ ಗೆದ್ದ ಗುಜರಾತ್

ಐಪಿಎಲ್ 66ನೇ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ಮತ್ತು ಚೆನ್ನೈ ಸೂಪರ್ ಕಿಂಗ್ಸ್ ಪರಸ್ಪರ ಮುಖಾಮುಖಿಯಾಗಿದ್ದವು. ಈ ಆವೃತ್ತಿಯಲ್ಲಿ ಎರಡೂ ತಂಡಗಳ 14 ನೇ ಮತ್ತು ಕೊನೆಯ ಲೀಗ್ ಪಂದ್ಯ ಇದಾಗಿತ್ತು. ಈ ಪಂದ್ಯದಲ್ಲಿ ಸಿಎಸ್‌ಕೆ ತಂಡವನ್ನು 89 ರನ್‌ಗಳಿಂದ ಸೋಲಿಸಿದ ಗುಜರಾತ್ ಟೈಟಾನ್ಸ್ ಪಾಯಿಂಟ್ ಪಟ್ಟಿಯಲ್ಲಿ ಎರಡನೇ ಸ್ಥಾನಕ್ಕೇರಿದೆ. ಅಂದರೆ ಹಾಲಿ ಚಾಂಪಿಯನ್ ಆರ್‌ಸಿಬಿ ಅಗ್ರಸ್ಥಾನದಲ್ಲೇ ಮುಂದುವರೆದಿದೆ. ಇನ್ನು ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಗುಜರಾತ್ ಟೈಟಾನ್ಸ್ ಮೂವರ ಅರ್ಧಶತಕದ ನೆರವಿನಿಂದ 229 ರನ್ ಕಲೆಹಾಕಿತು. ಈ ಗುರಿ ಬೆನ್ನುಹತ್ತಿದ ಸಿಎಸ್‌ಕೆ 140 ರನ್‌ಗಳಿಗೆ ಆಲೌಟ್ ಆಗುವ ಮೂಲಕ ಹೀನಾಯವಾಗಿ ಸೋತು ಟೂರ್ನಿಯಿಂದ ಹೊರಬಿದ್ದಿತು.

### ಗುಜರಾತ್ ಬ್ಯಾಟಿಂಗ್ ಅಬ್ಬರ

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಗುಜರಾತ್ ಟೈಟಾನ್ಸ್ ತಂಡವು ಉತ್ತಮ



ಆರಂಭವನ್ನೇ ಪಡೆಯಿತು. ನಾಯಕ ಶುಭಮನ್ ಗಿಲ್ ಮತ್ತು ಸಾಯಿ ಸುದರ್ಶನ್ ಮೊದಲ ವಿಕೆಟ್‌ಗೆ 12.2 ಓವರ್‌ಗಳಲ್ಲಿ 125 ರನ್ ಸೇರಿಸಿದರು. ಗಿಲ್ 37 ಎಸೆತಗಳಲ್ಲಿ 64 ರನ್ ಗಳಿಸಿದರೆ, ಸುದರ್ಶನ್ 53 ಎಸೆತಗಳಲ್ಲಿ 84 ರನ್ ಗಳಿಸಿ ಔಟಾದರು. ಇನ್ನಿಂಗ್ಸ್ ಅಂತ್ಯದ ವೇಳೆಗೆ, ಜೋಸ್ ಬಟ್ಲರ್ 27 ಎಸೆತಗಳಲ್ಲಿ 5 ಬೌಂಡರಿ ಮತ್ತು 4 ಸಿಕ್ಸರ್‌ಗಳನ್ನು ಒಳಗೊಂಡಂತೆ ಅಜೇಯ 57 ರನ್ ಗಳಿಸಿದರು. ಈ ಮೂವರ ಅರ್ಧಶತಕದಿಂದಾಗಿ ಗುಜರಾತ್ 20 ಓವರ್‌ಗಳಲ್ಲಿ 229 ರನ್‌ಗಳ ಬೃಹತ್ ಮೊತ್ತವನ್ನು ದಾಖಲಿಸಿತು. ಸಿಎಸ್‌ಕೆ ಪರ ಸ್ಪೆನ್ಸರ್ ಜಾನ್ಸನ್, ಅನ್ಶುಲ್ ಕಾಂಬೋಜ್ ಮತ್ತು ಮುಖೇಶ್ ಚೌಧರಿ ತಲಾ 1 ವಿಕೆಟ್ ಪಡೆದರಾದರೂ ಯಾವುದೇ ಬೌಲರ್‌ಗೆ ರನ್ ವೇಗಕ್ಕೆ ಕಡಿವಾಣ ಹಾಕಲು ಸಾಧ್ಯವಾಗಲಿಲ್ಲ.

### ಸಿಎಸ್‌ಕೆ ಕಳಪೆ ಬ್ಯಾಟಿಂಗ್

230 ರನ್‌ಗಳ ಗುರಿಯನ್ನು ಬೆನ್ನಟ್ಟಿದ ಚೆನ್ನೈ ಸೂಪರ್ ಕಿಂಗ್ಸ್ ತಂಡ ಕಳಪೆ ಆರಂಭ ಪಡೆಯಿತು. ಮೊದಲ ಓವರ್‌ನಲ್ಲೇ ಮೊಹಮ್ಮದ್ ಸಿರಾಜ್ ಸಂಜು ಸ್ಯಾಮ್ಸನ್ ಅವರನ್ನು ಸೊನ್ನೆಗೆ ಔಟ್ ಮಾಡಿದರು. ನಂತರ, ರುತುರಾಜ್ ಗಾಯಕ್ವಾಡ್ ಮತ್ತು ಉರ್ವಿಲ್ ಪಟೇಲ್ ಕೂಡ ಸಿರಾಜ್ ಬೌಲಿಂಗ್‌ಗೆ ಬಲಿಯಾದರು. ಸಿರಾಜ್ ತನ್ನ ಮೊದಲ ಎರಡು ಓವರ್‌ಗಳಲ್ಲಿ ಮೂರು ವಿಕೆಟ್‌ಗಳನ್ನು ಕಬಳಿಸಿ ಸಿಎಸ್‌ಕೆ ಬೆನ್ನೆಲುಬನ್ನು ಮುರಿದರು. ಕಗಿಸೊ ರಬಾಡ ಮತ್ತು ರಶೀದ್ ಖಾನ್ ಕೂಡ ಅದ್ಭುತ ಬೌಲಿಂಗ್ ಮಾಡಿದರು. ರಬಾಡ ಮತ್ತು ರಶೀದ್ ಖಾನ್ ಕೂಡ ಮೂರು ವಿಕೆಟ್‌ಗಳನ್ನು ಪಡೆದರು.

